ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಜೂನ್ 14 ಶನಿವಾರ 2025

ಸಂಪುಟ: 46 | ಸಂಚಿಕೆ: 59 | ಪುಟಗಳು: 12

₹4

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್.ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

ಕೆಆರ್‌ಎಸ್ ಜಲಾಶಯದಲ್ಲಿ ಯಾರು ಎಲ್ಲಿ ಬೇಕಾದರೂ ಹೋಗಬಹುದು; ವಿಡಿಯೋ, ರೀಲ್ಸ್ ಮಾಡಬಹುದು!



ಮೈಸೂರು, ಜೂ.13(ವಿನಯ್)– ವಿಶ್ವ ವಿಖ್ಯಾತ ಕೃಷ್ಣರಾಜಸಾಗರ (ಕೆಆರ್‌ಎಸ್) ಜಲಾಶಯದಲ್ಲಿ ಭದ್ರತಾ ವೈಫಲ್ಯವಿದೆ ಎಂಬ ಮಾತಿಗೆ ಪುಷ್ಟಿ ನೀಡುವಂತಹ ಪ್ರಕರಣ ಬೆಳಕಿಗೆ ಬಂದಿದೆ.

ಕೈಗಾರಿಕಾ ಭದ್ರತಾ ಪಡೆಗೆ ಪುಂಡರು ಅಂಜಲ್ಲ; ಅಳುಕಲ್ಲ!

ಈ ಜಲಾಶಯಕ್ಕೆ ಭಯೋತ್ಪಾದಕರ ಬೆದರಿಕೆ ಇರುವ ಕಾರಣದಿಂದ ಭದ್ರತೆಯ ಉಸ್ತುವಾರಿಯನ್ನು ಕೈಗಾರಿಕಾ ಭದ್ರತಾ ಪಡೆಗೆ ವಹಿಸಲಾಗಿದೆ.

ಈ ಪಡೆಯು ಯಾವುದೇ ಪರಿಸ್ಥಿತಿಯನ್ನು ಎದುರಿಸಲು ಸದಾ ಕಾಲ ಸಿದ್ಧವಾಗಿರಬೇಕು. ಭದ್ರತಾ ಪಡೆಯ ಸಿಬ್ಬಂದಿಗೆ ಆಧುನಿಕ ಶಸ್ತ್ರಾಸ್ತ್ರಗಳನ್ನು ನೀಡಲಾಗಿರುತ್ತದೆ. ಅಲ್ಲದೇ ಭಯೋತ್ಪಾದಕರ ಬೆದರಿಕೆ ಇರುವ ಈ ಜಲಾಶಯದ ಆಯಕಟ್ಟಿನ ಪ್ರದೇಶಗಳಲ್ಲಿ ಸಿಸಿ ಕ್ಯಾಮರಾ ಅಳವಡಿಸಿ, ಕಂಟ್ರೋಲ್ ರೂಂನಿಂದ ದಿನದ 24 ಗಂಟೆಯೂ ದೃಶ್ಯಾವಳಿಗಳನ್ನು ಸೂಕ್ಷ್ಮವಾಗಿ ಗಮನಿಸಲಾಗುತ್ತದೆ.


ಇಷ್ಟೊಂದು ಭದ್ರತೆ ಇರುವಾಗ ಕೆಆರ್‌ಎಸ್ ಜಲಾಶಯಕ್ಕೆ ಭಯೋತ್ಪಾದಕರಿಂದಾಗಲೀ, ಸಮಾಜಘಾತುಕರಿಂದಾಗಲೀ ಯಾವುದೇ ರೀತಿಯ ಅಪಾಯ ಉಂಟಾಗುವುದಿಲ್ಲ ಎಂಬ ನಂಬಿಕೆಯನ್ನು ಇದೀಗ ವೈರಲ್



ಆಗುತ್ತಿರುವ ವಿಡಿಯೋವೊಂದು ಸುಳ್ಳಾಗಿಸಿದೆ.

ಮೂವರು ಯುವಕರು ಜಲಾಶಯದ ನಿಷೇಧಿತ ಪ್ರದೇಶವಾದ ಕ್ರೆಸ್ಟ್‌ಗೇಟ್‌ಗಳ ಬಳಿ ಹಾಡಹಗಲೇ ರಾಜಾರೋಷವಾಗಿ ಓಡಾಡುತ್ತಿರುವುದಲ್ಲದೇ ರೀಲ್ಸ್ ಮಾಡಿದ್ದಾರೆ. ಅಂದರೆ ಜಲಾಶಯದ ಸೂಕ್ಷ್ಮ ಭಾಗವೆಂದೇ ಹೇಳಬಹುದಾದ ಕ್ರೆಸ್ಟ್ ಗೇಟ್‌ಗಳ ಬಳಿಗೆ ಯಾರೇ ತೆರಳಿದರೂ ಕೈಗಾರಿಕಾ ಭದ್ರತಾ ಪಡೆ ಅದನ್ನು ತಡೆಯುವ ಗೋಜಿಗೇ ಹೋಗುವುದಿಲ್ಲ ಎಂದಾಯಿತಲ್ಲಾ? ಒಂದು ವೇಳೆ ಸಮಾಜಘಾತುಕರು ಅಥವಾ ಭಯೋತ್ಪಾದಕರು ಯಾವುದೇ ಅಡೆತಡೆ ಇಲ್ಲದೇ ಕ್ರೆಸ್ಟ್‌ಗೇಟ್‌ಗಳ ಬಳಿಗೆ ಹೋಗಿ ಅದಕ್ಕೆ ಹಾನಿ ಉಂಟು ಮಾಡಿದರೆ ಜಲಾಶಯದ ಗತಿ ಏನು? ಎಂಬ ಪ್ರಶ್ನೆ ಉದ್ಭವಿಸಿದೆ.

ಹಾಡಹಗಲೇ ಮೂವರು ಕ್ರೆಸ್ಟ್‌ಗೇಟ್ ಬಳಿಗೆ ಹೋಗಿ ಅಲ್ಲಿನ ಪ್ರತಿಯೊಂದು ವಿಶೇಷತೆ ವರ್ಣಿಸುತ್ತಾ ರೀಲ್ಸ್ ಮಾಡಿದ್ದು ಕೈಗಾರಿಕಾ ಭದ್ರತಾ ಪಡೆಯ ಗಮನಕ್ಕೇ ಬರಲಿಲ್ಲವೇ? ಇಲ್ಲವೆಂದಾದಲ್ಲಿ ಈ ಭದ್ರತಾ ಪಡೆ ಮಾಡುತ್ತಿರುವ ಕೆಲಸವಾದರೂ ಏನು? ಅದು ಮಾತ್ರವಲ್ಲದೇ ಜಲಾಶಯದ ಅತಿ ಸೂಕ್ಷ್ಮವಾದ ಈ ಪ್ರದೇಶಕ್ಕೆ



ಯಾರಾದರೂ ನುಸುಳಿದರೆ ಆ ದೃಶ್ಯವನ್ನು ಸೆರೆ ಹಿಡಿಯಲು ಆ ಸ್ಥಳದಲ್ಲಿ ಸಿಸಿ ಕ್ಯಾಮರಾ ಅಳವಡಿಸಿಲ್ಲವೇ? ಒಂದು ವೇಳೆ ಅಳವಡಿಸಿದ್ದರೆ, ದಿನದ 24 ಗಂಟೆಯೂ ■6ನೇ ಪುಟಕ್ಕೆ

ಕೇಂದ್ರ–ರಾಜ್ಯಗಳ ಸಂಪನ್ಮೂಲ ಶೇ.50ಕ್ಕೆ ಹೆಚ್ಚಿಸಿ

• 16ನೇ ಹಣಕಾಸು ಆಯೋಗಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಸ್ತಾವನೆ ಮಂಡನೆ • ಸೆಸ್, ಸರ್‌ಚಾರ್ಜ್‌ಗಳ ಶೇ.5ಕ್ಕೆ ಮಿತಿಗೊಳಿಸಲು ಒತ್ತಾಯ

ನವದೆಹಲಿ, ಜೂ.13– ಕೇಂದ್ರ ಹಾಗೂ ರಾಜ್ಯಗಳ ನಡುವಿನ ಸಂಪನ್ಮೂಲ ಹಂಚಿಕೆಯು ಕನಿಷ್ಠ ಶೇ.50 ಕ್ಕೆ ಹೆಚ್ಚಿಸಬೇಕು. ಸೆಸ್‌ಗಳು ಮತ್ತು ಸರ್‌ಚಾರ್ಜ್‌ಗಳನ್ನು 5% ಕ್ಕೆ ಮಿತಿಗೊಳಿಸುವಂತೆ ರಾಜ್ಯ ಸರ್ಕಾರ 16ನೇ ಹಣಕಾಸು ಆಯೋಗಕ್ಕೆ ಜ್ಞಾಪನಾ ಪತ್ರ ಸಲ್ಲಿಸಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

16ನೇ ಹಣಕಾಸು ಆಯೋಗದ ಅಧ್ಯಕ್ಷ ಡಾ. ಅರ್ವಿಂದ್ ಪನಗಾರಿಯ ಅವರನ್ನು ನವದೆಹಲಿಯಲ್ಲಿ ಭೇಟಿಯಾದ ನಂತರ ಸುದ್ದಿಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ ಅವರು, ಕೇಂದ್ರದಿಂದ ರಾಜ್ಯಗಳಿಗೆ ತೆರಿಗೆ ಹಂಚಿಕೆ ಮತ್ತು ಹಣಕಾಸು ವರ್ಗಾವಣೆಗಳ ಕುರಿತು ರಾಜ್ಯದ ಆಶಯಗಳು, ನಿರೀಕ್ಷೆಗಳು ಮತ್ತು ಪ್ರಸ್ತಾವನೆಗಳನ್ನು ಮಂಡಿಸಿರುವುದಾಗಿ ಹೇಳಿದ್ದಾರೆ.

ಭಾರತದ ಆರ್ಥಿಕ ಬೆಳವಣಿಗೆಯಲ್ಲಿ ಕರ್ನಾಟಕವು ದೇಶದ ಒಟ್ಟು ಜಿಡಿಪಿಗೆ ಸುಮಾರು ಶೇ.8.7ರಷ್ಟು ಕೊಡುಗೆ ನೀಡುತ್ತಿದ್ದು, ಜಿಎಸ್‌ಟಿ ಸಂಗ್ರಹಣೆಯಲ್ಲಿ



16ನೇ ಹಣಕಾಸು ಆಯೋಗದ ಅಧ್ಯಕ್ಷ ಡಾ. ಅರ್ವಿಂದ್ ಪನಗಾರಿಯ ಅವರನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ನವದೆಹಲಿಯಲ್ಲಿ ಭೇಟಿಯಾದರು.

2ನೇ ಸ್ಥಾನದಲ್ಲಿದೆ. ಆದರೆ, ರಾಜ್ಯದಿಂದ ಕೇಂದ್ರಕ್ಕೆ ಸ್ವೀಕೃತವಾಗುವ ತೆರಿಗೆಯ ಪ್ರತಿ ರೂಪಾಯಿಗೆ ಪ್ರತಿಯಾಗಿ ರಾಜ್ಯವು ಕೇವಲ 15 ಪೈಸೆ ಮಾತ್ರ ಪಡೆಯುತ್ತಿದೆ. 15ನೇ ಹಣಕಾಸು ಆಯೋಗವು ಕರ್ನಾಟಕದ ತೆರಿಗೆ ಪಾಲನ್ನು 4.713% ರಿಂದ 3.647%ಕ್ಕೆ ಇಳಿಕೆ ಮಾಡಿದ್ದರಿಂದ 15ನೇ ಹಣಕಾಸು ಆಯೋಗದ ಅವಧಿಯಲ್ಲಿ 80,000 ಕೋಟಿಗಳಷ್ಟು ನಷ್ಟವಾಗಿದೆ ಎಂದು ತಾವು ಆಯೋಗದ ಮುಖ್ಯಸ್ಥರಿಗೆ ತಿಳಿಸಿರುವುದಾಗಿ ವಿವರಿಸಿದ್ದಾರೆ.

ರಾಜ್ಯಗಳ ನಡುವಿನ ಹಂಚಿಕೆಗೆ ಸಂಬಂಧಿಸಿದಂತೆ ಪ್ರತಿ ರಾಜ್ಯವು ತಾನು ನೀಡುವ ಕೊಡುಗೆಯಲ್ಲಿ ಸುಮಾರು ಶೇ.60 ಅನ್ನು ಉಳಿಸಿಕೊಳ್ಳಲು ಮತ್ತು ಶೇ.40 ಅನ್ನು ಉಳಿದ ರಾಜ್ಯಗಳಿಗೆ ಹಂಚಿಕೆಯಾಗಬೇಕು. ಇದು ಬೆಳವಣಿಗೆ ಮತ್ತು ಸಮಾನತೆ ಎರಡನ್ನೂ ಖಚಿತಪಡಿಸುತ್ತದೆ. ■6ನೇ ಪುಟಕ್ಕೆ

ಏರ್ ಇಂಡಿಯಾ ವಿಮಾನ ಪತನ

787 ಡ್ರೀಮ್ ಲೈನರ್ ವಿಮಾನಗಳ ತಾಂತ್ರಿಕ ತಪಾಸಣೆಗೆ ಡಿಜಿಸಿಎ ಆದೇಶ

ನವದೆಹಲಿ, ಜೂ.13– ಅಹಮದಾಬಾದ್‌ನಲ್ಲಿ ನಡೆದ ವಿಮಾನ ಅಪಘಾತದಲ್ಲಿ 241 ಮಂದಿ ಪ್ರಯಾಣಿಕರು ಸೇರಿದಂತೆ 270 ಮಂದಿ ಸಾವನ್ನಪ್ಪಿದ್ದ ದುರಂತದ ನಂತರ ವಿಮಾನಯಾನ ಮೇಲ್ವಿಚಾರಣಾ ಸಂಸ್ಥೆ ನಾಗರಿಕ ವಿಮಾನಯಾನ



ನಿರ್ದೇಶನಾಲಯ (ಡಿಜಿಸಿಎ) ಬೋಯಿಂಗ್ 787 ಡ್ರೀಮ್ ಲೈನರ್ ವಿಮಾನಗಳ ಸುರಕ್ಷತಾ ತಪಾಸಣೆ ಹೆಚ್ಚಿಸುವಂತೆ ಏರ್ ಇಂಡಿಯಾಗೆ ಶುಕ್ರವಾರ ನಿರ್ದೇಶಿಸಿದೆ.

ಜೂನ್ 15ರಿಂದ ಜಾರಿಗೆ ಬರುವಂತೆ ಬೋಯಿಂಗ್ 787–8 ಮತ್ತು 787–9 ವಿಮಾನಗಳ ಸುರಕ್ಷತೆ ತಪಾಸಣೆ ನಡೆಸುವಂತೆ ಏರ್ ಇಂಡಿಯಾಕ್ಕೆ ಡಿಜಿಸಿಎ ಪತ್ರದಲ್ಲಿ ಸೂಚಿಸಿದೆ. ಪ್ರಾದೇಶಿಕ ಡಿಜಿಸಿಎ ಕಚೇರಿಗಳ ಸಮನ್ವಯದೊಂದಿಗೆ Genx ಎಂಜಿನ್‌ಗಳನ್ನು ಹೊಂದಿರುವ ಬೋಯಿಂಗ್ 787–8 ಮತ್ತು 787–9 ವಿಮಾನಗಳಲ್ಲಿ ಹೆಚ್ಚುವರಿ ನಿರ್ವಹಣಾ ಕ್ರಮಗಳನ್ನು ಕೈಗೊಳ್ಳುವಂತೆ ಡಿಜಿಸಿಎ ಏರ್ ಇಂಡಿಯಾಕ್ಕೆ ನಿರ್ದೇಶನ ನೀಡಿದೆ.

ಇದರಲ್ಲಿ ಇಂಧನ ನಿಯತಾಂಕ ಮೇಲ್ವಿಚಾರಣೆ ಮತ್ತು ಸಂಬಂಧಿತ ವ್ಯವಸ್ಥೆಯ ಪರಿಶೀಲನೆಗಳು ಸೇರಿವೆ. ಕ್ಯಾಬಿನ್ ಏರ್ ಕಂಪ್ರೆಸರ್ ಮತ್ತು ಸಂಬಂಧಿತ ವ್ಯವಸ್ಥೆಗಳ ಪರಿಶೀಲನೆ, ಎಲೆಕ್ಟ್ರಾನಿಕ್ ಎಂಜಿನ್ ನಿಯಂತ್ರಣ ವ್ಯವಸ್ಥೆಯ ಪರೀಕ್ಷೆ, ಎಂಜಿನ್ ಇಂಧನ ಚಾಲಿತ ಆಕ್ಟಿವೇಟರ್– ಕಾರ್ಯಾಚರಣಾ ಪರೀಕ್ಷೆ ಮತ್ತು ತೈಲ ವ್ಯವಸ್ಥೆಯ ಪರಿಶೀಲನೆಗೂ ಸಹ ಆದೇಶಿಸಲಾಗಿದೆ.

ಇದಲ್ಲದೆ ಹೈಡ್ರಾಲಿಕ್ ವ್ಯವಸ್ಥೆಯ ಸೇವಾ ಸಾಮರ್ಥ್ಯ ಪರಿಶೀಲನೆ ಮತ್ತು ಟೇಕ್ ಆಫ್ ನಿಯತಾಂಕಗಳ ಪರಿಶೀಲನೆ ಕೈಗೊಳ್ಳಲು ಡಿಜಿಸಿಎ ನಿರ್ದೇಶಿಸಿದೆ ಮುಂದಿನ ಸೂಚನೆ ಬರುವವರೆಗೆ ತಪಾಸಣೆಯಲ್ಲಿ ವಿಮಾನ ನಿಯಂತ್ರಣ ■6ನೇ ಪುಟಕ್ಕೆ

ವಿಮಾನದ ಬ್ಲ್ಯಾಕ್ ಬಾಕ್ಸ್ ಪತ್ತೆ



ಅಹಮದಾಬಾದ್, ಜೂ.13– ಗುಜರಾತ್‌ನ ಅಹಮದಾಬಾದ್ ವಿಮಾನ ನಿಲ್ದಾಣದ ಬಳಿ ಗುರುವಾರ ಏರ್ ಇಂಡಿಯಾ ವಿಮಾನ ಪತನವಾಗಿದ್ದು, ಒಬ್ಬ ಪ್ರಯಾಣಿಕ ಹೊರತುಪಡಿಸಿ ಉಳಿದ ಎಲ್ಲಾ 241 ಪ್ರಯಾಣಿಕರು ಮತ್ತು ಸಿಬ್ಬಂದಿ ಸೇರಿದಂತೆ ಒಟ್ಟು 270 ಮಂದಿ ಮೃತಪಟ್ಟಿದ್ದಾರೆ.

ನಿನ್ನೆ ಪತನಗೊಂಡ ಏರ್ ಇಂಡಿಯಾದ ಬೋಯಿಂಗ್ 787–8 ಡ್ರೀಮ್‌ಲೈನರ್ ವಿಮಾನದ ಬ್ಲ್ಯಾಕ್ ಬಾಕ್ಸ್ ಇಂದು ಪತ್ತೆಯಾಗಿದೆ. ಮೂಲಗಳ ಪ್ರಕಾರ ನಾಗರಿಕ ವಿಮಾನಯಾನ ನಿರ್ದೇಶನಾಲಯ(ಡಿಜಿಸಿಎ)ದ ತಂಡ ಅಹಮದಾಬಾದ್‌ನ ಸರ್ದಾರ್ ವಲ್ಲಭಭಾಯಿ ■6ನೇ ಪುಟಕ್ಕೆ

ಒಂದು ಲಕ್ಷ ಗಡಿ ದಾಟಿದ ಚಿನ್ನದ ದರ: ಬೆಳ್ಳಿ ಬೆಲೆಯೂ ಏರಿಕೆ

ನವದೆಹಲಿ, ಜೂ.13– ಚಿನಿವಾರ ಪೇಟೆಯಲ್ಲಿ ಶುಕ್ರವಾರ ಚಿನ್ನದ ದರ



ಏರಿಕೆಯಾಗುವ ಮೂಲಕ ಸಾರ್ವಕಾಲಿಕ ದಾಖಲೆ ನಿರ್ಮಿಸಿದೆ. 10 ಗ್ರಾಂ ಚಿನ್ನದ ದರವು (ಶೇ.99.9 ಪರಿಶುದ್ಧತೆ) 2,200 ಏರಿಕೆಯಾಗಿ, 1,01,540ರಂತೆ ಮಾರಾಟವಾಗಿದೆ. ಆಭರಣ ■6ನೇ ಪುಟಕ್ಕೆ

ಆರೋಗ್ಯ ಇಲಾಖೆಯಿಂದಲೇ ಆಂಬುಲೆನ್ಸ್ ನಿರ್ವಹಣೆ; 250 ಕೋಟಿ ಉಳಿತಾಯ

ಬೆಂಗಳೂರು, ಜೂ.13– ರಾಜ್ಯದಲ್ಲಿ 108 ಆಂಬುಲೆನ್ಸ್ ಸೇವೆಯನ್ನು ಆರೋಗ್ಯ ಇಲಾಖೆಯೇ ನಿರ್ವಹಣೆ ಮಾಡುವುದರಿಂದ ರಾಜ್ಯ ಸರ್ಕಾರದ ಬೊಕ್ಕಸಕ್ಕೆ 250



ಕೋಟಿ ಉಳಿತಾಯವಾಗಲಿದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ.

ಆಂಬುಲೆನ್ಸ್ ಸೇವೆಯನ್ನು ಖಾಸಗಿ ಹಿಡಿತದಿಂದ ಮುಕ್ತಗೊಳಿಸಿ, ಈ ಸೇವೆ ನಿಯಂತ್ರಣ ಮಾಡುವ 'ಕಮಾಂಡ್ ಕಂಟ್ರೋಲ್' ಕೇಂದ್ರವನ್ನು ಇಲಾಖೆಯ ಅಧೀನಕ್ಕೆ ಒಳಪಡಿಸುವ ಪ್ರಸ್ತಾವಕ್ಕೆ ಸರ್ಕಾರದ ಅನುಮೋದನೆ ದೊರೆತಿದೆ. ಈ ಕ್ರಮದಿಂದಾಗಿ 108 ಆರೋಗ್ಯ ಕವಚ ಸೇವೆಯಲ್ಲಿ ಸಾಕಷ್ಟು ಸುಧಾರಣೆಯಾಗುವ ವಿಶ್ವಾಸವಿದೆ. ಈ ಸೇವೆಯಡಿ 715 ಆಂಬುಲೆನ್ಸ್‌ಗಳ ನಿರ್ವಹಣೆಗೆ 'ಕಮಾಂಡ್ ಕಂಟ್ರೋಲ್' ಕೇಂದ್ರ ಪ್ರಾರಂಭಿಸಲಾಗುವುದು. ■6ನೇ ಪುಟಕ್ಕೆ

ಗುಜರಾತ್ ಮಾಜಿ ಮುಖ್ಯಮಂತ್ರಿ ವಿಜಯ್ ರೂಪಾನಿ ಮನೆಗೆ ಪ್ರಧಾನಿ ಮೋದಿ ಭೇಟಿ



ವಿಮಾನ ದುರಂತದಲ್ಲಿ ಮೃತಪಟ್ಟ ಗುಜರಾತ್ ಮಾಜಿ ಸಿಎಂ ವಿಜಯ್ ರೂಪಾನಿ ನಿವಾಸಕ್ಕೆ ಶುಕ್ರವಾರ ಭೇಟಿ ನೀಡಿದ ಪ್ರಧಾನಿ ಮೋದಿ, ಕುಟುಂಬಸ್ಥರಿಗೆ ಸಾಂತ್ವನ ಹೇಳಿದರು.

ಅಹಮದಾಬಾದ್, ಜೂ.13– ಅಹಮದಾಬಾದ್ ವಿಮಾನ ನಿಲ್ದಾಣದ ಬಳಿ ಗುರುವಾರ ಏರ್ ಇಂಡಿಯಾ ವಿಮಾನ ಪತನವಾಗಿ ಗುಜರಾತ್ ಮಾಜಿ ಮುಖ್ಯಮಂತ್ರಿ ವಿಜಯ್ ರೂಪಾನಿ ಸೇರಿದಂತೆ ಒಟ್ಟು 270 ಜನ ಮೃತಪಟ್ಟಿದ್ದಾರೆ.

ಇಂದು ವಿಜಯ್ ರೂಪಾನಿ ಅವರ ಮನೆಗೆ ಭೇಟಿ ನೀಡಿದ ಪ್ರಧಾನಿ ನರೇಂದ್ರ ಮೋದಿ ಅವರು, ಹಿರಿಯ ಬಿಜೆಪಿ ನಾಯಕನಿಗೆ ಸಂತಾಪ ಸೂಚಿಸಿದರು ಮತ್ತು ಅವರ ಕುಟುಂಬಕ್ಕೆ ಸಾಂತ್ವನ ಹೇಳಿದರು. ರೂಪಾನಿ ಲಂಡನ್‌ನಲ್ಲಿರುವ ತಮ್ಮ ■6ನೇ ಪುಟಕ್ಕೆ

6 ಮೃತದೇಹಗಳ ಗುರುತು ಪತ್ತೆ; ಸಂಬಂಧಿಕರಿಗೆ ಹಸ್ತಾಂತರ

ಅಹಮದಾಬಾದ್, ಜೂ.13– ಗುಜರಾತ್‌ನ ಅಹಮದಾಬಾದ್ ವಿಮಾನ ನಿಲ್ದಾಣದ ಬಳಿ ಗುರುವಾರ ಪತನವಾದ ಏರ್ ಇಂಡಿಯಾ ವಿಮಾನದಲ್ಲಿದ್ದವರಲ್ಲಿ ಒಬ್ಬ ಪ್ರಯಾಣಿಕ ಹೊರತುಪಡಿಸಿ ಉಳಿದ ಎಲ್ಲಾ 241 ಪ್ರಯಾಣಿಕರು ಮತ್ತು ಸಿಬ್ಬಂದಿ ಸೇರಿದಂತೆ ಒಟ್ಟು 270 ಜನ ಮೃತಪಟ್ಟಿದ್ದಾರೆ.

ದುರಂತದ ನಂತರ 270 ಶವಗಳನ್ನು ಮರಣೋತ್ತರ ಪರೀಕ್ಷೆಗಾಗಿ ಅಹಮದಾಬಾದ್ ಸಿವಿಲ್ ಆಸ್ಪತ್ರೆಗೆ ಕಳುಹಿಸಲಾಗಿದೆ. ಈ ಪೈಕಿ ಆರು ಜನರ ಮುಖಗಳು ಹಾಗೆಯೇ ಇದ್ದುದರಿಂದ ಅವರನ್ನು ಮಾತ್ರ ಗುರುತಿಸಲಾಗಿದೆ ಎಂದು ಇನ್ಸ್‌ಪೆಕ್ಟರ್ ಚಿರಾಗ್ ಗೋಸಾಯಿ ಅವರು ತಿಳಿಸಿದ್ದಾರೆ. ಗುರುತಿಸಲಾಗದಷ್ಟು ಸುಟ್ಟು ಕರಕಲಾಗಿರುವುದರಿಂದ ಇತರರ ಗುರುತುಗಳನ್ನು ಖಚಿತಪಡಿಸಿಕೊಳ್ಳಲು ಡಿಎನ್‌ಎ ಪ್ರೊಫೈಲಿಂಗ್ ನಡೆಯುತ್ತಿದೆ ಎಂದು ಅವರು ಹೇಳಿದರು. ನಾವು ಆರು ಶವಗಳನ್ನು ಸಂಬಂಧಿಕರಿಗೆ ಹಸ್ತಾಂತರಿಸಿದ್ದೇವೆ. ಗುರುತಿಸಲಾಗದಷ್ಟು ಸುಟ್ಟ ದೇಹಗಳನ್ನು ಗುರುತಿಸಲು ಪ್ರೊಫೈಲಿಂಗ್‌ಗಾಗಿ ಸಂಬಂಧಿಕರ ಡಿಎನ್‌ಎ ಮಾದರಿಗಳನ್ನು ಸಂಗ್ರಹಿಸುವ ■6ನೇ ಪುಟಕ್ಕೆ

ಶತಮಾನದ ಅಶೋಕ ರಸ್ತೆಗೆ ಸುರಕ್ಷಿತ, ಸುಂದರ ರೂಪ!

ಪಾಲಿಕೆ ಸಹಯೋಗದಲ್ಲಿ ಸಂಚಾರ ಪೊಲೀಸರಿಂದ ಝೀರೊ ಟಾಲರನ್ಸ್ ಮಾರ್ಗವಾಗಿಸಲು ಸರ್ವೇ ಕಾರ್ಯ ಪೂರ್ಣ

● ಎಸ್.ಟಿ. ರವಿಕುಮಾರ್

ಮೈಸೂರು, ಜೂ. 13– ಸಾಂಸ್ಕೃತಿಕ ನಗರ ಮೈಸೂರಿನ ಹೃದಯ ಭಾಗದ, ಶತಮಾನದ ಅಶೋಕ ರಸ್ತೆಯನ್ನು ಸುರಕ್ಷಿತ, ಸುಂದರ ಮಾದರಿ ರಸ್ತೆಯನ್ನಾಗಿಸಲು ಸಂಚಾರ ಪೊಲೀಸರು ಮುಂದಾಗಿದ್ದಾರೆ.

ಅಡ್ಡಾದಿಡ್ಡಿ ವಾಹನ ನಿಲುಗಡೆ, ಪಾದಚಾರಿ ಮಾರ್ಗ ಅತಿಕ್ರಮಣ, ಹಲವು ಕಿಷ್ಕಿಂದ ಅಡ್ಡ ರಸ್ತೆಗಳ ಸಂಪರ್ಕ, ಅಸಮರ್ಪಕ ಮಳೆ ನೀರು ಚರಂಡಿ ವ್ಯವಸ್ಥೆ... ಹೀಗೆ ಹತ್ತು ಹಲವು ಕಾರಣಗಳಿಂದ ನೂರು ವರ್ಷಗಳ ಇತಿಹಾಸವಿರುವ ಅಶೋಕ ರಸ್ತೆ ಅಧ್ವಾನ ಮಾರ್ಗವಾಗಿದೆ. ವಿಪರೀತ ವಾಹನ ದಟ್ಟಣೆ, ಆಗಾಗ ಅಪಘಾತಗಳು ಸಂಭವಿಸುತ್ತಿರುತ್ತವೆ. ನಿರಂತರ ಗಸ್ತು, ಧ್ವನಿವರ್ಧಕದಲ್ಲಿ ಪ್ರಕಟಣೆ, ದಂಡಾಸ್ತ್ರದಂತಹ ಯಾವುದೇ ಕ್ರಮಗಳಿಂದಲೂ ಇಲ್ಲಿ ಸುರಕ್ಷಿತ ಸಂಚಾರ ವ್ಯವಸ್ಥೆ ಅನುಷ್ಠಾನ ಪೊಲೀಸರಿಗೆ ಸವಾಲಾಗಿದೆ.

ಈ ಹಿನ್ನೆಲೆಯಲ್ಲಿ ಪ್ರಮುಖ ಅಶೋಕ ರಸ್ತೆಯನ್ನು 'ಝೀರೊ ಟಾಲರನ್ಸ್' ಮೂಲಕ ಸುರಕ್ಷಿತ ರಸ್ತೆಯನ್ನಾಗಿ ಪರಿವರ್ತಿಸಲು ಸಂಚಾರ ■6ನೇ ಪುಟಕ್ಕೆ



ಸೆಂಟ್ ಫಿಲೋಮಿನಾ ಚರ್ಚ್ ಮತ್ತು ದೊಡ್ಡ ಗಡಿಯಾರ ನಡುವಿನ ಅಶೋಕ ರಸ್ತೆಯ ವಿಹಂಗಮ ನೋಟ.

ಮೈಸೂರಿನ ಪ್ರಮುಖ ವಾಣಿಜ್ಯ ಪ್ರದೇಶವಾದ ಲಷ್ಕರ್, ಮಂಡಿ ಮೊಹಲ್ಲಾದ ಅಶೋಕ ರಸ್ತೆಯಲ್ಲಿ ವಾಹನ ಬಳಕೆದಾರರು ಹಾಗೂ ಸಾರ್ವಜನಿಕರ ಸುರಕ್ಷತೆ ಮತ್ತು ಸುಗಮ ವಾಹನ ಸಂಚಾರಕ್ಕೆ ಅನುಕೂಲವಾಗುವಂತೆ ಮೂಲಸೌಕರ್ಯ ಅಭಿವೃದ್ಧಿಪಡಿಸಲು ಮುಂದಾಗಿದ್ದೇವೆ. ಹಳೇ ಸಂಚಾರ ಪದ್ಧತಿಗೆ ಜೋತು ಬೀಳದೆ ಅತ್ಯಾಧುನಿಕ ತಂತ್ರಜ್ಞಾನ ಬಳಸಿ ಅಶೋಕ ರಸ್ತೆಯಲ್ಲಿ ಝೀರೊ ಟಾಲರನ್ಸ್ ವ್ಯವಸ್ಥೆ ಕಲ್ಪಿಸುವ ಮೂಲಕ 'ಮಾದರಿ ರಸ್ತೆ'ಯಾಗಿ ಅಭಿವೃದ್ಧಿಪಡಿಸುತ್ತಿದ್ದೇವೆ. ಮಹಾನಗರ ಪಾಲಿಕೆಯಿಂದ ಸಿವಿಲ್ ಕಾಮಗಾರಿ ನಡೆಯುತ್ತದೆ. ಸುಗಮ ಸಂಚಾರ ಸಂಬಂಧ ಪರಿಕರಗಳನ್ನು ಪೊಲೀಸ್ ಘಟಕವು ಅಳವಡಿಸಲಾಗುತ್ತಿದೆ. ಪಾಲಿಕೆ ಹಾಗೂ ಪೊಲೀಸ್ ಜಂಟಿ ಪ್ರಯತ್ನಕ್ಕೆ ಸಾರ್ವಜನಿಕರು ಸಹಕರಿಸಬೇಕು.



– ಸೀಮಾ ಲಾಟ್ಕರ್,
ನಗರ ಪೊಲೀಸ್ ಆಯುಕ್ತರು

ಜು.12 ರಂದು ಮೆಗಾ ಲೋಕ್ ಅದಾಲತ್

ಮೈಸೂರು,ಜೂ.13– ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಮೈಸೂರು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ವತಿಯಿಂದ ಕರ್ನಾಟಕ ರಾಜ್ಯಾದ್ಯಂತ ನಡೆಯಲಿರುವ ರಾಷ್ಟ್ರೀಯ ಮೆಗಾ ಲೋಕ್ ಅದಾಲತ್‌ನ್ನು ಜುಲೈ 12 ರಂದು ಆಯೋಜಿಸಲಾಗಿದ್ದು, ಸಾರ್ವಜನಿಕರು ತಮ್ಮ ವ್ಯಾಜ್ಯ ಪೂರ್ವ ಹಾಗೂ ನ್ಯಾಯಾಲಯಗಳಲ್ಲಿ ಬಾಕಿ ಇರುವ ಪ್ರಕರಣಗಳಲ್ಲಿ ತಕ್ಷಣ ಪರಿಹಾರ ಪಡೆದುಕೊಳ್ಳಲು ಇದೊಂದು ಸುವರ್ಣಾವಕಾಶವಾಗಿದೆ.

ಲೋಕ್ ಅದಾಲತ್‌ನಲ್ಲಿ ರಾಜಿಯಾಗಬಲ್ಲ ಅಪರಾಧಿಕ ಪ್ರಕರಣಗಳು, ಬ್ಯಾಂಕ್ ವಸೂಲಾತಿ ಪ್ರಕರಣಗಳು, ಉದ್ಯೋಗದಲ್ಲಿ ಪುನರ್ ಸ್ಥಾಪಿಸಲ್ಪಡುವ ಪ್ರಕರಣಗಳು, ಕೈಗಾರಿಕಾ ಕಾರ್ಮಿಕರ ವೇತನಕ್ಕೆ ಸಂಬಂಧಿಸಿದ ಕ್ಲೇಮುಗಳು, ಜಿಲ್ಲಾ ಗ್ರಾಹಕರ ವೇದಿಕೆಯಲ್ಲಿನ ಪ್ರಕರಣಗಳು (Consumer Disputes), ಖಾಯಂ ಜನತಾ ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣಗಳು, ಚೆಕ್ಕು ಅಮಾನ್ಯದ ಪ್ರಕರಣಗಳು, ಮೋಟಾರು ಅಪಘಾತ ಪರಿಹಾರ ನ್ಯಾಯಾಧೀಕರಣದ ಪ್ರಕರಣಗಳು, ಕಾರ್ಮಿಕ ವಿವಾದಗಳು, ವಿದ್ಯುತ್ ಹಾಗೂ ನೀರಿನ ಶುಲ್ಕಗಳು, ಭೂಸ್ವಾಧೀನ ಪ್ರಕರಣಗಳು, ವೇತನ ಮತ್ತು ಭತ್ಯೆಗಳಿಗೆ ಸಂಬಂಧಿಸಿದ ಸೇವಾ ಪಿಂಚಣಿ ಪ್ರಕರಣಗಳು, ಸಾರ್ವಜನಿಕ ಉಪಯುಕ್ತತೆ ಸೇವೆಗಳ ಸಂಬಂಧಿಸಿದ ಪ್ರಕರಣಗಳು, ರಾಜೀಯಾಗಬಲ್ಲ ಸಿವಿಲ್ ಮತ್ತು ಇತರೆ ಪ್ರಕರಣಗಳು, ವೈವಾಹಿಕ, ಕುಟುಂಬ ನ್ಯಾಯಾಲಯದ ಪ್ರಕರಣಗಳು (ವಿಚ್ಛೇದನೆಯನ್ನು ಹೊರತುಪಡಿಸಿ), ಈ ಪ್ರಕರಣಗಳನ್ನು ರಾಜೀ ಮೂಲಕ ಇತ್ಯರ್ಥಪಡಿಸಿಕೊಳ್ಳಬಹುದಾಗಿದೆ. ನ್ಯಾಯಾಲಯಗಳಲ್ಲಿ ಉಭಯ ಪಕ್ಷಕಾರರು ರಾಜೀ ಮಾಡಿಕೊಳ್ಳಲು ಸೂಕ್ತ ಮಾರ್ಗದರ್ಶನ ಮಾಡಲಾಗುವುದು.

ಇಬ್ಬರಿಗೂ ಒಪ್ಪಿಗೆಯಾಗುವಂತೆ ಪ್ರಕರಣವು ತೀರ್ಮಾನವಾಗುವುದರಿಂದ ಬಾಂಧವ್ಯವು ಉಳಿದು ವಿವಾದವು ತೀರ್ಮಾನವಾಗುತ್ತದೆ. ನ್ಯಾಯಾಲಯದಲ್ಲಿ ದಾಖಲಾಗದೇ ಇರುವ ಪ್ರಕರಣಗಳನ್ನು ಸಹ ರಾಜೀ ಸಂಧಾನದ ಮೂಲಕ ಬಗೆಹರಿಸಿಕೊಳ್ಳಲು ಅವಕಾಶ ಕಲ್ಪಿಸಲಾಗುವುದು. ರಾಜೀ ಸಂಧಾನದ ಮೂಲಕ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಂಡಲ್ಲಿ ನ್ಯಾಯಾಲಯಕ್ಕೆ ಪಾವತಿಸಲಾದ ನ್ಯಾಯಾಲಯ ಶುಲ್ಕವನ್ನು ಪೂರ್ಣವಾಗಿ ಮರುಪಾವತಿಸಲಾಗುವುದು. ಸಂಧಾನಕಾರರು ಸೂಚಿಸುವ ಪರಿಹಾರ ಒಪ್ಪಿಗೆಯಾದಲ್ಲಿ ಮಾತ್ರ ರಾಜೀ ಮಾಡಿಕೊಳ್ಳಬಹುದು. ಕಡಿಮೆ ಖರ್ಚಿನಲ್ಲಿ ಶೀಘ್ರ ತೀರ್ಮಾನಕ್ಕಾಗಿ ಇದೊಂದು ವಿಶೇಷ ಅವಕಾಶವಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಮೈಸೂರು (ಮೈಸೂರು ನಗರಕ್ಕೆ ಸಂಬಂಧಿಸಿದಂತೆ) ಮಾತ್ರ Toll Free No. 1800–425–0131 or 15100 ಹಾಗೂ ತಾಲೂಕುಗಳಿಗೆ ಸಂಬಂಧಿಸಿದಂತೆ ತಾಲೂಕು ಕಾನೂನು ಸೇವಾ ಸಮಿತಿಗಳನ್ನು ನೇರವಾಗಿ ಸಂಪರ್ಕಿಸಬಹುದು ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬನ್ನಿಮಂಟಪದ ಮೈಸೂರು ಲಯನ್ಸ್ ಶಾಲೆಯಲ್ಲಿ ಶೌಚಾಲಯ ನಿರ್ಮಾಣ

ಶಾಸಕ ತನ್ವೀರ್ ಸೇಠ್ ಗುದ್ದಲಿ ಪೂಜೆ

ಮೈಸೂರು, ಜೂ.13(ಬಿಎಲ್‌ಯು)– ಮೈಸೂರಿನ ಬನ್ನಿಮಂಟಪದ ಮೈಸೂರು ಲಯನ್ಸ್ ಶಾಲೆಯಲ್ಲಿ ಶಾಸಕರ ಅನುದಾನದಲ್ಲಿ ನಿರ್ಮಾಣ ಮಾಡುತ್ತಿರುವ ಶೌಚಾಲಯಕ್ಕೆ ನರಸಿಂಹರಾಜ ಕ್ಷೇತ್ರದ ಶಾಸಕ ತನ್ವೀರ್ ಸೇಠ್ ಗುದ್ದಲಿ ಪೂಜೆ ನೆರವೇರಿಸಿದರು.

ತರುವಾಯ ಮಾತನಾಡಿದ ತನ್ವೀರ್ ಸೇಠ್ ಅವರು, ಶೌಚಾಲಯ ನಿರ್ಮಾಣಕ್ಕೆ ಶಾಸಕರ ಅನುದಾನದಲ್ಲಿ 15 ಲಕ್ಷ ರೂಪಾಯಿ ನೀಡಿದ್ದೇನೆ. ಲಯನ್ಸ್ ಸಂಸ್ಥೆಯ ಸದಸ್ಯನಾಗಿ ಸೇವಾ ಮನೋಭಾವದ ದೃಷ್ಟಿಯಿಂದ ಈ ಕಾರ್ಯ ಕೈಗೊಂಡಿದ್ದೇನೆ ಎಂದರು.

ನನ್ನ ಕ್ಷೇತ್ರದ ಶಾಲೆಗಳ ಶಿಕ್ಷಣಕ್ಕೆ ಹೆಚ್ಚು ಒತ್ತು ನೀಡುತ್ತಿದ್ದೇನೆ. ಲಯನ್ಸ್ ಸಂಸ್ಥೆ ಸೇವಾ ಮನೋಭಾವದಿಂದ ನಡೆಯುತ್ತಿರುವ ಸಂಸ್ಥೆಯಾಗಿದ್ದು, ಕಳೆದ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ನೂರಕ್ಕೆ ನೂರರಷ್ಟು ಫಲಿತಾಂಶ ಬಂದಿದೆ ಎಂದು ಹೇಳಿದರು.

ಸಮಾಜ ಬಯಸುವ ಶಿಕ್ಷಣಕ್ಕೆ ಬೆಲೆ ನೀಡಬೇಕು. ಈ ಹಿನ್ನೆಲೆ ಮೌಲ್ಯಾಧಾರಿತ ಶಿಕ್ಷಣ ನೀಡಲು ಶಿಕ್ಷಕರು ಮುಂದಾಗಬೇಕು. ಶಾಲೆಯಿಂದ ಓದು ಮುಗಿಸಿ ಹೊರಬಂದವರು ಸಮಾಜದಲ್ಲಿ ಉತ್ತಮ ನಡತೆಯ ವ್ಯಕ್ತಿಗಳಾಗಿ ರೂಪುಗೊಳ್ಳಬೇಕು ಎಂದು ತನ್ವೀರ್ ಸೇಠ್ ಸಲಹೆ ನೀಡಿದರು.

ಇದೇ ವೇಳೆ ಶಾಸಕ ತನ್ವೀರ್ ಸೇಠ್ ಅವರನ್ನು ಲಯನ್ಸ್ ಸಂಸ್ಥೆ ವತಿಯಿಂದ ಸನ್ಮಾನಿಸಲಾಯಿತು. ಲಯನ್ಸ್ ಶಾಲೆಯ ಅಧ್ಯಕ್ಷ ಲಯನ್ ಶಿವಕುಮಾರ್, ಕಾರ್ಯದರ್ಶಿ ಸಿ.ಮೋಹನ್ ಕುಮಾರ್, ಖಜಾಂಚಿ ಜಿ.ಲೋಕೇಶ್, ಶಾಲೆಯ ಮುಖ್ಯೋಪಾಧ್ಯಾಯಿನಿ ಹೇಮಾವತಿ, ಪ್ರಾಂತೀಯ ಅಧ್ಯಕ್ಷ ಗಿರೀಶ್, ಲಯನ್ಸ್ ಕ್ಲಬ್ ಆಫ್ ಮೈಸೂರು ಅಧ್ಯಕ್ಷ ಬಿ.ಶಿವಣ್ಣ, ಉಪಾಧ್ಯಕ್ಷ ವಿರೂಪಾಕ್ಷ, ಜಂಟಿ ಕಾರ್ಯದರ್ಶಿ ಪಿ.ರಮೇಶ್, ಮಾಜಿ ಜಿಲ್ಲಾ ರಾಜ್ಯಪಾಲ ಡಾ.ಪ್ರಾಣ ಮಂಡಲ್, ಕೃಷ್ಣಮೂರ್ತಿ, ಕೆಆರ್‌ಐಡಿಎಲ್ ಕಾರ್ಯಪಾಲಕ ಅಭಿಯಂತರ ತಿಪ್ಪಾರೆಡ್ಡಿ, ಸಹಾಯಕ ಕಾರ್ಯಪಾಲಕ ಅಭಿಯಂತರ ಅರ್ಚನ, ಗುತ್ತಿಗೆದಾರ ಷರೀಫ್ ಈ ವೇಳೆ ಹಾಜರಿದ್ದರು.



ಮೈಸೂರಿನ ಬನ್ನಿಮಂಟಪದ ಮೈಸೂರು ಲಯನ್ಸ್ ಶಾಲೆಯಲ್ಲಿ ಶಾಸಕರ ಅನುದಾನದಲ್ಲಿ ನಿರ್ಮಾಣ ಮಾಡುತ್ತಿರುವ ಶೌಚಾಲಯಕ್ಕೆ ಶಾಸಕ ತನ್ವೀರ್ ಸೇಠ್ ಶಂಕುಸ್ಥಾಪನೆ ನೆರವೇರಿಸಿದರು.

ಎಸ್‌ಎಸ್‌ಎಲ್‌ಸಿ ಪರೀಕ್ಷೆ ಫಲಿತಾಂಶ ಪ್ರಕಟ

ನಾಲ್ವರು ವಿದ್ಯಾರ್ಥಿಗಳಿಗೆ 625ಕ್ಕೆ 625 ಅಂಕ, ಔಟ್ ಆಫ್ ಔಟ್ ಸ್ಕೋರ್

ಬೆಂಗಳೂರು, ಜೂ.13– ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯಮಾಪನ ಮಂಡಳಿಯು(KSEAB) ಇಂದು ಶುಕ್ರವಾರ ಎಸ್‌ಎಸ್‌ಎಲ್‌ಸಿ ಪರೀಕ್ಷೆ–2ರ ಫಲಿತಾಂಶವನ್ನು ಪ್ರಕಟಿಸಿದೆ. ಒಟ್ಟು 87,330 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದು, ನಾಲ್ವರು ವಿದ್ಯಾರ್ಥಿಗಳು 625ಕ್ಕೆ 625 ಅಂಕ ಗಳಿಸಿದ್ದಾರೆ.

ಅಂಕ ಹೆಚ್ಚಳಕ್ಕೆ ಪರೀಕ್ಷೆ ಬರೆದಿದ್ದ ನಾಲ್ವರಿಗೆ ಔಟ್ ಆಫ್ ಔಟ್ ಅಂಕ ಬಂದಿದೆ. ಕರ್ನಾಟಕದ 967 ಕೇಂದ್ರಗಳಲ್ಲಿ ಮೇ 26ರಿಂದ ಜೂನ್ 2ರವರೆಗೆ ಎಸ್‌ಎಸ್‌ಎಲ್‌ಸಿ ಪರೀಕ್ಷೆ–2 ನಡೆದಿತ್ತು.

ಅಂಗನವಾಡಿ ಕಾರ್ಯಕರ್ತೆ, ಸಹಾಯಕಿಯರ ಹುದ್ದೆಗಳ ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟ: ಆಕ್ಷೇಪಣೆಗಳ ಆಹ್ವಾನ

ಮೈಸೂರು, ಜೂ.13– ಮೈಸೂರು ಜಿಲ್ಲೆಯ ಬಿಳಿಗೆರೆ ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯಲ್ಲಿ ಖಾಲಿ ಇರುವ ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿಯರ ನೇಮಕಾತಿ ಪ್ರಕ್ರಿಯೆಯನ್ನು ಸೂಚಿಸಲಾದ ವೇಳಾಪಟ್ಟಿಯಂತೆ ಕಾಲಮಿತಿ ನಿಗದಿಪಡಿಸಿ ಅಂಗನವಾಡಿ ಕಾರ್ಯಕರ್ತೆ, ಸಹಾಯಕಿಯರ ನೇಮಕಾತಿ ಪ್ರಕ್ರಿಯೆ ಕೈಗೊಳ್ಳಲಾಗಿತ್ತು. ಅದರಂತೆ ಮೈಸೂರು ಜಿಲ್ಲೆಯ ಬಿಳಿಗೆರೆ ಶಿಶು ಅಭಿವೃದ್ಧಿ ಯೋಜನೆಯ ಅಂಗನವಾಡಿಗಳಲ್ಲಿ ಖಾಲಿ ಇರುವ ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿಯರ ಹುದ್ದೆಗಳನ್ನು ನೇಮಕ ಮಾಡಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಿದ್ದು, ಅರ್ಜಿದಾರರು ಸಲ್ಲಿಸಿರುವ ದಾಖಲೆಗಳ ಆಧಾರದ ಮೇಲೆ ಅವರ ವಿದ್ಯಾರ್ಹತೆ, ಮೆರಿಟ್ ಹಾಗೂ ಸರ್ಕಾರದ ಆದೇಶದ ನಿಯಮಾವಳಿಯಂತೆ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗಿದೆ.

ಈ ತಾತ್ಕಾಲಿಕ ಆಯ್ಕೆ ಪಟ್ಟಿಯ ಬಗ್ಗೆ ಆಕ್ಷೇಪಣೆಗಳನ್ನು ಸಲ್ಲಿಸುವ ಅಭ್ಯರ್ಥಿಗಳು ಖುದ್ದಾಗಿ ಅಥವಾ ಲಿಖಿತವಾಗಿ ಅಗತ್ಯ ಸಮರ್ಥನೀಯ ದಾಖಲೆಗಳೊಂದಿಗೆ ಸಂಬಂಧಿಸಿದ ಶಿಶು ಅಭಿವೃದ್ಧಿ ಯೋಜನಾ ಕಚೇರಿಯ ಕೆಲಸದ ವೇಳೆಯಲ್ಲಿ ಜೂನ್ 17 ರಂದು ಸಂಜೆ 5:30 ರೊಳಗಾಗಿ ಸಲ್ಲಿಸಬಹುದಾಗಿದೆ. ನಂತರ ಸ್ವೀಕೃತವಾಗುವ ಯಾವುದೇ ಆಕ್ಷೇಪಣೆಗಳನ್ನು ಪರಿಗಣಿಸುವುದಿಲ್ಲ ಎಂದು ಮೈಸೂರಿನ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಶ್ರದ್ಧಾಂಜಲಿ...



ಮೈಸೂರಿನ ಗಾಂಧಿಚೌಕದಲ್ಲಿರುವ ದಿ ಮೈಸೂರು ಕೋ ಆಪರೇಟಿವ್ ಬ್ಯಾಂಕ್ ವತಿಯಿಂದ ಗುಜರಾತ್‌ನ ಅಹಮದಾಬಾದ್‌ನಲ್ಲಿ ವಿಮಾನ ಪತನವಾಗಿ ಮರಣ ಹೊಂದಿದ ಪ್ರಯಾಣಿಕರು ಹಾಗೂ ವಿದ್ಯಾರ್ಥಿಗಳಿಗೆ ಶ್ರದ್ಧಾಂಜಲಿ ಸಲ್ಲಿಸಲಾಯಿತು. ಸಹಕಾರ ಬ್ಯಾಂಕಿನ ಅಧ್ಯಕ್ಷ ಜೆ. ಯೋಗೇಶ್, ನಿರ್ದೇಶಕರುಗಳಾದ ರಾಮಕೃಷ್ಣ ಪಡುವಾರಹಳ್ಳಿ, ಚಂದ್ರಶೇಖರ್, ರಾಜೇಶ್ವರಿ, ನಿರಂಜನ್, ಗಿರೀಶ್, ವೃತ್ತಿಪರ ನಿರ್ದೇಶಕ ಸಿ.ಎಸ್.ರಾಮಕೃಷ್ಣಯ್ಯ, ಸಂಸ್ಥೆಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹರ್ಷಿತ್ ಗೌಡ. ಕೆ, ಬ್ಯಾಂಕಿನ ಸಿಬ್ಬಂದಿ ವರ್ಗ ಹಾಗೂ ಸದಸ್ಯರು ಉಪಸ್ಥಿತರಿದ್ದರು.

ನಾಳೆ ನಟನದಲ್ಲಿ ನಗೆ ನಾಟಕ 'ಹೀಗಾದ್ರೆ ಹೇಗೆ'

ಮೈಸೂರು, ಜೂ. 13– ಮೈಸೂರಿನ ಮತ್ತು ಸುತ್ತಮುತ್ತಲಿನ ಸದಭಿರುಚಿಯ,



ಸಹೃದಯ ರಂಗಾಸಕ್ತರಿಗಾಗಿ ನಟನವು ವಾರಾಂತ್ಯ ರಂಗ ಪ್ರದರ್ಶನಗಳನ್ನು ನಡೆಸುತ್ತಿದ್ದು, ಜೂನ್ 15ರಂದು ಸಂಜೆ 6.30ಕ್ಕೆ ಸರಿಯಾಗಿ ರಾಮಕೃಷ್ಣನಗರದಲ್ಲಿರುವ ನಟನ ರಂಗಶಾಲೆಯಲ್ಲಿ ವಾಸ್ಪ್ ಥಿಯೇಟರ್ ಬೆಂಗಳೂರು ಅಭಿನಯಿಸುವ ಟಿ. ಸುನಂದಮ್ಮರವರ ನಗೆ ಬರಹಗಳ ಆಧಾರಿತ ನಾಟಕ 'ಹೀಗಾದ್ರೆ ಹೇಗೆ' ಪ್ರದರ್ಶನಗೊಳ್ಳಲಿದೆ. ನಾಟಕದ ರಂಗರೂಪ ಕೆ.ವೈ ನಾರಾಯಣ ಸ್ವಾಮಿ ಮತ್ತು ನಿರ್ದೇಶನ ವಿನಯ್ ಶಾಸ್ತ್ರಿ ಅವರದ್ದು. ಹೆಚ್ಚಿನ ಮಾಹಿತಿಗಾಗಿ 7259537777 ಸಂಪರ್ಕಿಸಬಹುದು.

ವಿವಿಧ ಯೋಜನೆ ಫಲಾನುಭವಿಗಳಿಗೆ ಆದೇಶ ಪತ್ರ



ಚಾಮರಾಜ ಕ್ಷೇತ್ರದ ಶಾಸಕರಾದ ಹರೀಶ್‌ಗೌಡರ ವಿವಾಹ ವಾರ್ಷಿಕೋತ್ಸವದ ಹಿನ್ನೆಲೆಯಲ್ಲಿ ಬಡವರ ಬಂಧು ಅಭಿಮಾನಿಗಳ ಸಂಘದಿಂದ ವಿಧವೆಯರು, ಅಂಗವಿಕಲರು, ವೃದ್ಧರಿಗೆ ಸರ್ಕಾರದ ವಿವಿಧ ಯೋಜನೆಗಳ ಆದೇಶ ಪ್ರತಿಯನ್ನು ಶಾಸಕ ಹರೀಶ್‌ಗೌಡರು ವಿತರಿಸಿದರು. ಈ ವೇಳೆ ಸಂಘದ ಅಧ್ಯಕ್ಷರಾದ ಪಡುವಾರಹಳ್ಳಿ ಪಾಪಣ್ಣ, ಸುಣ್ಣದಕೇರಿ ರಮೇಶ್, ಉತ್ತನಹಳ್ಳಿ ಮಹದೇವ, ತಾವರೆಕಟ್ಟೆಯ ಕಾಂಗ್ರೆಸ್ ಮುಖಂಡರಾದ ರಮೇಶ್ ಬಾಬು ಇತರರು ಉಪಸ್ಥಿತರಿದ್ದರು.

ಮುಂಗಾರು ಹಂಗಾಮಿನ ಬೆಳೆ ವಿಮೆಗೆ ಗ್ರಾಮ ಪಂಚಾಯಿತಿ ಮಟ್ಟ, ಹೋಬಳಿ ಮಟ್ಟದಲ್ಲಿ ನೋಂದಣಿ ಪ್ರಾರಂಭ

ಮೈಸೂರು, ಜೂ.13– 2025 ರ ಮುಂಗಾರು ಹಂಗಾಮಿನಲ್ಲಿ ಮೈಸೂರು ಜಿಲ್ಲೆಯಲ್ಲಿ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆಯನ್ನು ಅನುಷ್ಠಾನಗೊಳಿಸಲು ಮಂಜೂರಾತಿ ನೀಡಲಾಗಿದ್ದು, ಇವುಗಳಲ್ಲಿ ತಾಲೂಕುವಾರು ಮುಖ್ಯ ಬೆಳೆಗಳನ್ನು ಗ್ರಾಮ ಪಂಚಾಯತಿ ಮಟ್ಟಕ್ಕೆ ಮತ್ತು ಇತರೆ ಬೆಳೆಗಳನ್ನು ಹೋಬಳಿ ಮಟ್ಟಕ್ಕೆ ಅಧಿಸೂಚಿಸಿ ಅನುಷ್ಠಾನಗೊಳಿಸಲು ಮಂಜೂರಾತಿ ನೀಡಲಾಗಿದೆ.

ಗ್ರಾಮ ಪಂಚಾಯಿತಿ ಮಟ್ಟ : ಭತ್ತ (ನೀರಾವರಿ) ಬೆಳೆಗೆ ಕೆ.ಆರ್. ನಗರ, ತಿ.ನರಸೀಪುರ, ನಂಜನಗೂಡು, ಮೈಸೂರು, ಸರಗೂರು, ಸಾಲಿಗ್ರಾಮ ಮತ್ತು ಹೆಚ್.ಡಿ. ಕೋಟೆ ತಾಲೂಕುಗಳ ಅಧಿಸೂಚಿತ ಗ್ರಾಮ ಪಂಚಾಯಿತಿಗಳಲ್ಲಿ, ರಾಗಿ (ಮಳೆಯಾಶ್ರಿತ) ಬೆಳೆಗೆ ಸರಗೂರು, ಹುಣಸೂರು ಮತ್ತು ಹೆಚ್.ಡಿ. ಕೋಟೆ ತಾಲೂಕುಗಳ ಅಧಿಸೂಚಿತ ಗ್ರಾಮ ಪಂಚಾಯಿತಿಗಳಲ್ಲಿ, ಮುಸುಕಿನಜೋಳ (ಮಳೆಯಾಶ್ರಿತ) ಬೆಳೆಗೆ ಪಿರಿಯಾಪಟ್ಟಣ ಮತ್ತು ಹುಣಸೂರು ತಾಲೂಕಿನ ಅಧಿಸೂಚಿತ ಗ್ರಾಮ ಪಂಚಾಯಿತಿಗಳಲ್ಲಿ ಮತ್ತು ಹೆಸರು (ಮಳೆಯಾಶ್ರಿತ) ಬೆಳೆಗೆ ನಂಜನಗೂಡು ತಾಲೂಕಿನ ಅಧಿಸೂಚಿತ ಗ್ರಾಮ ಪಂಚಾಯಿತಿಗಳಲ್ಲಿ ರೈತರು ವಿಮೆಗೆ ನೋಂದಾಯಿಸಬಹುದಾಗಿರುತ್ತದೆ.

ಆಸಕ್ತ ರೈತರು ಈ ಬಗ್ಗೆ ಹೆಚ್ಚಿನ ಮಾಹಿತಿಗಾಗಿ ತಮ್ಮ ಹತ್ತಿರದ ರೈತ ಸಂಪರ್ಕ ಕೇಂದ್ರಗಳು, ತಾಲೂಕು ಸಹಾಯಕ ಕೃಷಿ ನಿರ್ದೇಶಕರ ಕಚೇರಿ, ಬ್ಯಾಂಕುಗಳು, ಸಾಮಾನ್ಯ ಸೇವಾ ಕೇಂದ್ರಗಳು (common service centers) ಅಥವಾ ಗ್ರಾಮ ಒನ್ ಕೇಂದ್ರಗಳನ್ನು ಸಂಪರ್ಕಿಸಬಹುದು ಎಂದು ಮೈಸೂರು ಜಿಲ್ಲೆಯ ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಾಮಾಜಿಕ ಜಾಲತಾಣದಲ್ಲಿ ಮುಖ್ಯಮಂತ್ರಿಗೆ ನಿಂದನೆ

ದೇವರಾಜ ಬ್ಲಾಕ್ ಕಾಂಗ್ರೆಸ್ ಸಮಿತಿ ನಜರ್‌ಬಾದ್ ಠಾಣೆಯಲ್ಲಿ ದೂರು ದಾಖಲು




ವಿಧಾನ ಪರಿಷತ್ ಸದಸ್ಯ ಡಾ. ತಿಮ್ಮಯ್ಯ ಅವರ ಬಗ್ಗೆ ಅವಹೇಳನಕಾರಿ ಪದಬಳಕೆ ಮಾಡಿದ ವ್ಯಕ್ತಿ ವಿರುದ್ಧ ಕಾಂಗ್ರೆಸ್ ಮುಖಂಡರು ಪೊಲೀಸರಿಗೆ ದೂರು ಸಲ್ಲಿಸಿದರು.

ಮೈಸೂರು, ಜೂ. 13– ಸಾಮಾಜಿಕ ಜಾಲತಾಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ವಿಧಾನಪರಿಷತ್ ಸದಸ್ಯ ಡಾ.ಡಿ.ತಿಮ್ಮಯ್ಯ ವಿರುದ್ಧ ಅವಹೇಳನಕಾರಿಯಾಗಿ ನಿಂದಿಸಿ ಅವಾಚ್ಯ ಪದಗಳನ್ನು ಬಳಸಿ ಮಾನಹಾನಿ ಮಾಡಿದ ವ್ಯಕ್ತಿಯ ವಿರುದ್ಧ ನಜರ್‌ಬಾದ್ ಪೊಲೀಸ್ ಠಾಣೆಯಲ್ಲಿ ದೇವರಾಜ ಬ್ಲಾಕ್ ಕಾಂಗ್ರೆಸ್ ಸಮಿತಿ ದೂರು ಸಲ್ಲಿಸಿದೆ. ಆ ವ್ಯಕ್ತಿಯನ್ನು ಈ ಕೂಡಲೇ ಬಂಧಿಸಬೇಕೆಂದು ಆಗ್ರಹಿಸಿದರು. ಇತ್ತೀಚಿನ ದಿನಗಳಲ್ಲಿ ಪದೇಪದೆ ಮುಖ್ಯಮಂತ್ರಿಯನ್ನು ನಿಂದಿಸುವ ಪ್ರಕರಣಗಳು ಹೆಚ್ಚಾಗುತ್ತಿದ್ದು, ಅದನ್ನು ಪೊಲೀಸ್ ಇಲಾಖೆ ತಡೆಗಟ್ಟಲು ಮುಂದಾಗಬೇಕೆಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ದೇವರಾಜ್ ಬ್ಲಾಕ್ ಕಾಂಗ್ರೆಸ್ ಸಮಿತಿ ಮೋಹನ್ ಕುಮಾರ್, ಕೆಪಿಸಿಸಿ ಸದಸ್ಯರಾದ ನಜರ್‌ಬಾದ್ ನಟರಾಜ್, ಕೆ.ಆರ್. ಬ್ಯಾಂಕ್ ಅಧ್ಯಕ್ಷ ಬಸವರಾಜ್ ಬಸಪ್ಪ, ಕಾಂಗ್ರೆಸ್ ಪರಿಶಿಷ್ಟ ಜಾತಿ ವಿಭಾಗದ ಪ್ರಧಾನ ಕಾರ್ಯದರ್ಶಿ ಪ್ರಕಾಶ್, ಕಾಂಗ್ರೆಸ್ ಮುಖಂಡರುಗಳಾದ ದೀಪಕ್ ಪುಟ್ಟಸ್ವಾಮಿ, ರವಿಚಂದ್ರ, ಶ್ರೀಕಾಂತ್, ಪಾಂಡು, ಕಿರಣ ಹಾಗೂ ಕಾಂಗ್ರೆಸ್ ಇನ್ನಿತರರು ಹಾಜರಿದ್ದರು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

14.06.2025 ಶನಿವಾರ, ಮಳೆ ನಕ್ಷತ್ರ: ಮೃಗಶಿರ, 08.06.2025 ರಿಂದ 21.06.2025
ವಿಶ್ವವಸು ನಾಮ ಸಂವತ್ಸರ, ಉತ್ತರಾಯಣ, ಗ್ರೀಷ್ಮ ಋತು, ಜ್ಯೇಷ್ಠ ಮಾಸ, ಕೃಷ್ಣ ಪಕ್ಷ,
ತಿಥಿ: ತದಿಗೆ, ನಕ್ಷತ್ರ: ಉಷಾ, ರಾಹುಕಾಲ: ಬೆಳಗ್ಗೆ 9 ರಿಂದ 10.30ರವರೆಗೆ

■ **ಅವಧೂತ ದತ್ತ ಪೀಠ, ಶ್ರೀ ಗಣಪತಿ ಸಚ್ಚಿದಾನಂದ ಆಶ್ರಮ :** ವಿಶ್ವದ ಮೊಟ್ಟ ಮೊದಲ ವಿಶಿಷ್ಟ ಕಾರ್ಯಕ್ರಮ ವನ ದುರ್ಗಾ ವೃಕ್ಷಶಾಂತಿ ಮಹಾಯಜ್ಞ, ಸಹಸ್ರ ಚಂಡೀಯಾಗ, ಸ್ಥಳ: ಅವಧೂತ ದತ್ತ ಪೀಠ, ಶ್ರೀ ಗಣಪತಿ ಸಚ್ಚಿದಾನಂದ ಆಶ್ರಮ, ಊಟಿ ರಸ್ತೆ, ಬೆಳಗ್ಗೆಯಿಂದ.

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ :** ಸಂಧಿವಾತಕ್ಕೆ ಚಿಕಿತ್ಸಾ ಶಿಬಿರ, ಗರ್ಭಾಶಯ ಮುಖದಲ್ಲಿ ಹುಣ್ಣು (ಸರ್ವೈಕಲ್ ಎರೋಷನ್) ಶಿಬಿರ, ದೇಹ ಮನಸ್ಸುಗಳ ಆರೋಗ್ಯಕ್ಕಾಗಿ ಯೋಗಾಭ್ಯಾಸ ತರಗತಿ (ಬೆಳಗ್ಗೆ 6.30 ರಿಂದ 7 ರವರೆಗೆ), ಬೊಜ್ಜು ನಿವಾರಣಾ ಶಿಬಿರ, ಕಾರ್ನಿಯಲ್ ಒಪೇಸಿಟಿ (ಕಾರ್ನಿಯಾದ ಅಪಾರದರ್ಶಕತೆ, ಕಣ್ಣಿನ ಹೂ)ಗೆ ಚಿಕಿತ್ಸಾ ಶಿಬಿರ, ಇಂಗ್ವಾನಲ್ ಹರ್ನಿಯಾ ಮತ್ತು ಮೂಲವ್ಯಾಧಿ ಚಿಕಿತ್ಸಾ ಶಿಬಿರ, ಸ್ಥಳ: ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ, ಆಲನಹಳ್ಳಿ, ಬೆಳಗ್ಗೆ 9 ರಿಂದ.

■ **ಶ್ರೀ ಸತ್ಯನಾರಾಯಣಸ್ವಾಮಿ ಮತ್ತು ಶ್ರೀ ಪಂಚಮುಖಿ ಆಂಜನೇಯಸ್ವಾಮಿ ದೇವಸ್ಥಾನ :** ನವಗ್ರಹಗಳ ನೂತನ ಶಿಲಾವಿಗ್ರಹ ಪ್ರತಿಷ್ಠಾಪನಾ ಕಾರ್ಯಕ್ರಮ, ಬೆಳಗ್ಗೆ 9ಕ್ಕೆ ಶ್ರೀ ಗಣಪತಿ ಹೋಮ, ನವಗ್ರಹ ಹೋಮ, ವಾಸ್ತು ಹೋಮ, ಸ್ಥಳ: ದೇವಸ್ಥಾನದ ಆವರಣ, ರಾಜೇಂದ್ರನಗರ.

■ **ಸರ್ಕಾರಿ ಪ್ರೌಢಶಾಲೆ, ಒಂಟಿಕೊಪ್ಪಲು, ಹಿರಣ್ಮಯಿ ಪ್ರತಿಷ್ಠಾನ, ಕಾವೇರಿ ಬಳಗ :** ಪ್ರತಿಭಾ ಪುರಸ್ಕಾರ, ಅಧ್ಯಕ್ಷತೆ : ಕ್ಷೇತ್ರ ಶಿಕ್ಷಣಾಧಿಕಾರಿ, ಮೈಸೂರು ಉತ್ತರ ಎಸ್. ರೇವಣ್ಣ, ಉದ್ಘಾಟನೆ : ಮುಖ್ಯ ಶಿಕ್ಷಕ ಕೆ.ಜಿ. ಮಹೇಶ್, ಪುರಸ್ಕಾರ ಪ್ರದಾನ : ಸರ್ಕಾರಿ ಪದವಿಪೂರ್ವ ಕಾಲೇಜು ಉಪನ್ಯಾಸಕರಾದ ಶ್ರೀಮತಿ ಕೆ.ಎನ್. ಕಲ್ಪನಾ, ಉಪಸ್ಥಿತರು : ಹಿಂದಿ ಭಾಷಾ ಸಂಪನ್ಮೂಲ ವ್ಯಕ್ತಿ ಡಾ. ವಿಜಿ, ಮುಕ್ತಕ ಕವಿ ಎಂ. ಮುತ್ತಸ್ವಾಮಿ, ಕಾವೇರಿ ಬಳಗದ ಅಧ್ಯಕ್ಷೆ ಶ್ರೀಮತಿ ಎನ್.ಕೆ. ಕಾವೇರಿಯಮ್ಮ, ಹಿರಣ್ಮಯಿ ಪ್ರತಿಷ್ಠಾನ ಅಧ್ಯಕ್ಷ ಎ. ಸಂಗಪ್ಪ, ಸ್ಥಳ: ಸರ್ಕಾರಿ ಪ್ರೌಢಶಾಲೆ, ಒಂಟಿಕೊಪ್ಪಲು, ಬೆಳಗ್ಗೆ 9.30ಕ್ಕೆ.

■ **ಕಾವೇರಿ ಆಯುರ್ವೇದ ಆಸ್ಪತ್ರೆ :** ಉತ್ತಮ ನಿದ್ರೆ ಅಭ್ಯಾಸ ಮತ್ತು ನಿದ್ರೆ ಸಮಸ್ಯೆ ನಿವಾರಣೆಯ ಶಿಬಿರ, ವೆರಿಕೋಸ್ ವೇನ್ಸ್, ಉಬ್ಬಿದ ರಕ್ತನಾಳ, ಹಸಿರುಂಬು, ಇಸಬು ರೋಗ, ಬಂಗು, ಅಲರ್ಜಿ ಚರ್ಮರೋಗ ತಪಾಸಣಾ ಶಿಬಿರ, ಸ್ಥಳ: ಕಾವೇರಿ ಆಯುರ್ವೇದ ಆಸ್ಪತ್ರೆ, ದೇವೇಗೌಡ ಸರ್ಕಲ್ ಹತ್ತಿರ, ಕೆಬಿಎಲ್ ಲೇಔಟ್, ಬೆಳಗ್ಗೆ 10 ಗಂಟೆಯಿಂದ.

■ **ಶ್ರೀ ಬಸವೇಶ್ವರ ಸಾಮಾಜಿಕ ಪರಿಷ್ಕರಣೆ, ಸಂಶೋಧನೆ ಮತ್ತು ವಿಸ್ತರಣಾ ಕೇಂದ್ರ, ಲಗೋರಿ ಸಾಂಸ್ಕೃತಿಕ ಬಳಗ :** ಡಾ. ನೀಗೂ ರಮೇಶ್ ಅವರ ಗಾಂಧೀಮರ : ಕಾವ್ಯಾವಲೋಕನ, ಉದ್ಘಾಟನೆ : ಪ್ರೊ. ಅರವಿಂದ ಮಾಲಗತ್ತಿ, ಅಧ್ಯಕ್ಷತೆ : ಕುವೆಂಪು ಕನ್ನಡ ಅಧ್ಯಯನ ಸಂಸ್ಥೆ ನಿರ್ದೇಶಕರಾದ ಪ್ರೊ. ಎನ್.ಕೆ. ಲೋಲಾಕ್ಷಿ, ಅಧ್ಯಕ್ಷತೆ : ಭಾರತೀಯ ಭಾಷಾ ಸಂಸ್ಥಾನ ಯೋಜನಾ ನಿರ್ದೇಶಕ ಡಾ. ನೀಲಗಿರಿ ತಳವಾರ, ಸ್ಥಳ: ಬಸವ ಪೀಠ ಸಭಾಂಗಣ, ಮಾನಸಗಂಗೋತ್ರಿ, ಬೆಳಗ್ಗೆ 10ಕ್ಕೆ.

■ **ಮೈಸೂರು ಕ್ವೀರ್ ಕಾರ್ನಿವಲ್, ಪಾಪಿನ್ಸ್ ಕ್ಲಬ್, ಸ್ಪಂದನ ಮತ್ತು ಕ್ವಿಯರ್ ಅವಾಮ್ :** ಮೈಸೂರು ಕ್ವಿಯರ್ ಕಾರ್ನಿವಲ್, ಸ್ಥಳ: ಹೆರಿಟೇಜ್ ಹೌಸ್, ಶ್ರೀಕಂಠರಾಜ್ ರಸ್ತೆ, ಬೆಳಗ್ಗೆ 10ಕ್ಕೆ.

■ **ಶಾರದಾ ವಿಲಾಸ ಫಾರ್ಮಸಿ ಕಾಲೇಜು :** ಅನ್ವೇಷಣಾ ಕಾರ್ಯಕ್ರಮದ ಪ್ರಯುಕ್ತ ಡೆವಲಪ್‌ಮೆಂಟ್ ಆಫ್ ಹರ್ಬಲ್ ಮೊನೋಗ್ರಾಫ್ಸ್ ಫಾರ್ ಆಯುರ್ವೇದಿಕ್ ಹರ್ಬ್ಸ್ ಕುರಿತು ವಿಚಾರ ಸಂಕಿರಣ, ಉದ್ಘಾಟನೆ : ಚಾಮರಾಜನಗರ ವಿವಿ ಕುಲಪತಿ ಡಾ. ಗಂಗಾಧರ ಎಂ.ಆರ್., ಮುಖ್ಯ ಅತಿಥಿಗಳು : ಆಯುರ್ವೇದ ವೈದ್ಯಕೀಯ ಕಾಲೇಜು ಜಂಟಿ ನಿರ್ದೇಶಕ ಡಾ. ಗಜಾನನ ಹೆಗಡೆ, ಶಾರದಾ ವಿಲಾಸ ಶಿಕ್ಷಣ ಸಂಸ್ಥೆ ಗೌರವ ಕಾರ್ಯದರ್ಶಿ ಆರ್. ನರಸಿಂಹ, ಅಧ್ಯಕ್ಷತೆ : ಡಾ. ಎ.ಎಸ್.ಆನಂದ ಕತ್ತಿ, ಸ್ಥಳ: ಶಾರದಾ ವಿಲಾಸ ಫಾರ್ಮಸಿ ಕಾಲೇಜು ಆವರಣ, ಬೆಳಗ್ಗೆ 10ಕ್ಕೆ.

■ **ಜೀವಧಾರ ಬ್ಲಡ್ ಬ್ಯಾಂಕ್, ನಾರಾಯಣ ಆಸ್ಪತ್ರೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಏಡ್ಸ್ ಪ್ರತಿಬಂಧಕ ಮತ್ತು ನಿಯಂತ್ರಣ ಘಟಕ :** ವಿಶ್ವ ರಕ್ತದಾನಿಗಳ ದಿನದ ಅಂಗವಾಗಿ ರಕ್ತದಾನ ಶಿಬಿರ, ಮುಖ್ಯ ಅತಿಥಿಗಳು : ಶಾಸಕ ತನ್ವೀರ್ ಸೇಠ್, ಜಿಲ್ಲಾಧಿಕಾರಿ ಲಕ್ಷ್ಮೀಕಾಂತ ರೆಡ್ಡಿ, ಡಾ. ಪಿ.ಸಿ. ಕುಮಾರಸ್ವಾಮಿ, ಡಾ. ಎಂ.ಎಸ್. ರವಿ, ಡಾ. ಜಯಂತ್, ಡಾ. ಮಹಮ್ಮದ್ ಸಿರಾಜ್ ಅಹಮದ್, ಡಾ. ಆರ್. ವಿಜಯಲಕ್ಷ್ಮಿ, ಡಾ. ಬಿ.ಜೆ. ನರೇಶ್‌ಕುಮಾರ್, ಡಾ. ವೈ.ಟಿ. ಕೃಷ್ಣೇಗೌಡ, ಎಸ್.ಇ. ಗಿರೀಶ್, ಸ್ಥಳ: ಮಹಾರಾಜ ತಾಂತ್ರಿಕ ಮಹಾವಿದ್ಯಾಲಯ ಕಾಲೇಜು ಸಭಾಂಗಣ, ಬೆಳಗ್ಗೆ 10ಕ್ಕೆ.

■ **ಮೈಸೂರು ಜಿಲ್ಲಾ ಪ್ರಾಕೃತಿಕ ಚಿಕಿತ್ಸಾ ಪರಿಷತ್ :** ಆಕ್ಯೂಪ್ರೆಶರ್, ಸು–ಜೋಕ್ ಮತ್ತು ಆಕ್ಯೂ ಡಿಜಿಟಲ್ ಫಿಶಿಯೋಥೆರಪಿ ಚಿಕಿತ್ಸಾ ಶಿಬಿರ, ಸ್ಥಳ: ಇನ್ನರ್‌ವ್ಹೀಲ್, ರೋಟರಿ ಭವನ, ವಿಜಯನಗರ, ರೈಲ್ವೆ ಬಡಾವಣೆ, ಬೆಳಗ್ಗೆ 10.30ಕ್ಕೆ.

■ **ಶ್ರೀ ಶ್ರೀ ಲಕ್ಷ್ಮೀದೇವಿ ಸೋಮನಾಳಮ್ಮನವರ ದೇವಸ್ಥಾನ :** ವಾರ್ಷಿಕೋತ್ಸವ ಪೂಜಾ ಮಹೋತ್ಸವ, ನವಗ್ರಹ ಸಮೇತ ಮೃತ್ಯುಂಜಯ ಹೋಮ, ಲಕ್ಷ್ಮೀನಾರಾಯಣ ಹೃದಯ ಪಾರಾಯಣ ಹೋಮ, ಬೆಳಗ್ಗೆ 10ಕ್ಕೆ ಪೂರ್ಣಾಹುತಿ, 10.30ಕ್ಕೆ ಕುಂಭೋದ್ಭವ ಕುಂಭಾಭಿಷೇಕ ಉಪಚಾರ, ಪೂಜೆರಾಷ್ಟ್ರಶೀರ್ವಾದ, 11.30ಕ್ಕೆ ಮಹಾಮಂಗಳಾರತಿ, ಮಧ್ಯಾಹ್ನ 12ಕ್ಕೆ ಅನ್ನಸಂತರ್ಪಣೆ, ಸ್ಥಳ: ದೇವಸ್ಥಾನದ ಆವರಣ, ಭೈರವೇಶ್ವರನಗರ, ಹೆಬ್ಬಾಳು 1ನೇ ಹಂತ.

■ **ಭಾನವಿ ಆಸ್ಪತ್ರೆ :** ವಿಶ್ವ ರಕ್ತದಾನಿಗಳ ದಿನ ಆಚರಣೆ, ಉದ್ಘಾಟನೆ : ಸಹಾಯಕ ಪೊಲೀಸ್ ಆಯುಕ್ತ ಶಿವಶಂಕರ್, ಮುಖ್ಯ ಅತಿಥಿಗಳು : ಆರಕ್ಷಕ ನಿರೀಕ್ಷಕರಾದ ಮಹದೇವಸ್ವಾಮಿ, ಯೋಗೇಶ್, ಸ್ಥಳ: ಭಾನವಿ ಆಸ್ಪತ್ರೆ, ಬೆಳಗ್ಗೆ 11ಕ್ಕೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 ನಖ ಶಿಖಾಂತ ಅಂದ ಆರೋಗ್ಯಗಳ ಆಪ್ತ ಮಾಹಿತಿ, ಪ್ರಸ್ತುತಿ: ಡಾ. ಕೇಶವಕೊರಸೆ, 6.40 ಅರಿವಿನ ಶಿಖರ–ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ–ಸಿ. ವಿಶ್ವನಾಥ್ ಮತ್ತು ಎಂ.ಡಿ. ಸುಮತಿ ಮೂರಾರಿ, ವ್ಯಾಖ್ಯಾನ– ಡಾ. ಹೆಚ್.ಎಂ. ಕಲಾಶ್ರೀ, 6.50 ರೈತರಿಗೆ ಸಲಹೆ, 7.15 ಮನೆಮನೆಯ ಹಣತೆ –ಪ್ರಾಯೋಜಿತ ಸರಣಿ ಕಾರ್ಯಕ್ರಮ, ಪ್ರಾಯೋಜಕರು–ಡಾ. ಬಿ.ಆರ್. ಅಂಬೇಡ್ಕರ್ ಸಂಶೋಧನಾ ಸಂಸ್ಥೆ, ಸಮಾಜ ಕಲ್ಯಾಣ ಇಲಾಖೆ, ಕರ್ನಾಟಕ ಸರ್ಕಾರ, 8.30 ಯೋಗ ಕುರಿತ ವಿಶೇಷ ಸರಣಿ ಮಹಾಯೋಗ, 8.35 ಯೋಗದತ್ತ ಜಗತ್ತು– ಯೋಗ ಕುರಿತ ವಿಶೇಷ ಕಾರ್ಯಕ್ರಮ ಸರಣಿ, 8.50 ಕನ್ನಡ ಚಿತ್ರಗೀತೆಗಳು, 10.00 ಕರ್ನಾಟಕ ಶಾಸ್ತ್ರೀಯ ಸಂಗೀತ, ಡಿ.ಕೆ. ಪಟ್ಟಮಾಳ್ – ಹಾಡುಗಾರಿಕೆ, 10.30 ಹಿಂದಿ ಚಿತ್ರಗೀತೆ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ ನಮ್ಮೂರ್ ಹೆಸರು, ಪ್ರಸ್ತುತಿ : ಡಾ. ಮೈಸೂರು ಉಮೇಶ್

ಮಧ್ಯಾಹ್ನ: 12.05 ವನಿತಾ ವಿಹಾರ, 12.35 ದೇವರನಾಮ, 12.45 ಜನಪದ ಸಂಗೀತ, 1.00 ಪ್ರಗತಿಪಥ– ಕೇಂದ್ರ ಸರ್ಕಾರದ ವಿವಿಧ ಅಭಿವೃದ್ಧಿ ಯೋಜನೆಗಳ ಸರಣಿ, 1.20 ಭಾವಗೀತೆಗಳು, 2.40 ಹಿಂದಿ ಚಿತ್ರಗೀತೆಗಳು, 3.00 ಜನಪದ ಗೀತೆಗಳು, 3.30 ಮಕ್ಕಳ ಮಂಟಪ–ಡೆಲ್ಲಿ ಪಬ್ಲಿಕ್ ಶಾಲೆಯ ಮಕ್ಕಳಿಂದ ಕಾರ್ಯಕ್ರಮ ವೈವಿಧ್ಯ, 4.00 ನಾಟಕ ನಮ್ಮೊಳಗಿನ ಕುರುಕ್ಷೇತ್ರ, ನಿರ್ಮಾಣ– ಪ್ರಭುಸ್ವಾಮಿ ಮಳಿಮಠ್, 4.30 ನೆನಪಿನಂಗಳ (ಧ್ವನಿ ಭಂಡಾರದಿಂದ), 6.50 ಕೃಷಿರಂಗ– ಕಿಸಾನ್ ವಾಣಿ–ಭಾರತ ಸರ್ಕಾರದ ಕೃಷಿ ಹಾಗೂ ರೈತ ಕಲ್ಯಾಣ ಸಚಿವಾಲಯ ಪ್ರಾಯೋಜಿತ ಕಾರ್ಯಕ್ರಮ. ತರಕಾರಿ ಬೇಸಾಯವನ್ನು ಕುರಿತ ಸಂವಾದ ಕೆ.ಆರ್.ನಗರ ತಾಲೂಕು ಕಸಬಾ ಹೋಬಳಿ ದೆಗ್ಗನಹಳ್ಳಿಯ ಡಿ.ಎಸ್. ಕೀರ್ತಿ ಹಾಗೂ ಕೆ.ಪಿ. ಸಹನಾ, ಪ್ರಸ್ತುತಿ: ಎನ್. ಕೇಶವಮೂರ್ತಿ, 8.00 ಸವಿನೆನಪು, 8.30 ಹಿಂದಿ ಚಿತ್ರಗೀತೆಗಳು, 9.30 ಯುವವಾಣಿ–ಪರಿಸರ ಸಂರಕ್ಷಣೆಯಲ್ಲಿ ಯುವಜನರ ಪಾತ್ರ ಕುರಿತು ಮಾತುಕತೆ, ಭಾಗವಹಿಸುತ್ತಾರೆ–ಮಂಡ್ಯ ಜಿಲ್ಲೆ ಚಿನಕುರಳಿಯ ಎಸ್.ಟಿ.ಜಿ. ಪ್ರಥಮ ದರ್ಜೆ ಕಾಲೇಜಿನ ವಿದ್ಯಾರ್ಥಿಗಳಾದ ಮಮತಾ ಪಿ. ರಾಧಿಕಾ ಸಿ.ಎಲ್.ಸಾಗರ್ ಎಸ್.ಕೆ, ವಿನಯ್ ಎಸ್.ಟಿ. ನಡೆಸಿಕೊಡುತ್ತಾರೆ–ಶ್ರಾವಣಿ ಗಿರೀಶ್, 10.00 ರಾಷ್ಟ್ರೀಯ ಸಂಗೀತ ಕಾರ್ಯಕ್ರಮ– ಅಂಬಿಕಾ ದತ್ತ್ ಹಾಗೂ ಕಲಾಧರಿ ಭವಾನಿ– ದ್ವಂದ್ವ ಗಾಯನ

■ **ಬಸವ ಬಳಗ ಟ್ರಸ್ಟ್ :** ಸ್ವಲೀಲ ಮಹಾತ್ಮ ದಾಸೋಹ ಚಕ್ರವರ್ತಿ ಶ್ರೀ ಮನ್ನಿರಂಜನಾ ಶ್ರೀ ಗುರುಮಲ್ಲೇಶ್ವರ ಮಹಾಪ್ರಭುಗಳವರ 126ನೇ ಸಂಸ್ಮರಣ ಆರಾಧನಾ ಮಹೋತ್ಸವದ ಉಚಿತ ಆರೋಗ್ಯ ತಪಾಸಣೆ ಮತ್ತು ನೇತ್ರಾ ತಪಾಸಣಾ ಶಿಬಿರ, ಸಾನ್ನಿಧ್ಯ : ಶ್ರೀ ಗುರುಶಾಂತ ಸ್ವಾಮೀಜಿ, ಉದ್ಘಾಟನೆ : ಮಾಜಿ ಶಾಸಕ ಎಸ್. ನಿರಂಜನ್ ಕುಮಾರ್, ಮುಖ್ಯ ಭಾಷಣಕಾರರು: ಸಾಹಿತಿ ದೇವರಾಜು ಪಿ. ಚಿಕ್ಕಹಳ್ಳಿ (ದೇಚಿ), ಅಧ್ಯಕ್ಷತೆ : ಬಸವ ಬಳಗ ಟ್ರಸ್ಟ್ ಅಧ್ಯಕ್ಷ ಎಸ್. ಶಿವಸ್ವಾಮಿ, ಸ್ಥಳ: ಕುದೇರು ಶಾಖಾ ಮಠ, ಆಲನಹಳ್ಳಿ, ಬೆಳಗ್ಗೆ 11ಕ್ಕೆ.

■ **ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು :** ಸಾಂಸ್ಕೃತಿಕ ಮತ್ತು ಕ್ರೀಡಾ ವೇದಿಕೆಗಳ ಸಮಾರೋಪ, ಸಾನ್ನಿಧ್ಯ : ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಅಧ್ಯಕ್ಷತೆ : ಮುಖ್ಯ ಕಾರ್ಯನಿರ್ವಾಹಕ ಪ್ರೊ. ಬಿ.ವಿ. ಸಾಂಬಶಿವಯ್ಯ, ಅತಿಥಿಗಳು : ಡಾ. ಹೆಚ್.ಎಸ್. ರಾಘವೇಂದ್ರರಾವ್, ಮೈಸೂರು ವಿವಿ ದೈಹಿಕ ಶಿಕ್ಷಣ ವಿಭಾಗದ ನಿರ್ದೇಶಕ ಡಾ. ಸಿ. ವೆಂಕಟೇಶ್, ಉಪಸ್ಥಿತರು : ಪ್ರಾಚಾರ್ಯ ಡಾ. ಎಂ. ಪ್ರಭು, ಸ್ಥಳ: ಸುವರ್ಣ ಮಹೋತ್ಸವ ಸಭಾಂಗಣ, ಬೆಳಗ್ಗೆ 11ಕ್ಕೆ.

■ **ಜೆಎಸ್‌ಎಸ್ ಮಹಿಳಾ ಪದವಿಪೂರ್ವ ಕಾಲೇಜು :** ಪ್ರತಿಭಾ ಪುರಸ್ಕಾರ ಸಮಾರಂಭ, ಅಧ್ಯಕ್ಷತೆ : ಜೆಎಸ್‌ಎಸ್ ಕಾಲೇಜು ಶಿಕ್ಷಣ ವಿಭಾಗದ ನಿರ್ದೇಶಕ ಪ್ರೊ. ಮೊರಬದ ಮಲ್ಲಿಕಾರ್ಜುನ, ಮುಖ್ಯ ಅತಿಥಿಗಳು : ಕು. ಸಂಜನಾ ಕಾಜೋಲ್, ಸ್ಥಳ: ನವಜ್ಯೋತಿ ಸಭಾಂಗಣ, ಬೆಳಗ್ಗೆ 11ಕ್ಕೆ.

■ **ಮೈಸೂರು ಶರಣ ಮಂಡಲಿ, ಶ್ರೀ ನಟರಾಜ ಪ್ರತಿಷ್ಠಾನ, ಶ್ರೀ ನಟರಾಜ ಪ್ರತಿಷ್ಠಾನ :** ಬಸವ ಜಯಂತಿ ಪ್ರಯುಕ್ತ ಬಸವರತ್ನ ಪ್ರಶಸ್ತಿ ಪ್ರದಾನ ಸಮಾರಂಭ, ಸಾನ್ನಿಧ್ಯ : ಶ್ರೀ ಚಿದಾನಂದ ಸ್ವಾಮೀಜಿ, ಡಾ. ಕರಿವೃಷಭ ದೇಶಿಕೇಂದ್ರ ಶಿವಯೋಗೀಶ್ವರ ಮಹಾಸ್ವಾಮಿಗಳು, ಉದ್ಘಾಟನೆ : ಜಿಲ್ಲಾ ಉಸ್ತುವಾರಿ ಸಚಿವ ಡಾ. ಹೆಚ್.ಸಿ. ಮಹದೇವಪ್ಪ, ಸನ್ಮಾನಿಸುವವರು : ಶಾಸಕ ತನ್ವೀರ್ ಸೇಠ್, ಅಧ್ಯಕ್ಷತೆ : ಶಾಸಕ ಹೆಚ್.ಎಂ. ಗಣೇಶ್ ಪ್ರಸಾದ್, ಮುಖ್ಯ ಅತಿಥಿಗಳು : ಕಾಡಾ ಅಧ್ಯಕ್ಷ ಮರಿಸ್ವಾಮಿ, ವಿದ್ಯಾವಿಕಾಸ್ ಶಿಕ್ಷಣ ಸಂಸ್ಥೆ ಕಾರ್ಯದರ್ಶಿ ಕವೀಶ್‌ಗೌಡ, ಸ್ಥಳ: ಶ್ರೀ ನಟರಾಜ ಸಭಾ ಭವನ, ಶ್ರೀಹೊಸಮಠ, ಬೆಳಗ್ಗೆ 11ಕ್ಕೆ.


■ **ಸುರುಚಿ ರಂಗ ಮನೆ :** ಕಥೆ ಕೇಳೋಣ ಬನ್ನಿ ಕಾರ್ಯಕ್ರಮ, ಕಥೆ ಹೇಳುವವರು: ಯುವರಾಜ ಕಾಲೇಜು ಆಂಗ್ಲ ಭಾಷಾ ಉಪನ್ಯಾಸಕರು ಹಾಗೂ ಅಂಕಣಕಾರರಾದ ಶ್ರೀಮತಿ ನಿವೇದಿತಾ, ಸ್ಥಳ: ಸುರುಚಿ ರಂಗ ಮನೆ, ಚಿತ್ರಭಾನು ರಸ್ತೆ, ಕುವೆಂಪುನಗರ, ಸಂಜೆ 4.30 ರಿಂದ.

■ **ಕಲಾ ಸುರುಚಿ, ಕುತೂಹಲಿ–ಕನ್ನಡ, ಸುರುಚಿ ರಂಗಮನೆ :** ಭಾರತ ಸರ್ಕಾರದ ಜೈವಿಕ ತಂತ್ರಜ್ಞಾನದ ಪೂರ್ವ ಹಿರಿಯ ಸಲಹೆಗಾರ ಡಾ. ಎಸ್. ನಟೇಶ್ ಅವರಿಂದ ಗಡಿಗಲ್ಲನ್ನು ನುಂಗಿದ ಮರ ಮತ್ತು ಇತರೆ ಕಣ್ಮಣಿ ಮರಗಳು ಕುರಿತು ಕನ್ನಡ ಮತ್ತು ಇಂಗ್ಲಿಷ್‌ನಲ್ಲಿ ಭಾಷಣ, ಸ್ಥಳ: ಸುರುಚಿ ರಂಗ ಮನೆ, ಚಿತ್ರಭಾನು ರಸ್ತೆ, ಕುವೆಂಪುನಗರ, ಸಂಜೆ 6.30 ರಿಂದ.

■ **ಶ್ರೀ ರಾಮಾಭ್ಯುದಯ ಸಭಾ ಚಾರಿಟೆಬಲ್ ಟ್ರಸ್ಟ್ :** ವಿದುಷಿ ಕು. ಸುದಿತಿ ರಾಘವನ್ ಅವರಿಂದ ಕರ್ನಾಟಕ ಶಾಸ್ತ್ರೀಯ ಸಂಗೀತ, ವಿದುಷಿ ಶ್ರೀ ಲಲಿತಾ ಶ್ರೀರಾಂ –ಪಿಟೀಲು, ವಿದ್ವಾನ್ ಸುಹಾಸ್ ರಾಘವನ್ ಅಯ್ಯಂಗಾರ್–ಮೃದಂಗ, ಸ್ಥಳ: ಶ್ರೀ ರಾಮಮಂದಿರದ ಆಚರಣ, ಶಿವರಾಂಪೇಟೆ, ಸಂಜೆ 6.30ಕ್ಕೆ.

■ **ಶ್ರೀರಾಮಕೃಷ್ಣ ಆಶ್ರಮ :** ಸ್ವಾಮಿ ಮಹಾಮೇಧಾನಂದ ಅವರಿಂದ ಲಿವಿಂಗ್ ಅಟ್ ದಿ ಸೋರ್ಸ್ : ಯೋಗಾ ಟೀಚಿಂಗ್ಸ್ ಆಫ್ ವಿವೇಕಾನಂದ ಕುರಿತು ಇಂಗ್ಲೀಷ್‌ನಲ್ಲಿ ಉಪನ್ಯಾಸ, ಸ್ಥಳ : ಸ್ವಾಮಿ ಶಾಂಭವಾನಂದಜೀ ಸ್ಮಾರಕ ಸಭಾಂಗಣ, ಯಾದವಗಿರಿ, ಸಂಜೆ 6 ರಿಂದ.

■ **ರಂಗಾಯಣ :** ರಂಗಾಯಣದ ಭಾರತೀಯ ರಂಗ ಶಿಕ್ಷಣ ಕೇಂದ್ರದ ವಿದ್ಯಾರ್ಥಿಗಳಿಂದ ನಾಟಕ ವಿನ್ಯಾಸ ಕಾವ್ಯ, ನಿರ್ದೇಶನ : ಹೆಚ್.ಕೆ. ದ್ವಾರಕಾನಾಥ್, ಸ್ಥಳ: ರಂಗಾಯಣದ ಭೂಮಿಗೀತ, ಸಂಜೆ 6.30ಕ್ಕೆ



ಅಹಮದಾಬಾದ್ ವಿಮಾನ ಪತನ ದುರಂತ

ವಿಶ್ವ ನಾಯಕರ ಸಂತಾಪ, ಸಾಧ್ಯವಿರುವ ಎಲ್ಲಾ ಬೆಂಬಲ ನೀಡಲು ಸಿದ್ಧ ಎಂದ ಡೊನಾಲ್ಡ್ ಟ್ರಂಪ್

ವಾಷಿಂಗ್ಟನ್, ಜೂ.13– ಗುಜರಾತ್‌ನ ಅಹಮದಾಬಾದ್‌ನಲ್ಲಿ ಸಂಭವಿಸಿದ ಏರ್ ಇಂಡಿಯಾ B-787 ಡ್ರೀಮ್‌ಲೈನರ್ ವಿಮಾನ ದುರಂತದಲ್ಲಿ ಮೃತಪಟ್ಟ ಪ್ರಯಾಣಿಕರು ಹಾಗೂ ಸಿಬ್ಬಂದಿ ಕುರಿತು ವಿಶ್ವದ ನಾಯಕರು ತೀವ್ರ ಸಂತಾಪ ಸೂಚಿಸಿದ್ದಾರೆ.

ಮೃತಪಟ್ಟವರ ಕುಟುಂಬಸ್ಥರಿಗೆ ವಿಶ್ವದ ನಾಯಕರು ಸಾಂತ್ವನ ಹೇಳಿದ್ದು, ಭಾರತದ ನೋವಿನಲ್ಲಿ ಸಮಾನ ಭಾಗೀದಾರಿಗಳಾಗಿರುವುದಾಗಿ ತಿಳಿಸಿದ್ದಾರೆ.

ಚಾರ್ಲ್ಸ್ 3: ಅಹಮದಾಬಾದ್ ಏರ್ ಇಂಡಿಯಾ ವಿಮಾನ ಅಪಘಾತಕ್ಕೆ ಬ್ರಿಟನ್‌ನ ಕಿಂಗ್ ಚಾರ್ಲ್ಸ್ 3 ತೀವ್ರ ಆಘಾತ ವ್ಯಕ್ತಪಡಿಸಿದ್ದಾರೆ.



ಈ ಕುರಿತು "ದಿ ರಾಯಲ್ ಫ್ಯಾಮಿಲಿ" ಅಧಿಕೃತ ಎಕ್ಸ್ ಅಕೌಂಟ್‌ನಲ್ಲಿ ಟ್ವೀಟ್ ಮಾಡಿರುವ ಅವರು, ಅಹಮದಾಬಾದ್‌ನಲ್ಲಿ ನಡೆದ ಭಯಾನಕ ಘಟನೆಗಳಿಂದ ನಾನು ಮತ್ತು ನನ್ನ ಪತ್ನಿ ತೀವ್ರವಾಗಿ ಆಘಾತಕ್ಕೊಳಗಾಗಿದ್ದೇವೆ. ಈ ಭಯಾನಕ ದುರಂತವು ಲಂಡನ್ ಮತ್ತು ಭಾರತೀಯ ಪ್ರಜೆಗಳನ್ನೂ ಸೇರಿದಂತೆ, ಹಲವು ರಾಷ್ಟ್ರಗಳ ಪ್ರಯಾಣಿಕರನ್ನು ಬಲಿ ಪಡೆದಿದೆ. ಈ ನೋವಿನಿಂದ ಬಾಧಿತರಾದ ಎಲ್ಲಾ ಕುಟುಂಬಗಳು ಮತ್ತು ಸ್ನೇಹಿತರಿಗೆ ಸಂತಾಪ ಸೂಚಿಸುತ್ತೇನೆ. ಮೃತರ ಆಪ್ತರೊಂದಿಗೆ ನಮ್ಮ ವಿಶೇಷ ಪ್ರಾರ್ಥನೆಗಳು ಮತ್ತು ಆಳವಾದ ಸಹಾನುಭೂತಿ ಇದೆ ಎಂದು ಹೇಳಿದ್ದಾರೆ.

ಸ್ಟಾರ್ಮರ್: ಯುನೈಟೆಡ್ ಕಿಂಗ್‌ಡಮ್‌ನ ಪ್ರಧಾನಮಂತ್ರಿ ಕೀರ್ ಸ್ಟಾರ್ಮರ್ ಅವರು ಪ್ರತಿಕ್ರಿಯಿಸಿ, "ಭಾರತದ ಅಹಮದಾಬಾದ್ ನಗರದಲ್ಲಿ ಅನೇಕ ಬ್ರಿಟಿಷ್



ಪ್ರಜೆಗಳನ್ನು ಹೊತ್ತು ಲಂಡನ್‌ಗೆ ಹೊರಟಿದ್ದ ವಿಮಾನ ಅಪಘಾತಕ್ಕೀಡಾದ ದೃಶ್ಯಗಳು ಭೀಕರವಾಗಿವೆ. ಈ ತೀವ್ರ ದುಃಖದ ಸಮಯದಲ್ಲಿ ನನ್ನ ಆಲೋಚನೆಗಳು ಪ್ರಯಾಣಿಕರು ಮತ್ತು ಅವರ ಕುಟುಂಬಗಳೊಂದಿಗೆ ಇವೆ ಎಂದು ಹೇಳಿದ್ದಾರೆ.

ಮ್ಯಾಕ್ರನ್: ಫ್ರೆಂಚ್ ಅಧ್ಯಕ್ಷ ಇಮ್ಯಾನುಯೆಲ್ ಮ್ಯಾಕ್ರನ್ ಕೂಡ ವಿಮಾನ ಅಪಘಾತದಲ್ಲಿ ಮೃತಪಟ್ಟವರ ಪ್ರೀತಿಪಾತ್ರರಿಗೆ ತಮ್ಮ ಸಂತಾಪ ಸೂಚಿಸಿದ್ದಾರೆ.



ಭಾರತದ ಅಹಮದಾಬಾದ್‌ನಲ್ಲಿ ನಡೆದ ವಿಮಾನ ಅಪಘಾತ ನಮ್ಮನ್ನು ತೀವ್ರವಾಗಿ ನೋಯಿಸಿದೆ. ಈ ದುಃಖದ ಸಮಯದಲ್ಲಿ, ಬಲಿಪಶುಗಳ ಪ್ರೀತಿಪಾತ್ರರಿಗೆ ನಾನು ಸಂತಾಪ ಸೂಚಿಸುತ್ತೇನೆಂದು ಹೇಳಿದ್ದಾರೆ.

ಪುಟಿನ್: ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರು ಟೆಲಿಗ್ರಾಮ್‌ನಲ್ಲಿ, ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರನ್ನು ಉದ್ದೇಶಿಸಿ, ದಯವಿಟ್ಟು ವಿಮಾನ ಅಪಘಾತದ ಸಂತ್ರಸ್ತರ ಕುಟುಂಬಗಳು ಮತ್ತು ಸ್ನೇಹಿತರಿಗೆ ನನ್ನ ಪ್ರಾಮಾಣಿಕ ಸಹಾನುಭೂತಿ ಮತ್ತು ಬೆಂಬಲವನ್ನು ತಿಳಿಸಿ ಎಂದು ಹೇಳಿದ್ದಾರೆ.



ಅಲ್ಬನೀಸ್: ಆಸ್ಟ್ರೇಲಿಯಾ ಪ್ರಧಾನಿ ಆಂಥೋನಿ ಅಲ್ಬನೀಸ್ ಅವರು ಪ್ರತಿಕ್ರಿಯಿಸಿ, ಏರ್ ಇಂಡಿಯಾ ವಿಮಾನ ಅಪಘಾತಕ್ಕೆ ಕಂಬನಿ ಮಿಡಿದಿದ್ದು, ಈ ವಿನಾಶಕಾರಿ ದುರಂತದ ಸಮಯದಲ್ಲಿ, ಆಸ್ಟ್ರೇಲಿಯಾ ಸಂತ್ರಸ್ತರ ನೋವಿನಲ್ಲಿ ಶಾಮೀಲಾಗಿದೆ ಎಂದು ತಿಳಿಸಿದ್ದಾರೆ.



ಯೂನಸ್: ಬಾಂಗ್ಲಾದೇಶದ ಮುಖ್ಯ ಸಲಹೆಗಾರ ಮುಹಮ್ಮದ್ ಯೂನಸ್ ಅವರು ಪ್ರತಿಕ್ರಿಯಿಸಿ, ಬಾಂಗ್ಲಾದೇಶವು ಈ ದುಃಖದ ಸಮಯದಲ್ಲಿ ಭಾರತ ಮತ್ತು ಭಾರತದ ಜನರೊಂದಿಗೆ ಒಗ್ಗಟ್ಟಿನಿಂದ ನಿಂತಿದೆ. ಅಪಘಾತದಲ್ಲಿ ಮಡಿದವರ ಕುಟುಂಬದ ನೋವಿನಲ್ಲಿ ನಾವು ಶಾಮೀಲಾಗಿದ್ದೇವೆ ಎಂದು ಹೇಳಿದ್ದಾರೆ.



ಟ್ರಂಪ್: ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಪ್ರತಿಕ್ರಿಯಿಸಿ, ಏರ್ ಇಂಡಿಯಾ ವಿಮಾನ ದುರಂತಕ್ಕೆ ಆಘಾತ ವ್ಯಕ್ತಪಡಿಸಿದ್ದಾರೆ. ಇದು ಭೀಕರ ಅಪಘಾತ. ನಾನು ಈ ಅಪಘಾತದಲ್ಲಿ ಮೃತಪಟ್ಟ ದುರ್ದೈವಿಗಳ ಕುಟುಂಬಸ್ಥರಿಗೆ ಸಾಂತ್ವನ ಹೇಳಲು ಬಯಸುತ್ತೇನೆ. ಅಮೆರಿಕವು ಅವರ ನೋವಿನಲ್ಲಿ ಭಾಗಿಯಾಗಿದೆ.




ಅಪಘಾತದ ತನಿಖೆಯಲ್ಲಿ ಭಾರತಕ್ಕೆ ಯಾವುದೇ ರೀತಿಯ ಸಹಕಾರ ನೀಡಲು ನಾವು ಸಿದ್ಧ ಎಂದು ಹೇಳಿದ್ದಾರೆ.

ಭಾರತ ಒಂದು ಬಲಿಷ್ಠ ದೇಶ. ಅವರು ಇಂತಹ ಪರಿಸ್ಥಿತಿಗಳನ್ನು ನಿಭಾಯಿಸುವಲ್ಲಿ ಸಮರ್ಥರಾಗಿದ್ದಾರೆ. ಆದಾಗ್ಯೂ, ಅವರಿಗೆ ಯಾವುದೇ ಹಂತದಲ್ಲಿ ನೆರವಿನ ಅವಶ್ಯಕತೆ ಬಿದ್ದರೆ, ಅಮೆರಿಕ ಸಾಧ್ಯವಾದ ಎಲ್ಲಾ ಸಹಕಾರವನ್ನೂ ನೀಡಲಿದೆ. ಈ ಕೂಡಲೇ ಒಂದು ತಜ್ಞರ ತಂಡವನ್ನು ಕಳುಹಿಸಲೂ ನಾವು ಸಿದ್ಧ.

ವಿಮಾನ ಅಪಘಾತಕ್ಕೆ ನಿಖರ ಕಾರಣ ಏನು ಎಂಬುದು ಇನ್ನೂ ತಿಳಿದು ಬಂದಿಲ್ಲ. ಆದರೆ, ಅಪಘಾತದ ವಿಡಿಯೋಗಳನ್ನು ನೋಡಿದರೆ ವಿಮಾನದ ಎರಡೂ ಎಂಜಿನ್‌ಗಳು ಏಕಕಾಲದಲ್ಲಿ ಶಕ್ತಿಯನ್ನು ಕಳೆದುಕೊಂಡಂತೆ ಕಾಣುತ್ತಿತ್ತು. ಇದು ವಾಯುಯಾನ ಇತಿಹಾಸದಲ್ಲಿ ನಿಜಕ್ಕೂ ಭಯಾನಕ ಅಪಘಾತ ಎಂದು ತಿಳಿಸಿದ್ದಾರೆ.

ರಾಜ್‌ಕೋಟ್‌ನಲ್ಲಿ ಇಂದು ಗುಜರಾತ್ ಮಾಜಿ ಸಿಎಂ ವಿಜಯ್ ರೂಪಾನಿ ಅಂತ್ಯಕ್ರಿಯೆ

ನವದೆಹಲಿ, ಜೂ.13– ಗುಜರಾತಿನ ಅಹಮದಾಬಾದ್‌ನಲ್ಲಿ ನಡೆದ ಏರ್ ಇಂಡಿಯಾ ವಿಮಾನ ಅಪಘಾತದಲ್ಲಿ ಮೃತ ಪಟ್ಟ ಗುಜರಾತ್‌ನ ಮಾಜಿ ಮುಖ್ಯಮಂತ್ರಿ ವಿಜಯ್ ರೂಪಾನಿ ಅವರ ಅಂತ್ಯಕ್ರಿಯೆ ಶನಿವಾರ ರಾಜ್‌ಕೋಟ್‌ನಲ್ಲಿ ನಡೆಯಲಿದೆ.



ಅಮೆರಿಕದಲ್ಲಿ ವಾಸಿಸುತ್ತಿರುವ ರೂಪಾನಿ ಅವರ ಪುತ್ರ ರಿಷಭ್ ರೂಪಾನಿ ಅವರು ಅಹಮದಾಬಾದ್‌ಗೆ ಬರುತ್ತಿದ್ದು, ಶನಿವಾರ ಬೆಳಿಗ್ಗೆ 4 ಗಂಟೆಗೆ ಬಂದಿಳಿಯುವ ನಿರೀಕ್ಷೆಯಿದೆ.

ಈ ಮಧ್ಯೆ, ಪತ್ನಿ ಅಂಜಲಿ ರೂಪಾನಿ ಅವರು ಶುಕ್ರವಾರ ವಿಶೇಷ ಚಾರ್ಟರ್ಡ್ ವಿಮಾನದ ಮೂಲಕ ಲಂಡನ್‌ನಿಂದ ಅಹಮದಾಬಾದ್‌ಗೆ ಆಗಮಿಸಿದ್ದು, ನೇರವಾಗಿ ಗಾಂಧಿನಗರದ ತಮ್ಮ ಮನೆಗೆ ತೆರಳಿದರು.

ವಿವಿಧ ವಲಯಗಳ ನಾಯಕರು ಗಾಂಧಿನಗರದ ರೂಪಾನಿ ಅವರ ನಿವಾಸಕ್ಕೆ ಭೇಟಿ ನೀಡಿ ಅವರ ಪತ್ನಿ ಅಂಜಲಿ ರೂಪಾನಿ ಮತ್ತು ದುಃಖಿತ ಕುಟುಂಬಕ್ಕೆ ಸಾಂತ್ವನ ಹೇಳುತ್ತಿದ್ದಾರೆ.

ಸಂಪುಟ ಸಚಿವರಾದ ಮುಲುಭಾಯಿ ಬೇರಾ, ಕುನ್ವರ್ಜಿ ಬವಾಲಿಯಾ, ಕುಬೇರ್ ದಿಂಡೋರ್, ಭಾನು ಬಬಾರಿಯಾ ಮತ್ತು ಕೇಂದ್ರ ಸಚಿವ ಪರ್ಶೋತ್ತಮ್ ರೂಪಾಲಾ ಸೇರಿದಂತೆ ಹಲವಾರು ಹಿರಿಯ ಬಿಜೆಪಿ ನಾಯಕರು ರೂಪಾನಿ ಅವರ ನಿವಾಸದಲ್ಲಿ ಗೌರವ ಸಲ್ಲಿಸಿದ್ದಾರೆ.

ಈ ಕಷ್ಟದ ಸಮಯದಲ್ಲಿ ಐಕ್ಯತೆ ವ್ಯಕ್ತಪಡಿಸಲು ಸರ್ಕಾರಿ ಅಧಿಕಾರಿಗಳು ದುಃಖಿತ ಕುಟುಂಬವನ್ನು ಭೇಟಿ ಮಾಡಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರು ಅಂಜಲಿ ರೂಪಾನಿ ಮತ್ತು ಇತರ ಕುಟುಂಬ ಸದಸ್ಯರನ್ನು ವೈಯಕ್ತಿಕವಾಗಿ ಭೇಟಿ ಮಾಡಿ ಸಂತಾಪ ಸೂಚಿಸಿದ್ದಾರೆ.

230 ಪ್ರಯಾಣಿಕರು ಮತ್ತು 12 ಸಿಬ್ಬಂದಿ ಸೇರಿದಂತೆ 242 ಜನರನ್ನು ಹೊತ್ತೊಯ್ಯುತ್ತಿದ್ದ ಏರ್ ಇಂಡಿಯಾ ವಿಮಾನವು ಟೇಕ್ ಆಫ್ ಆದ ಕೆಲವೇ ನಿಮಿಷಗಳಲ್ಲಿ ಮೇಘಾನಿನಗರದ ಬಿಜೆ ವೈದ್ಯಕೀಯ ಕಾಲೇಜಿನ ಸಂಕೀರ್ಣಕ್ಕೆ ಅಪ್ಪಳಿಸಿತ್ತು. ದುರಂತದಲ್ಲಿ 270 ಜನ ಸಾವಿಗೀಡಾಗಿದ್ದಾರೆ.

ಮೆಡಿಕಲ್ ಕಾಲೇಜ್ ಹಾಸ್ಟೆಲ್ ಬಾಲ್ಕನಿಯಿಂದ ಜಿಗಿದು ಬದುಕುಳಿದವರು...

ತಾಯಿ, ಮಗಳಿಗಾಗಿ ಹುಡುಕಾಡುತ್ತಿರುವ ವ್ಯಕ್ತಿ...

ಅಹಮದಾಬಾದ್, ಜೂ.13– ಲಂಡನ್‌ಗೆ ಹೊರಟಿದ್ದ ಏರ್ ಇಂಡಿಯಾ ವಿಮಾನ ಅಪಘಾತಕ್ಕೀಡಾದ ಇಲ್ಲಿನ ಬಿಜೆ ವೈದ್ಯಕೀಯ ಕಾಲೇಜಿನ ಡಾಕ್ಟರ್ ಹಾಸ್ಟೆಲ್‌ನ ವಿದ್ಯಾರ್ಥಿಗಳು, ಪ್ರೊಫೆಸರ್, ಕುಟುಂಬ ಸದಸ್ಯರು ಹಾಗೂ ಸಿಬ್ಬಂದಿ ಬಿಗಿ ಭದ್ರತೆ ನಡುವೆ ತಮ್ಮ ಲಗೇಜ್‌ಗಳೊಂದಿಗೆ ಶುಕ್ರವಾರ ತೊರೆಯುತ್ತಿದ್ದ ದೃಶ್ಯ ಕಂಡುಬಂದಿತು.

ಈ ಸಂದರ್ಭದಲ್ಲಿ ಮಾತನಾಡಿದ ದ್ವಿತೀಯ ವರ್ಷದ ಸ್ಥಾನಿಕ ವೈದ್ಯ ಡಾ. ತರುಣ್, ವಿಮಾನ ಬೆಂಕಿಯುಂಡೆಯಾಗುತ್ತಿದ್ದಂತೆಯೇ ನಮ್ಮ ಹಾಸ್ಟೆಲ್ ಇರುವುದಿಲ್ಲ ಅನಿಸಿತು. ಹಾಗಾಗಿ ಹಾಸ್ಟೆಲ್ ಬಾಲ್ಕನಿಯಿಂದ ಜಿಗಿಯುವ ಮೂಲಕ ಪ್ರಾಣ ಉಳಿಸಿಕೊಂಡೆ. ಈಗ ನಾವು ಮನೆಗೆ ಹೋಗುತ್ತಿಲ್ಲ. ಎಲ್ಲಿ ವಸತಿ ಸೌಕರ್ಯ ಸಿಗುತ್ತದೆಯೋ ಆ ಕಡೆ ಹೋಗುತ್ತೇವೆ. ನಮ್ಮೊಂದಿಗೆ ಅತ್ಯವಶ್ಯಕ ವಸ್ತುಗಳು ಕೂಡ ಇಲ್ಲ. ಏನು ಮಾಡೋದು ಎಂದರು.

ಬಿಜೆ ವೈದ್ಯಕೀಯ ಕಾಲೇಜಿನ ಸಹಾಯಕ ಪ್ರೊಫೆಸರ್ ಡಾ. ಪಿಯೂಸ್ ಮಾತನಾಡಿ, ಹಾಸ್ಟೆಲ್ ಕಟ್ಟಡ ಮುಂಭಾಗದ ಗೋಡೆಯಿಂದ ಜಿಗಿದು ದುರಂತದಿಂದ ಪಾರಾಗಿದ್ದೇನೆ. ಒಂದು ವೇಳೆ 15 ರಿಂದ 20 ಸೆಕೆಂಡ್ ಒಳಗಡೆ ಇದ್ದಿದ್ದರೆ ಉಸಿರು ಕಟ್ಟಿ ಸಾಯುತ್ತಿದ್ದೆ. ಅನೇಕ ಜನರು ತಮ್ಮ ಕುಟುಂಬ ಸದಸ್ಯರೊಂದಿಗೆ ಹಾಸ್ಟೆಲ್ ಒಳಗಡೆ ಇದ್ದರು ಎಂದು ಹೇಳಿದರು.

ತಾಯಿ, ಮಗಳಿಗಾಗಿ ಹುಡುಕಾಟ: ವಿಮಾನ ಟೇಕ್ ಆಫ್ ಆದ ಕೆಲವೇ ನಿಮಿಷಗಳಲ್ಲಿ ಅಪಘಾತಕ್ಕೀಡಾದ ಬಿಜೆ ಮೆಡಿಕಲ್ ಕಾಲೇಜ್ ಹಾಸ್ಟೆಲ್ ಮೆಸ್‌ನಲ್ಲಿದ್ದ ತನ್ನ ತಾಯಿ ಮತ್ತು ಅಂಬೆಗಾಲಿಡುವ ಮಗಳನ್ನು ಹುಡುಕಾಡುತ್ತಿದ್ದ ರವಿ ಠಾಕೋರ್ ಸಂಕಟ, ನೋವು ಹೇಳತೀರದಾಗಿತ್ತು.

ನಾನು, ನನ್ನ ತಾಯಿ, ಹೆಂಡತಿ ಬಿಜೆ ಮೆಡಿಕಲ್ ಕಾಲೇಜ್ ಮೆಸ್‌ನಲ್ಲಿ ಕೆಲಸ ಮಾಡುತ್ತಿದ್ದೆವು. ಅಪಘಾತದ ಸಮಯದಲ್ಲಿ, ನನ್ನ ತಾಯಿ ಸರಳಾ ಮತ್ತು ಮಗಳು ಆದ್ಯ ಮೆಸ್‌ನಲ್ಲಿದ್ದರು. 24 ಗಂಟೆಗಳು ಕಳೆದಿವೆ ಆದರೆ ಅವರಿಗೆ ಏನಾಗಿದೆ ಎಂಬುದರ ಕುರಿತು ನನಗೆ ಯಾವುದೇ ಸುಳಿವು ಸಿಕ್ಕಿಲ್ಲ. ಅಧಿಕಾರಿಗಳು ನೀಡಿದ ಪಟ್ಟಿಗಳನ್ನು ಪರಿಶೀಲಿಸಿದ್ದೇನೆ ಮತ್ತು ರಾತ್ರಿಯಿಡೀ ಸಿವಿಲ್ ಮತ್ತು ಖಾಸಗಿ ಆಸ್ಪತ್ರೆಗಳಲ್ಲಿ ಅವರನ್ನು ಹುಡುಕಿದೆ ಎಂದು ಏನೂ ಹೇಳದ ಅಧಿಕಾರಿಗಳಲ್ಲಿ ತಮ್ಮ ನೋವು ತೋಡಿಕೊಂಡರು.

ನಾಪತ್ತೆಯಾಗಿದ್ದ ಎಲ್ಲಾ ವಿದ್ಯಾರ್ಥಿಗಳನ್ನು ಪತ್ತೆ ಮಾಡಲಾಗಿದ್ದು, ಮೃತದೇಹಗಳನ್ನು ಗುರುತಿಸಲಾಗಿದೆ. ನನ್ನ ತಾಯಿ ಮತ್ತು ಮಗಳು ಮಾತ್ರ ಪತ್ತೆಯಾಗಿಲ್ಲ. ಮೆಸ್‌ನಲ್ಲಿರುವ ಕಾವಲುಗಾರರು ಯಾರನ್ನೂ ಒಳಗೆ ಬಿಡುತ್ತಿಲ್ಲ. ನನ್ನ ತಾಯಿ ಮತ್ತು ಮಗಳು ಮೆಟ್ಟಿಲು ಹತ್ತಿ ನೆಲಮಹಡಿಗೆ ಹೋಗಿರಬಹುದು ಅಂದುಕೊಂಡಿದ್ದೇನೆ. ನಮ್ಮ ಸಮಾಧಾನಕ್ಕಾಗಿ ಎಲ್ಲೆಡೆ ಹುಡುಕಾಡಲು ಅಧಿಕಾರಿಗಳು ಅವಕಾಶ ನೀಡಬೇಕು ಎಂದು ಬಯಸುತ್ತೇವೆ ಎಂದು ಅವರು ಹೇಳಿದರು.

ಪತ್ನಿ ಅಸ್ಥಿ ವಿಸರ್ಜನೆಗಾಗಿ ಭಾರತಕ್ಕೆ ಬಂದಿದ್ದ ಲಂಡನ್ ವ್ಯಕ್ತಿ ದುರಂತ ಸಾವು!

ಅಹಮದಾಬಾದ್, ಜೂ.13– ಅಹಮದಾಬಾದ್ ಏರ್ ಇಂಡಿಯಾ ವಿಮಾನ ಅಪಘಾತ ದೇಶಾದ್ಯಂತ ಸಂಚಲನ ಮೂಡಿಸಿದ್ದು, ತನ್ನನ್ನು ಅಗಲಿದ ಪತ್ನಿಯ ಅಸ್ಥಿ ವಿಸರ್ಜನೆಗಾಗಿ ಭಾರತಕ್ಕೆ ಬಂದಿದ್ದ ಲಂಡನ್ ಪ್ರಜೆ ಕೂಡ ಇದೇ ದುರಂತದಲ್ಲಿ ಸಾವನ್ನಪ್ಪಿರುವ ವಿಚಾರ ಬೆಳಕಿಗೆ ಬಂದಿದೆ.

ಗುಜರಾತ್‌ನ ಅಹಮದಾಬಾದ್‌ನ ಸರ್ದಾರ್ ವಲ್ಲಭಭಾಯಿ ಪಟೇಲ್ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದಿಂದ ಟೇಕ್ ಆಫ್ ಆದ ಐದೇ ನಿಮಿಷದಲ್ಲಿ ಏರ್ ಇಂಡಿಯಾ ವಿಮಾನವು ಬಿಜೆ ವೈದ್ಯಕೀಯ ಕಾಲೇಜು ಹಾಸ್ಟೆಲ್‌ಗೆ ಅಪ್ಪಳಿಸಿತು.

ಈ ಘಟನೆಯಲ್ಲಿ ವಿಮಾನದಲ್ಲಿದ್ದ ಓರ್ವ ವ್ಯಕ್ತಿಯನ್ನು ಹೊರತುಪಡಿಸಿ, ಪೈಲಟ್‌ಗಳು ಮತ್ತು ಸಿಬ್ಬಂದಿ ಎಲ್ಲರೂ ಪ್ರಾಣ ಕಳೆದುಕೊಂಡರು.

ಇನ್ನೂ ಆಘಾತಕಾರಿ ವಿಚಾರ ಎಂದರೆ ವಿಮಾನ ಅಪ್ಪಳಿಸಿದ ವೈದ್ಯಕೀಯ ಕಾಲೇಜು ಹಾಸ್ಟೆಲ್ ವಿದ್ಯಾರ್ಥಿಗಳೂ ಸಾವನ್ನಪ್ಪಿದ್ದಾರೆ. ಈ ದುರಂತದಲ್ಲಿ ಮೃತರ ಅಂತಿಮ ಪ್ರಯಾಣದ ಕಥೆಗಳು ಹೃದಯವಿದ್ರಾವಕವಾಗಿವೆ.

ಈ ಪೈಕಿ ತನ್ನನ್ನು ಅಗಲಿದ ಪತ್ನಿಯ ಅಸ್ಥಿ ವಿಸರ್ಜನೆಗಾಗಿ ಭಾರತಕ್ಕೆ ಬಂದಿದ್ದ ಲಂಡನ್ ಪ್ರಜೆ ಕೂಡ ಇದೇ ದುರಂತದಲ್ಲಿ ಸಾವನ್ನಪ್ಪಿರುವ ವಿಚಾರ ಕೂಡ ಸೇರಿದೆ.

ಅಮ್ರೇಲಿ ಜಿಲ್ಲೆಯ ಅರ್ಜುನ್ ಭಾಯ್ ಮನುಭಾಯ್ ಪಟೋಲಿಯಾ ಎಂಬುವವರು ಕಳೆದ ಕೆಲವು ವರ್ಷಗಳಿಂದ ತನ್ನ ಪತ್ನಿ ಮತ್ತು ಇಬ್ಬರು ಮಕ್ಕಳೊಂದಿಗೆ ಲಂಡನ್‌ನಲ್ಲಿ ಸಂತೋಷದ ಜೀವನ ನಡೆಸುತ್ತಿದ್ದರು. ಆದರೆ ವಿಧಿಯಾಟ ಬೇರೆಯೇ ಆಗಿತ್ತು. ಇತ್ತೀಚೆಗೆ, ಅರ್ಜುನ್ ಅವರ ಪತ್ನಿ ಲಂಡನ್‌ನಲ್ಲಿ ನಿಧನರಾದರು.

ಅರ್ಜುನ್‌ಭಾಯ್ ಮನುಭಾಯ್



ಅವರ ಪತ್ನಿಯ ಕೊನೆಯ ಆಸೆಯಂತೆ ಅವರ ಚಿತಾಭಸ್ಮವನ್ನು ವಿಸರ್ಜಿಸಲು ಪತ್ನಿಯ ತವರೂರಿಗೆ ಬಂದಿದ್ದರು. ತಮ್ಮ ಇಬ್ಬರು ಮಕ್ಕಳನ್ನು ಲಂಡನ್‌ನಲ್ಲಿ ಬಿಟ್ಟು ಭಾರತಕ್ಕೆ ಬಂದಿದ್ದರು.

ತವರೂರಿನಲ್ಲಿ ತಮ್ಮ ಸಂಬಂಧಿಕರ ಸಮ್ಮುಖದಲ್ಲಿ ಪತ್ನಿಯ ಅಸ್ಥಿ ವಿಸರ್ಜಿಸಿ ನಂತರ ಎಲ್ಲಾ ವ್ಯವಸ್ಥೆಗಳನ್ನು ಪೂರ್ಣಗೊಳಿಸಿ ಅವರು ಲಂಡನ್‌ಗೆ ಮರಳಿದ್ದರು. ಅದರಂತೆ ಗುರುವಾರ (ಜೂನ್ 12) ಏರ್ ಇಂಡಿಯಾ–ಎಐ 171 ಬೋಯಿಂಗ್ ಡ್ರೀಮ್‌ಲೈನರ್ 787–8 ವಿಮಾನ ಹತ್ತಿದ್ದ ಅರ್ಜುನ್ ಅಪಘಾತದಲ್ಲಿ ನಿಧನರಾಗಿದ್ದಾರೆ.


ಸೂರತ್‌ನಲ್ಲಿ ವಾಸವಿರುವ ಅರ್ಜುನ್ ಕುಟುಂಬ ಈಗಾಗಲೇ ಸಾಕಷ್ಟು ನೋವು ಕಂಡಿದೆ. ಅರ್ಜುನ್ ಅವರ ಮದುವೆಗೂ ಮೊದಲೇ ಅರ್ಜುನ್ ತಂದೆ ನಿಧನರಾಗಿದ್ದರು. ಅವರ ತಾಯಿ ಸೂರತ್‌ನಲ್ಲಿ ವಾಸಿಸುತ್ತಿದ್ದಾರೆ. ಲಂಡನ್‌ನಲ್ಲಿರುವ ಇಬ್ಬರು ಮಕ್ಕಳು ಈ ಸುದ್ದಿ ಕೇಳಿ ಆಘಾತಕ್ಕೊಳಗಾಗಿದ್ದಾರೆ.

ತಾಯಿಯ ಸಾವಿನಿಂದ ದುಃಖಿತರಾಗಿದ್ದ ಮಕ್ಕಳು ಈಗ ತಂದೆಯನ್ನು ಕಳೆದುಕೊಂಡು ಅನಾಥರಾಗಿದ್ದಾರೆ. ಲಂಡನ್‌ನಲ್ಲಿರುವ ಅರ್ಜುನ್‌ಭಾಯ್ ಅವರ ಮಕ್ಕಳ ಭವಿಷ್ಯದ ಬಗ್ಗೆ ಕುಟುಂಬ ಸದಸ್ಯರು ಕಳವಳ ವ್ಯಕ್ತಪಡಿಸುತ್ತಿದ್ದಾರೆ.

ಲಂಡನ್ ತಲುಪಿದ ನಂತರ ಕಾಲ್ ಮಾಡುತ್ತೇನೆ ಎಂದ ಮಗ ಬಾರದ ಲೋಕಕ್ಕೆ ಹೋದ

ವಿಮಾನ ಹತ್ತುವ ಮುನ್ನ ವೃದ್ಧ ತಂದೆಗೆ ಕರೆ ಮಾಡಿದ್ದ ಕ್ಯಾ. ಸುಮಿತ್ ಸಬರ್ವಾಲ್

ನವದೆಹಲಿ, ಜೂ.13– ಮುಂಬೈಯಲ್ಲಿರುವ ವೃದ್ಧ ಮತ್ತು ಅಸ್ವಸ್ಥ ತಂದೆ ತನ್ನ ಮಗ ಮನೆಗೆ ಬಂದು ತನ್ನ ಯೋಗಕ್ಷೇಮ ವಿಚಾರಿಸುತ್ತಾನೆ ಎಂಬ ನಿರೀಕ್ಷೆ ಹುಸಿಯಾಯಿತು. ಮಗ ಪೈಲಟ್‌–ಇನ್‌–ಕಮಾಂಡ್ ಸುಮಿತ್ ಸಬರ್ವಾಲ್ ನಿನ್ನೆ ಸಂಭವಿಸಿದ ಏರ್ ಇಂಡಿಯಾ ವಿಮಾನ ಅಪಘಾತದಲ್ಲಿ ನಿಧನರಾದರು.



ಲಂಡನ್‌ಗೆ ಹಾರುವ ಮೊದಲು ಸುಮಿತ್ ಸಬರ್ವಾಲ್ ತನ್ನ ತಂದೆಗೆ ಫೋನ್ ಮಾಡಿ, ನಾನು ಲಂಡನ್ ತಲುಪಿದ ನಂತರ ನಿಮಗೆ ಕರೆ ಮಾಡುತ್ತೇನೆ ಎಂದು ಹೇಳಿ ವಿಮಾನ ಹತ್ತಿದ್ದರು. ಆದರೆ ಕೆಲವೇ ನಿಮಿಷಗಳಲ್ಲಿ ಸುಟ್ಟು ಕರಕಲಾಗಿ ಹೋದರು.

ಮೂರು ದಿನಗಳ ಹಿಂದೆ, ಸುಮಿತ್ ಸಬರ್ವಾಲ್ ತನ್ನ ತಂದೆಯೊಂದಿಗೆ ಬಹಳ ಪ್ರೀತಿಯಿಂದ ಮಾತುಕತೆ ನಡೆಸಿದ್ದರು. ಒಂದೆರಡು ವರ್ಷಗಳ ಹಿಂದೆ ಸುಮಿತ್ ಅವರ ತಾಯಿ ನಿಧನರಾದ ನಂತರ ತಂದೆ ಒಂಟಿಯಾಗಿ ವಾಸಿಸುತ್ತಿದ್ದಾರೆ. ಮಗ ಸುಮಿತ್ ಮದುವೆಯಾಗಿರಲಿಲ್ಲ.

ಮಗ ವಿಮಾನ ಅಪಘಾತದಲ್ಲಿ ತೀರಿಹೋದ ಸುದ್ದಿ ಕೇಳಿ ಸ್ನೇಹಿತರು ಮತ್ತು ಸಂಬಂಧಿಕರು ದಿನವಿಡೀ ವೃದ್ಧ ತಂದೆಯನ್ನು ಬಂದು ನೋಡಿಕೊಂಡು ಹೋಗುತ್ತಿದ್ದರು. ಸುಮಿತ್ ಸಬರ್ವಾಲ್ ಅವರಿಗೆ ತಂದೆಯೊಂದಿಗೆ ಉತ್ತಮ ಬಾಂಧವ್ಯವಿತ್ತು ಎಂದು ಭಾರತೀಯ ಪೈಲಟ್‌ಗಳ ಸಂಘದ ಅಧ್ಯಕ್ಷ ಕ್ಯಾಪ್ಟನ್ ಸಿಎಸ್ ರಾಂಧವ ಹೇಳಿದರು.

ವಿಮಾನ ಪತನ: ಟೀಂ ಇಂಡಿಯಾ ಮೌನಾಚರಣೆ



ಬೆಕ್‌ಹ್ಯಾಮ್, ಜೂ.13– ಅಹಮದಾಬಾದ್‌ನಲ್ಲಿ ಸಂಭವಿಸಿದ ಏರ್ ಇಂಡಿಯಾ ವಿಮಾನ ದುರಂತಕ್ಕೆ ಕ್ರಿಕೆಟ್ ಜಗತ್ತು ಮರುಕ ವ್ಯಕ್ತಪಡಿಸಿದೆ. ಐದು ಪಂದ್ಯಗಳ ಟೆಸ್ಟ್ ಕ್ರಿಕೆಟ್ ಸರಣಿ ಸಲುವಾಗಿ ಇಂಗ್ಲೆಂಡ್ ಪ್ರವಾಸ ಕೈಗೊಂಡಿರುವ ಭಾರತ ತಂಡ, ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್ ಫೈನಲ್‌ನಲ್ಲಿ ಸೆಣಸಾಟ ನಡೆಸುತ್ತಿರುವ ದಕ್ಷಿಣ ಆಫ್ರಿಕಾ ಹಾಗೂ ಆಸ್ಟ್ರೇಲಿಯಾ ಆಟಗಾರರು ಒಂದು ನಿಮಿಷ ಮೌನಾಚರಣೆ ನಡೆಸುವ ಮೂಲಕ ಮೃತರಿಗೆ ಗೌರವ ಸಲ್ಲಿಸಿದ್ದಾರೆ.

ಬೆಕ್‌ಹ್ಯಾಮ್‌ನಲ್ಲಿ ನಡೆಯುತ್ತಿರುವ ಅಭ್ಯಾಸ ಪಂದ್ಯಕ್ಕೂ ಮುನ್ನ ಮೌನಾಚರಣೆ ಮಾಡಿರುವ ಟೀಂ ಇಂಡಿಯಾ, ತೋಳಿಗೆ ಕಪ್ಪು ಪಟ್ಟಿ ಧರಿಸಿ ಕಣಕ್ಕಿಳಿದಿದೆ. ಬೆಕ್‌ಹ್ಯಾಮ್‌ನಲ್ಲಿ ನಡೆಯುತ್ತಿರುವ ಇಂಟ್ರಾ ಸ್ಕ್ವಾಡ್ ಅಭ್ಯಾಸ ಪಂದ್ಯಕ್ಕೂ ಮುನ್ನ ಆಟಗಾರರು ಹಾಗೂ ಸಹಾಯಕ ಸಿಬ್ಬಂದಿ, ಅಹಮದಾಬಾದ್ ವಿಮಾನ ದುರಂತದಲ್ಲಿ ಮೃತಪಟ್ಟವರಿಗೆ ಗೌರವ ಸಲ್ಲಿಸಲು ಹಾಗೂ ತಮ್ಮ ಪ್ರೀತಿಪಾತ್ರರನ್ನು ಕಳೆದುಕೊಂಡ ಕುಟುಂಬದವರ ಪರ ಒಗ್ಗಟ್ಟನ್ನು ಸಾರುವ ಸಲುವಾಗಿ ತೋಳಿಗೆ ಕಪ್ಪು ಪಟ್ಟಿ ಧರಿಸಿ, ಒಂದು ನಿಮಿಷ ಮೌನಾಚರಣೆಯಲ್ಲಿ ಭಾಗವಹಿಸಿದ್ದಾರೆ ಎಂದು ಬಿಸಿಸಿಐ ತಿಳಿಸಿದೆ.

ಆಟಗಾರರು ಕಪ್ಪು ಪಟ್ಟಿ ಧರಿಸಿರುವ ವಿಡಿಯೊವನ್ನು ಐಸಿಸಿ ತನ್ನ ಇನ್‌ಸ್ಟಾಗ್ರಾಂ ಖಾತೆಯಲ್ಲಿ ಹಂಚಿಕೊಂಡಿದೆ. ಭಾರತ ತಂಡದ ಕೋಚ್ ಗೌತಮ್ ಗಂಭೀರ್, ಟೆಸ್ಟ್ ನಾಯಕ ಶುಭಮನ್ ಗಿಲ್, ಹಿರಿಯ ಆಟಗಾರ ರವೀಂದ್ರ ಜಡೇಜ, ಅನುಭವಿ ಕೆಎಲ್. ರಾಹುಲ್ ಸಾಮಾಜಿಕ ಮಾಧ್ಯಮಗಳಲ್ಲಿ ಆಘಾತ ವ್ಯಕ್ತಪಡಿಸಿದ್ದಾರೆ. ದಿಗ್ಗಜರಾದ ಸಚಿನ್ ತೆಂಡೂಲ್ಕರ್, ಸೇರಿದಂತೆ ಹಲವರು ಹೃದಯವಿದ್ರಾವಕ ದುರಂತ ಎಂದು ಟ್ವೀಟ್ ಮಾಡಿದ್ದಾರೆ.

ಸಾವನ್ನಪ್ಪಿದ್ದ ಕೆನಡಾದ ಏಕೈಕ ಪ್ರಜೆ ಭಾರತೀಯ ಮೂಲದ ದಂತವೈದ್ಯೆ



ಒಟ್ಟಾವಾ: ಅಹಮದಾಬಾದ್‌ನಲ್ಲಿ ಸಂಭವಿಸಿದ ವಿಮಾನ ಅಪಘಾತದಲ್ಲಿ ಸಾವನ್ನಪ್ಪಿದ್ದ ಏಕೈಕ ಕೆನಡಾದ ಪ್ರಜೆ ನಿರಾಲಿ ಪಟೇಲ್ ಭಾರತೀಯ ಮೂಲದ ದಂತವೈದ್ಯೆಯಾಗಿದ್ದರು ಎಂದು ಮಾಧ್ಯಮ ವರದಿಗಳು ತಿಳಿಸಿವೆ.

ಟೊರೊಂಟೊದ ಎಟೊಬಿಕೋಕ್‌ನಲ್ಲಿ ವಾಸಿಸುತ್ತಿದ್ದ 32 ವರ್ಷದ ನಿರಾಲಿ ಪಟೇಲ್ ಅವರು ಭಾರತದಲ್ಲಿನ ಸಾಮಾಜಿಕ ಪ್ರವಾಸ ಮುಗಿಸಿ ಕೆನಡಾಕ್ಕೆ ಹಿಂತಿರುಗುತ್ತಿದ್ದಾಗ ಅಪಘಾತ ಸಂಭವಿಸಿದೆ ಎಂದು ಅಖಿಗಿ ನ್ಯೂಸ್ ಟೊರೊಂಟೊ ಗುರುವಾರ ವರದಿ ಮಾಡಿದೆ.

ಪತಿಗೆ 'ಬರ್ತ್ ಡೇ ಸರ್‌ಪ್ರೈಸ್' ನೀಡಲು ಲಂಡನ್‌ಗೆ ತೆರಳುತ್ತಿದ್ದ ಟೆಕ್ಕಿ ಸಾವು

ಅಹಮದಾಬಾದ್, ಜೂ.13– ಗುರುವಾರ ಮಧ್ಯಾಹ್ನ ಅಹಮದಾಬಾದ್‌ನಲ್ಲಿ ಸಂಭವಿಸಿದ ಘೋರ ವಿಮಾನ ದುರಂತದಲ್ಲಿ ಬೆಂಗಳೂರಿನಲ್ಲಿ ಕೆಲಸ ಮಾಡಿಕೊಂಡಿದ್ದ ಟೆಕ್ಕಿಯೊಬ್ಬರು ಸಾವನ್ನಪ್ಪಿರುವುದು ಖಚಿತವಾಗಿದೆ. 29 ವರ್ಷದ ಸೊಸೆ ಹರ್ ಪ್ರೀತ್ ಹೊರಾ ಅವರನ್ನು ಕಳೆದುಕೊಂಡ ಇಂಧೋರ್‌ನ ರಾಜ್ ಮೊಹಲ್ಲಾದಲ್ಲಿ ನೆಲೆಸಿರುವ ಸಿಖ್ ಕುಟುಂಬ, ದುಃಖದ ಮಡುವಿನಲ್ಲಿ ಮುಳುಗಿದೆ.



ಜೂನ್ 16 ರಂದು ಲಂಡನ್‌ನಲ್ಲಿ ಕೆಲಸ ಮಾಡುತ್ತಿರುವ ಆಕೆಯ ಪತಿ ರಾಬಿ ಸಿಂಗ್ ಹೊರಾ ಅವರ ಹುಟ್ಟುಹಬ್ಬ ಇತ್ತು. ಅದಕ್ಕೆ ಜೂನ್ 19 ರ ಬದಲಿಗೆ ಜೂನ್ 12 ರಂದೇ ತೆರಳುವ ಮೂಲಕ ತನ್ನ ಪತಿಗೆ ಅಚ್ಚರಿ ನೀಡಲು ಬಯಸಿದ್ದ ಹರ್ ಪ್ರೀತ್ ವಿಮಾನ ದುರಂತದಲ್ಲಿ ಮೃತಪಟ್ಟಿದ್ದಾರೆ.

ಈ ಹಿಂದೆ ಜೂನ್ 19 ರಂದು ಲಂಡನ್‌ಗೆ ತೆರಳಲು ಆಕೆ ಯೋಜಿಸಿದ್ದರು. ಆದರೆ, ಪತಿಯ ಜನ್ಮದಿನವನ್ನು ಅವಿಸ್ಮರಣೀಯವಾಗಿಸುವ ಬಯಕೆಯಿಂದ ದಿನಾಂಕ ಬದಲಿಸಿದ್ದರು ಎಂದು ಅವರ ಮಾವನ ಸಹೋದರ ರಾಜೇಂದ್ರ ಸಿಂಗ್ ಹೂರಾ ತಿಳಿಸಿದ್ದಾರೆ. ಅಹಮದಾಬಾದ್ ಮೂಲದ ಹರ್‌ಪ್ರೀತ್ ಅವರು 2020 ರಲ್ಲಿ ರಾಬಿಯನ್ನು ವಿವಾಹವಾಗಿದ್ದರು. ರಾಬಿ ಅವರು 2–3 ವರ್ಷಗಳಿಂದ ಲಂಡನ್‌ನಲ್ಲಿ ಪ್ರತಿಷ್ಠಿತ ಕಂಪನಿಯಲ್ಲಿ ಕೆಲಸ ಮಾಡುತ್ತಿದ್ದಾರೆ ಎಂದು ತಿಳಿದುಬಂದಿದೆ.

ಸಂತ್ರಸ್ತರಿಗೆ ಕ್ಲೈಮ್ ಸೆಟಲ್‌ಮೆಂಟ್ ಪ್ರಕ್ರಿಯೆ ಸಡಿಲಿಸಿದ ಎಲ್‌ಐಸಿ



ಅಹಮದಾಬಾದ್, ಜೂ.13– ಗುಜರಾತ್‌ನ ಅಹಮದಾಬಾದ್ ವಿಮಾನ ನಿಲ್ದಾಣದ ಬಳಿ ಗುರುವಾರ ಏರ್ ಇಂಡಿಯಾ ವಿಮಾನ ಪತನವಾಗಿ 241 ಪ್ರಯಾಣಿಕರು ಮತ್ತು ಸಿಬ್ಬಂದಿ ಸೇರಿದಂತೆ ಒಟ್ಟು 270 ಜನ ಮೃತಪಟ್ಟಿದ್ದಾರೆ.

ಭಾರತೀಯ ಜೀವ ವಿಮಾ ನಿಗಮ ಶುಕ್ರವಾರ ಏರ್ ಇಂಡಿಯಾ ವಿಮಾನ ಅಪಘಾತ ಸಂತ್ರಸ್ತರಿಗೆ ಕ್ಲೈಮ್ ಸೆಟಲ್‌ಮೆಂಟ್ ಪ್ರಕ್ರಿಯೆಯನ್ನು ಸಡಿಲಗೊಳಿಸಿದೆ ಮತ್ತು ಪ್ರಕ್ರಿಯೆಯನ್ನು ತ್ವರಿತಗೊಳಿಸಿರುವುದಾಗಿ ತಿಳಿಸಿದೆ.

ವಿಮಾನ ಅಪಘಾತದಲ್ಲಿ ಮೃತಪಟ್ಟವರ ಕುಟುಂಬಗಳನ್ನು ಬೆಂಬಲಿಸಲು ನಿಗಮವು ಬದ್ಧವಾಗಿದೆ ಮತ್ತು ಕ್ಲೈಮ್ ಸೆಟಲ್‌ಮೆಂಟ್ ಪ್ರಕ್ರಿಯೆ ತ್ವರಿತಗೊಳಿಸುವುದಾಗಿ ಎಲ್‌ಐಸಿ ಹೇಳಿದೆ. ಎಲ್‌ಐಸಿ ಪಾಲಿಸಿಗಳ ಹಕ್ಕುದಾರರ ಕಷ್ಟಗಳನ್ನು ತಗ್ಗಿಸಲು ಎಲ್‌ಐಸಿ ಅನೇಕ ರಿಯಾಯಿತಿಗಳನ್ನು ಘೋಷಿಸಿದೆ. ಮರಣ ಪ್ರಮಾಣ ಪತ್ರಗಳಿಗೆ ಬದಲಾಗಿ, ವಿಮಾನ ಅಪಘಾತದಲ್ಲಿ ಮೃತಪಟ್ಟ ಬಗ್ಗೆ ಯಾವುದೇ ಸರ್ಕಾರಿ ದಾಖಲೆಗಳಲ್ಲಿರುವ ಪುರಾವೆಗಳು ಅಥವಾ ಕೇಂದ್ರ/ರಾಜ್ಯ ಸರ್ಕಾರ/ವಿಮಾನಯಾನ ಅಧಿಕಾರಿಗಳು ಪಾವತಿಸಿದ ಯಾವುದೇ ಪರಿಹಾರವನ್ನು ಸಾವಿನ ಪುರಾವೆಯಾಗಿ ಸ್ವೀಕರಿಸಲಾಗುತ್ತದೆ ಎಂದು ವಿಮಾ ಕಂಪನಿ ಪ್ರಕಟಣೆಯಲ್ಲಿ ತಿಳಿಸಿದೆ.

ಹೆಚ್ಚಿನ ಸಹಾಯಕ್ಕಾಗಿ, ಪಾಲಿಸಿದಾರರು ಎಲ್‌ಐಸಿಯ ಹತ್ತಿರದ ಶಾಖೆ ಅಥವಾ ವಿಭಾಗವನ್ನು ಸಂಪರ್ಕಿಸಬಹುದು ಮತ್ತು ಎಲ್‌ಐಸಿಯ ಕಾಲ್ ಸೆಂಟರ್ 022–68276827ಗೆ ಸಹ ಕರೆ ಮಾಡಬಹುದು ಎಂದು ಪ್ರಕಟಣೆ ತಿಳಿಸಿದೆ.

ಏತನ್ಮಧ್ಯೆ, ಈ ದುರಂತದಲ್ಲಿ ಮೃತಪಟ್ಟ ತನ್ನ ಗ್ರಾಹಕರ ನೆರವಿಗೆ ಧಾವಿಸಲು, ಸಾವು ಮತ್ತು ಅಂಗವೈಕಲ್ಯ ಕ್ಲೈಮ್‌ಗಳ ಪ್ರಕ್ರಿಯೆಗೆ ಆದ್ಯತೆ ನೀಡಲು ಮೀಸಲಾದ ವಿಶೇಷ ಕ್ಲೈಮ್ ಇತ್ಯರ್ಥ ಡೆಸ್ಕ್ ಅನ್ನು ಸ್ಥಾಪಿಸಲಾಗಿದೆ ಎಂದು ಬಜಾಜ್ ಅಲಿಯಾನ್ಸ್ ಲೈಫ್ ಇನ್ಶೂರೆನ್ಸ್ ಹೇಳಿದೆ.

ವಿಮಾನ ದುರಂತದಿಂದ ನಾವೆಲ್ಲರೂ ತೀವ್ರ ಆಘಾತಗೊಂಡಿದ್ದೇವೆ

ಅಹಮದಾಬಾದ್, ಜೂ.13– 270 ಜನರು ಪ್ರಾಣ ಕಳೆದುಕೊಂಡ ಏರ್ ಇಂಡಿಯಾ AI 171 ವಿಮಾನ ಅಪಘಾತದ ಸ್ಥಳಕ್ಕೆ ಇಂದು ಶುಕ್ರವಾರ ಪ್ರಧಾನಿ ನರೇಂದ್ರ ಮೋದಿ ಭೇಟಿ ನೀಡಿ ಪರಿಶೀಲನೆ ನಡೆಸಿದ ನಂತರ ಇಲ್ಲಿನ ನಾಗರಿಕ ಆಸ್ಪತ್ರೆಯಲ್ಲಿ ಗಾಯಗೊಂಡವರನ್ನು ಭೇಟಿ ಮಾಡಿ ಯೋಗಕ್ಷೇಮ ವಿಚಾರಿಸಿದರು.

ಅಪಘಾತದ ಸ್ಥಳಕ್ಕೆ ಭೇಟಿ ನೀಡಿ ಚಿಕಿತ್ಸೆ ಪಡೆಯುತ್ತಿರುವ ಗಾಯಾಳುಗಳನ್ನು ಭೇಟಿ ಮಾಡಿದ ಮೋದಿ, ಎಕ್ಸ್ ಖಾತೆಯಲ್ಲಿ ಪೋಸ್ಟ್ ಮಾಡಿ, "ಅಹಮದಾಬಾದ್‌ನಲ್ಲಿ ನಡೆದ ವಿಮಾನ ದುರಂತದಿಂದ ನಾವೆಲ್ಲರೂ ತೀವ್ರ ಆಘಾತಗೊಂಡಿದ್ದೇವೆ. ಇಷ್ಟೊಂದು ಹಠಾತ್ ಮತ್ತು ಹೃದಯವಿದ್ರಾವಕ ರೀತಿಯಲ್ಲಿ ಹಲವಾರು ಜೀವಗಳನ್ನು ಕಳೆದುಕೊಂಡಿರುವುದು ಪದಗಳಿಗೆ ನಿಲುಕದಷ್ಟು ದೊಡ್ಡ ದುರಂತ. ಎಲ್ಲಾ

ಅಹಮದಾಬಾದ್‌ನಲ್ಲಿ ಪ್ರಧಾನಿ ಮೋದಿ ಪ್ರತಿಕ್ರಿಯೆ



ದುಃಖಿತ ಕುಟುಂಬಗಳಿಗೆ ಸಂತಾಪಗಳು" ಎಂದು ಬರೆದುಕೊಂಡಿದ್ದಾರೆ.

ತಮ್ಮವರನ್ನು ಕಳೆದುಕೊಂಡವರ ನೋವು ನಮಗೆ ಅರ್ಥವಾಗುತ್ತದೆ. ವರ್ಷಗಳವರೆಗೆ ಈ ಆಘಾತ ನಮ್ಮನ್ನು ಕಾಡಲಿದೆ ಎಂದಿದ್ದಾರೆ.

ನಿನ್ನೆ ಮಧ್ಯಾಹ್ನ ಟೇಕ್ ಆಫ್ ಆದ ಸ್ವಲ್ಪ ಸಮಯದ ನಂತರ ಮೇಘಾನಿನಗರ ಪ್ರದೇಶದ ಬಿಜೆ ವೈದ್ಯಕೀಯ ಕಾಲೇಜಿನ ಸಂಕೀರ್ಣಕ್ಕೆ ಬೋಯಿಂಗ್ 787 ಡ್ರೀಮ್ ಲೈನರ್ ವಿಮಾನ (AI171) ಅಪ್ಪಳಿಸಿದ ಸ್ಥಳವನ್ನು ಇಂದು ಪ್ರಧಾನಿ ಸುಮಾರು 20 ನಿಮಿಷಗಳ ಕಾಲ ಪರಿಶೀಲಿಸಿದರು.

ಗುಜರಾತ್ ಮುಖ್ಯಮಂತ್ರಿ ಭೂಪೇಂದ್ರ ಪಟೇಲ್, ನಾಗರಿಕ ವಿಮಾನಯಾನ ಸಚಿವ ಕಿಂಜರಪು ರಾಮ್ ಮೋಹನ್ ನಾಯ್ಡು ಮತ್ತು ಗುಜರಾತ್ ಗೃಹ ಸಚಿವ ಹರ್ಷ ಸಾಂಘವಿ, ವಿಮಾನ, ಕಾಲೇಜು ಹಾಸ್ಟೆಲ್‌ಗೆ ಹೇಗೆ ಅಪ್ಪಳಿಸಿತು ಎಂಬುದರ ಬಗ್ಗೆ ಮೋದಿಗೆ ವಿವರಿಸಿದರು.

ನಂತರ ಪ್ರಧಾನಿಯವರು ನಗರದ ಸಿವಿಲ್ ಆಸ್ಪತ್ರೆಗೆ ತೆರಳಿ ಅಪಘಾತದಲ್ಲಿ ಗಾಯಗೊಂಡವರನ್ನು ಭೇಟಿಯಾದರು. ಒಂದು ದಿನದ ಹಿಂದೆ ನಡೆದ ಅಪಘಾತದಲ್ಲಿ ಪವಾಡಸದೃಶವಾಗಿ ಬದುಕುಳಿದ ಏಕೈಕ ಪ್ರಯಾಣಿಕ ವಿಶ್ವಾಶ್‌ಕುಮಾರ್ ರಮೇಶ್ ಅವರನ್ನು ಭೇಟಿಯಾದರು.

25 ಗಾಯಾಳುಗಳು ಚಿಕಿತ್ಸೆ ಪಡೆಯುತ್ತಿರುವ ಆಸ್ಪತ್ರೆಯ ಸಿ7 ವಾರ್ಡ್‌ಗೆ ಅವರು ಭೇಟಿ ನೀಡಿ ವೈದ್ಯರೊಂದಿಗೆ ಸಂವಾದ ನಡೆಸಿದರು. ಪ್ರಧಾನಿಯವರು ಆಸ್ಪತ್ರೆಯಲ್ಲಿ ಸುಮಾರು 10 ನಿಮಿಷಗಳ ಕಾಲ ಕಳೆದರು.

ಮೋದಿ ಅವರು ಅಹಮದಾಬಾದ್ ವಿಮಾನ ನಿಲ್ದಾಣದ ಬಳಿಯ ಗುಜ್‌ಸೈಲ್ ಕಚೇರಿಯಲ್ಲಿ ರಾಜ್ಯ ಮತ್ತು ನಾಗರಿಕ ವಿಮಾನಯಾನ ಅಧಿಕಾರಿಗಳೊಂದಿಗೆ ಸಭೆ ಕೂಡ ನಡೆಸಿದರು.

ಸ್ವಚ್ಛಗೊಳಿಸುವ ಕಾರ್ಯ: ಅಪಘಾತದ ಸ್ಥಳವನ್ನು ತೆರವುಗೊಳಿಸುವ ಕಾರ್ಯಾಚರಣೆ ರಾತ್ರಿಯಿಡೀ ಮುಂದುವರೆದಿದ್ದು, ಕೊನೆಯ ಹಂತದಲ್ಲಿದೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಪೊಲೀಸ್ ಉಪ ಆಯುಕ್ತ ಕಾನನ್ ದೇಸಾಯಿ ಅವರು ಸ್ಥಳವನ್ನು ತೆರವುಗೊಳಿಸುವ ಕಾರ್ಯಾಚರಣೆ ರಾತ್ರಿಯಿಡೀ ಮುಂದುವರೆದಿದ್ದು, ಕೆಲವು ಅವಶೇಷಗಳನ್ನು ಇನ್ನೂ ತೆರವುಗೊಳಿಸಬೇಕಾಗಿದೆ ಎಂದು ಹೇಳಿದರು. ಶವಗಳು ಗುರುತಿಸಲಾಗದಷ್ಟು ಸುಟ್ಟು ಹೋಗಿವೆ ಎಂದು ಅವರು ಹೇಳಿದರು.

ನಕ್ಕರೆ ಅದೇ ಸ್ವರ್ಗ

ಟೀಚರ್ : ಬಸ್ ಡ್ರೈವರಿಗೂ, ಕಂಡಕ್ಟರ್‌ಗೂ ವ್ಯತ್ಯಾಸವೇನು?
ಗುಂಡ : ಮೇಡಂ... ಕಂಡಕ್ಟರ್ ಮಲಗಿದ್ರೆ ಯಾರು ಟಿಕೆಟ್ ತಗೊಳಲ್ಲ, ಡ್ರೈವರ್ ಮಲಗಿದ್ರೆ ಎಲ್ಲಾರೂ ಟಿಕೆಟ್ ತಗೊಳ್ತಾರೆ.

ಮೈಸೂರು ಮಿತ್ರ
ಶನಿವಾರ, 14 ಜೂನ್ 2025
ಸತ್ಯೇನೋತ್ತಭಿತಾ ಭೂಮಿಃ ನ ಹಿ ಸತ್ಯಾತ್ಪರೋ ಧರ್ಮಃ
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)
ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತ ವಾಹಿನಿ..........

ಇನ್ನೊಬ್ಬರ ಜೀವನದಲ್ಲಿ ನಮ್ಮ ಪ್ರಾಮುಖ್ಯತೆಯನ್ನು ಬೇಗ ತಿಳ್ಕೊಬೇಕು. ಇಲ್ಲದಿದ್ದರೆ ನಾವು ಭ್ರಮೆಯಲ್ಲಿ ಬದುಕಬೇಕಾಗುತ್ತದೆ.

– ನುಡಿಮುತ್ತು

ವೇದ ಸುಳ್ಳಾದರೂ { ಬೊಗಳುವ
ಗಾದೆ ಸುಳ್ಳಾಗದು { ನಾಯಿ ಕಚ್ಚುವುದಿಲ್ಲ

ನಿಮ್ಮ ಪತ್ರಗಳು

■ ತೋತಾಪುರಿ ನಿರ್ಬಂಧ ಒಕ್ಕೂಟ ವ್ಯವಸ್ಥೆಗೆ ಮಾರಕವಲ್ಲವೇ?

ಮಾನ್ಯರೆ,

ಕರ್ನಾಟಕದ ತೋತಾಪುರಿ ಮಾವು ಖರೀದಿ ಮೇಲೆ ಆಂಧ್ರ ಸರ್ಕಾರ ನಿಷೇಧ ಹೇರಿದ್ದು, ಕರ್ನಾಟಕ– ಆಂಧ್ರಪ್ರದೇಶ ಅಂತರ ರಾಜ್ಯ ಗಡಿಯಲ್ಲಿ ಪೊಲೀಸರು, ಅರಣ್ಯ ಅಧಿಕಾರಿಗಳು, ಕೃಷಿ ಮಾರುಕಟ್ಟೆ ಅಧಿಕಾರಿಗಳು, ಕಂದಾಯ ಅಧಿಕಾರಿಗಳನ್ನು ನಿಯೋಜಿಸಲಾಗಿದೆ. ಕರ್ನಾಟಕದ ಮಾವು ಮಾರುಕಟ್ಟೆಗೆ ಬಂದರೆ, ಆಂಧ್ರದ ರೈತರಿಗೆ ಬೆಲೆ ಕಡಿಮೆಯಾಗುತ್ತದೆ ಎನ್ನುವ ಕಾರಣ ನೀಡಿ ಕರ್ನಾಟಕ ರೈತರ ಉತ್ಪನ್ನವನ್ನು ತಡೆಯಲಾಗುತ್ತಿದೆ. ಈ ಸಂಬಂಧ ನಿರ್ಬಂಧ ತೆರವುಗೊಳಿಸುವಂತೆ ಕರ್ನಾಟಕದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಆಂಧ್ರದ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ಅವರಿಗೆ ಪತ್ರ ಬರೆದಿದ್ದರೂ ಅದನ್ನು ಪರಿಗಣಿಸದೆ ತಡೆಯುತ್ತಿದ್ದಾರೆ ಎಂದು ವರದಿ ತಿಳಿಸಿದೆ.

ಇದು ನಿಜಕ್ಕೂ ಖಂಡನಾರ್ಹ. ಯಾವುದೇ ಉತ್ಪನ್ನಗಳನ್ನು ಎಲ್ಲಿ ಬೇಕಾದರೂ ಮಾರಾಟ ಮಾಡಲು ರೈತರಿಗೆ ಸ್ವಾತಂತ್ರ್ಯವಿದೆ. ವಿಶ್ವ ವ್ಯಾಪಾರ ಒಪ್ಪಂದ ಕೂಡ ಇದನ್ನೇ ಹೇಳುತ್ತದೆ. ಹೀಗಿರುವಾಗ ಆಂಧ್ರದ ನಿರ್ಬಂಧ ಮಾರಕವಾಗಿದೆ. ಕೂಡಲೇ ನಿರ್ಬಂಧ ವಾಪಸ್ ಪಡೆಯಬೇಕು. ಇಲ್ಲದಿದ್ದರೆ ಕರ್ನಾಟಕ ಕೂಡ ಆಂಧ್ರದ ಉತ್ಪನ್ನಗಳ ಮೇಲೆ ಇದೇ ನೀತಿಯನ್ನು ಜಾರಿ ಮಾಡಬೇಕು.

ಸುಪ್ರೀಂ ಕೋರ್ಟ್ ಆದೇಶ, ನ್ಯಾಯ ಮಂಡಳಿ, ಕಾವೇರಿ ಉಸ್ತುವಾರಿ ಸಮಿತಿಯ ಆದೇಶ ಪಾಲನೆ ಮಾಡದಿದ್ದರೆ ಒಕ್ಕೂಟ ವ್ಯವಸ್ಥೆಗೆ ಮಾರಕ ಎನ್ನುವವರಿಗೆ ಇಂತಹ ನಿರ್ಬಂಧಗಳು ಮಾರಕವೆನಿಸುವುದಿಲ್ಲವೇ, ಕಾವೇರಿ ನ್ಯಾಯ ಮಂಡಳಿ ಆದೇಶದಿಂದ ಕರ್ನಾಟಕಕ್ಕೆ ಅನ್ಯಾಯವಾಗಿದೆ. ನೀರು ಇಲ್ಲದಿದ್ದರೂ, ಮಳೆ ಬರದಿದ್ದರೂ, ಪ್ರತಿ ತಿಂಗಳೂ ಇಂತಿಷ್ಟು ನೀರನ್ನು ಬಿಡಲೇಬೇಕು ಎಂಬ ಆದೇಶ ತಮಿಳುನಾಡು ಪಕ್ಷಪಾತಿ ತೀರ್ಪು ಆಗಿದೆ.ಇಂತಹ ನಿರ್ಬಂಧಗಳ ಬೆನ್ನಲ್ಲೇ ಕರ್ನಾಟಕ ತನ್ನ ನಿಲುವುಗಳಲ್ಲಿ ಬದಲಾವಣೆ ಮಾಡಿಕೊಳ್ಳುವುದು ಸೂಕ್ತ.

–ಮುಳ್ಳೂರು ಪ್ರಕಾಶ್, ಕನಕದಾಸನಗರ, ಮೈಸೂರು.

■ ಎಲ್ಲರೂ ವೈದ್ಯರಾದರೆ ರೋಗಿಗಳ ಗತಿ?

ಮಾನ್ಯರೆ,

ನೀಟ್‌ನಲ್ಲಿ ಅರ್ಹತೆ ಪಡೆಯದಿದ್ದರೂ ಕೆಲವು ವಿದ್ಯಾರ್ಥಿಗಳು ಏಜೆನ್ಸಿ ಮೂಲಕ ದೇಶ–ವಿದೇಶದಲ್ಲಿ ಮೆಡಿಕಲ್ ಕಾಲೇಜಿನಲ್ಲಿ ಕೋಟಿ ಕೋಟಿ ಕೊಟ್ಟು ಸೀಟು ಪಡೆಯುವ ಬಗ್ಗೆ ಪತ್ರಿಕೆಯಲ್ಲಿ ಪ್ರಕಟವಾಗಿದೆ.ಇಂಥವರು ವೈದ್ಯರಾಗಿ ಹೊರಬಂದ ಮೇಲೆ ಇವರಿಂದ ಏನು ನಿರೀಕ್ಷಿಸಬಹುದು. ಹಣ ಸುರಿದಿದ್ದು ಹೇಗಾದರೂ ಮಾಡಿ ವಾಪಸ್ಸು ಪಡೆಯುವುದು ಇವರ ಮೊದಲ ಆದ್ಯತೆ ಆಗಿರುತ್ತದೆ. ಮತ್ತು ಇವರಿಂದ ರೋಗಿಗಳಿಗೆ ಅತ್ಯುತ್ತಮವಾದ ಚಿಕಿತ್ಸೆ ಸಿಗುತ್ತದೆ ಎನ್ನುವ ಯಾವ ಭರವಸೆಯೂ ಇಲ್ಲ. ಶಿಕ್ಷಣ, ಜ್ಞಾನ ಸಂಪಾದನೆ ಕೂಡ ಒಂದು ದುಬಾರಿ ವಸ್ತುವಿನಂತೆ ಮಾರುಕಟ್ಟೆಯಲ್ಲಿ ಕೊಂಡುಕೊಳ್ಳುವ ಒಂದು ವಸ್ತು ಆಗಿರುವುದು ವಾಸ್ತವ ಮತ್ತು ದೊಡ್ಡ ದುರಂತ.

–ರಾಘವೇಂದ್ರ ಜೋಯಿಸ್, ಮೈಸೂರು

■ ಕಟ್ಟಡಗಳಿಗೆ ಎರಡರಷ್ಟು ಕಂದಾಯ ನಿಗದಿ ಸರಿಯಾದ ಕ್ರಮವಲ್ಲ

ಮಾನ್ಯರೆ,

2008ರ ಮೊದಲು ಶೇ. 25 ರಷ್ಟು ಉಲ್ಲಂಘನೆಯಾಗಿರುವ ಕಟ್ಟಡಗಳಿಗೆ ದಂಡ ವಿಧಿಸಿ ಕಟ್ಟಡ ಪೂರ್ಣ ವರದಿ ನೀಡಿ, ಕಂದಾಯ ನಿಗದಿಪಡಿಸುತ್ತಿದ್ದುದು ಸರಿಯಷ್ಟೆ. ಆದರೆ 2008ರ ನಂತರ ಶೇ.25 ರಿಂದ ಶೇ.5 ರಷ್ಟು ಉಲ್ಲಂಘನೆಯಾಗಿರುವ ಕಟ್ಟಡಗಳಿಗೆ ಕಟ್ಟಡ ಪೂರ್ಣಗೊಂಡ ವರದಿ ನೀಡ ಲಾಗುತ್ತಿತ್ತು. ಈಗ ಇದಕ್ಕೆ ಬದಲಾಗಿ ಕಟ್ಟಡಗಳಿಗೆ ನಿಗದಿ ಮಾಡುವ ಕಂದಾಯಕ್ಕೆ ಎರಡರಷ್ಟು ಕಂದಾಯ ನಿಗದಿ ಮಾಡಿರುವುದರಿಂದ ಸಾರ್ವಜನಿಕರಿಗೆ ಆರ್ಥಿಕ ತೊಂದರೆಯಾಗಿದೆ. ಅದು ಅಲ್ಲದೆ ಕಟ್ಟಡ ಪೂರ್ಣಗೊಂಡ ವರದಿ ಇಲ್ಲದ ವಾಣಿಜ್ಯ ಕಟ್ಟಡಗಳಿಗೆ ಸಣ್ಣ ಪುಟ್ಟ ವ್ಯಾಪಾರಸ್ಥರು ಉದ್ಯಮಿ ರಹದಾರಿ ಪಡೆಯಲು ಇದಕ್ಕೂ ಸಹ ಎರಡರಷ್ಟು ಹಣ ಸಂದಾಯ ಮಾಡಬೇಕಾಗುತ್ತದೆ. ಆದ್ದರಿಂದ ಸಂಬಂಧಪಟ್ಟ ಇಲಾಖೆ ಯೊಂದಿಗೆ ಚರ್ಚಿಸಿ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಈ ಮೂಲಕ ಮನವಿ.

–ಆರ್. ಜಯಕುಮಾರ್, ನಗರ ಪಾಲಿಕೆ ಮಾಜಿ ಸದಸ್ಯರು, ಮೈಸೂರು.

■ ಮುಡಾದಲ್ಲಿ ಎಲ್ಲವೂ ಅಯೋಮಯ!

ಮಾನ್ಯರೆ,

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ನಡೆಯುತ್ತಿರುವ ಬೆಳವಣಿಗೆಗಳು ಹೊಸ ಹೊಸ ತಿರುವುಗಳನ್ನು ಪಡೆಯುತ್ತಿವೆ. ಜಾರಿ ನಿರ್ದೇಶನಾಲಯ ಇತ್ತೀಚೆಗೆ 100 ಕೋಟಿ ಮೌಲ್ಯದ 92 ಮುಡಾ ನಿವೇಶನಗಳನ್ನು ಮುಟ್ಟುಗೋಲು ಹಾಕಿಕೊಂಡಿದೆ. ಇದಕ್ಕಿಂತ ಮುಂಚೆ 300 ಕೋಟಿ ಮೌಲ್ಯದ 160 ನಿವೇಶನಗಳನ್ನು ವಶಕ್ಕೆ ಪಡೆದಿತ್ತು. ಇದರೊಂದಿಗೆ ಜಾರಿನಿರ್ದೇಶನಾಲಯ ಒಟ್ಟು 252 ನಿವೇಶನಗಳನ್ನು ಮುಟ್ಟುಗೋಲು ಹಾಕಿಕೊಂಡಂತಾಗಿದೆ. ಸದರಿ ನಿವೇಶನಗಳನ್ನು ಮುಡಾದಿಂದ ಖರೀದಿಸಿದವರ ಪಾಡೇನು?

ಇದರ ಮಧ್ಯೆ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರವಾಗಿದ್ದ ಮುಡಾ ಈಗ ಮೈಸೂರು ಅಭಿವೃದ್ಧಿ ಪ್ರಾಧಿಕಾರವಾಗಿದೆ. ಮುಡಾ ಹಗರಣಗಳ ಬಗ್ಗೆ ಒಂದು ಕಡೆ ಲೋಕಾಯುಕ್ತ, ಮತ್ತೊಂದು ಕಡೆ ನಿವೃತ್ತ ನ್ಯಾಯಮೂರ್ತಿಗಳ ನೇತೃತ್ವದ ಏಕ ಸದಸ್ಯರ ಪೀಠ ತನಿಖೆ ನಡೆಸುತ್ತಿದೆ. ಇದರ ಮಧ್ಯೆ ಜಾರಿ ನಿರ್ದೇಶನಾಲಯ ಕೂಡ ತನಿಖೆ ನಡೆಸುತ್ತಿದ್ದು ಮುಡಾ ಇತಿಹಾಸದಲ್ಲಿ ಈ ರೀತಿಯ ತನಿಖೆಗಳು ಏಕಕಾಲದಲ್ಲಿ ನಡೆಯುತ್ತಿರುವುದು ಇದೇ ಮೊದಲಾಗಿದೆ. ಇದರ ಮಧ್ಯೆ ಮುಡಾದಲ್ಲಿ ಸಾರ್ವಜನಿಕ ಕೆಲಸ ಕಾರ್ಯಗಳು ಸ್ಥಗಿತಗೊಂಡು ಹಲವಾರು ತಿಂಗಳುಗಳು ಕಳೆದಿವೆ ಎಂದು ಹೇಳಲಾಗುತ್ತಿದೆ. ಒಟ್ಟಿನಲ್ಲಿ ಮುಡಾದಲ್ಲಿ ನಡೆಯುತ್ತಿರುವ ಬೆಳವಣಿಗೆಗಳು ಅಯೋಮಯವಾಗಿವೆ.

–ಕೆ.ವಿ.ವಾಸು, ವಕೀಲರು ಮತ್ತು ನೋಟರಿ, ಮೈಸೂರು

ಕನ್ನಡಿಗ–ತಮಿಳಿಗ ಮುನಿಸಿಕೊಳ್ಳಲೇಕೆ...!



–ಡಾ.ಐ.ಸೇಸುನಾಥನ್
ಕನ್ನಡ ಉಪನ್ಯಾಸಕರು, ಮೈಸೂರು.
sesunathan@gmail.com

1981ನೇ ಇಸ್ವಿ. ತಮಿಳುನಾಡಿನ ಮಧುರೈನಲ್ಲಿ 5ನೇ ವಿಶ್ವ ತಮಿಳು ಸಮ್ಮೇಳನ ನಡೆಯುತ್ತಿತ್ತು. ಆ ಸಮ್ಮೇಳನಕ್ಕೆ ವಿಶೇಷ ಆಹ್ವಾನಿತರಾಗಿ ಆಗಿನ ಕೇರಳ ಮುಖ್ಯಮಂತ್ರಿ ಇ.ಕೆ.ನಾಯನಾರ್ ಆಗಮಿಸಿದ್ದರು. ಆ ವೇದಿಕೆಯಲ್ಲಿ ನಾಯನಾರ್ ಅವರು 'ತಮಿಳು ಮತ್ತು ಮಲಯಾಳಂ ಭಾಷೆಗಳು ಅಕ್ಕ–ತಂಗಿಯರಂತೆ; ಅವು ಸೋದರ ಭಾಷೆಗಳು' ಎಂದು ಹೇಳಿದರು. ಬಳಿಕ ಮಾತನಾಡಿದ ಆಗಿನ ತಮಿಳುನಾಡು ಮುಖ್ಯಮಂತ್ರಿ ಎಂ.ಜಿ. ರಾಮಚಂದ್ರನ್ ಅವರು 'ನಾಯನಾರ್ ಹೇಳಿದಂತೆ ತಮಿಳು–ಮಲಯಾಳಂ ಭಾಷೆಗಳು ಅಕ್ಕ–ತಂಗಿಯರಂತೆ ಅಲ್ಲ; ತಾಯಿ–ಮಗಳಂತೆ. ತಮಿಳು ತಾಯಿ; ಮಲಯಾಳಂ ಮಗಳು' ಎಂದು ಬಣ್ಣಿಸಿದರು. ಈ ಹೇಳಿಕೆಯನ್ನು ನಾಯನಾರ್ ಆದಿಯಾಗಿ ಮಲಯಾಳಿಗಳು ಯಾರೂ ವಿರೋಧಿಸಲೂ ಇಲ್ಲ; ಅದಕ್ಕೆ ಮಹತ್ವವನ್ನೂ ನೀಡಲಿಲ್ಲ.

ಮೊನ್ನೆ ತಮಿಳು ನಟ ಕಮಲ್‌ಹಾಸನ್ ಅವರು ತಮ್ಮ 'ತಗ್ ಲೈಫ್' ಚಲನಚಿತ್ರದ ಆಡಿಯೋ ಬಿಡುಗಡೆ ಕಾರ್ಯಕ್ರಮದಲ್ಲಿ ವೇದಿಕೆಯ ಮುಂಭಾಗದಲ್ಲಿ ಆಸೀನರಾಗಿದ್ದ ಕನ್ನಡದ ನಟ ಶಿವರಾಜಕುಮಾರ್ ಅವರನ್ನು ಉದ್ದೇಶಿಸಿ, 'ತಮಿಳಿನಿಂದ ಹುಟ್ಟಿದ್ದೇ ನಿಮ್ಮ ಭಾಷೆ' ಎಂದು ಮಾತನಾಡಿದ್ದು ದೊಡ್ಡ ವಿವಾದಕ್ಕೆ ಕಾರಣವಾಯಿತು. ಕಮಲ್‌ಹಾಸನ್ ತಮ್ಮ ಚಿತ್ರರಂಗದ ಅನುಭವಗಳನ್ನು ಕುರಿತು ದೀರ್ಘವಾಗಿ ಮಾತನಾಡಿದ ಆ ಭಾಷಣದಲ್ಲಿ ಯಕಃಶ್ಚಿತ್ತಾಗಿ ಈ ಮಾತು ಬಂದು ಹೋಗುತ್ತದೆ. ಆ ಒಂದು ವಾಕ್ಯವನ್ನು ಹೊರತುಪಡಿಸಿದರೆ, ಕಮಲ್‌ಹಾಸನ್ ಆಡಿರುವ ಮಾತುಗಳಲ್ಲಿ ಕರ್ನಾಟಕ, ಕನ್ನಡ ಮತ್ತು ಡಾ.ರಾಜಕುಮಾರ್ ಕುಟುಂಬದ ಬಗ್ಗೆ ಅವರು ಹೊಂದಿರುವ ಅಭಿಮಾನ ವ್ಯಕ್ತವಾಯಿತು.

ಕಮಲ್‌ಹಾಸನ್ ಅವರ ಈ ಹೇಳಿಕೆ ಕರ್ನಾಟಕದಲ್ಲಿ ದೊಡ್ಡ ವಿವಾದವನ್ನು ಹುಟ್ಟು ಹಾಕಿದೆ. ಸಾಮಾಜಿಕ ಜಾಲತಾಣಗಳಲ್ಲಿ ತೀವ್ರ ಚರ್ಚೆಗೆ ಗ್ರಾಸವಾಗಿದೆ. ಕನ್ನಡಪರ ಸಂಘಟನೆಗಳು ಪ್ರತಿಭಟನೆಗಳನ್ನು ನಡೆಸಿವೆ. ಕರ್ನಾಟಕದಲ್ಲಿ 'ತಗ್ ಲೈಫ್' ಚಿತ್ರ ಪ್ರದರ್ಶನಕ್ಕೆ ನಿರ್ಬಂಧವನ್ನು ಹೇರಲಾಗಿದೆ. ಇನ್ನೊಂದೆಡೆ ಕಮಲ್‌ಹಾಸನ್ ತಾನು ಪ್ರೀತಿಯಿಂದಲೇ ಈ ಮಾತನ್ನು ಆಡಿರುವುದರಿಂದ ಕ್ಷಮೆ ಕೇಳುವುದಿಲ್ಲ ಎಂದೂ, ಕನ್ನಡ–ಕನ್ನಡಿಗರು–ಕರ್ನಾಟಕದ ಬಗ್ಗೆ ತನಗೆ ಯಾವುದೇ ದ್ವೇಷವಿಲ್ಲ ಎಂಬುದಾಗಿಯೂ ಸ್ಪಷ್ಟೀಕರಣ ನೀಡಿದ್ದಾರೆ. ಅಲ್ಲದೆ ತಾನು ಭಾಷಾ ವಿದ್ವಾಂಸನಲ್ಲದ ಕಾರಣ ಆ ಬಗ್ಗೆ ಮುಂದುವರಿದು ಮಾತನಾಡಲು ಇಚ್ಛಿಸುವುದಿಲ್ಲ ಎಂದೂ ನುಡಿದು ಸುಮ್ಮನಾಗಿದ್ದಾರೆ. ವಿಷಯ ಕೋರ್ಟ್ ಕಟಿಕಟೆ ಹತ್ತಿದೆ. ವಿಚಾರಣೆ ನಡೆಯುತ್ತಿದೆ.



ಕಮಲ್‌ಹಾಸನ್

ತಮಿಳುನಾಡಿನಲ್ಲಿ ಭಾಷೆ ಎಂಬುದು ಭಾವನಾತ್ಮಕ ವಿಷಯವಾಗಿದ್ದು, ಆಗಾಗ ಅದನ್ನು ರಾಜಕೀಯ ಅಸ್ತ್ರವನ್ನಾಗಿಯೂ ಬಳಸಲಾಗುತ್ತದೆ. ಕಮಲ್‌ಹಾಸನ್ ಅವರ ಈ ಹೇಳಿಕೆಗೆ ಕರ್ನಾಟಕದಲ್ಲಿ ವಿರೋಧ ವ್ಯಕ್ತವಾಗುತ್ತಿದ್ದಂತೆಯೇ, ತಮಿಳುನಾಡಿನಲ್ಲಿ ಅಲ್ಲಿಯವರೆಗೆ ಮಲಗಿದ್ದವರೆಲ್ಲ ಮೈ ಕೊಡವಿಕೊಂಡು ಮೇಲೆದ್ದು ತಮಿಳಿನ ಪ್ರಾಚೀನತೆ ಮತ್ತು ಕನ್ನಡ–ತಮಿಳು ಭಾಷೆಗಳ ಆಳ–ಅಗಲ ಕುರಿತು ಸಾಮಾಜಿಕ ಜಾಲತಾಣಗಳಲ್ಲಿ ಚರ್ಚಿಸತೊಡಗಿದ್ದಾರೆ. ತಮಿಳುನಾಡಿನ ಬಹುತೇಕ ರಾಜಕೀಯ ಪಕ್ಷಗಳು, ಸಂಘಟನೆಗಳು ಮಾತ್ರವಲ್ಲದೆ ಕೆಲವು ವಿದ್ವಾಂಸರೂ ಕಮಲ್‌ಹಾಸನ್‌ರ ಹೇಳಿಕೆಯನ್ನು ಸಮರ್ಥಿಸುತ್ತ, ಅವರ ಬೆನ್ನಿಗೆ ನಿಂತಿದ್ದಾರೆ.

> “ದಕ್ಷಿಣ ಭಾರತೀಯ ಭಾಷೆಗಳನ್ನು 'ದ್ರಾವಿಡ ಭಾಷೆಗಳು' ಎಂದು ಮೊದಲು ಕರೆದವರೇ ಕಾಲ್ಡ್‌ವೆಲ್. ಸಂಸ್ಕೃತದ ಕುಮಾರಿಲ ಭಟ್ಟನ 'ತಂತ್ರವಾರ್ತಿಕ' ಮುಂತಾದ ಕೃತಿಗಳಲ್ಲಿ 'ದ್ರಾವಿಡ' ಎಂಬ ಪದವನ್ನು ದಕ್ಷಿಣ ಭಾರತದ ಭೌಗೋಳಿಕ ಪ್ರದೇಶವನ್ನು ಸೂಚಿಸಲು ಬಳಸಿರುವುದರಿಂದ, ಕಾಲ್ಡ್‌ವೆಲ್ ಅವರು ದಕ್ಷಿಣದ ಭಾರತದ ಭಾಷೆಗಳನ್ನು ಇದೇ ಹೆಸರಿನಿಂದ ಕರೆದರು.

ಕನ್ನಡ, ತಮಿಳು, ತೆಲುಗು ಮಲಯಾಳಂ, ತುಳು ಮುಂತಾದ ಭಾಷೆಗಳು ದ್ರಾವಿಡ ಭಾಷಾ ವರ್ಗಕ್ಕೆ ಸೇರಿದ್ದು, ಭಾಷಾ ವಿಜ್ಞಾನಿಗಳು ಈ ವರ್ಗದಲ್ಲಿ ಸುಮಾರು 25ಕ್ಕೂ ಹೆಚ್ಚು ಭಾಷೆಗಳನ್ನು ಪಟ್ಟಿ ಮಾಡಿದ್ದಾರೆ. ಪ್ರಾರಂಭದಲ್ಲಿ ದ್ರಾವಿಡ ಭಾಷೆಗಳು ಇಂಡೋ–ಆರ್ಯನ್ ಅಥವಾ ಸಂಸ್ಕೃತ ಜನ್ಯ ಎಂದು ಭಾವಿಸಲಾಗಿತ್ತು. ಆದರೆ ಧರ್ಮ ಪ್ರಚಾರಕ್ಕಾಗಿ ಭಾರತಕ್ಕೆ ಬಂದ ವಿದೇಶಿ ಕ್ರೈಸ್ತ ಮಿಷನರಿ ಬಿಷಪ್ ರಾಬರ್ಟ್ ಕಾಲ್ಡ್‌ವೆಲ್ ಅವರು ಭಾರತೀಯ ಭಾಷೆಗಳನ್ನು ಅಧ್ಯಯನ ಮಾಡಿ 'ದ್ರಾವಿಡ ಭಾಷೆಗಳು ಸಂಸ್ಕೃತ ಜನ್ಯವಲ್ಲ' ಎಂದು ನಿರೂಪಿಸಿದರು. ಕ್ರಿ.ಶ. 1838ರಲ್ಲಿ ಭಾರತಕ್ಕೆ ಆಗಮಿಸಿದ ಕಾಲ್ಡ್‌ವೆಲ್, ಮೊದಲು ತಮಿಳು ಭಾಷೆಯನ್ನು ಕಲಿತರು. ಜೊತೆಗೆ ಲಿಪಿ ಇರುವ ಮತ್ತು ಲಿಪಿ ಇಲ್ಲದ ದ್ರಾವಿಡ ಭಾಷೆಗಳನ್ನು ಕುರಿತು ಅಧ್ಯಯನ ಮಾಡಿ, 'ದ್ರಾವಿಡ ಭಾಷೆಗಳ ತೌಲನಿಕ ವ್ಯಾಕರಣ' ಗ್ರಂಥವನ್ನು ಕ್ರಿ.ಶ.1856ರಲ್ಲಿ ಪ್ರಕಟಿಸಿದರು. ಆ ಮೂಲಕ ದ್ರಾವಿಡ ಭಾಷೆಗಳು ಇಂಡೋ–ಯುರೋಪಿಯನ್ ಭಾಷಾ ವರ್ಗಕ್ಕಿಂತ ಭಿನ್ನ ಹಾಗೂ ಸ್ವತಂತ್ರ ಎಂದು ತೋರಿಸಿಕೊಟ್ಟರು. ಇವರನ್ನು 'ದ್ರಾವಿಡ ಭಾಷಾ ವಿಜ್ಞಾನದ ಜನಕ' ಎಂದು ಕರೆಯಲಾಗುತ್ತದೆ. ತಮಿಳುನಾಡಿನ ತಿರುನೆಲ್ವೇಲಿಯಲ್ಲಿ ಸುಮಾರು 50 ವರ್ಷಗಳ ಕಾಲ ನೆಲೆಸಿದ್ದ ಕಾಲ್ಡ್‌ವೆಲ್ ಅವರು, ವೇದನಾಯಗಂ ಪಿಳ್ಳೈ ಮುಂತಾದವರ ನೆರವಿನೊಂದಿಗೆ ತಮಿಳನ್ನು ಕಲಿತರು. ಜೊತೆಗೆ ತೆಲುಗು, ಮಲಯಾಳಂ ಮತ್ತು ಕನ್ನಡ ಭಾಷೆಗಳನ್ನು ಬಲ್ಲವರಾಗಿದ್ದರು. ತಮಿಳುನಾಡು, ನುಡಿ, ಸಾಹಿತ್ಯಕ್ಕೆ ಅವರು ಸಲ್ಲಿಸಿದ ಸೇವೆಗಾಗಿ ತಮಿಳುನಾಡು ಸರ್ಕಾರ ಮರೀನಾ ಬೀಚ್‌ನಲ್ಲಿ ಕಾಲ್ಡ್‌ವೆಲ್ಲರಿಗೆ ಪ್ರತಿಮೆಯನ್ನು ಸ್ಥಾಪಿಸಿ, ಗೌರವಿಸಿದೆ.

ಕಾಲ್ಡ್‌ವೆಲ್ ಅವರು ಎಲ್ಲಾ ದ್ರಾವಿಡ ಭಾಷೆಗಳೂ 'ಮೂಲ–ದ್ರಾವಿಡ' (Proto-Dravidian) ಭಾಷೆಯಿಂದ ಕವಲೊಡೆದಿರಬೇಕು ಎಂದು ಅಭಿಪ್ರಾಯಪಟ್ಟರು. ಆದರೆ ಭಾಷಾ ವಿದ್ವಾಂಸರ ಪ್ರಕಾರ, ಮೂಲ–ದ್ರಾವಿಡ ಎಂಬುದು ದ್ರಾವಿಡ ಭಾಷೆಗಳ ಅಧ್ಯಯನಕ್ಕಾಗಿ ಕಾಲ್ಡ್‌ವೆಲ್ ಅವರು ಪುನರ್ ರಚಿಸಿದ (reconstructed) ಒಂದು ಕಾಲ್ಪನಿಕ ಭಾಷೆಯೇ ಹೊರತು ಅದು ನೈಜ ಭಾಷೆಯಲ್ಲ; ಇದನ್ನು ಯಾವ ಲಿಪಿಯಲ್ಲಿ ಬರೆಯಲಾಗಿದೆ ಮತ್ತು ಯಾವ ಪ್ರದೇಶದಲ್ಲಿ ಬಳಕೆಯಲ್ಲಿತ್ತು ಎಂದು ನಿರ್ದಿಷ್ಟವಾಗಿ ಹೇಳಲು ಸಾಧ್ಯವಿಲ್ಲ. ತಮಿಳರು ತಮ್ಮ ಭಾಷೆಯ ಮೇಲಿನ ಅಭಿಮಾನದಿಂದಾಗಿ 'ಪ್ರಾಚೀನ ತಮಿಳೇ ಮೂಲ ದ್ರಾವಿಡ ಭಾಷೆ' ಎಂದು ಹೇಳಿಕೊಳ್ಳುವುದುಂಟು. 'ಕಲ್ಲು–ಮಣ್ಣು (ಭೂಮಿ) ಸೃಷ್ಟಿಯಾಗುವ ಮೊದಲೇ ಶೂರರಾಗಿ ಕಾಣಿಸಿಕೊಂಡ ಪ್ರಪಂಚದ ಮೊದಲ ಜನಾಂಗ ತಮಿಳು ಜನಾಂಗ' (ಕಲ್ ತೋನ್ರಿ ಮಣ್ ತೋನ್ರಾ ಕಾಲತ್ತೇ ಮುನ್ ತೋನ್ರಿಯ ಮೂತ್ತಕುಡಿ) ಎಂಬ ಮಾತು ತಮಿಳರಲ್ಲಿ ಜನಜನಿತವಾಗಿದೆ! 'ತಮಿಳು ವಿಶ್ವಕ್ಕೇ ತಾಯಿ ಭಾಷೆ' ಎಂದು ಹೇಳುವ ಅಂಧಾಭಿಮಾನಿಗಳೂ ಇದ್ದಾರೆ! ಡಿವಿಜಿ ಅವರ ಪುತ್ರರೂ ಮೂಲತಃ ತಮಿಳರೂ ಆದ ಕನ್ನಡದ ಪ್ರಸಿದ್ಧ ಲೇಖಕ ಬಿಜಿಎಲ್ ಸ್ವಾಮಿ ಅವರು ತಮ್ಮ 'ತಮಿಳು ತಲೆಗಳ ನಡುವೆ' ಎಂಬ ಕೃತಿಯಲ್ಲಿ ತಮಿಳರ ಇಂತಹ ಅಂಧಾಭಿಮಾನವನ್ನು ವ್ಯಂಗ್ಯ ಮಾಡಿರುವುದನ್ನು ಕಾಣಬಹುದು.

ಯಾವುದೇ ಭಾಷೆಯ ಮೂಲವನ್ನು ಹುಡುಕುವುದು ನದಿ ಮೂಲ, ಋಷಿ ಮೂಲವನ್ನು ಹುಡುಕಿದ್ದಷ್ಟೇ ಕಷ್ಟ. ಯಾವ ಭಾಷೆಯನ್ನೂ ಇನ್ನೊಂದು ಭಾಷೆಯಿಂದ ಹುಟ್ಟಿದೆ ಎಂದು ಹೇಳಲು ಸಾಧ್ಯವಿಲ್ಲ. ಭೌಗೋಳಿಕವಾಗಿ ಮತ್ತು ಸಾಂಸ್ಕೃತಿಕವಾಗಿ ಭಾಷೆಗಳು ಪರಸ್ಪರ ಪ್ರಭಾವಕ್ಕೆ ಒಳಗಾಗುತ್ತವೆ. ಒಂದು ಭಾಷೆಯು ಆಡು ನುಡಿಯಾಗಿ ಹಲವಾರು ವರ್ಷಗಳಿಂದ ರೂಢಿಯಲ್ಲಿದ್ದು, ಬಳಿಕ ಲಿಪಿ ರೂಪವನ್ನು ಪಡೆದು, ಶಾಸನಗಳು ಮತ್ತು ಗ್ರಂಥಗಳು ರಚನೆಯಾಗುತ್ತವೆ. ಇದು ನೂರಾರು ವರ್ಷಗಳ ಅವಧಿಯಲ್ಲಿ ನಡೆಯುವ ಪ್ರಕ್ರಿಯೆಯಾಗಿದೆ. ಯಾವ ಭಾಷೆಯೂ ಇದ್ದಕ್ಕಿದ್ದಂತೆ ಹುಟ್ಟುವುದಿಲ್ಲ.

ಪ್ರತಿಯೊಬ್ಬರೂ ತಂತಮ್ಮ ಭಾಷೆಯ ಬಗ್ಗೆ ಪ್ರೀತಿ, ಅಭಿಮಾನವನ್ನು ಹೊಂದುವುದು ತಪ್ಪಲ್ಲ. ನನ್ನ ಭಾಷೆ ಶ್ರೇಷ್ಠವೆಂದು ಹೇಳಿದ ಮಾತ್ರಕ್ಕೆ ಇತರ ಭಾಷೆಗಳೆಲ್ಲವೂ ಕನಿಷ್ಠ ಎಂದು ಅರ್ಥವಾಗುವುದಿಲ್ಲ.

ಪ್ರತಿಯೊಂದು ಭಾಷೆಯೂ ತನ್ನದೇ ವೈಶಿಷ್ಟ್ಯ ಹಾಗೂ ಸಾಹಿತ್ಯ ಸಮೃದ್ಧಿಯನ್ನು ಹೊಂದಿರುತ್ತದೆ. ಇಲ್ಲಿ ಯಾವುದೂ ಮೇಲಲ್ಲ, ಕೀಳೂ ಅಲ್ಲ. ಅದರಲ್ಲಿಯೂ ವಿಶೇಷವಾಗಿ ಕನ್ನಡ–ತಮಿಳು ಭಾಷೆಗಳು ಬೇರೆ ಎಲ್ಲಾ ಭಾಷೆಗಳಿಗಿಂತ ನಿಕಟ ಸಾಹಿತ್ಯಿಕ ಮತ್ತು ಸಾಂಸ್ಕೃತಿಕ ಸಂಬಂಧಗಳನ್ನು ಹೊಂದಿದ್ದು, ಕನ್ನಡಿಗರು ಮತ್ತು ತಮಿಳರು ಒಂದೇ ಕುಟುಂಬದ ಸೋದರರಾಗಿದ್ದಾರೆ. ಇಲ್ಲಿ ಪರಸ್ಪರ ಮುನಿಸಿಕೊಳ್ಳಲು ಕಾರಣಗಳಿಲ್ಲ; ಅದಕ್ಕೆ ಅವಕಾಶ ನೀಡುವುದೂ ಸಲ್ಲ.

ಇನ್ವೆಸ್ಟ್ ಕರ್ನಾಟಕ–2025

98 ಕಂಪನಿಗಳಿಂದ 6.24 ಲಕ್ಷ ಕೋಟಿ ಹೂಡಿಕೆ ಒಡಂಬಡಿಕೆ; ಆರು ಲಕ್ಷ ಉದ್ಯೋಗ ಸೃಷ್ಟಿ

ಬೃಹತ್ ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್ ಮಾಹಿತಿ

- 18 ಕೈಗಾರಿಕಾ ಪ್ರದೇಶಗಳ 44165 ಎಕರೆ ವಿಶೇಷ ಹೂಡಿಕೆ ವಲಯ
- 2025–30 ವೇಳೆಗೆ 7.50 ಲಕ್ಷ ಕೋಟಿ ಹೂಡಿಕೆ; 20 ಲಕ್ಷ ಉದ್ಯೋಗಾವಕಾಶ

ಬೆಂಗಳೂರು, ಜೂ. 13(ಕೆಎಂಶಿ)– ಇನ್ವೆಸ್ಟ್ ಕರ್ನಾಟಕ–2025 ಮೂಲಕ 98 ಕಂಪನಿಗಳೊಂದಿಗೆ ಸುಮಾರು 6.24 ಲಕ್ಷ ಕೋಟಿ ರೂ. ಹೂಡಿಕೆಯ ಒಡಂಬಡಿಕೆ ಮಾಡಿಕೊಳ್ಳಲಾಗಿದ್ದು, ಯೋಜನೆಗಳ ಅನುಷ್ಠಾನದಿಂದ ರಾಜ್ಯದಲ್ಲಿ 6 ಲಕ್ಷ ಉದ್ಯೋಗ ಸೃಷ್ಟಿಯಾಗಲಿದೆ ಎಂದು ಬೃಹತ್ ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್ ಇಂದಿಲ್ಲಿ ತಿಳಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಇಲಾಖೆಯ ಎರಡು ವರ್ಷಗಳ ಸಾಧನೆ ಬಿಡುಗಡೆ ಮಾಡಿ ಮಾತನಾಡಿದ ಅವರು, ಒಟ್ಟು ಯೋಜನೆಗಳ ಪೈಕಿ ಶೇಕಡ 75ರಷ್ಟು ಬೆಂಗಳೂರಿನ ಹೊರಗೆ ಸ್ಥಾಪನೆ ಆಗಲಿದ್ದು, ಶೇ.45ರಷ್ಟು ಉತ್ತರ ಕರ್ನಾಟಕ ಭಾಗದಲ್ಲಿ ಆರಂಭವಾಗಲಿದೆ ಎಂದರು.

ರಾಜ್ಯದಲ್ಲಿ 2025–30ರ ವೇಳೆಗೆ 7.50 ಲಕ್ಷ ಕೋಟಿ ರೂ. ಬಂಡವಾಳ ಹೂಡಿಕೆ ಹಾಗೂ 20 ಲಕ್ಷ ಜನರಿಗೆ ಉದ್ಯೋಗ ಸೃಷ್ಟಿಸುವ ಉದ್ದೇಶದೊಂದಿಗೆ ಹೊಸ ಕೈಗಾರಿಕಾ ನೀತಿ ತರಲಾಗಿದೆ.

ಕಳೆದ 2 ವರ್ಷಗಳಲ್ಲಿ 6,57,660 ಕೋಟಿ ರೂ. ಹೂಡಿಕೆಯ 115 ಒಡಂಬಡಿಕೆ ಮಾಡಿಕೊಂಡಿದ್ದು ಸುಮಾರು 2.33 ಲಕ್ಷ ಉದ್ಯೋಗ ಸೃಷ್ಟಿಯಾಗುವ ನಿರೀಕ್ಷೆ ಇದೆ. ರಾಜ್ಯದಲ್ಲಿ ಸಮತೋಲನ ಕೈಗಾರಿಕಾ ಅಭಿವೃದ್ಧಿ ಖಚಿತಪಡಿಸಿಕೊಳ್ಳಲು ಹಿಂದುಳಿದ ಜಿಲ್ಲೆಗಳು ಮತ್ತು ತಾಲೂಕುಗಳಲ್ಲಿ ಹೂಡಿಕೆಗೆ ಹೆಚ್ಚಿನ ಪ್ರೋತ್ಸಾಹ ನೀಡಲಾಗುತ್ತದೆ. ಕರ್ನಾಟಕ ವಿಶೇಷ ಹೂಡಿಕೆ ಪ್ರದೇಶ ಅಧಿನಿಯಮದಡಿ 18 ಕೈಗಾರಿಕಾ ಪ್ರದೇಶಗಳ 44,165 ಎಕರೆಯನ್ನು ವಿಶೇಷ ಹೂಡಿಕೆ ಪ್ರದೇಶವೆಂದು ಘೋಷಿಸಲಾಗಿದೆ.

ಪ್ರವಾಸೋದ್ಯಮ, ಶೈಕ್ಷಣಿಕ ಚಟುವಟಿಕೆ, ವಾಣಿಜ್ಯ ವಹಿವಾಟು, ಕೃಷಿ ಉತ್ಪನ್ನಗಳ ಸಾಗಾಟ ದೃಷ್ಟಿಯಿಂದ ಕರ್ನಾಟಕದ ಎಲ್ಲ ದಿಕ್ಕುಗಳಲ್ಲೂ ವಿಮಾನ ನಿಲ್ದಾಣ ನಿರ್ಮಾಣಕ್ಕೆ ಆದ್ಯತೆ ನೀಡಲಾಗಿದೆ.



ಇದರ ಭಾಗವಾಗಿ ಅರಮನೆ ನಗರಿ ಮೈಸೂರು ವಿಮಾನ ನಿಲ್ದಾಣ ರನ್–ವೇ ವಿಸ್ತರಣೆ, ಹಾಸನ ಜಿಲ್ಲಾ ಕೇಂದ್ರದಿಂದ 6 ಕಿ.ಮೀ. ದೂರದ ಬೂವನಹಳ್ಳಿಯಲ್ಲಿ 193.65 ಕೋಟಿ ರೂ. ವೆಚ್ಚದಲ್ಲಿ ವಿಮಾನ ನಿಲ್ದಾಣ, ಶಿವಮೊಗ್ಗ ಜಿಲ್ಲಾ ಕೇಂದ್ರದಿಂದ 15 ಕಿ.ಮೀ. ಅಂತರದಲ್ಲಿ 449.22 ಕೋಟಿ ರೂ. ವೆಚ್ಚದಲ್ಲಿ ವಿಮಾನ ನಿಲ್ದಾಣಕ್ಕೆ ಚಾಲನೆ, 727 ಎಕರೆ ವಿಸ್ತೀರ್ಣದಲ್ಲಿ 347.92 ಕೋಟಿ ರೂ. ವೆಚ್ಚದಲ್ಲಿ ವಿಜಯಪುರ ವಿಮಾನ ನಿಲ್ದಾಣ ನಿರ್ಮಾಣ ಸೇರಿವೆ.

ವಿಮಾನ ಹಾರಾಟ ವಿಸ್ತರಣೆ: ಈ ಮೊದಲಿದ್ದ ಶಿವಮೊಗ್ಗ–ಬೆಂಗಳೂರು ವಿಮಾನ ಹಾರಾಟ ವ್ಯವಸ್ಥೆಯನ್ನು ಶಿವಮೊಗ್ಗ–ಹೈದರಾಬಾದ್, ಶಿವಮೊಗ್ಗ–ತಿರುಪತಿ, ಶಿವಮೊಗ್ಗ–ಗೋವಾಕ್ಕೆ ವಿಸ್ತರಿಸಲಾಗಿದೆ. ಕರ್ನಾಟಕ ವಿದೇಶಿ ಹೂಡಿಕೆ ಆಕರ್ಷಣೆಯಲ್ಲಿ ದೇಶದಲ್ಲಿ 2ನೇ ಸ್ಥಾನದಲ್ಲಿದೆ, ಸೇವಾ ವಲಯ ರಫ್ತಿನಲ್ಲಿ 1ನೇ ಸ್ಥಾನ, ಸರಕು ರಫ್ತಿನಲ್ಲಿ 4ನೇ ಸ್ಥಾನದಲ್ಲಿದೆ.

ತೈವಾನ್‌ನ ಫಾಕ್ಸ್ ಕಾನ್ ಕಂಪನಿ ಮೊಬೈಲ್ ಫೋನ್ ತಯಾರಿಕಾ ಘಟಕವನ್ನು ಸ್ಥಾಪಿಸಿದ್ದು, ಸದ್ಯದಲ್ಲೇ ಉತ್ಪಾದನೆ ಆರಂಭಿಸಲಿದೆ. ಭಾರತೀಯ ಅನಿಲ ಪ್ರಾಧಿಕಾರ ರಾಜ್ಯದಲ್ಲಿ 1,000 ಮೆಗಾವ್ಯಾಟ್ ಸಾಮರ್ಥ್ಯದ ಮರು ನವೀಕರಣ ವಿದ್ಯುತ್ ಉತ್ಪಾದನಾ ಘಟಕ ಸ್ಥಾಪನೆಗೆ ಮುಂದಾಗಿದ್ದು, 5,000 ಕೋಟಿ ರೂ. ಬಂಡವಾಳ ಹೂಡಿಕೆ ಒಡಂಬಡಿಕೆ ಮಾಡಿಕೊಂಡಿದೆ.

ಕೈಗಾರಿಕಾ ಪ್ರದೇಶಗಳಿಗೆ ನದಿ ಮೂಲಗಳಿಂದ ನೀರು ಒದಗಿಸಲು 3,600 ಕೋಟಿ ರೂ. ಸಮಗ್ರ ಯೋಜನೆ ರೂಪಿಸಲಾಗಿದೆ. ಕರ್ನಾಟಕ್ ಸಾಬೂನು ಮತ್ತು ಮಾರ್ಜಕ ಸಂಸ್ಥೆ (ಕೆಎಸ್‌ಡಿಎಲ್) 2024–25ರಲ್ಲಿ 416 ಕೋಟಿ ರೂ.ಲಾಭ ದಾಖಲೆ ಮಾಡಿದ್ದು, ಪ್ರೀಮಿಯಂ ಸೋಪ್, ಶೇವ್ ಜೆಲ್, ಹ್ಯಾಂಡ್ ವಾಶ್, ಕುಡಿಯುವ ನೀರು ಸೇರಿದಂತೆ 21 ಹೊಸ ಉತ್ಪನ್ನ ಬಿಡುಗಡೆ ಮಾಡಲಾಗಿದ್ದು, ಸದ್ಯದಲ್ಲೇ ಸುಗಂಧದ್ರವ್ಯಗಳನ್ನೂ ಮಾರುಕಟ್ಟೆಗೆ ಪರಿಚಯಿಸಲಾಗುತ್ತಿದ್ದು, 2028ರ ವೇಳೆಗೆ ಸಂಸ್ಥೆಯ ವಾರ್ಷಿಕ ವಹಿವಾಟು 5,000 ಕೋಟಿ ರೂ. ತಲುಪಲಿದೆ.

ರೈಲು ಯೋಜನೆ: ರಾಜ್ಯದಲ್ಲಿ 9 ರೈಲು ಮಾರ್ಗ ಯೋಜನೆಗಳು ಪ್ರಗತಿಯಲ್ಲಿದ್ದು ಕೇಂದ್ರ ರೈಲ್ವೆ ಖಾತೆ ಸಹಾಯಕ ಸಚಿವ ವಿ. ಸೋಮಣ್ಣ ಸಹಕಾರದೊಂದಿಗೆ ಅಗತ್ಯವಿರುವ ಕಡೆಗಳಲ್ಲಿ ಭೂಸ್ವಾಧೀನ ಪ್ರಕ್ರಿಯೆ ಚುರುಕುಗೊಳಿಸಲು ಕ್ರಮ ಕೈಗೊಳ್ಳಲಾಗಿದೆ.

ಬೆಂಗಳೂರು ಉಪನಗರ ರೈಲು ಯೋಜನೆಯಡಿ 15,767 ಕೋಟಿ ರೂ. ಅಂದಾಜು ವೆಚ್ಚದಲ್ಲಿ 57 ರೈಲು ನಿಲ್ದಾಣ ಒಳಗೊಂಡ, 148 ಕಿ.ಮೀ. ಉದ್ದದ ರೈಲು ಮಾರ್ಗ ನಿರ್ಮಿಸಲಾಗುವುದು. ಯೋಜನೆಯನ್ನು ತುಮಕೂರು, ಮೈಸೂರು, ಕೋಲಾರ, ಚಿಕ್ಕಬಳ್ಳಾಪುರ, ಗೌರಿಬಿದನೂರು, ಮಾಲೂರು, ಬಂಗಾರಪೇಟೆ, ಮಾಗಡಿ, ಹೊಸೂರಿಗೂ ವಿಸ್ತರಿಸುವ ಉದ್ದೇಶ ಸರ್ಕಾರದ್ದಾಗಿದೆ.

ಮಡಿಕೇರಿಯಲ್ಲಿ ಹೆಲಿಪೋರ್ಟ್: ಚಿಕ್ಕಮಗಳೂರು, ಮಡಿಕೇರಿ ಮತ್ತು ಹಂಪಿಯಲ್ಲಿ ಹೆಲಿಪೋರ್ಟ್ ನಿರ್ಮಾಣಕ್ಕೆ ಕಾರ್ಯಸಾಧ್ಯತಾ ಮತ್ತು ವಿಸ್ತೃತ ಯೋಜನಾ ವರದಿ ಸಿದ್ಧಪಡಿಸಲಾಗಿದೆ ಎಂದು ತಿಳಿಸಿದರು.

ಅಪಮಾನದಿಂದ ಪಾರಾಗಲು ಮರು ಸಮೀಕ್ಷೆಯ ನಾಟಕ

- ಪಾಲಿಕೆ ಮಾಜಿ ಸದಸ್ಯ ಕೆ.ವಿ. ಶ್ರೀಧರ್ ಪ್ರತಿಕ್ರಿಯೆ
- ಜಾತಿ ಜನಗಣತಿ ಮರು ಸಮೀಕ್ಷೆ ಅನಗತ್ಯ

ಮೈಸೂರು, ಜೂ.13– ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ಸಾಮಾಜಿಕ, ಶೈಕ್ಷಣಿಕ (ಜಾತಿ ಜನಗಣತಿ) ವರದಿ ಜಾರಿಗೆ ಬದಲಾಗಿ ಮರು ಸಮೀಕ್ಷೆ ಮಾಡುವಂತೆ ರಾಜ್ಯ ಸರಕಾರಕ್ಕೆ ಕಾಂಗ್ರೆಸ್ ಹೈಕಮಾಂಡ್ ಸೂಚಿಸಿರುವುದು 'ವರದಿ ಸರಿಯಿಲ್ಲ' ಎಂಬುದಕ್ಕೆ ಸಾಕ್ಷಿಯಾಗಿದೆ. ಅಲ್ಲದೆ, ಮುಂದಿನ ದಿನಗಳಲ್ಲಿ ಕೇಂದ್ರ ನಡೆಸುವ ಸಮೀಕ್ಷೆಗೂ ರಾಜ್ಯದ ಸಮೀಕ್ಷೆಗೂ ಇರಲಿರುವ ಅಜಗಜಾಂತರ ವ್ಯತ್ಯಾಸದಿಂದ ಆಗಲಿರುವ ಸಂಭವನೀಯ ಅಪಮಾನದಿಂದ ತಪ್ಪಿಸಿಕೊಳ್ಳುವ ನಾಟಕವಿದು ಎಂದು ನಗರ ಪಾಲಿಕೆ ಮಾಜಿ ಸದಸ್ಯ ಕೆ.ವಿ. ಶ್ರೀಧರ್ ವ್ಯಂಗ್ಯವಾಡಿದ್ದಾರೆ.



ವರದಿ ಸ್ವೀಕರಿಸುವುದಕ್ಕೂ ಮೊದಲೇ ರಾಜ್ಯದ ಸಾಕಷ್ಟು ಪ್ರಮುಖರು, ಸಾರ್ವಜನಿಕರು, ಮಾಧ್ಯಮಗಳು ವರದಿಯ ಸತ್ಯಾಸತ್ಯತೆ ಬಗ್ಗೆ ಅನು ಮಾನಿಸಿದ್ದವು. ಅಲ್ಲದೆ, ವರದಿ ವೈಜ್ಞಾನಿಕವಾಗಿಲ್ಲ ಎಂದು ನಾನಾ ಮಾನದಂಡದ ಮೇಲೆ ಹೇಳಿದ್ದವು. ಆದರೆ, ಸಾರ್ವಜನಿಕರ, ಸಂಘ–ಸಂಸ್ಥೆಗಳ ಮಾತಿಗೆ ಕಿಮ್ಮತ್ತು ನೀಡದ ರಾಜ್ಯ ಸರಕಾರ 10 ವರ್ಷಗಳ ಹಿಂದೆ ತಯಾರಿಸಿದ್ದ ಸಮೀಕ್ಷಾ ವರದಿಯನ್ನು ಸ್ವೀಕರಿಸಿ ಜಾರಿಗೊಳಿಸಲು ಮುಂದಾಗಿತ್ತು. ಆದರೆ, ಸರಕಾರದ ನಡೆಯನ್ನು ಸ್ವತಃ ಒಪ್ಪದ ಹೈಕಮಾಂಡ್ ವರದಿ ವೈಜ್ಞಾನಿಕವಾಗಿಲ್ಲ. ವೈಜ್ಞಾನಿಕವಾಗಿ ಮತ್ತೊಮ್ಮೆ ಸಮೀಕ್ಷೆ ನಡೆಸಿ ಎಂದು ಹೇಳಿರುವುದು ರಾಜ್ಯ ಕಾಂಗ್ರೆಸ್ ನಾಯಕರ ಮುಖಕ್ಕೆ ಮಂಗಳಾರತಿ ಮಾಡಿದಂತಾಗಿದೆ.

ಈ ಬಾರಿಯ ಕೇಂದ್ರ ಬಜೆಟ್‌ನಲ್ಲಿ ಮುಂಬರುವ ಜನಗಣತಿ ಜೊತೆಗೆ ಜಾತಿ ಜನಗಣತಿಯನ್ನು ಮಾಡುವ ಬಗ್ಗೆ ಸ್ವತಃ ಕೇಂದ್ರ ಸರಕಾರವೇ ಘೋಷಿಸಿತು. ಇದರಿಂದ ಎಚ್ಚೆತ್ತ ಕಾಂಗ್ರೆಸ್ ಹೈಕಮಾಂಡ್ ಕೇಂದ್ರ ಸರಕಾರ ಮುಂದಿನ ವರ್ಷ ಜಾತಿಜನಗಣತಿ ನಡೆಸಿದಾಗ ಅಲ್ಲಿರುವ ಅಂಕಿ–ಅಂಶಗಳಿಗೂ ಕಾಂತರಾಜು ಆಯೋಗದ ವರದಿಗೂ ಅಜಗಜಾಂತರ ವ್ಯತ್ಯಾಸ ಇರಲಿರುವುದನ್ನು ಅರಿತು ಆಗುವ ಮುಜುಗರದಿಂದ ಪಾರಾಗಲು ಮರು ಸಮೀಕ್ಷೆಗೆ ಸೂಚಿಸಿದೆ.

ರಾಜ್ಯದ ಸಮೀಕ್ಷೆ ವೈಜ್ಞಾನಿಕವಾಗಿಲ್ಲ ಎಂಬುದು ಕಾಂಗ್ರೆಸ್ ಹೈಕಮಾಂಡ್‌ಗೆ ಈ ಮೊದಲೇ ಗೊತ್ತಿತ್ತು. ಗೊತ್ತಿದ್ದರೂ ಇಷ್ಟು ದಿನ ಸುಮ್ಮನಿದ್ದು, ಇದೀಗ ಮರು ಸಮೀಕ್ಷೆಗೆ ಸೂಚಿಸಿದೆ. ಆದರೆ, ಈಗಾಗಲೇ ಕೇಂದ್ರ ಸರಕಾರವೇ ಸಮೀಕ್ಷೆಗೆ ಮುಂದಾಗಿರುವಾಗ ರಾಜ್ಯದಿಂದ ಮತ್ತೊಂದು ಸಮೀಕ್ಷೆ ಅನಿವಾರ್ಯವಿದೆಯೇ ಎಂಬುದು ಪ್ರಶ್ನೆ?

'ಥಗ್ ಲೈಫ್' ಪ್ರದರ್ಶನಕ್ಕೆ ನಿಷೇಧ

ಸರ್ಕಾರಕ್ಕೆ ಸುಪ್ರೀಂ ನೋಟಿಸ್

ನವದೆಹಲಿ: ಹಿರಿಯ ಚಲನಚಿತ್ರ ನಿರ್ದೇಶಕ, ನಿರ್ಮಾಪಕ ಮಣಿರತ್ನಂ ಮತ್ತು ಸೂಪರ್‌ಸ್ಟಾರ್ ಕಮಲ್ ಹಾಸನ್ ಅವರ 'ಥಗ್ ಲೈಫ್' ಚಿತ್ರ ಪ್ರದರ್ಶನದ ಮೇಲೆ ಕರ್ನಾಟಕ ಸರ್ಕಾರ ವಿಧಿಸಿರುವ 'ನ್ಯಾಯಾಂಗೇತರ ನಿಷೇಧ'ವನ್ನು ಪ್ರಶ್ನಿಸಿ ಸಲ್ಲಿಸಲಾದ ಅರ್ಜಿ ವಿಚಾರಣೆ ನಡೆಸಿದ ಸುಪ್ರೀಂಕೋರ್ಟ್ ಶುಕ್ರವಾರ ನೋಟಿಸ್ ಜಾರಿ ಮಾಡಿದೆ.

ನ್ಯಾಯಮೂರ್ತಿಗಳಾದ ಪ್ರಶಾಂತ್ ಕುಮಾರ್ ಮಿಶ್ರಾ ಮತ್ತು ಮನಮೋಹನ್ ಅವರಿದ್ದ ಪೀಠವು ಈ ವಿಷಯದಲ್ಲಿ ಕರ್ನಾಟಕದ ಮುಖ್ಯ ಕಾರ್ಯದರ್ಶಿ, ಪ್ರಧಾನ ಕಾರ್ಯದರ್ಶಿ (ಗೃಹ) ಮತ್ತು ಪೊಲೀಸ್ ಮಹಾನಿರ್ದೇಶಕರ ಪ್ರತಿಕ್ರಿಯೆಗಳನ್ನು ಕೋರಿದೆ ಮತ್ತು ಮುಂದಿನ ವಿಚಾರಣೆಯನ್ನು ಮಂಗಳವಾರಕ್ಕೆ (ಜೂನ್ 17) ಮುಂದೂಡಿದೆ.

ಚಿತ್ರದ ಆಡಿಯೋ ಬಿಡುಗಡೆ ಸಮಾರಂಭದಲ್ಲಿ, ಕಮಲ್‌ಹಾಸನ್ 'ಕನ್ನಡ ತಮಿಳಿನಿಂದ ಹುಟ್ಟಿದೆ' ಎಂದು ಹೇಳಿಕೊಂಡಿದ್ದು, ಕರ್ನಾಟಕದಲ್ಲಿ ತೀವ್ರ ವಿರೋಧಕ್ಕೆ ಕಾರಣವಾಯಿತು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No.114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ಇಂದು ಪೂಜಾ ಸುಗಮ್, ಸಮೀಕ್ಷಾ ನೃತ್ಯ ಪ್ರದರ್ಶನ



ಮೈಸೂರು, ಜೂ.13(ಎಂಕೆ)– ಮೈಸೂರಿನ ಗೋಕುಲಂ 3ನೇ ಹಂತದಲ್ಲಿರುವ ಆಳ್ವಾರ್ ಭವನದ ಶ್ರೀ ಕೃಷ್ಣಗಾನ ಸಭಾದಲ್ಲಿ ಹಿರಿಯ ವೈದ್ಯ ಡಾ.ಸಿ.ಜಿ.ನರಸಿಂಹನ್ ಮತ್ತು ಕುಟುಂಬದವರ ಸಹಯೋಗದೊಂದಿಗೆ ನಾಳೆ(ಜೂ.14) ಸಂಜೆ 6.30ಕ್ಕೆ ವಿದುಷಿ ಪೂಜಾ ಸುಗಮ್ ಮತ್ತು ವಿದುಷಿ ಕೆ.ಎಂ.ಸಮೀಕ್ಷಾ ಅವರಿಂದ ಸ್ಮಾರಕ ನೃತ್ಯ ಪ್ರದರ್ಶನ ಹಮ್ಮಿಕೊಳ್ಳಲಾಗಿದೆ.

ವಿದುಷಿ ಕೆ.ಎಂ.ಸಮೀಕ್ಷಾ: ಹಾಸನದಲ್ಲಿ ಜನಿಸಿದ ವಿದುಷಿ ಕೆ.ಎಂ.ಸಮೀಕ್ಷಾ ಅವರು, ಶಾಸ್ತ್ರೀಯ ಸಂಗೀತ ನೃತ್ಯ ಪ್ರಕಾರಗಳಲ್ಲಿ ಅಭೂತಪೂರ್ವ ಪ್ರತಿಭೆಯಾಗಿದ್ದಾರೆ. ಬೆಳಗಾವಿಯ ವಿಟಿಯು (ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ)ನಿಂದ ಬಿ.ಇ. ಪದವಿ ಪಡೆದಿರುವ ಅವರು, ಮೈಸೂರಿನ ಸಂಗೀತ ವಿಶ್ವವಿದ್ಯಾಲಯದಿಂದ ಭರತನಾಟ್ಯದಲ್ಲಿ ಸ್ನಾತಕೋತ್ತರ ಪದವಿ ಪಡೆದಿದ್ದಾರೆ. ಗುರು ಅಂಬಾಲ ರಾಜೇಶ್ವರಿ ಅವರಿಂದ ಶಾಸ್ತ್ರೀಯ ನೃತ್ಯ ಅಭ್ಯಾಸವನ್ನು ಪ್ರಾರಂಭಿಸಿದ ಅವರು, ಚೆನ್ನೈನ ವಿಜಯಕುಮಾರ್ ಅವರಿಂದ ನೃತ್ಯ ಕೌಶಲಗಳನ್ನು ಕರಗತ ಮಾಡಿಕೊಂಡಿದ್ದಾರೆ.

ಕೊಳಲುವಾದಕ ವಿದ್ವಾನ್ ಎ.ವಿ. ಪ್ರಕಾಶ್ ಅವರಿಂದ ಕೊಳಲು ವಾದನ ತರಬೇತಿಯ ನಂತರ, ವಿದ್ವಾನ್ ಎ.ಪಿ. ಕೃಷ್ಣಪ್ರಸಾದ್ ಅವರ ಮಾರ್ಗದರ್ಶನದಲ್ಲಿ ಅಭ್ಯಾಸ ಮುಂದುವರೆಸಿರುವ ಅವರು, ಚೆನ್ನೈನ ಅನುಭವಿ ಮೃದಂಗವಾದಕ ವಿದ್ವಾನ್ ನಾಗೈ ಪಿ.ಶ್ರೀರಾಮ್ ಅವರಿಂದ ನಟ್ಟುವಂಗಂನಲ್ಲಿ ತರಬೇತಿ ಪಡೆದಿದ್ದಾರೆ.

ವಿದುಷಿ ಪೂಜಾ ಸುಗಮ್: ಬಹುಮುಖ ಪ್ರತಿಭೆಯಾಗಿರುವ ವಿದುಷಿ ಪೂಜಾ ಸುಗಮ್, ಸಂಗೀತ ಹಾಗೂ ಶಾಸ್ತ್ರೀಯ ನೃತ್ಯ ಪರಂಪರೆಯ ಕುಟುಂಬದವರಾಗಿದ್ದಾರೆ. ಇವರ ತಾಯಿ ಭರತನಾಟ್ಯದ ಪ್ರತಿಪಾದಕರಾಗಿದ್ದು, ಡಾ.ಕೃಪಾ ಪಡ್ಕೆ ಅವರ ಮಾರ್ಗದರ್ಶನದ ಜೊತೆಗೆ ಚೆನ್ನೈನ ವಿಜಯಕುಮಾರ್ ಅವರಿಂದ ನೃತ್ಯ ಕೌಶಲಗಳ ತರಬೇತಿ ಪಡೆದಿದ್ದಾರೆ. ಮೈಸೂರು ಸಂಗೀತ ವಿವಿಯಿಂದ ಸಂಗೀತ ಮತ್ತು ನೃತ್ಯದಲ್ಲಿ ಸ್ನಾತಕೋತ್ತರ ಪದವಿ ಪಡೆದಿರುವ ವಿದುಷಿ ಪೂಜಾ ಸುಗಮ್, ಚೆನ್ನೈನ ಅನುಭವಿ ಮೃದಂಗವಾದಕ ವಿದ್ವಾನ್ ನಾಗೈ ಪಿ.ಶ್ರೀರಾಮ್ ಅವರಿಂದ ನಟ್ಟುವಂಗಂನಲ್ಲಿ ತರಬೇತಿ ಪಡೆದಿದ್ದಾರೆ.

ಬಹುಮಾನ ಗಳಿಸಿದ ಮಕ್ಕಳು



ಮೈಸೂರಿನ ವಿಜಯ ವಿಠಲ ವಿದ್ಯಾಶಾಲೆಯ ವಿದ್ಯಾರ್ಥಿಗಳು ಪ್ರತಿಷ್ಠಿತ ಇಂಡಿಯನ್ ಟ್ಯಾಲೆಂಟ್ ಒಲಿಂಪಿಯಾಡ್(ಐಟಿಒ) ಪರೀಕ್ಷೆಗಳಲ್ಲಿ ಹಲವು ಪದಕ ಮತ್ತು ಬಹುಮಾನಗಳನ್ನು ಗಳಿಸಿದ್ದಾರೆ. ವಿಜ್ಞಾನ, ಗಣಿತ, ಇಂಗ್ಲಿಷ್, ಸಾಮಾನ್ಯ ಜ್ಞಾನ ಮತ್ತು ಕಂಪ್ಯೂಟರ್ ವಿಜ್ಞಾನ ಇನ್ನಿತರ ವಿಷಯಗಳಲ್ಲಿ ಪ್ರತಿಭೆ ಪ್ರದರ್ಶಿಸಿ, ವಿಜೇತರಾದ ಮಕ್ಕಳನ್ನು ಶಾಲಾ ಶಿಕ್ಷಕರು ಅಭಿನಂದಿಸಿದರು.

ಲಾಭದ ಆಸೆಗೆ ಬಿದ್ದು 11 ಲಕ್ಷ ಕಳೆದುಕೊಂಡ ಅಕೌಂಟೆಂಟ್

ಮೈಸೂರು, ಜೂ.13– ಮೈಸೂರಿನ ಓರ್ವ ಅಕೌಂಟೆಂಟ್, ಸೈಬರ್ ವಂಚಕರ ಬಲೆಗೆ ಸಿಲುಕಿ, ಸುಮಾರು 11 ಲಕ್ಷ ರೂ. ಕಳೆದುಕೊಂಡಿರುವ ಬಗ್ಗೆ ಸೆನ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ನಗರದ ಕನಕಗಿರಿ ನಿವಾಸಿ, 31 ವರ್ಷದ ಅಕೌಂಟೆಂಟ್, ಟೆಲಿಗ್ರಾಂ ಗ್ರೂಪ್‌ನಲ್ಲಿ ಬಂದ ಸಂದೇಶವನ್ನು ನಂಬಿ ಎನ್‌ಎಂಎಂ ಎಂಬ ಅಪ್ಲಿಕೇಷನ್ ಇನ್ಸ್ಟಾಲ್ ಮಾಡಿಕೊಂಡಿದ್ದಾರೆ. ನಂತರ ಅಧಿಕ ಲಾಭದಾಸೆಯಿಂದ ತಮ್ಮ ಕ್ರೆಡಿಟ್ ಕಾರ್ಡ್ ಮೂಲಕ 12.21 ಲಕ್ಷ ರೂ. ಹೂಡಿಕೆ ಮಾಡಿದ್ದಾರೆ. ಆರಂಭದಲ್ಲಿ ಶೇ.10ರಷ್ಟು ಲಾಭವೆಂದು 1.20 ಲಕ್ಷ ರೂ.ಗಳನ್ನು ವರ್ಗಾವಣೆ ಮಾಡಿದ ವಂಚಕರು, ನಂತರ ಸಂಪರ್ಕ ಕಡಿದುಕೊಂಡಿದ್ದಾರೆ. ಎಷ್ಟೇ ಪ್ರಯತ್ನಿಸಿದರೂ ಸಂಪರ್ಕ ಸಾಧ್ಯವಾಗದಿದ್ದಾಗ ವಂಚಕರ ವಿರುದ್ಧ ಸೆನ್ ಠಾಣೆ ಪೊಲೀಸರಿಗೆ ದೂರು ನೀಡಿದ್ದಾರೆ.

ಮನೆ ಬೀಗ ಮುರಿದು ನಗದು, ಬೆಳ್ಳಿ ಪದಾರ್ಥ ಕಳವು

ಮೈಸೂರು, ಜೂ.13– ಮನೆಯ ಬೀಗ ಮುರಿದು ನಗದು ಹಾಗೂ ಬೆಳ್ಳಿ ಪದಾರ್ಥಗಳನ್ನು ಕಳ್ಳತನ ಮಾಡಿರುವ ಘಟನೆ ಮೈಸೂರಿನ ಹೂಟಗಳ್ಳಿಯಲ್ಲಿ ನಡೆದಿದೆ. ಇಲ್ಲಿನ ಕೆಹೆಚ್‌ಬಿ ಕಾಲೋನಿ ನಿವಾಸಿ, ಬ್ಯಾಂಕ್ ಉದ್ಯೋಗಿ ಎಸ್.ಎನ್.ಸುನಿಲ್ ಮನೆಗೆ ನುಗ್ಗಿರುವ ಕಳ್ಳರು, 15 ಸಾವಿರ ನಗದು ಹಾಗೂ ಸುಮಾರು 65 ಸಾವಿರ ಮೌಲ್ಯದ ಬೆಳ್ಳಿ ಪದಾರ್ಥಗಳನ್ನು ದೋಚಿದ್ದಾರೆ.

ಕ್ರೈಂ ಬಾಕ್ಸ್

ತಾಯಿಯೊಂದಿಗೆ ವಾಸವಿರುವ ಸುನಿಲ್, ಮಡಿಕೇರಿಯಲ್ಲಿ ಬ್ಯಾಂಕ್ ಉದ್ಯೋಗಿಯಾಗಿದ್ದಾರೆ. ಮೇ 21ರಂದು ಸಂಜೆ ಮನೆಗೆ ಬೀಗ ಹಾಕಿಕೊಂಡು ಇಬ್ಬರೂ ಸ್ವಗ್ರಾಮ ಚಿಲ್ಕುಂದಕ್ಕೆ ತೆರಳಿದ್ದರು. ನಿನ್ನೆ ನೆರೆಮನೆಯವರೊಬ್ಬರು ಸುನಿಲ್ ತಾಯಿಗೆ ಕರೆ ಮಾಡಿ, ನಿನ್ನೆ ರಾತ್ರಿ ನಿಮ್ಮ ಮನೆಗೆ ಬೀಗ ಹಾಕಿತ್ತು, ಈಗ ಬಾಗಿಲು ತೆರೆದಿದೆ. ನೀವೇನಾದರೂ ಊರಿನಿಂದ ಬಂದಿದ್ದೀರಾ ಎಂದು ಕೇಳಿದ್ದಾರೆ. ಕೂಡಲೇ ಸುನಿಲ್, ತಮ್ಮ ತಾಯಿಯೊಂದಿಗೆ ಮನೆ ಬಳಿ ಬಂದು ನೋಡಿದಾಗ ಮುಂಬಾಗಿಲಿನ ಬೀಗ ಮುರಿದಿತ್ತು. ಬೀರು ಹಾಗೂ ಕಬೋರ್ಡ್‌ನ ಬಾಗಿಲುಗಳು ತೆರೆದಿದ್ದವು, ಅದರಲ್ಲಿದ್ದ ವಸ್ತುಗಳೆಲ್ಲವೂ ಚೆಲ್ಲಾಪಿಲ್ಲಿಯಾಗಿ ಬಿದ್ದಿದ್ದವು. ಬೀರುವಿನಲ್ಲಿದ್ದ ಹಣ ಹಾಗೂ ಬೆಳ್ಳಿ ಪದಾರ್ಥಗಳು ಕಳುವಾಗಿದ್ದವು. ಈ ಸಂಬಂಧ ವಿಜಯನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.




ಅಭಿನಂದನೆ...

ಮೈಸೂರು ಉಪ ವಿಭಾಗ ಅಧಿಕಾರಿಗಳಾದ ಆಶಪ್ಪರವರನ್ನು ಕಚೇರಿಯಲ್ಲಿ ಹೂಗುಚ್ಛ ನೀಡುವ ಮೂಲಕ ಅಭಿನಂದಿಸಲಾಯಿತು. ಈ ಸಂದರ್ಭದಲ್ಲಿ ಬಗರುಹುಕುಂ ಕಮಿಟಿ ಸದಸ್ಯರು ಹಾಗೂ ಜಯಪುರ ಮತ್ತು ಇಲವಾಲ ಬ್ಲಾಕ್ ಕಾಂಗ್ರೆಸ್ ಸಮಿತಿ ಕಾರ್ಯದರ್ಶಿ ಎ. ಎಂ. ಸ್ವಾಮಿಗೌಡ ಹಾಗೂ ಕಮಿಟಿ ಸದಸ್ಯ ಕಲ್ಲಳ್ಳಿ ಕುಮಾರ್ ಉಪಸ್ಥಿತರಿದ್ದರು.

ನಿವೃತ್ತ ಎಎಸ್ಪಿ ಶಿವಸ್ವಾಮಿ ನಿಧನ

ಮೈಸೂರು, ಜೂ.13– ಮೈಸೂರಿನ ನೇತಾಜಿನಗರ ನಿವಾಸಿ, ನಿವೃತ್ತ ಎಎಸ್ಪಿ ಹೆಚ್.ಬಿ.ಶಿವಸ್ವಾಮಿ ಅವರು ಶುಕ್ರವಾರ ನಿಧನರಾದರು.



ಅವರ ಪಾರ್ಥೀವ ಶರೀರವನ್ನು ಶನಿವಾರ(ಜೂ.14) ಬೆಳಗ್ಗೆ 10 ಗಂಟೆವರೆಗೆ ಅವರ ನಿವಾಸದ ಬಳಿ ಅಂತಿಮ ದರ್ಶನಕ್ಕಿಟ್ಟು, ನಂತರ ಹುಟ್ಟೂರಾದ ತಿ.ನರಸೀಪುರ ತಾಲೂಕು ಹಲವಾರ ಗ್ರಾಮಕ್ಕೆ ಕೊಂಡೊಯ್ದು ಮಧ್ಯಾಹ್ನ 3 ಗಂಟೆ ವೇಳೆಗೆ ಅಂತ್ಯಕ್ರಿಯೆ ನೆರವೇರಿಸಲಾಗುವುದು ಎಂದು ಮೂಲಗಳು ತಿಳಿಸಿವೆ.

ಶಿವಸ್ವಾಮಿ 1961ರಲ್ಲಿ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಆಗಿ ಸೇವೆಗೆ ಸೇರಿ, ಕನಕಪುರ, ಚನ್ನಪಟ್ಟಣ, ಕೊಡುಗು, ಬೆಂಗಳೂರು ನಗರ ಮತ್ತು ತುಮಕೂರಿನಲ್ಲಿ ಅತ್ಯುತ್ತಮ ಸೇವೆ ಸಲ್ಲಿಸಿದ್ದರು. ಮೈಸೂರಿನ ಕೆಎಸ್‌ಆರ್‌ಪಿ 5ನೇ ಬೆಟಾಲಿಯನ್‌ನ ಕಮಾಂಡೆಂಟ್ ಆಗಿದ್ದ ವೇಳೆ ವೀರಪ್ಪನ್ ವಿರುದ್ಧದ ಕಾರ್ಯಾಚರಣೆಯಲ್ಲಿ ಭಾಗವಹಿಸಿದ್ದರು. ತುಮಕೂರಿನ ಹೆಚ್ಚುವರಿ ಎಸ್ಪಿಯಾಗಿ ನಿವೃತ್ತರಾಗಿದ್ದರು. ದಕ್ಷ ಮತ್ತು ಪ್ರಾಮಾಣಿಕ ಅಧಿಕಾರಿಯಾಗಿದ್ದ ಅವರಿಗೆ ರಾಷ್ಟ್ರಪತಿ ಪದಕ ಸೇರಿದಂತೆ ಹಲವು ಪ್ರಶಸ್ತಿಗಳು ಸಂದಿದ್ದವು. ಹೆಚ್.ಬಿ.ಶಿವಸ್ವಾಮಿ ನಿಧನಕ್ಕೆ ನಿವೃತ್ತ ಡಿಜಿಪಿ ಅಧಿಕಾರಿ ಶಂಕರ್ ಮಹದೇವ ಬಿದರಿ ಸೇರಿದಂತೆ ಹಲವರು ಸಂತಾಪ ಸೂಚಿಸಿದ್ದಾರೆ.

ವಿಲೀನ ಬಿಕ್ಕಟ್ಟು: ಎನ್‌ಐಇಐಟಿ ಸಿಬ್ಬಂದಿಗೆ ಪ್ರವೇಶ ನಿರ್ಬಂಧ

ಪೊಲೀಸರ ಮಧ್ಯ ಪ್ರವೇಶಕ್ಕೆ ನೌಕರರ ಮನವಿ



ಸಂಸ್ಥೆಯ ಆಡಳಿತ ಮಂಡಳಿ ಕ್ರಮವನ್ನು ಖಂಡಿಸಿ ವಜಾಗೊಂಡಿರುವ ನೌಕರರು ಪ್ರತಿಭಟನೆ ನಡೆಸಿದರು

ಮೈಸೂರು, ಜೂ.13(ಆರ್‌ಕೆ)– ಮೈಸೂರಿನ ಕೂರ್ಗಳ್ಳಿ ಬಳಿ ಇರುವ ಎನ್‌ಐಇ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ (NIEIT) ಖಾಯಂ ಮತ್ತು ತಾತ್ಕಾಲಿಕ ಬೋಧಕ–ಬೋಧಕೇತರ ಸಿಬ್ಬಂದಿಯನ್ನು ವಜಾಗೊಳಿಸಲಾಗಿದೆ.

ಸಂಸ್ಥೆಯ ಆಡಳಿತ ಮಂಡಳಿ ಕ್ರಮವನ್ನು ಖಂಡಿಸಿ ವಜಾಗೊಂಡಿರುವ ನೌಕರರು ಪ್ರತಿಭಟನೆ ನಡೆಸುತ್ತಿದ್ದು, ಆಡಳಿತ ಮಂಡಳಿಯು ನೌಕರರ ಆರೋಪವನ್ನು ನಿರಾಕರಿಸಿದೆ. ಕ್ಯಾಂಪಸ್ ಪ್ರವೇಶಿಸದಂತೆ ತಡೆಯಲಾಗಿದೆ ಎಂದು ಆರೋಪಿಸಿ ಸಂಸ್ಥೆ ಎದುರು ಗುರುವಾರದಿಂದ ಪ್ರತಿಭಟನೆ ಆರಂಭಿಸಿದ್ದಾರೆ.

ಈ ಸಂಬಂಧ ನಗರ ಪೊಲೀಸ್ ಕಮಿಷ್ನರ್‌ಗೆ ದೂರು ನೀಡಿರುವ ಸಿಬ್ಬಂದಿ, ತಮ್ಮನ್ನು ಕೆಲಸದಿಂದ ತೆಗೆದು ಹಾಕಿರುವ ಆಡಳಿತ ಮಂಡಳಿಯು, ಹಲವಾರು ವರ್ಷಗಳಿಂದ ಸಂಸ್ಥೆಯ ವಿವಿಧ ವಿಭಾಗಗಳಲ್ಲಿ ಕೆಲಸ ಮಾಡುತ್ತಿರುವ ತಮಗೆ ಕ್ಯಾಂಪಸ್ ಪ್ರವೇಶಿಸಲು ನಿರ್ಬಂಧಿಸಿದೆ ಎಂದು ಆರೋಪಿಸಿದ್ದಾರೆ.

ಎನ್‌ಐಇ ಪ್ರತಿಷ್ಠಾನದಿಂದ ಸ್ಥಾಪಿಸಲ್ಪಟ್ಟ ಎನ್‌ಐಇಐಟಿಯು, ಎಲೆಕ್ಟ್ರಾನಿಕ್ಸ್ ಅಂಡ್ ಸಂವಹನ ಇಂಜಿನಿಯರಿಂಗ್, ಎಲೆಕ್ಟ್ರಿಕಲ್ ಅಂಡ್ ಎಲೆಕ್ಟ್ರಾನಿಕ್ಸ್ ಇಂಜಿನಿಯರಿಂಗ್, ಕಂಪ್ಯೂಟರ್ ಸೈನ್ಸ್, ಮಾಹಿತಿ ವಿಜ್ಞಾನ, ಮೆಕ್ಯಾನಿಕಲ್ ಇಂಜಿನಿಯರಿಂಗ್ ಬ್ಯಾಚುರಲ್ ಆಫ್ ಇಂಜಿನಿಯರಿಂಗ್ ವಿಭಾಗಗಳಲ್ಲಿ ಪದವಿ ನೀಡುತ್ತಿದೆ.

2020–21ನೇ ಸಾಲಿನಿಂದ ಪ್ರವೇಶದಲ್ಲಿನ ತೀವ್ರ ಕುಸಿತದಿಂದಾಗಿ ಕೋರ್ಸ್‌ಗಳನ್ನು 50 ರಿಂದ ಕೇವಲ 15ಕ್ಕೆ ಇಳಿಸಲಾಗಿದೆ. ಪರಿಣಾಮ ಎನ್‌ಐಇ ಮತ್ತು ಎನ್‌ಐಇಐಟಿಯನ್ನು ವಿಲೀನಗೊಳಿಸಲಾಗಿದ್ದು, ಅದರ ವಿರುದ್ಧ ಸಿಬ್ಬಂದಿ ನ್ಯಾಯಾಲಯದ ಮೊರೆ ಹೋಗಿದ್ದಾರೆ.

ಆಡಳಿತ ಮಂಡಳಿ ಪ್ರಕಾರ, ಕಡಿಮೆ ವಿದ್ಯಾರ್ಥಿಗಳಿಗೆ ಹೆಚ್ಚು ಸಿಬ್ಬಂದಿಗಳಿರುವುದರಿಂದ ಸಂಬಳ, ಗ್ರಾಚುಯಿಟಿ ಮತ್ತು ಇತರ ಶಾಸನಬದ್ಧ ಅನುಕೂಲಗಳನ್ನು ಒದಗಿಸಲು ಕಷ್ಟವಾಗಿದೆ. ಎನ್‌ಐಇಐಟಿ ವಿಲೀನ, ಮುಚ್ಚುವ ಬಗ್ಗೆ ಸರ್ಕಾರ ಮತ್ತು ಶಾಸನಬದ್ಧ ಸಂಸ್ಥೆಗಳಿಗೆ ತಿಳಿಸಲಾಗಿದೆ.

90ಕ್ಕೂ ಹೆಚ್ಚು ಸಿಬ್ಬಂದಿಗಳನ್ನು ವಜಾಗೊಳಿಸುವ ಮೊದಲು ಗಣನೀಯ ಹಣಕಾಸಿನ ಪ್ಯಾಕೇಜ್ ಜೊತೆಗೆ ಸ್ವಯಂ ಪ್ರೇರಿತ ಪ್ರತ್ಯೇಕತಾ ಯೋಜನೆಯನ್ನು ಜಾರಿಗೊಳಿಸಿ ಅವರಿಗೆ ಸಲ್ಲಬೇಕಾದ ಸೌಲಭ್ಯಗಳನ್ನು ಒದಗಿಸಲಾಗಿದೆ. ಆದಾಗ್ಯೂ ಕಾನೂನು ಹೋರಾಟ ಮಾಡುತ್ತಿರುವ ನೌಕರರು, ರಾಜೀ ಮಾಡಿಕೊಳ್ಳದೇ ಪ್ರತಿಭಟನೆ ಹಾದಿ ಹಿಡಿದಿದ್ದಾರೆ.

ಗುರುವಾರ ಎಂದಿನಂತೆ ಕೆಲಸಕ್ಕೆ ಬಂದಾಗ ಪ್ರವೇಶ ನಿರಾಕರಿಸಿದ ಕಾರಣ ಅವರು, ಸಂಸ್ಥೆ ಎದುರು ಪ್ರತಿಭಟನೆ ನಡೆಸಿದ್ದಾರೆ. ಕಳೆದ ಏಪ್ರಿಲ್ ತಿಂಗಳಲ್ಲಿ ವಿಲೀನದ ಬಗ್ಗೆ ಮಾಹಿತಿ ನೀಡಲಾಗಿತ್ತು. ಕೆಲವರು ವಿಎಸ್‌ಎಸ್ ಅನ್ನು ಆಯ್ಕೆ ಮಾಡಿಕೊಂಡಿದ್ದರೆ, ಮತ್ತೆ ಕೆಲವರು ವಜಾಗೊಳಿಸಿರುವುದನ್ನು ತೀವ್ರವಾಗಿ ಖಂಡಿಸಿ ಪ್ರತಿಭಟನೆ ಮುಂದುವರೆಸಿದ್ದಾರೆ.

ಎನ್‌ಐಇ ಸ್ಪಷ್ಟೀಕರಣ

ಮೈಸೂರು, ಜೂ.13(ಆರ್‌ಕೆ)–ನೌಕರರನ್ನು ವಜಾಗೊಳಿಸಿರುವ ಸಂಬಂಧ 'ಮೈಸೂರು ಮಿತ್ರ'ನಿಗೆ ಲಿಖಿತ ಸ್ಪಷ್ಟೀಕರಣ ನೀಡಿರುವ ಎನ್‌ಐಇ ನಿರ್ವಹಣಾ ಸಮಿತಿ ಕಾರ್ಯದರ್ಶಿ ಎಸ್.ಬಿ.ಉದಯಶಂಕರ್, ವಿಎಸ್‌ಎಸ್(ವಾಲಂಟರಿ ಸೆಪರೇಷನ್ ಸ್ಕೀಂ) ಆಯ್ಕೆ ಮಾಡಿಕೊಂಡ ನೌಕರರನ್ನು, ಆರ್ಥಿಕ ಪ್ರಯೋಜನಗಳನ್ನು ನೀಡಿ ಕರ್ತವ್ಯದಿಂದ ಬಿಡುಗಡೆ ಮಾಡಲಾಗಿದೆ ಎಂದರು.

ಎನ್‌ಐಇ ಫೌಂಡೇಷನ್ ಅಡಿ ಕಾರ್ಯ ನಿರ್ವಹಿಸುವ ಹಾಗೂ 2008ರಲ್ಲಿ ಸ್ಥಾಪನೆಯಾದ ಎನ್‌ಐಇ ತಂತ್ರಜ್ಞಾನ ಸಂಸ್ಥೆ (NIEIT)ಯನ್ನು ಈ ವರ್ಷ ಮುಚ್ಚಲಾಗಿದೆ. ಈ ಬಗ್ಗೆ ಅಖಿಲ ಭಾರತ ತಾಂತ್ರಿಕ ಶಿಕ್ಷಣ ಮಂಡಳಿ (AICTE), ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾನಿಲಯ (VTU) ಮತ್ತು ಕರ್ನಾಟಕ ಸರ್ಕಾರಕ್ಕೂ ಲಿಖಿತ ರೂಪದಲ್ಲಿ ಮಾಹಿತಿ ನೀಡಲಾಗಿದೆ ಎಂದು ಅವರು ತಿಳಿಸಿದರು.

ಇದೀಗ ಮಾರ್ಗಸೂಚಿಗಳ ಪ್ರಕಾರ, ಮೈಸೂರಿನ ಮಾನಂದವಾಡಿ ರಸ್ತೆಯ ಎನ್‌ಐಇ ಕ್ಯಾಂಪಸ್ ಮೂಲಕ ತನ್ನ ಶೈಕ್ಷಣಿಕ ಸೇವೆಗಳನ್ನು ವಿಸ್ತರಿಸಲು ಎನ್‌ಐಇಐಟಿಯ ಭೌತಿಕ ಮೂಲಸೌಕರ್ಯಗಳನ್ನು ಗುತ್ತಿಗೆಗೆ ಪಡೆದಿದೆ ಎಂದ ಕಾರ್ಯದರ್ಶಿಗಳು, ಆದಾಗ್ಯೂ ವಿಎಸ್‌ಎಸ್ ಯೋಜನೆಯಡಿ ಹೊರಗೆ ಹೋದವರಿಗೆ ಲಭ್ಯವಿರುವ ಹುದ್ದೆಗಳಿಗೆ ಹೊಸದಾಗಿ ಅರ್ಜಿ ಸಲ್ಲಿಸಿ ಆಯ್ಕೆ ಪ್ರಕ್ರಿಯೆಯಲ್ಲಿ ಭಾಗವಹಿಸುವಂತೆ ಪ್ರೋತ್ಸಾಹಿಸಲಾಗಿದೆ ಎಂದರು.

ಅಷ್ಟಕ್ಕೂ ಈ ವಿಷಯವು ಪ್ರಸ್ತುತ ಉಚ್ಚ ನ್ಯಾಯಾಲಯದಲ್ಲಿರುವುದರಿಂದ, ನ್ಯಾಯಾಲಯ ನೀಡುವ ತೀರ್ಪಿಗೆ ಬದ್ಧವಾಗಿರುತ್ತೇವೆ ಎಂದು ಕಾರ್ಯದರ್ಶಿಗಳು ಸ್ಪಷ್ಟನೆಯಲ್ಲಿ ತಿಳಿಸಿದ್ದಾರೆ. ವಜಾಗೊಂಡ ನೌಕರರು ಹೈಕೋರ್ಟ್ ಮೊರೆ ಹೋಗಿದ್ದು, ವಿಚಾರಣೆ ಹಂತದಲ್ಲಿದೆ. ಸೋಮವಾರ (ಜೂ.16) ವಿಚಾರಣೆ ನಿಗದಿಯಾಗಿದೆ. ನ್ಯಾಯಾಲಯ ಕೇಳಿರುವ ಮಾಹಿತಿಗಳನ್ನು ಕ್ರೋಢೀಕರಿಸಿ ಸಲ್ಲಿಸಲಿದ್ದೇವೆ ಎಂದು ಅವರು ತಿಳಿಸಿದರು.

ಮೈಸೂರು ವಕೀಲರ ಸಂಘದಿಂದ ಬಸವ ಜಯಂತಿ

ಕಾನೂನು ಪರಿಭಾಷೆಯಲ್ಲೂ ವಚನಗಳ ಅಧ್ಯಯನ

- ಸುಪ್ರೀಂಕೋರ್ಟ್ ನಿವೃತ್ತ ನ್ಯಾಯಮೂರ್ತಿ ಡಾ.ಶಿವರಾಜ್ ವಿ.ಪಾಟೀಲ್ ಅಭಿಮತ
- ಯುವ ವಕೀಲರು ಕಕ್ಷಿದಾರರಿಗೆ ನ್ಯಾಯ ಒದಗಿಸುವತ್ತ ಗಮನಹರಿಸುವಂತೆ ಕಿವಿಮಾತು



ಮೈಸೂರು ವಕೀಲರ ಸಂಘದಿಂದ ಬಸವ ಜಯಂತಿಯನ್ನು ಶುಕ್ರವಾರ ಆಚರಿಸಲಾಯಿತು.

ಮೈಸೂರು, ಜೂ.13(ಎಸ್‌ಪಿಎನ್)– ಮೈಸೂರು ಜಿಲ್ಲಾ ನ್ಯಾಯಾಲಯದ ಆವರಣದಲ್ಲಿ ಮೈಸೂರು ವಕೀಲರ ಸಂಘದಿಂದ ಬಸವ ಜಯಂತಿಯನ್ನು ಶುಕ್ರವಾರ ಆಚರಿಸಲಾಯಿತು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಸುಪ್ರೀಂಕೋರ್ಟ್ ನಿವೃತ್ತ ನ್ಯಾಯಮೂರ್ತಿ, ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗದ ಮಾಜಿ ಅಧ್ಯಕ್ಷ ಡಾ.ಶಿವರಾಜ್ ವಿ.ಪಾಟೀಲ್, 12 ನೇ ಶತಮಾನದ ವಚನಗಳು ಇಂದಿಗೂ ಪ್ರಸ್ತುತ. ಬಸವಣ್ಣನವರು ರಚಿಸಿರುವ ಹಲವು ವಚನಗಳು ಕಾನೂನು ಪರಿಭಾಷೆಯಲ್ಲೂ ಅಧ್ಯಯನ ನಡೆಸಬಹುದು ಎಂದರು.

ಇತ್ತೀಚಿನ ದಿನಗಳಲ್ಲಿ ನ್ಯಾಯಾಂಗದ ತೀರ್ಪುಗಳಲ್ಲಿ ಹೊಸಹೊಸ ವ್ಯಾಖ್ಯಾನಗಳು ಉಲ್ಲೇಖವಾಗುತ್ತಿವೆ. ವ್ಯಾಜ್ಯಗಳ ಸ್ವರೂಪಗಳು ಬದಲಾಗುತ್ತಿವೆ. ಯುವ ವಕೀಲರು ಕಾನೂನಿನ ಬದಲಾವಣೆಗಳ ಬಗ್ಗೆ ಗಮನಹರಿಸಬೇಕು ಹಾಗೂ ಅಧ್ಯಯನಶೀಲರಾಗಬೇಕು ಎಂದು ಕಿವಿಮಾತು ಹೇಳಿದರಲ್ಲದೆ, ಕಕ್ಷಿದಾರರಿಗೆ ನ್ಯಾಯ ಒದಗಿಸುವ ನಿಟ್ಟಿನಲ್ಲಿ ಯುವ ವಕೀಲರು ಗಮನಹರಿಸಬೇಕು. ದಿನದ 24 ಗಂಟೆಯೂ ಕೇಸುಗಳ ಬಗ್ಗೆ ತಲೆಕೆಡಿಸಿಕೊಂಡರೆ, ಇದರಿಂದ ತಮ್ಮ ಆರೋಗ್ಯದ ಮೇಲಾಗುವ ಪರಿಣಾಮಗಳ ಬಗ್ಗೆಯೂ ಗಮನವಿರಬೇಕು ಎಂದು ಕಿವಿಮಾತು ಹೇಳಿದರು.

ಸಮಾಜದಲ್ಲಾಗುತ್ತಿರುವ ಸಾಮಾಜಿಕ, ಆರ್ಥಿಕ, ಶೈಕ್ಷಣಿಕ ಬದಲಾವಣೆಗಳಿಂದ ಹೊಸಹೊಸ ಅಪರಾಧಗಳು ಗೋಚರಿಸುತ್ತಿವೆ. ಇದರಿಂದ ಹೆಚ್ಚು ಹೆಚ್ಚು ಪ್ರಕರಣಗಳು ದಾಖಲಾಗುತ್ತಿದ್ದು, ಎಲ್ಲಾ ಪ್ರಕರಣಗಳನ್ನು ಇಷ್ಟೇ ಸಮಯದಲ್ಲಿ ಮುಗಿಸಬೇಕು ಎಂದು ನ್ಯಾಯಾಲಯದ ಮೇಲೆ ಒತ್ತಡಗಳು ಹೆಚ್ಚಾಗುತ್ತಿವೆ. ಇಂತಹ ಒತ್ತಡ ಪರಿಸ್ಥಿತಿಯಲ್ಲಿ ನ್ಯಾಯದಾನಗಳ ಬಗ್ಗೆ ಎಚ್ಚರಿಕೆ ಇರಬೇಕು. ಆತುರ ತೀರ್ಪುಗಳು ಸಮಾಜದ ಮೇಲೆ ಪರಿಣಾಮ ಬೀರುತ್ತವೆ. ಹಾಗಾಗಿ ನ್ಯಾಯಾಂಗದ ಮೇಲೆ ವಿಪರೀತ ಒತ್ತಡ ಇರಬಾರದು ಎಂದು ಸಲಹೆ ನೀಡಿದರು.

ಸುತ್ತೂರು ಮಠದ ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಸಾನ್ನಿಧ್ಯ ವಹಿಸಿದ್ದರು. ಕರ್ನಾಟಕ ರಾಜ್ಯ ವಕೀಲರ ಪರಿಷತ್ ಎಸ್.ಎಸ್.ಮಿತ್ತಲಕೋಡ್, ಮೈಸೂರು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ನ್ಯಾಯಾಧೀಶರಾದ ಉಷಾರಾಣಿ, ಮೈಸೂರು ವಕೀಲರ ಸಂಘದ ಅಧ್ಯಕ್ಷ ಎಸ್.ಲೋಕೇಶ್, ಉಪಾಧ್ಯಕ್ಷ ಎಂ.ವಿ. ಚಂದ್ರಶೇಖರ್, ರಾಜ್ಯ ವಕೀಲರ ಪರಿಷತ್ ಸದಸ್ಯ ಹಿರಿಯ ವಕೀಲ ಟಿ.ಆರ್.ಚಂದ್ರಮೌಳಿ, ಖಜಾಂಚಿ ಹೆಚ್.ಬಿ.ಭರತ್, ಜಂಟಿ ಕಾರ್ಯದರ್ಶಿ ಕೆ.ಆರ್.ಚರಣ್ ರಾಜ್, ಮಹಿಳಾ ಜಂಟಿ ಕಾರ್ಯದರ್ಶಿ ಬಿ.ವಿ. ವಿನೋದ, ಸಂಘದ ಸದಸ್ಯರಾದ ಜಿ.ಎಸ್. ಶಿವಸ್ವಾಮಿ, ಆರ್.ಕನ್ಯಾಕುಮಾರಿ, ಕೆ.ಎಸ್. ಅಂದಾನಿ, ಕೃಷ್ಣ ಎಸ್.ಕುಪಾವ್ಕರ್, ಪ್ರದೀಪ್ ಬಿಡ್ಡನ್, ಕೆ.ದೇವರಾಜ್, ಎಂ. ಉಮೇಶ್, ಎಂ.ಕಿಶೋರ್ ಕೀರ್ತಿ, ಜೆ.ಲೋಕೇಶ್, ಎಂ.ಜಿ.ದೀಪು ಸೇರಿದಂತೆ ಇತರರಿದ್ದರು.

ಬಂಧುತ್ವವಿಲ್ಲದ ಸ್ವಾತಂತ್ರ್ಯ ಅರ್ಥಹೀನ

ಸಾಮಾಜಿಕ ಹೋರಾಟಗಾರ್ತಿ ಸರಸ್ವತಿ ಅಭಿಮತ



52ನೇ ಕನ್ನಡ ಪುನಶ್ಚೇತನ ಶಿಬಿರದಲ್ಲಿ ಸಾಮಾಜಿಕ ಹೋರಾಟಗಾರ್ತಿ ಡಾ.ದು.ಸರಸ್ವತಿ, 'ಪ್ರಜಾಪ್ರಭುತ್ವ ಮತ್ತು ಅಂಬೇಡ್ಕರ್' ಕುರಿತು ವಿಷಯ ಮಂಡಿಸಿದರು.

ಮೈಸೂರು, ಜೂ.13(ಎಂಕೆ)– ಸ್ವಾತಂತ್ರ್ಯ, ಸಮಾನತೆ ಎಂಬುದು ಬಂಧುತ್ವದ ಸಂಕೇತವಾಗಿದೆ. ಬಂಧುತ್ವವಿಲ್ಲದ ಸ್ವಾತಂತ್ರ್ಯ ಅರ್ಥಹೀನವಾದದ್ದು ಎಂದು ಸಾಮಾಜಿಕ ಹೋರಾಟಗಾರ್ತಿ ಡಾ.ದು.ಸರಸ್ವತಿ ಅಭಿಪ್ರಾಯಿಸಿದರು.

ಮೈಸೂರು ವಿವಿ ಮಾನಸಗಂಗೋತ್ರಿ ಮಾಳವಿಯ ಮಿಷನ್ ಶಿಕ್ಷಕರ ತರಬೇತಿ ಕೇಂದ್ರದಲ್ಲಿ ಕುವೆಂಪು ಕನ್ನಡ ಅಧ್ಯಯನ ಸಂಸ್ಥೆ ವತಿಯಿಂದ ಆಯೋಜಿಸಿರುವ 52ನೇ ಕನ್ನಡ ಪುನಶ್ಚೇತನ ಶಿಬಿರದಲ್ಲಿ 'ಪ್ರಜಾಪ್ರಭುತ್ವ ಮತ್ತು ಅಂಬೇಡ್ಕರ್' ಕುರಿತು ವಿಷಯ ಮಂಡಿಸಿದ ಅವರು, ನಾವು ಇನ್ನೊಬ್ಬರ ಸ್ವಾತಂತ್ರ್ಯವನ್ನು ಒಪ್ಪಿಕೊಂಡಾಗಲೇ ಸ್ವಾತಂತ್ರ್ಯ, ಸಮಾನತೆಗೆ ಬೆಲೆ ಸಿಗುತ್ತದೆ ಎಂದರು.

ಈಗ ಜಾತಿ ಆಚರಣೆ ಎಲ್ಲಿದೆ ಎಂದು ಕೆಲವರು ಕೇಳುತ್ತಾರೆ. ಹೋಟೆಲ್‌ಗಳಲ್ಲಿ ದಲಿತರು ಸಾಮಾನ್ಯವಾಗಿ ಊಟ ಮಾಡುವಾಗಿಲ್ಲ. ಒಳ್ಳೆ ಬಟ್ಟೆ ಹಾಕುವಾಗಿಲ್ಲ. ಪೌರ ಕಾರ್ಮಿಕರು ಕುಡಿಯಲು ನೀರು ಕೇಳಿದರೆ ಶೌಚಾಲಯದಲ್ಲಿ ಬಳಸುವ ಚೊಂಬಿನಿಂದ ನೀರು ಕೊಡುವ ಮನಸ್ಥಿತಿ ಇಂದಿಗೂ ಜೀವಂತವಾಗಿದೆ. ಇತ್ತೀಚೆಗಂತೂ ಶಿಕ್ಷಣದಲ್ಲೂ ಜಾತಿ ವ್ಯಾಪಕವಾಗುತ್ತಿವೆ. ಅಲ್ಲಲ್ಲಿ ಮನು ಚಿಂತನೆಗಳು ಒಳ ನುಸುಳುತ್ತಿವೆ. ಇದರ ಬಗ್ಗೆ ಶಿಕ್ಷಕರು ಎಚ್ಚರ ವಹಿಸಬೇಕು ಎಂದು ಹೇಳಿದರು.

ಮಹಿಳೆಯರ ಬಗ್ಗೆ 150 ವರ್ಷಗಳ ಹಿಂದೆ ಮೊದಲ ಬಾರಿಗೆ ಸಾವಿತ್ರಿ ಬಾಪುಲೆ, ಜ್ಯೋತಿ ಬಾಪುಲೆ ಧ್ವನಿ ಎತ್ತಿದರು. ಇದರ ಮುಂದುವರಿದ ಭಾಗವೇ ಅಂಬೇಡ್ಕರ್ ಅವರ ಮಹಿಳಾಪರ ಹೋರಾಟವಾಗಿದೆ. ಡಾ. ಬಿ.ಆರ್.ಅಂಬೇಡ್ಕರ್ ಅವರು ನಿಜವಾದ ಸ್ತ್ರೀವಾದಿ ಚಿಂತಕರು, ಮಹಿಳೆಯರು ಶತಮಾನಗಳಿಂದ ಗುಲಾಮಗಿರಿಯ ಸಂಕೋಲೆಯಲ್ಲಿ ಬದುಕಲು ಜಾತಿ ಕಾರಣ ಎಂದು ಕೊಲಂಬಿಯಾ ವಿವಿಯಲ್ಲಿ ಪ್ರಬಂಧ ಮಂಡಿಸಿದ್ದರು. ಅದರ ಮುಂದುವರಿದ ಭಾಗವೇ 'ಅನ್ನಿಹಿಲೇಷನ್ ಆಫ್ ಕ್ಯಾಸ್ಟ್' ಎನ್ನುವ ಪುಸ್ತಕದ ರೂಪವಾಗಿದೆ ಎಂದು ತಿಳಿಸಿದರು.

ಶಿಬಿರದ ಸಂಯೋಜಕರೂ ಆದ ಮೈಸೂರು ವಿವಿ ಪ್ರಸಾರಾಂಗದ ನಿರ್ದೇಶಕ ಡಾ.ನಂಜಯ್ಯ ಎಂ.ಹೊಂಗನೂರು, ಮಾಳವಿಯ ಮಿಷನ್ ಶಿಕ್ಷಕ ತರಬೇತಿ ಕೇಂದ್ರ ನಿರ್ದೇಶಕಿ ಪ್ರೊ.ಹೆಚ್.ಜ್ಯೋತಿ, ಸಹಾಯಕ ಪ್ರಾಧ್ಯಾಪಕ ಡಾ.ಎಲ್. ನಂಜುಂಡ ಸ್ವಾಮಿ, ಶಿಬಿರಾರ್ಥಿಗಳು ಹಾಜರಿದ್ದರು.

ಕಳಪೆ ಗುಣಮಟ್ಟದ ಅಡುಗೆ ಎಣ್ಣೆ ಮಾರಾಟ

ಆಹಾರ ಸುರಕ್ಷತಾ ಇಲಾಖೆ ಅಧಿಕಾರಿಗಳ ದಿಢೀರ್ ದಾಳಿ; ಅಡುಗೆ ಎಣ್ಣೆ ಮಾದರಿ ಸಂಗ್ರಹ, ಪ್ರಯೋಗಾಲಯಕ್ಕೆ ರವಾನೆ

- ಅಡುಗೆ ಎಣ್ಣೆಯಲ್ಲಿ ಫೋರ್ಟಿಫಿಕೇಷನ್ ವಿಟಮಿನ್ ಎ, ಇ ಅವಶ್ಯ
- ಜನರ ಆರೋಗ್ಯದೊಂದಿಗೆ ಚೆಲ್ಲಾಟವಾಡುತ್ತಿರುವ ಮಾಫಿಯಾ



ಮೈಸೂರು, ಜೂ.13(ಬಿಎಲ್‌ಯು)– ಕಳಪೆ ಗುಣಮಟ್ಟದ ಅಡುಗೆ ಎಣ್ಣೆ ವ್ಯಾಪಕವಾಗಿ ಮಾರಾಟ ಮಾಡುತ್ತಿರುವ ದೂರಿನ ಹಿನ್ನೆಲೆಯಲ್ಲಿ ಆಹಾರ ಸುರಕ್ಷತೆ ಮತ್ತು ಔಷಧಿ ಆಡಳಿತ ಇಲಾಖೆ (Department of Food Safety and Drug Administration)ಯ ಅಧಿಕಾರಿಗಳ ತಂಡ, ಮೈಸೂರಿನ ಅಡುಗೆ ಎಣ್ಣೆ ಮಾರಾಟ ಮಳಿಗೆಗಳಿಗೆ ದಿಢೀರ್ ದಾಳಿ ಮಾಡಿ ಅಡುಗೆ ಎಣ್ಣೆಯ ಮಾದರಿಗಳನ್ನು ಸಂಗ್ರಹಿಸಿದೆ.

ಪ್ರತಿಯೊಂದು ಆಹಾರದಲ್ಲಿ ಅಡುಗೆ ಎಣ್ಣೆ ಅವಶ್ಯಕ, ಇದಿಲ್ಲದೆ ಆಹಾರ ತಯಾರಿಕೆ ಅಪೂರ್ಣ. ಬೆಳಗ್ಗಿನ ಉಪಾಹಾರ, ಮಧ್ಯಾಹ್ನ ಊಟ ಮತ್ತು ರಾತ್ರಿಯ ಊಟ ತಯಾರಿಕೆಗೆ ಅಡುಗೆ ಎಣ್ಣೆ ಬಳಕೆ ಸಾಮಾನ್ಯವಾಗಿರುತ್ತದೆ. ಇದರ ಮಧ್ಯೆ ಸಿಹಿ ತಿಂಡಿ, ಖಾರ ತಿಂಡಿ ತಯಾರಿಕೆಗೂ ಅನಿವಾರ್ಯ.

ಆದರೆ ಇತ್ತೀಚಿಗೆ ಕಳಪೆ ಗುಣಮಟ್ಟದ ಅಡುಗೆ ಎಣ್ಣೆ ಮಾರಾಟ ವ್ಯಾಪಕವಾಗುತ್ತಿದೆ ಎಂಬ ದೂರುಗಳು ಕೇಳಿ ಬಂದಿತ್ತು. ಅಡುಗೆ ಎಣ್ಣೆ ಬೆಲೆ ದುಬಾರಿ ಆಗಿರುವ ಕಾರಣ ಕಳಪೆ ಗುಣಮಟ್ಟದ ಅಡುಗೆ ಎಣ್ಣೆ ಮಾರಾಟ ಮಾಡಿ ಭಾರಿ ಲಾಭ ಗಳಿಸುವ ಹುನ್ನಾರ ನಡೆಯುತ್ತಿದೆ ಎಂಬ ಆರೋಪ ಕೇಳಿ ಬಂದಿತ್ತು.

ಉಪ್ಪಿಗೆ ಅಯೋಡಿನ್ ಹೇಗೆ ಅವಶ್ಯವೋ ಹಾಗೆಯೇ ಅಡುಗೆ ಎಣ್ಣೆ ತಯಾರಿಕೆಗೆ ಪೋಷಕಾಂಶಗಳಾದ (fortification) ವಿಟಮಿನ್ ಎ ಮತ್ತು ಇ ಕೂಡ ಮನುಷ್ಯ ದೇಹಕ್ಕೆ ಅವಶ್ಯ ಹಾಗೂ ಕಡ್ಡಾಯ. ಆದರೆ ಅಡುಗೆ ಎಣ್ಣೆ ತಯಾರಿಕೆಯಲ್ಲಿ ಇದರ ಪ್ರಮಾಣದ ಕೊರತೆ ದೂರುಗಳು ಕೇಳಿ ಬಂದಿತ್ತು.

ಈ ಹಿನ್ನೆಲೆ ಫೋರ್ಟಿಫಿಕೇಷ್‌ನ್ ವಿಟಮಿನ್ ಎ ಮತ್ತು ಇ ಅನ್ನು ಕಡ್ಡಾಯವಾಗಿ ಒಳಗೊಂಡಿರಬೇಕೆಂದು ಸರ್ಕಾರ ಕಾನೂನು ಮಾಡಿದೆ. ಅಡುಗೆ ಎಣ್ಣೆಯಲ್ಲಿ ಎ ಮತ್ತು ಇ ವಿಟಮಿನ್‌ನಲ್ಲಿ ರೋಗ ನಿರೋಧಕ ಶಕ್ತಿ ಇರುತ್ತದೆ. ಜೊತೆಗೆ ರಕ್ತನಾಳ ಸುಸ್ಥಿತಿಯಲ್ಲಿದ್ದು, ಆರೋಗ್ಯ ಕಾಪಾಡುತ್ತದೆ.

ಆದರೆ ಕಳಪೆ ಅಡುಗೆ ಎಣ್ಣೆಯಲ್ಲಿ ಪೋಷಕಾಂಶ ಪ್ರಮಾಣ ಕನಿಷ್ಠವಾಗಿರುತ್ತದೆ. ಇದಲ್ಲದೆ ಅಡುಗೆ ಎಣ್ಣೆ ತಯಾರಿಕೆಗೆ ಅವಶ್ಯವಿರುವ ಗುಣಮಟ್ಟದ ಕಚ್ಚಾ ಪದಾರ್ಥವನ್ನು ಬಳಸುವುದಿಲ್ಲ. ಇಂತಹ ಅಡುಗೆ ಎಣ್ಣೆ ಆರೋಗ್ಯದ ಮೇಲೆ ಭಾರಿ ಪರಿಣಾಮ ಬೀರುತ್ತದೆ. ಇತ್ತೀಚಿನ ವರ್ಷಗಳಲ್ಲಿ ಕಳಪೆ ಗುಣಮಟ್ಟದ ಅಡುಗೆ ಎಣ್ಣೆ ಮಾಫಿಯಾ ಕಾರ್ಯಾಚರಿಸುತ್ತಿರುವ ಬಗ್ಗೆ ವ್ಯಾಪಕ ದೂರುಗಳಿವೆ.

ಈ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರದ ಆಹಾರ ಇಲಾಖೆಯ ನಿರ್ದೇಶನದ ಮೇರೆಗೆ ಆಹಾರ ಸುರಕ್ಷತೆ ಮತ್ತು ಔಷಧಿ ಆಡಳಿತ ಇಲಾಖೆ ಮೈಸೂರು ನಗರದ ಅಂಗಡಿಗಳಲ್ಲಿ ಮಾರಾಟವಾಗುತ್ತಿರುವ ಅಡುಗೆ ಎಣ್ಣೆಯ ಮಾದರಿಯನ್ನು ಸಂಗ್ರಹಿಸಿದೆ.

ಆಹಾರ ಇಲಾಖೆ ನಿರ್ದೇಶನದ ಮೇರೆಗೆ ದಾಳಿ

ಕಳಪೆ ಗುಣಮಟ್ಟದ ಅಡುಗೆ ಎಣ್ಣೆ ಮಾರಾಟ ಮಾಡುತ್ತಿರುವ ಬಗ್ಗೆ ದೂರುಗಳು ಕೇಳಿ ಬಂದಿತ್ತು. ಈ ಹಿನ್ನೆಲೆಯಲ್ಲಿ ಆಹಾರ ಇಲಾಖೆಯ ನಿರ್ದೇಶನದ ಮೇರೆಗೆ ನಮ್ಮ ಇಲಾಖೆಯ ಅಧಿಕಾರಿಗಳ ತಂಡ ಅಡುಗೆ ಎಣ್ಣೆ ಮಾರಾಟ ಸ್ಥಳಗಳಿಗೆ ದಿಢೀರ್ ದಾಳಿ ಮಾಡಿ ಮಾದರಿಗಳನ್ನು ಸಂಗ್ರಹಿಸಿದೆ. ಹೀಗೆ ಸಂಗ್ರಹಿಸಿರುವ ಅಡುಗೆ ಎಣ್ಣೆಯ ಮಾದರಿಗಳನ್ನು ಮೈಸೂರಿನ ವಿಭಾಗೀಯ ಆಹಾರ ಪ್ರಯೋಗಾಲಯಕ್ಕೆ ಕಳುಹಿಸಲಾಗಿದೆ. ಆದರೆ, ಇನ್ನು ವರದಿ ಬಂದಿಲ್ಲ. ಇದಲ್ಲದೆ ಸಂಗ್ರಹ ಮಾಡಿರುವ ಅಡುಗೆ ಎಣ್ಣೆಯ ಲೇಬಲ್ ಅನ್ನು ಕೂಡ ಗುಣಮಟ್ಟದ ಖಾತ್ರಿಗಾಗಿ ಪರೀಕ್ಷೆಗೊಳಪಡಿಸಿ ವಿಶ್ಲೇಷಣೆ ಮಾಡಲಾಗುತ್ತಿದೆ.

– ಡಾ. ಎಸ್.ಎಲ್.ರವೀಂದ್ರ, ಅಂಕಿತ ಅಧಿಕಾರಿ, ಆಹಾರ ಸುರಕ್ಷತೆ ಮತ್ತು ಔಷಧಿ ಆಡಳಿತ ಇಲಾಖೆ

ಪುನರ್‌ಬಳಕೆ ಮಾಡಿದ ಕರಿದ ಎಣ್ಣೆಯ ಮಾದರಿ ಕೂಡ ಸಂಗ್ರಹ

ವಡೆ, ಬೋಂಡಾ, ಸಮೋಸಾ, ಹಪ್ಪಳ ಸೇರಿದಂತೆ ಕೆಲವು ತಿಂಡಿಗಳನ್ನು ತಯಾರಿಸಲು ಪುನರ್ ಬಳಕೆ ಮಾಡಿರುವ ಅಡುಗೆ ಎಣ್ಣೆ ಕಪ್ಪು ಬಣ್ಣಕ್ಕೆ ತಿರುಗುತ್ತದೆ. ಇಂತಹ ಎಣ್ಣೆಯಿಂದ ತಯಾರಿಸಿದ ತಿಂಡಿ ತಿನಿಸುಗಳು ಮನುಷ್ಯನ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತದೆ. ಇಂತಹ ಎಣ್ಣೆಯಲ್ಲಿ ಟೋಟಲ್ ಪೋಲಾರ್ ಕಾಂಪೌಂಡ್ಸ್ (Total Polar Compounds (TPC)– ಹೆಚ್ಚಾಗಿರುತ್ತದೆ. ಹೋಟೆಲ್ ಹಾಗೂ ಸಿಹಿ ತಿಂಡಿ ತಯಾರಿಕೆಯ ಮಳಿಗೆಗಳಿಗೆ ದಿಢೀರ್ ದಾಳಿ ಮಾಡಿರುವ ಆಹಾರ ಸುರಕ್ಷತೆ ಮತ್ತು ಔಷಧಿ ಆಡಳಿತ ಇಲಾಖೆಯ ಅಧಿಕಾರಿಗಳ ತಂಡ ಅತೀ ಹೆಚ್ಚು ಪುನರ್ ಬಳಕೆ ಮಾಡಿರುವ ಎಣ್ಣೆಯ ಮಾದರಿ ಸಂಗ್ರಹಿಸಿದ್ದಾರೆ. ತರುವಾಯ ಕರಿದ ತಿಂಡಿ ತಿನಿಸುಗಳನ್ನು ಮೈಸೂರಿನ ವಿಭಾಗೀಯ ಆಹಾರ ಪ್ರಯೋಗಾಲಯಕ್ಕೆ ಕಳುಹಿಸಲಾಗಿದೆ. ಪ್ರಯೋಗಾಲಯದ ವರದಿ ಬಂದ ನಂತರ ತಪ್ಪಿತಸ್ಥರ ವಿರುದ್ಧ ಇಲಾಖೆ ಕ್ರಮ ಕೈಗೊಳ್ಳಲಿದೆ.

ಕಲಬೆರಕೆ ಅಡುಗೆ ಎಣ್ಣೆ ಹಾನಿಕಾರಕ

ಕಲಬೆರಕೆ ಅಡುಗೆ ಎಣ್ಣೆ ದೇಹದಲ್ಲಿ ಕೆಟ್ಟ ಕೊಲೆಸ್ಟ್ರಾಲ್ ಮಟ್ಟ ಹೆಚ್ಚಿಸಿ ಹೃದಯ ರೋಗದ ಅಪಾಯ ಹೆಚ್ಚಿಸುತ್ತದೆ. ಈ ಮೂಲಕ ದೀರ್ಘ ಕಾಲದ ಅನಾರೋಗ್ಯ ಸಮಸ್ಯೆಗೆ ಕಾರಣವಾಗುತ್ತದೆ. ಅತಿಯಾದ ಕೊಬ್ಬು ಮಿಶ್ರಿತ ಎಣ್ಣೆಯನ್ನು ಹೆಚ್ಚಾಗಿ ಸೇವಿಸಿದರೆ ಹೃದ್ರೋಗ ಕಟ್ಟಿಟ್ಟಬುತ್ತಿ. ಇಂಡೋನೇಷಿಯಾ ಮತ್ತು ಮಲೇಷಿಯಾದಿಂದ ಹೆಚ್ಚಾಗಿ ಅಡುಗೆ ಎಣ್ಣೆ ಆಮದು ಮಾಡಿಕೊಳ್ಳಲಾಗುತ್ತದೆ ಹೀಗೆ ಭಾರತಕ್ಕೆ ಬಂದ ಎಣ್ಣೆಯಲ್ಲಿ ಪಾಮ್ ಆಯಿಲ್ ಮಿಶ್ರಾ ಮಾಡುವ ಅನುಮಾನವಿದೆ ಇಂತಹ ಎಣ್ಣೆ ವಾಸನೆ, ರುಚಿ ಇರುವುದಿಲ್ಲ. ಪಾಮ್ ಆಯಿಲ್‌ನಲ್ಲಿ ಹೆಚ್ಚಿನ ಕೊಬ್ಬಿನ ಅಂಶವಿದ್ದು, ಇದನ್ನು ಮಿಶ್ರಣ ಮಾಡಲಾಗುತ್ತದೆ. ಇಂತಹ ಎಣ್ಣೆ ಆರೋಗ್ಯದ ಮೇಲೆ ತೀವ್ರ ಪರಿಣಾಮ ಬೀರುತ್ತದೆ.

ಕೆಳಗೆ ಬಿದ್ದವರನ್ನು ಜಗತ್ತು ಎಂದಿಗೂ ನೋಡಲ್ಲ

ಅವಕಾಶ ಸದ್ಬಳಕೆ ಮಾಡಿಕೊಂಡು ಶೈಕ್ಷಣಿಕ ಪ್ರಗತಿ ಸಾಧಿಸಿ

ಪಾಂಡವಪುರ, ಜೂ.13– ಜಗತ್ತು ಕೆಳಗೆ ಬಿದ್ದವರನ್ನು ಎಂದಿಗೂ ನೋಡುವುದಿಲ್ಲ. ಹಾಗಾಗಿ ಮಕ್ಕಳು ತಮಗೆ ಸಿಕ್ಕ ಅವಕಾಶವನ್ನು ಸದ್ಬಳಕೆ ಮಾಡಿಕೊಂಡು ಶೈಕ್ಷಣಿಕ ಪ್ರಗತಿ ಸಾಧಿಸಿ ಭವಿಷ್ಯ ರೂಪಿಸಿಕೊಳ್ಳಬೇಕೆಂದು ಆದಿಚುಂಚನಗಿರಿ ಕ್ಷೇತ್ರದ ಪೀಠಾಧ್ಯಕ್ಷ ಡಾ. ಶ್ರೀನಿರ್ಮಲಾನಂದನಾಥ ಸ್ವಾಮೀಜಿ ತಿಳಿಸಿದರು.

ತಾಲೂಕಿನ ಜಯಂತಿನಗರದ ಶ್ರೀಶಂಭುಲಿಂಗೇಶ್ವರ ಶಿಕ್ಷಣ ಸಂಸ್ಥೆಯಲ್ಲಿ ನಡೆದ ಅಕ್ಷರ ಆಶೀರ್ವಾದ, ಕ್ರೀಡೆ ಹಾಗೂ ಶೈಕ್ಷಣಿಕ ಕ್ಷೇತ್ರದ ಸಾಧಕರಿಗೆ ಸನ್ಮಾನ ಸಮಾರಂಭದಲ್ಲಿ ಭಾಗವಹಿಸಿ ಮಕ್ಕಳಿಗೆ ಅಕ್ಷರಾಭ್ಯಾಸ ಮಾಡಿಸಿ ನಂತರ ನಡೆದ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಪ್ರತಿಯೊಬ್ಬ ವಿದ್ಯಾರ್ಥಿಗಳ ಭವಿಷ್ಯ ಅವರ ಕೈಯಲ್ಲಿಯೇ ಇರುತ್ತದೆ, ವಿದ್ಯಾರ್ಥಿಗಳು ಸಿಕ್ಕ ಅವಕಾಶ, ಸ್ವಾತಂತ್ರ್ಯವನ್ನು ಸದ್ಬಳಕೆ ಮಾಡಿಕೊಳ್ಳದಿದ್ದರೆ ಸಮಾಜದಲ್ಲಿ ನಾಚಿಕೆ, ಅವಮಾನವನ್ನು ಅನುಭವಿಸಬೇಕಾಗುತ್ತದೆ. ಚನ್ನಾಗಿ ಓದುವ ಮೂಲಕ ಭವಿಷ್ಯ ರೂಪಿಸಿಕೊಂಡು ದೊಡ್ಡ ಸ್ಥಾನ–ಮಾನಗಳಿಸಿದರೆ ಸಮಾಜವೇ ನಿಮ್ಮನ್ನು ಗೌರವಿಸುತ್ತದೆ ಎಂದರು.

ಮುಂದಿನ ನೂರು ವರ್ಷಗಳ ಜಗತ್ತಿನ ಪ್ರಯಾಣಕ್ಕಾಗಿ ಬೇಕಾಗಿರುವ ಜ್ಞಾನ ಪಡೆದುಕೊಳ್ಳುವುದಕ್ಕಾಗಿ ಅಕ್ಷರಾಭ್ಯಾಸ ಮಾಡಿಸಬೇಕು, ಮರೆಯಲಾಗದ, ಯಾರಿಂದಲೂ ನಾಶಪಡಿಸಲಾಗದ ವಿದ್ಯೆಯೇ ಅಕ್ಷರವಾಗಿದೆ. ಶಾಲೆಯಲ್ಲಿ ಶಿಕ್ಷಕರು ಹೇಳಿಕೊಡುವ ಪಾಠಪ್ರವಚನಗಳು ಅರ್ಥವಾಗದಿದ್ದರೆ ಶಿಕ್ಷಕರನ್ನು ವಿದ್ಯಾರ್ಥಿಗಳು ಪ್ರಶ್ನಿಸಬೇಕು, ಪ್ರತಿಯೊಬ್ಬ ವಿದ್ಯಾರ್ಥಿಗಳು ತಮ್ಮ ಜವಾಬ್ದಾರಿಯನ್ನು ಅರಿತುಕೊಂಡು ಶಿಸ್ತು, ಸಂಯಮ ಬೆಳೆಸಿಕೊಂಡು ಅಧ್ಯಯನ ಮಾಡಬೇಕು ಎಂದು ಸಲಹೆ ನೀಡಿದರು.

ಪ್ರೊ.ಎಂ.ಕೃಷ್ಣೇಗೌಡ ಮಾತನಾಡಿ, ಹಿಂದಿನ ಕಾಲದಲ್ಲಿ ಮಕ್ಕಳು ಓದುವುದಕ್ಕೆ ಪೋಷಕರೇ ಅಡ್ಡಗಾಲಾಗಿದ್ದರು, ಶಾಲೆಗೆ ಓದಲು ಹೋಗುವ ಮಕ್ಕಳನ್ನು ನೋಡಿ ಲೇವಡಿ ಮಾಡುವವರು ಹೆಚ್ಚಾಗಿದ್ದರು. ಆದರೀಗ ಕಾಲಬದಲಾಗಿದೆ.ಶಿಕ್ಷಣ ಎನ್ನುವುದು ಪ್ರತಿಯೊಬ್ಬರಿಗೂ ಮುಖ್ಯವಾಗಿದೆ. ಪೋಷಕರು ಎಷ್ಟೇ ಕಷ್ಟವಿದ್ದರೂ ತಮ್ಮ ಮಕ್ಕಳನ್ನು ಓದಿಸಲು ಮುಂದಾಗುತ್ತಿದ್ದಾರೆ ಎಂದರು.

ಪ್ರೊ.ಎಂ.ಪಂಚಲಿಂಗೇಗೌಡ ಮಾತನಾಡಿದರು. ಇದೇ ವೇಳೆ ಭಾರತೀಯ ಖೋ–ಖೋ ವಿಶ್ವಕಪ್ ವಿಜೇತ ತಂಡ ಆಟಗಾರ್ತಿ ಶಾಲೆಯ ವಿದ್ಯಾರ್ಥಿನಿ ಬಿ.ಚೈತ್ರ, ಅಮೂಲ್ಯ, ಎಂ.ಕೆ. ಗೌತಮ್ ಸೇರಿದಂತೆ ಶಾಲೆಯ ರಾಷ್ಟ್ರೀಯ ಮಟ್ಟದ ಕ್ರೀಡಾಪಟುಗಳು ಹಾಗೂ 2024–25ನೇ ಸಾಲಿನ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕಗಳಿಸಿದ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು. ಕಾರ್ಯಕ್ರಮಕ್ಕೂ ಮುನ್ನ ಶಾಸಕ ದರ್ಶನ್‌ಪುಟ್ಟಣ್ಣಯ್ಯ ಭೇಟಿ ನೀಡಿ ಶುಭಹಾರೈಸಿದರು.

ಸಮಾರಂಭದಲ್ಲಿ ಕೊಮ್ಮೇರಹಳ್ಳಿ ಶಾಖಾಮಠದ ಪೀಠಾಧ್ಯಕ್ಷ ಶ್ರೀಪುರುಷೋತ್ತಮನಂದನಾಥ ಸ್ವಾಮೀಜಿ, ಸಂಸ್ಥೆಯ ಅಧ್ಯಕ್ಷ ಪಿ.ಹೊನ್ನರಾಜು, ಮಾಜಿ ಅಧ್ಯಕ್ಷ ಶ್ರೀನಿವಾಸ್, ಟ್ರಸ್ಟ್ ಶಾರದಮ್ಮ, ಆಡಳಿತಾಧಿಕಾರಿ ಅಕ್ಷಯ್, ಗೌತಮ್, ಡಿ.ಎಸ್.ದೇವರಾಜು, ಕೆ.ಕುಬೇರ, ಪ್ರಾಂಶುಪಾಲ ಶ್ರೀಕಾಂತ್ ಸೇರಿದಂತೆ ಶಿಕ್ಷಕ ವೃಂದವರು ಹಾಜರಿದ್ದರು.



ಶ್ರೀಶಂಭುಲಿಂಗೇಶ್ವರ ಶಿಕ್ಷಣ ಸಂಸ್ಥೆಯಲ್ಲಿ ನಡೆದ ಅಕ್ಷರಾಭ್ಯಾಸ ಹಾಗೂ ವಿವಿಧ ಕ್ಷೇತ್ರದ ಸಾಧಕರ ಸನ್ಮಾನ ಸಮಾರಂಭವನ್ನು ಡಾ.ಶ್ರೀನಿರ್ಮಲಾನಂದನಾಥ ಸ್ವಾಮೀಜಿ ಉದ್ಘಾಟಿಸಿದರು.

ರೈತರ ಕೈಹಿಡಿಯುವುದೇ ಭೂತಾಯಿ

ನಾಗಮಂಗಲ: ಶ್ರಮ ಜೀವಿ ರೈತರಿಗೆ ಭೂತಾಯಿ ಯಾವಾಗಲೂ ಮೋಸ ಮಾಡುವುದಿಲ್ಲ ರೈತರ ಏಳಿಗೆಗಾಗಿ ಪ್ರತಿಫಲ ನೀಡುವ ಭೂಮಿಗೆ ನಾವುಗಳು ಚಿರಋಣಿಯಾಗಿ ಇರಬೇಕೆಂದು ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಚೆಲುವರಾಯಸ್ವಾಮಿ ತಿಳಿಸಿದರು.

ತಾಲೂಕು ದೇವಲಾಪುರ ಹೋಬಳಿ ಕೇಂದ್ರದಲ್ಲಿ ದೇವಲಾಪುರ ರೈತ ಉತ್ಪಾದಕರ ಕಂಪನಿಯ ನೂತನ ಕಟ್ಟಡಕ್ಕೆ ಗುದ್ದಲಿ ಪೂಜೆ ನೆರವೇರಿಸಿ ಮಾತನಾಡಿದರು.

ಕೃಷಿ ಇಲಾಖೆಯ ಸಹಯೋಗದಲ್ಲಿ ಕೃಷಿ ಪೂರಕ ಸಂಸ್ಥೆಗಳಿದ್ದು ಇದರ ಪ್ರಯೋಜನ ಪಡೆದುಕೊಳ್ಳುವ ಮುಖಾಂತರ ತಾವೇ ಉತ್ಪಾದಕ ಕಂಪನಿಗಳ ನಿರ್ವಹಣೆ ಮಾಡುವ ವ್ಯವಸ್ಥೆ ಇದ್ದರೆ ಸರ್ಕಾರ ಕಡಿಮೆ ಬಡ್ಡಿ ದರದಲ್ಲಿ ಸಾಲ ಸೌಲಭ್ಯದ ವ್ಯವಸ್ಥೆ ಸಿಗಲಿದೆ. ಶ್ರಮಜೀವಿ ರೈತರಿಗೆ ಭೂತಾಯಿ ಮಡಿಲು ತಕ್ಕ ಪ್ರತಿಫಲ ನೀಡುವುದರಲ್ಲಿ ಯಾವುದೇ ಅನುಮಾನವಿಲ್ಲ ಎಂದು ಇದೇ ಸಂದರ್ಭದಲ್ಲಿ ತಿಳಿಸಿದರು. ಸಮಾರಂಭದ ಅಧ್ಯಕ್ಷತೆಯನ್ನು ರೈತ ಉತ್ಪಾದಕರ ಸಂಘದ ಅಧ್ಯಕ್ಷರಾದ ಹಾಗೂ ರಾಜ್ಯ ನಿರ್ದೇಶಕ ಎನ್.ಜೆ ರಾಜೇಶ್ ವಹಿಸಿದ್ದರು.

ಇದೇ ಸಂದರ್ಭದಲ್ಲಿ ಪಾಂಡವಪುರ ಉಪ ವಿಭಾಗಾಧಿಕಾರಿ ಶ್ರೀನಿವಾಸ್, ತಾಲೂಕು ದಂಡಾಧಿಕಾರಿ ಆದರ್ಶ.ಜಿ, ಮಂಡ್ಯ ಜಿಲ್ಲಾ ಕೃಷಿ ಜಂಟಿ ನಿರ್ದೇಶಕ ಅಶೋಕ್, ಕೃಷಿ ಉಪ ನಿರ್ದೇಶಕ ಭಾನುಪ್ರಕಾಶ್, ಸಹಾಯಕ ಕೃಷಿ ನಿರ್ದೇಶಕ ಹರೀಶ್ ಹಾಗೂ ಮಂಡ್ಯ ಕಾರಸವಾಡಿ ಮಹದೇವ, ನಗಿಲು ಯೋಗಿ ಬಸವರಾಜು, ಗ್ರಾಮ ಸದಸ್ಯ ರಮೇಶ್, ಜಿಲ್ಲೆ ಹಾಗೂ ತಾಲೂಕು ಅಧಿಕಾರಿಗಳು, ಮಂಡ್ಯ ಜಿಲ್ಲೆ ರೈತ ಉತ್ಪಾದಕರ ಸಂಘದ ಅಧ್ಯಕ್ಷರುಗಳು, ನಿರ್ದೇಶಕರಿದ್ದರು.

ಇದೇ ಸಂದರ್ಭದಲ್ಲಿ ಸಚಿವರು ಕರಡಹಳ್ಳಿ ಗ್ರಾಮದಲ್ಲಿ ನೂತನವಾಗಿ ಪಶು ಸಂಗೋಪನ ಚಿಕಿತ್ಸಾಲಯ ಉದ್ಘಾಟನೆ ನೆರವೇರಿಸಿದರು. ಕರಡಹಳ್ಳಿ ಗ್ರಾಮದಲ್ಲಿ ದೇವಸ್ಥಾನ, ರಸ್ತೆ ಹಾಗೂ 10 ಲಕ್ಷ ವೆಚ್ಚದಲ್ಲಿ ಸಮುದಾಯ ಭವನ ನಿರ್ಮಾಣ ಮಾಡುವ ಭರವಸೆ ನೀಡಿದರು.

ಸಿದ್ದರಾಮಯ್ಯ ಸರ್ಕಾರದ ವತಿಯಿಂದ ಕುರಿ ಮೇಕೆ ಹೊಂದಿದ ಒಂದು ಕುರಿಗೆ 7,500 ರೂ. ಹಾಗೂ ಸೀಮೆ ಹಸುಗೆ 15,000 ರೂ.ಸಹಾಯ ಧನವಾಗಿ ನೀಡಲಾಗುವುದು ಎಂದರು. ದೇವಲಾಪುರ ಹ್ಯಾಂಡ್ ಪೋಸ್ಟ್‌ನಲ್ಲಿರುವ ಸರ್ಕಾರಿ ಪಾಲಿಟೆಕ್ನಿಕ್ ನೂತನ ಪ್ರಯೋಗಾಲಯ ಕೊಠಡಿ ಹಾಗೂ ಸೆಮಿನಾರ್ ಹಾಲ್ ಕಟ್ಟಡ ಯೋಜನೆ ವೆಚ್ಚ 250 ಲಕ್ಷಗಳು ಹಾಗೂ ಆಸನಗಳ ಸಾಮರ್ಥ್ಯ 100 ಇದ್ದು ಕರ್ನಾಟಕ ಗೃಹ ಮಂಡಳಿರವರು ಕಟ್ಟಡ ನಿರ್ಮಾಣ ಮಾಡಲಿದ್ದಾರೆ ಎಂದರು.



ಗುದ್ದಲಿ ಪೂಜೆ ನೆರವೇರಿಸುತ್ತಿರುವ ಉಸ್ತುವಾರಿ ಸಚಿವ ಚೆಲುವರಾಯಸ್ವಾಮಿ.

ಕೊರಟಿಕೆರೆ ಗ್ರಾಮದಲ್ಲಿ ನಡೆದ ಗ್ರಾಮದೇವತೆ ಹಬ್ಬ



ಕೆ.ಆರ್.ಪೇಟೆ: ಹಬ್ಬ ಹರಿದಿನಗಳು ಹಾಗೂ ಜಾತ್ರೆ ರಥೋತ್ಸವಗಳು ನಮ್ಮ ಸಂಸ್ಕೃತಿಯ ಪ್ರತಿಬಿಂಬವಾಗಿವೆ. ಹಬ್ಬದ ಸಂಭ್ರಮದಲ್ಲಿ ಎಲ್ಲರೂ ಒಂದಾಗಿ ಭಾಗವಹಿಸಿದಾಗ ಸಿಗುವ ಸಂತೋಷಕ್ಕೆ ಬೆಲೆಕಟ್ಟಲು ಸಾಧ್ಯವಿಲ್ಲ ಎಂದು ಕೆಂಗೇರಿಯ ವಿಶ್ವ ಒಕ್ಕಲಿಗರ ಮಹಾಸಂಸ್ಥಾನ ಮಠದ ಡಾ. ನಿಶ್ಚಲಾನಂದನಾಥ ಸ್ವಾಮೀಜಿ ಹೇಳಿದರು.

ಸಾಂಸ್ಕೃತಿಕ ಗ್ರಾಮವಾದ ಕೊರಟಿಕೆರೆಯ ಊರ ಹಬ್ಬದಲ್ಲಿ ಭಾಗವಹಿಸಿ ಶ್ರೀ ರಾಮಲಿಂಗೇಶ್ವರ, ಚೌಡೇಶ್ವರಿ ಅಮ್ಮನವರಿಗೆ ವಿಶೇಷ ಪೂಜೆ ಸಲ್ಲಿಸಿ ಮಾತನಾಡಿದರು.

ಬೆಳಿಗ್ಗೆ ನಡೆದ ಧಾರ್ಮಿಕ ಕಾರ್ಯಕ್ರಮಗಳನ್ನು ಉದ್ಘಾಟಿಸಿ ಮಾತನಾಡಿದ ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಡಾ.ನಿರ್ಮಲಾನಂದನಾಥಸ್ವಾಮೀಜಿ, ಪ್ರಾಪಂಚಿಕದಲ್ಲಿ ಎಲ್ಲಾ ಜಂಜಾಟಗಳನ್ನು ಮರೆತು ಕುಟುಂಬದಲ್ಲಿ ಒಂದುಗೂಡಬೇಕು. ಆದರೆ ಶಾಂತಿ ನೆಮ್ಮದಿಯನ್ನು ಯಾವುದೇ ಮಾರುಕಟ್ಟೆಯಲ್ಲಿ ಕೊಂಡುಕೊಳ್ಳಲು ಸಿಗುವುದಿಲ್ಲ ಕೇವಲ ದೇವಾಲಯಕ್ಕೆ ಶ್ರದ್ಧಾಭಕ್ತಿಯಿಂದ ಭೇಟಿ ನೀಡಿ ದೇವರನ್ನು ನಿಶ್ಚಲ ಮನಸ್ಸಿನಿಂದ ಪ್ರಾರ್ಥಿಸಿ ಪೂಜಿಸಿದಾಗ ಮನಸ್ಸಿಗೆ ಶಾಂತಿ ನೆಮ್ಮದಿ ಸಿಗುತ್ತದೆ ಎಂದರು.

ದೇವಾಂಗ ಗುರುಪೀಠದ ಶ್ರೀ ದಯಾನಂದಪುರಿ ಸ್ವಾಮೀಜಿ, ಮಂಡ್ಯದ ವಿಶ್ವ ಮಾನವ ಕ್ಷೇತ್ರದ ಶ್ರೀ ಪುರುಷೋತ್ತಮಾನಂದ ನಾಥ ಸ್ವಾಮೀಜಿ, ಬೇಡದಹಳ್ಳಿಯ ಶ್ರೀ ಪಂಚಭೂತೇಶ್ವರ ಮಠದ ಶ್ರೀ ರುದ್ರಮುನಿ ಸ್ವಾಮೀಜಿ ಭಾಗವಹಿಸಿದ್ದರು

ಕೆಆರ್‌ಎಸ್ ಬಳಿ ವೃದ್ಧ ದಂಪತಿ ನೇಣಿಗೆ ಶರಣು

ಕೊಳೆತ ಸ್ಥಿತಿಯಲ್ಲಿ ಶವ ಪತ್ತೆ, ಸ್ಥಳಕ್ಕೆ ಅಧಿಕಾರಿಗಳ ಭೇಟಿ

ಕೆ.ಆರ್.ಸಾಗರ: ವೃದ್ಧ ದಂಪತಿ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಸಮೀಪದ ಬೆಳಗೊಳ ಗ್ರಾಮದ ಜಮೀನಿನಲ್ಲಿ ಸಂಭವಿಸಿದೆ.

ಬೆಳಗೊಳದ ರಾಚಯ್ಯ ಎಂಬುವರ ಜಮೀನಿನಲ್ಲಿ ಪ್ಲಾಸ್ಟಿಕ್ ಹಗ್ಗದಿಂದ ನೇಣು ಬಿಗಿದ ಸ್ಥಿತಿಯಲ್ಲಿ ವೃದ್ಧರ ಶವ ದೊರೆತಿದ್ದು, ಸಂಪೂರ್ಣ ಕೊಳೆತ ಸ್ಥಿತಿಯಲ್ಲಿದೆ. ದಂಪತಿ ಜೀವನದಲ್ಲಿ ಜಿಗುಪ್ಸೆಗೊಂಡು ಆತ್ಮಹತ್ಯೆಗೆ ಶರಣಾಗಿರಬಹುದು ಎಂದು ಶಂಕಿಸಲಾಗಿದೆ. ಮೃತರ ವಿವರಗಳು ಇನ್ನು ಲಭ್ಯವಾಗಿಲ್ಲ. ಶುಕ್ರವಾರ ಜಮೀನಿನ ಮಾಲೀಕ ಜೆಸಿಬಿ ಮೂಲಕ ಕೆಲಸ ಮಾಡುತ್ತಿದ್ದ ಸಂದರ್ಭದಲ್ಲಿ ಇಬ್ಬರ ಶವ ಸಂಪೂರ್ಣ ಕೊಳೆತ ಸ್ಥಿತಿಯಲ್ಲಿ ಕಂಡು ಬಂದಿದ್ದು, ಕೆ.ಆರ್.ಸಾಗರ ಪೊಲೀಸ್ ಠಾಣೆಗೆ ಮಾಹಿತಿ ನೀಡಿದ್ದಾರೆ. ಮಾಹಿತಿ ಮೇರೆಗೆ ಸ್ಥಳಕ್ಕೆ ಕೆ.ಆರ್.ಸಾಗರ ಪಿ.ಎಸ್.ಐ ರಮೇಶ ಕರ್ಕಿಕಟ್ಟೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಮಂಡ್ಯ ಜಿಲ್ಲಾ ಸೋಕೊ ತಂಡ ಕೂಡ ಶವಗಳನ್ನು ಪರಿಶೀಲನೆ ನಡೆಸಿ ಮತ್ತು ಸ್ಥಳ ಪರಿಶೀಲನೆ ನಡೆಸಿದರು.

ನಂತರ ಮಂಡ್ಯ ಜಿಲ್ಲಾ ಅಪರ ಪೊಲೀಸ್ ವರಿಷ್ಠಾಧಿಕಾರಿ ತಿಮ್ಮಯ್ಯ ಮತ್ತು ಡಿವೈಎಸ್‌ಪಿ ಶಾಂತಮಲ್ಲಪ್ಪ ಭೇಟಿ ನೀಡಿ ಮಾಹಿತಿ ಪಡೆದರು.

ಮೃತ ಮಹಿಳೆ ಸುಮಾರು 60 ರಿಂದ 65 ವರ್ಷದವರಾಗಿದ್ದು, ಸುಮಾರು 5 ಅಡಿ ಎತ್ತರ, ಬಿಳಿ ತಲೆಗೂದಲು ಹೊಂದಿದ್ದಾರೆ. ನೇರಳೆ ಕೆಂಪು ಸೀರೆ ಧರಿಸಿದ್ದಾರೆ. ಮೃತ ಪುರುಷ ಸುಮಾರು 65 ರಿಂದ 70 ವರ್ಷದ ವಯಸ್ಸಿನರಾಗಿದ್ದು, ಬಿಳಿ ತಲೆಗೂದಲು, ಬಿಳಿ ಕುರುಚಲು ಗಡ್ಡ ಹೊಂದಿದ್ದು, ತಿಳಿ ಹಸಿರು ಬಣ್ಣದ ಟೀ ಶರ್ಟ್, ಬೆಲ್ಟ್ ಹಾಕಿರುವ ನೀಲಿ ಬಣ್ಣದ ಪ್ಯಾಂಟ್ ಧರಿಸಿದ್ದಾರೆ.

ಸಂಪೂರ್ಣ ಇಬ್ಬರು ಶವಗಳು ಕೊಳೆತಿದ್ದು ಸುಮಾರು 20 ರಿಂದ 25 ದಿನಗಳ ಹಿಂದೆ ಸಾವನ್ನಪ್ಪಿರಬಹುದೆಂದು ಪೊಲೀಸರು ಮತ್ತು ಸೋಕೊ ತಂಡ ಶಂಕೆ ವ್ಯಕ್ತಪಡಿಸಿದ್ದು, ಇಬ್ಬರ ಶವ ಕೂಡ ಸಂಪೂರ್ಣ ಕೊಳೆತ ಸ್ಥಿತಿಯಲ್ಲಿದ್ದ ಕಾರಣ ಮೈಸೂರು ಕೆ.ಆರ್.ಆಸ್ಪತ್ರೆ ಶವಾಗಾರದಲ್ಲಿ ಶವ ಪರೀಕ್ಷೆ ನಡೆಸಿ, ಸಮೀಪದ ರುದ್ರಭೂಮಿಯಲ್ಲಿ ಕಾನೂನು ರೀತ್ಯ ಅಂತ್ಯಕ್ರಿಯೆಯನ್ನು ಕೆ.ಆರ್. ಸಾಗರ ಪೊಲೀಸರು ನಡೆಸಿದರು. ವಾರಸುದಾರರು ಕೆ.ಆರ್.ಸಾಗರ ಪೊಲೀಸ್ ಠಾಣೆ ಪಿಎಸ್‌ಐ ಮೊ.ಸಂಖ್ಯೆ 9480804856 ಸಂಪರ್ಕಿಸಲು ಕೋರಲಾಗಿದೆ.

ಅಪರಿಚಿತ ಶವ ಪತ್ತೆ

ಮಂಡ್ಯ: ನಗರದ ಶುಗರ್ ಟೌನ್‌ನ ರೈಲ್ವೆ ಕ್ವಾಟ್ರರ್ಸ್ ಮುಂಭಾಗದ ಚರಂಡಿಯಲ್ಲಿ ಅಪರಿಚಿತ ಮೃತದೇಹ ಪತ್ತೆಯಾಗಿದ್ದು, ಮಂಡ್ಯ ಸೆಂಟ್ರಲ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಮೃತ ಗಂಡಸಿಗೆ ಸುಮಾರು 60–65 ವರ್ಷ ವಯಸ್ಸಾಗಿದ್ದು, ಮೃತ ವ್ಯಕ್ತಿಯು ಮಾಸಲು ಬಣ್ಣದ ಲಾಡಿ ನಿಕ್ಕರ್ ಧರಿಸಿರುತ್ತಾರೆ. ವಾರಸುದಾರರಿದ್ದಲ್ಲಿ ಪೊಲೀಸ್ ಠಾಣೆಯ ದೂ.ಸಂ:08232–224500–/08232–221345–/ 0823222 ಅನ್ನು ಸಂಪರ್ಕಿಸಬಹುದೆಂದು ಸೆಂಟ್ರಲ್ ಠಾಣೆ ಆರಕ್ಷಕ ಉಪನಿರೀಕ್ಷಕರು ತಿಳಿಸಿದ್ದಾರೆ.

ನಾಳೆ ವಿದ್ಯುತ್ ವ್ಯತ್ಯಯ

ಮಂಡ್ಯ: ವಿದ್ಯುತ್ ವಿತರಣಾ ಕೇಂದ್ರದಲ್ಲಿ ತ್ರೈಮಾಸಿಕ ಕಾರ್ಯನಿರ್ವಹಣೆ ಹಮ್ಮಿಕೊಂಡಿರುವುದರಿಂದ ಜೂ.15 ಬೆಳಿಗ್ಗೆ 9 ರಿಂದ ಸಂಜೆ 5 ಗಂಟೆಯ ವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ.

ಗುತ್ತಲು, ಫ್ಯಾಕ್ಟರಿ ವೃತ್ತ ಕೈಗಾರಿಕ ಬಡಾವಣೆಗಳು, ಎಂ.ಸಿ.ರಸ್ತೆ, ತಾವರೆಗೆರೆ, ನೆಹರು ನಗರ, ಉದಯಗಿರಿ, ಸಾದತ್ ಮೊಹಲ್ಲ, ಚನ್ನಯ್ಯ ಬಡಾವಣೆ, ಸಿದ್ದಾರ್ಥ ಬಡಾವಣೆ, ಬೆಂಗಳೂರು ಮುಖ್ಯ ರಸ್ತೆಯ ಹೆಬ್ಬಾಳ ಹಾಗೂ ಸುತ್ತಮುತ್ತಲಿನ ಪ್ರದೇಶಗಳು.

ಶ್ರೀನಿವಾಸಪುರ ಗೇಟ್, ಹನಕೆರೆ ಐ.ಪಿ ವ್ಯಾಪ್ತಿ, ಕೀಲಾರ ಐ.ಪಿ ವ್ಯಾಪ್ತಿ, ಬಸವನಪುರ ಐಪಿ ವ್ಯಾಪ್ತಿ, ಬೂದನೂರು, ಭೂತನ ಹೊಸೂರು, ಚನ್ನಪ್ಪನ ದೊಡ್ಡಿ, ಹಂಬರಹಳ್ಳಿ ಹಾಗೂ ಸುತ್ತಮುತ್ತಲಿನ ಗ್ರಾಮಗಳು. ಹೊಡಾಘಟ್ಟ, ಕೀಲಾರ, ಹನಕೆರೆ, ಹಳೆ ಬೂದನೂರು, ಹೊಸಬೂದನೂರು, ಈಚಗೆರೆ, ಹಂಬರಹಳ್ಳಿ, ಆಲಕೆರೆ, ನಲ್ಲಹಳ್ಳಿ, ಕಚ್ಚಿಗೆರೆ, ಶ್ರೀನಿವಾಸಪುರ ಗೇಟ್, ಹೊನಗಾನಹಳ್ಳಿಮಠ, ತುಂಬಕೆರೆ, ಚಾಮಲಾಪುರ, ಉಮ್ಮಡಹಳ್ಳಿ, ಬಸವನಪುರ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದ್ದು, ಗ್ರಾಹಕರು ಕಂಪನಿಯೊಂದಿಗೆ ಸಹಕರಿಸಬೇಕೆಂದು ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತದ ಪ್ರಕಟಣೆ ತಿಳಿಸಿದೆ.

ಇಂಡುವಾಳು ವ್ಯವಸಾಯ ಸೇವಾ ಸಹಕಾರ ಪತ್ತಿನ ಸಂಘಕ್ಕೆ ಅಧ್ಯಕ್ಷ, ಉಪಾಧ್ಯಕ್ಷರ ಆಯ್ಕೆ



ಇಂಡುವಾಳು ವ್ಯವಸಾಯ ಸೇವಾ ಸಹಕಾರ ಪತ್ತಿನ ಸಂಘದ ಅಧ್ಯಕ್ಷರಾಗಿ ಎಚ್ ಶ್ರೀಧರ್, ಉಪಾಧ್ಯಕ್ಷರಾಗಿ ಜಯಶೀಲ ಆಯ್ಕೆಯಾಗಿದ್ದು, ಬಿಜೆಪಿ ಮುಖಂಡರಾದ ಎಸ್.ಸಚ್ಚಿದಾನಂದ ಅವರ ನಿವಾಸಕ್ಕೆ ಭೇಟಿ ನೀಡಿ ಅವರನ್ನು ಸನ್ಮಾನಿಸಿದರು. ಈ ಸಂದರ್ಭದಲ್ಲಿ ನಿರ್ದೇಶಕರುಗಳಾದ ಚನ್ನೇಗೌಡ, ಸತೀಶ್, ಸಿದ್ದರಾಮು, ಕೆಂಪಯ್ಯ, ನಿಂಗೇಗೌಡ, ಕಾಳೇಗೌಡ, ನಾಗರತ್ನ, ಸಿದ್ದಯ್ಯ ಹಾಗೂ ಮುಖಂಡರುಗಳಾದ ಎಲ್.ನಿತ್ಯಾನಂದ, ರಘು, ತ್ರಿಲೋಕ್, ಸತ್ಯ, ಸುಂದರ್, ಕುಮಾರ್, ಸಿದ್ದರಾಜು, ನಂಜೇಗೌಡ, ಕೃಷ್ಣೇಗೌಡ, ಉಮೇಶ್, ಕೃಷ್ಣ ಹಾಗೂ ಇಂಡವಾಳು, ಸಿದ್ದಯ್ಯನಕೊಪ್ಪಲು, ಸುಂಡಹಳ್ಳಿ, ಮೋಳೆಕೊಪ್ಪಲು ಗ್ರಾಮದ ಮುಖಂಡರುಗಳು ಹಾಗೂ ಯುವಕ ಮಿತ್ರರು ಉಪಸ್ಥಿತರಿದ್ದರು.

ಒಂದನೇ ಪುಟದಿಂದ

ವಿಡಿಯೋ, ರೀಲ್ಸ್ ಮಾಡಬಹುದು!

ದೃಶ್ಯಾವಳಿಗಳನ್ನು ವೀಕ್ಷಿಸಬೇಕಾದ ಕೈಗಾರಿಕಾ ಭದ್ರತಾ ಪಡೆಯ ಸಿಬ್ಬಂದಿ ಮಾಡುತ್ತಿದ್ದರಾದರೂ ಏನು? ಎಂದು ಸಾರ್ವಜನಿಕರು ಪ್ರಶ್ನಿಸುತ್ತಿದ್ದಾರೆ.

ರೀಲ್ಸ್‌ನಲ್ಲಿ ಯುವಕರು ಜಲಾಶಯದ ಕ್ರೆಸ್ಟ್ ಗೇಟ್ ಬಳಿ ಭದ್ರತೆ ಮೀರಿ ಹೋಗಿರುವುದು ಕಂಡು ಬರುತ್ತಿದೆ. ಅಲ್ಲದೇ ಜಲಾಶಯಕ್ಕೆ ಭದ್ರತೆ ಕಲ್ಪಿಸಬೇಕಾದ ಭದ್ರತಾ ಪಡೆಗಳು ಸಮರ್ಪಕವಾಗಿ ಕಾರ್ಯನಿರ್ವಹಿಸದೇ ಕಣ್ಮುಚ್ಚಿ ಕುಳಿತಿರುವುದು ಭಾಸವಾಗುತ್ತಿದೆ. ಆದರೆ ರೀಲ್ಸ್‌ನಲ್ಲಿ ಬಂದಿರುವ ಈ ಸ್ಥಳ ಮಾತ್ರವಲ್ಲದೇ ಕೆಆರ್‌ಎಸ್ ಜಲಾಶಯದ ಅತೀ ಸೂಕ್ಷ್ಮವಾದ ನಿಷೇಧಿತ ಪ್ರದೇಶಗಳಲ್ಲಿ ಪುಂಡ–ಪೋಕರಿಗಳ ಹಾವಳಿ ಎಲ್ಲೆ ಮೀರಿದೆ ಎಂದು ಬಲ್ಲವರು ಹೇಳುತ್ತಿದ್ದಾರೆ. ಹಾಡ ಹಗಲೇ ಜಲಾಶಯದ ನಿಷೇಧಿತ ಪ್ರದೇಶದಲ್ಲಿ ಪುಂಡರು ರಾಜಾರೋಷವಾಗಿ ಕುಡಿದು ಕುಪ್ಪಳಿಸಿ ಬಂಡೆಗಳ ಮೇಲೆ ಬಾಟಲ್‌ಗಳನ್ನು ಒಡೆದು ಹಾಕುತ್ತಾರೆ. ಕೆಲವರಂತೂ ಕ್ರೆಸ್ಟ್ ಗೇಟ್ ಒಳಗೇ ಕುಳಿತು ಮದ್ಯ ಸೇವನೆ ಮಾಡುತ್ತಾರೆ. ಕೆಲವೊಮ್ಮೆ ಜೂಜಾಟವೂ ನಡೆಯುತ್ತದೆ. ಇಷ್ಟೆಲ್ಲಾ ಆದರೂ ಜಲಾಶಯ ಭದ್ರತೆ ಹೊತ್ತಿರುವವರು ಅತ್ತ ಸುಳಿಯುವುದೇ ಇಲ್ಲ. ಸಾರ್ವಜನಿಕರ ಕಣ್ಣಿಗೇ ಕಾಣುತ್ತಿರುವ ಈ ದೃಶ್ಯಗಳು ಭದ್ರತಾ ಪಡೆಯವರಿಗೆ ಕಾಣುತ್ತಿಲ್ಲವೇ? ಪರಿಸ್ಥಿತಿ ಹೀಗೇ ಮುಂದುವರೆದರೆ ಮುಂದಿನ ದಿನಗಳಲ್ಲಿ ಅಪಾಯ ಎದುರಾಗಬಹುದು ಎಂದು ಆತಂಕ ವ್ಯಕ್ತಪಡಿಸಿರುವ ಸಾರ್ವಜನಿಕರು, ಕೂಡಲೇ ಸರ್ಕಾರ ಇತ್ತಗಮನ ಹರಿಸಿ ಜಲಾಶಯದ ಭದ್ರತೆಗೆ ಬೇಕಾದ ಎಲ್ಲಾ ವ್ಯವಸ್ಥೆಗಳನ್ನು ಮಾಡಬೇಕೆಂದು ಆಗ್ರಹಿಸಿದ್ದಾರೆ.

ಶೇ.50ಕ್ಕೆ ಹೆಚ್ಚಿಸಿ

ತಲಾವಾರು ತೆರಿಗೆ ಹಂಚಿಕೆಯಲ್ಲಿ ಹೆಚ್ಚುತ್ತಿರುವ ಅಸಮಾನತೆಗಳು, ಆದಾಯ ಕೊರತೆ ಅನುದಾನಗಳ ಅವೈಜ್ಞಾನಿಕ ವಿನ್ಯಾಸ ಮತ್ತು ರಾಜ್ಯ–ನಿರ್ದಿಷ್ಟ ಅನುದಾನಗಳ ಅನಿರೀಕ್ಷಿತತೆಯ ಕುರಿತು ಹೆಚ್ಚುವರಿ ಜ್ಞಾಪಕ ಪತ್ರದಲ್ಲಿ ಪ್ರಸ್ತಾಪಿಸಲಾಗಿದೆ. ದೇಶದ ಜಿಡಿಪಿಗೆ ರಾಜ್ಯದ ಕೊಡುಗೆಯು ಹೆಚ್ಚಾಗಿರುವ ಹೊರತಾಗಿಯೂ, ತಲಾವಾರು ತೆರಿಗೆ ಹಂಚಿಕೆಯು ಗಮನಾರ್ಹವಾಗಿ ಕುಸಿದಿದೆ. 14ನೇ ಮತ್ತು 15ನೇ ಹಣಕಾಸು ಆಯೋಗಗಳ ನಡುವಿನ ರಾಷ್ಟ್ರೀಯ ಸರಾಸರಿಯು ಶೇ.95 ರಿಂದ ಶೇ.73 ಕ್ಕೆ ಕುಸಿದಿದ್ದು, 16ನೇ ಹಣಕಾಸು ಆಯೋಗದಲ್ಲಿ ಅದನ್ನು ಸರಿಪಡಿಸಬೇಕು.

ರಾಜಸ್ವ ಕೊರತೆ ಅನುದಾನಗಳನ್ನು ಅಂದಾಜಿಸಲು ಆಯೋಗವು ಪರಿಕಲ್ಪಿಸುವ ವೆಚ್ಚದ ಆದ್ಯತೆಗಳು ವ್ಯಕ್ತಿನಿಷ್ಠ ಮೌಲ್ಯಮಾಪನಗಳನ್ನು ಪ್ರತಿಬಿಂಬಿಸುತ್ತವೆ. ದುರದೃಷ್ಟವಶಾತ್, ಈ ಮೌಲ್ಯಮಾಪನಗಳು ಸಂಬಳ, ಪಿಂಚಣಿ ಮತ್ತು ಆಡಳಿತಾತ್ಮಕ ವೆಚ್ಚಗಳಿಗೆ ಹೋಲಿಸಿದರೆ ಕಲ್ಯಾಣ ಕಾರ್ಯಕ್ರಮಗಳಿಗೆ ಸರ್ಕಾರ ಭರಿಸುವ ವೆಚ್ಚವನ್ನು ಕಡಿಮೆ ಪ್ರಮಾಣದಲ್ಲಿ ಇರಿಸುತ್ತವೆ. ನಮ್ಮ ಸರ್ಕಾರವು ಎಲ್ಲರ ಕಲ್ಯಾಣವನ್ನು ಒತ್ತಿಹೇಳುವ ಗಾಂಧೀಜಿಯವರ ಸರ್ವೋದಯ ತತ್ವದಿಂದ ಮಾರ್ಗದರ್ಶಿಸಲ್ಪಟ್ಟಿದೆ. ಕಡಿಮೆ ಆದಾಯದ ಕುಟುಂಬಗಳನ್ನು ಸಬಲೀಕರಣಗೊಳಿಸುವ ಮೂಲಕ ಸ್ಥಳೀಯ ಬೇಡಿಕೆಯನ್ನು ಉತ್ತೇಜಿಸುವ ಮತ್ತು ಸಮಗ್ರ ಬೆಳವಣಿಗೆಯನ್ನು ಹೆಚ್ಚಿಸುವಲ್ಲಿ ಸರ್ಕಾರದ ಕಲ್ಯಾಣ ಕಾರ್ಯಕ್ರಮಗಳು ರೂಪಿತವಾಗಿದೆ. ಆದ್ದರಿಂದ, ಹಣಕಾಸಿನ ಹಂಚಿಕೆಯಲ್ಲಿ ಮೌಲ್ಯಮಾಪನ ಮಾಡುವಾಗ ಈ ಕಲ್ಯಾಣ ಕಾರ್ಯಕ್ರಮಗಳ ಮೇಲಿನ ವೆಚ್ಚಗಳಿಗೆ ಹೆಚ್ಚಿನ ಆದ್ಯತೆ ನೀಡದೆ ಹೋದರೆ ಕನಿಷ್ಠ ಸಂಬಳ, ಪಿಂಚಣಿ ಮತ್ತು ಬಡ್ಡಿ ಪಾವತಿಗಳಂತಹ ಬದ್ಧ ವೆಚ್ಚಗಳಿಗೆ ಸಮಾನವಾಗಿ ಪರಿಗಣಿಸಬೇಕು. ಕೇಂದ್ರ ಸರ್ಕಾರದ ವಿವೇಚನಾಧಾರಿತ ಅನುದಾನವಾಗಿರುವ ರಾಜ್ಯ ಕೇಂದ್ರಿತ ಅನುದಾನದ ಬದಲಾಗಿ ಒಟ್ಟು ಕೇಂದ್ರ ಸ್ವೀಕೃತಿಗಳ ಶೇ.0.3ರಷ್ಟು ಅನುದಾನವನ್ನು ಸೂತ್ರ ಆಧಾರಿತ ಹಂಚಿಕೆಯ ಮೂಲಕ ರಾಜ್ಯಗಳಿಗೆ ನೀಡಬೇಕು.

ಕರ್ನಾಟಕದ ಆರ್ಥಿಕತೆಯಲ್ಲಿ ಬೆಂಗಳೂರಿನ ಪ್ರಮುಖ ಪಾತ್ರವನ್ನು ಪರಿಗಣಿಸಿ ಇಲ್ಲಿನ ಮೂಲಸೌಕರ್ಯವನ್ನು ಬಲಪಡಿಸಲು 1.15 ಲಕ್ಷ ಕೋಟಿ ಹೂಡಿಕೆಗೆ ಬೆಂಬಲವನ್ನು ಮುಖ್ಯಮಂತ್ರಿ ಕೋರಿದ್ದಾರೆ. ಅಲ್ಲದೆ ಕಡಿಮೆ ಆದಾಯ ಮತ್ತು ಕುಂಠಿತ ಮೂಲಸೌಕರ್ಯ ಅಭಿವೃದ್ಧಿ ಸಮಸ್ಯೆಯನ್ನು ಎದುರಿಸುತ್ತಿರುವ ಕಲ್ಯಾಣ ಕರ್ನಾಟಕ ಮತ್ತು ಮಲೆನಾಡಿನಲ್ಲಿ ಪ್ರಾದೇಶಿಕ ಅಂತರವನ್ನು ಕಡಿಮೆ ಮಾಡುವ ಅಗತ್ಯವನ್ನು ಒತ್ತಿ ಹೇಳಲಾಗಿದೆ.

ಬೆಳವಣಿಗೆ ಮತ್ತು ಸಮಾನತೆ ಜೊತೆ ಜೊತೆಯಾಗಿ ಮುಂದುವರಿಯಬೇಕು. ಆದ್ದರಿಂದ ಸಧೃಡ ಭಾರತದ ನಿರ್ಮಾಣಕ್ಕೆ ನ್ಯಾಯಯುತ ಸಂಪನ್ಮೂಲ ಹಂಚಿಕೆಯಿಂದ ಬಲವಾದ ಕರ್ನಾಟಕ ಅತ್ಯಗತ್ಯ. ಕರ್ನಾಟಕದ ಆರ್ಥಿಕ ಬಲವು ರಾಷ್ಟ್ರೀಯ ಬೆಳವಣಿಗೆಗೆ ಇಂಧನವಾಗಿದೆ. ಇಂತಹ ಬೆಳವಣಿಗೆಗೆ ದಂಡ ವಿಧಿಸಬಾರದು, ಬದಲಾಗಿ ಪ್ರೋತ್ಸಾಹ ದೊರೆಯುವಂತೆ ನೋಡಿಕೊಳ್ಳುವ ಸಮಯ ಇದು. ಸಮತೋಲಿತ, ಸಂಪನ್ಮೂಲ ಹಂಚಿಕೆಯ ದೃಷ್ಟಿಕೋನವನ್ನು ಅಳವಡಿಸಿಕೊಳ್ಳುವಂತೆ ತಾವು ಆಯೋಗವನ್ನು ಒತ್ತಾಯಿಸಿದ್ದಾಗಿ ಸಿಎಂ ಸಿದ್ದರಾಮಯ್ಯ ಹೇಳಿದರು.

ಮುಖ್ಯಮಂತ್ರಿಗಳು ಭಾಗವಹಿಸಿದ್ದ ಸಭೆಯಲ್ಲಿ ಮುಖ್ಯಮಂತ್ರಿ ಆರ್ಥಿಕ ಸಲಹೆಗಾರ ಬಸವರಾಜ ರಾಯರೆಡ್ಡಿ, ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್, ಮುಖ್ಯಮಂತ್ರಿ ಕಚೇರಿ ಮತ್ತು ಹಣಕಾಸು ಇಲಾಖೆಯ ಹಿರಿಯ ಅಧಿಕಾರಿಗಳು ಹಾಜರಿದ್ದರು.

ಅಶೋಕ ರಸ್ತೆಗೆ ಸುರಕ್ಷಿತ, ಸುಂದರ ರೂಪ!



"ಮೈಸೂರಿನ ಅತೀ ಹಳೆಯದಾದ ಅಶೋಕ ರಸ್ತೆಯನ್ನು ಅಪಘಾತ ರಹಿತ ವಲಯವನ್ನಾಗಿ ಮಾಡಲು ಸಂಚಾರ ಪೊಲೀಸರು ಸಲ್ಲಿಸಿದ್ದ ಪ್ರಸ್ತಾವನೆಯಂತೆ ಅಗತ್ಯ ಸಿವಿಲ್ ಕಾಮಗಾರಿಯನ್ನು ಪಾಲಿಕೆಯಿಂದ ಮಾಡಲಾಗುತ್ತಿದೆ. ಈಗಾಗಲೇ ನಾನು ಎರಡು ಬಾರಿ ಭೇಟಿ ನೀಡಿ, ಪರಿಶೀಲಿಸಿದ್ದೇನೆ. ಕೆಲಸ ಆರಂಭವಾದಾಗಲೂ ಭೇಟಿ ನೀಡುತ್ತೇನೆ. ಇದೇ ಮೊದಲಿಗೆ 'ಮಾದರಿ ರಸ್ತೆಯಾಗಿ ಪರಿವರ್ತಿಸಲಾಗುತ್ತಿದ್ದು, ಇದರಿಂದ ಜನರಿಗೆ ಅನುಕೂಲ ವಾಗುತ್ತದೆ ಎನ್ನುವುದಾದರೆ ಹಂತ ಹಂತವಾಗಿ ಇತರ ರಸ್ತೆಗಳನ್ನೂ ಅಭಿವೃದ್ಧಿಪಡಿಲಾಗುವುದು.

- ಶೇಖ್ ತನ್ವೀರ್ ಆಸಿಫ್, ಮೈಸೂರು ಮಹಾನಗರ ಪಾಲಿಕೆ ಆಯುಕ್ತ

ಪೊಲೀಸರು ಮುಂದಾಗಿದ್ದಾರೆ. ಸುಗಮ ವಾಹನ ಸಂಚಾರ ಹಾಗೂ ಪಾದಚಾರಿಗಳ ಸುರಕ್ಷಿತ ಓಡಾಟಕ್ಕೆ ಅನುವು ಮಾಡಿಕೊಡುವ ಉದ್ದೇಶ ಹೊಂದಿದ್ದಾರೆ. ಮಹಾನಗರ ಪಾಲಿಕೆ ಸಹಕಾರದೊಂದಿಗೆ ಸೆಂಟ್ ಫಿಲೋಮಿನಾ ಚರ್ಚ್ ವೃತ್ತದಿಂದ ನೆಹರು ಸರ್ಕಲ್ ಮಾರ್ಗವಾಗಿ ರಂಗಾಚಾರ್ಲು ಪುರಭವನದ ಎದುರಿನ ದೊಡ್ಡ ಗಡಿಯಾರ ವೃತ್ತದ ವರೆಗೆ ಸುಮಾರು 2 ಕಿ.ಮೀ. ರಸ್ತೆಯನ್ನು ಅಪಘಾತ ರಹಿತ ರಸ್ತೆಯನ್ನಾಗಿ ರೂಪಿಸಲು ನಗರ ಸಂಚಾರ ವಿಭಾಗದ ಪೊಲೀಸರು ಮುಂದಾಗಿದ್ದಾರೆ.

ಜಂಟಿ ಸರ್ವೆ: ಈ ನಿಟ್ಟಿನಲ್ಲಿ ಈಗಾಗಲೇ ನರಸಿಂಹರಾಜ ಸಂಚಾರ ಠಾಣೆ ಹಾಗೂ ದೇವರಾಜ ಸಂಚಾರ ಠಾಣೆ ಪೊಲೀಸರೊಂದಿಗೆ ಪಾಲಿಕೆ ವಲಯ ಕಚೇರಿ–6ರ ವಲಯಾಧಿಕಾರಿ ಪ್ರತಿಮಾ, ಇಂಜಿನಿಯರ್‌ಗಳಾದ ಧನುಷ್, ಚಂದ್ರಶೇಖರ್ ಹಾಗೂ ಕೃಷ್ಣಮೂರ್ತಿ ಇನ್ನಿತರ ಅಧಿಕಾರಿಗಳು ಜಂಟಿ ಸರ್ವೆ ಮಾಡಿ, ಅಶೋಕ ರಸ್ತೆಯನ್ನು ಮಾದರಿ ರಸ್ತೆಯಾಗಿ ಪರಿವರ್ತಿಸುವ ಯೋಜನೆಯ ಸ್ಥಿತಿ–ಗತಿ ಕುರಿತು ಅಧ್ಯಯನ ನಡೆಸಿದ್ದಾರೆ.

ಸಮಸ್ಯೆಗಳ ಪಟ್ಟಿ: ಸಬರ್ಬನ್ ಬಸ್ ನಿಲ್ದಾಣ ಹಾಗೂ ನಗರ ಬಸ್ ನಿಲ್ದಾಣ ಸಂಪರ್ಕಿಸುವ ಅಶೋಕ ರಸ್ತೆಯಲ್ಲಿ ಅಪಾರ ಸಂಖ್ಯೆಯಲ್ಲಿ ಚಿನ್ನಾಭರಣ ಮಳಿಗೆಗಳು, ಹಾರ್ಡ್‌ವೇರ್ ಮಳಿಗೆಗಳು ಸೇರಿದಂತೆ ಪ್ರಮುಖ ವಾಣಿಜ್ಯ ಕೇಂದ್ರವಾಗಿದೆ. ಹಾಗಾಗಿ ಯಾವಾಗಲೂ ವಾಹನ ದಟ್ಟಣೆ ಇದ್ದೇ ಇರುತ್ತದೆ. ಅಲ್ಲದೆ ಅಡ್ಡಾದಿಡ್ಡಿಯಾಗಿ ಕಾರು ಮತ್ತು ದ್ವಿಚಕ್ರ ವಾಹನ ನಿಲುಗಡೆ, ಲಷ್ಕರ್ ಮೊಹಲ್ಲಾ, ಮಂಡಿ ಮೊಹಲ್ಲಾ ಮತ್ತು ಹಳ್ಳದಕೇರಿ ಕ್ರಾಸ್‌ಗಳಲ್ಲಿ ರಸ್ತೆ ಡುಬ್ಬಗಳು ಇಲ್ಲದಿರುವುದು, ಸುರಕ್ಷಿತ ಸಂಚಾರಕ್ಕೆ ಅಗತ್ಯವಾದ ಬಿಳಿ ಮತ್ತು ಹಳದಿ ಬಣ್ಣದ ಪಟ್ಟೆ(ಲೇನ್ ಡಿಸಿಪ್ಲಿನ್) ಇಲ್ಲದಿರುವುದು, ಸೂಚನಾ ಫಲಕಗಳನ್ನು ಅಳವಡಿಸದಿರುವುದು ಸೇರಿದಂತೆ ಹತ್ತಾರು ಸಮಸ್ಯೆಗಳನ್ನು ಸಮೀಕ್ಷೆ ವೇಳೆ ಪಟ್ಟಿ ಮಾಡಲಾಗಿದೆ.

ಸುಧಾರಣಾ ಕ್ರಮ: ದೊಡ್ಡ ಗಡಿಯಾರ ವೃತ್ತ, ನೆಹರು ಸರ್ಕಲ್(ಲಷ್ಕರ್ ಪೊಲೀಸ್ ಠಾಣೆ ಸರ್ಕಲ್) ಸೆಂಟ್‌ಫಿಲೋಮಿನಾ ಚರ್ಚ್ ಜಂಕ್ಷನ್‌ಗಳ ಸೌಂದರ್ಯೀಕರಣ, ವೃತ್ತ ಹಾಗೂ ರಸ್ತೆಗೆ ಬಿಳಿ ಪಟ್ಟಿಗಳನ್ನು ಬಳಿಯುವುದು, ವಾಹನ ನಿಲುಗಡೆಗೆ ಗುರುತು ಪಟ್ಟಿಬಳಿಯುವುದು, ಸಂಚಾರ ನಿಯಮ ಪಾಲನೆಯ ಫಲಕ ಅಳವಡಿಸುವುದು, ಡಾಂಬರೀಕರಣ, ಕರ್ಬ್ ಸ್ಟೋನ್ ಅಳವಡಿಸಿ ಎರಡೂ ಬದಿ ಪಾದಚಾರಿ ಮಾರ್ಗ ಅಭಿವೃದ್ಧಿ, ಬೀದಿ ದೀಪ, ಮಳೆ ನೀರು ಸರಾಗ ಹರಿದು ಹೋಗುವ ವ್ಯವಸ್ಥೆ ಇನ್ನಿತರ ಮೂಲ ಸೌಕರ್ಯ ಕಲ್ಪಿಸಲು ಕ್ರಮ ವಹಿಸಲಾಗಿದೆ. ಸಿವಿಲ್ ಕೆಲಸಗಳು ಮಹಾನಗರ ಪಾಲಿಕೆ ಮೂಲಕವೇ ಆಗಬೇಕಿರುವುದರಿಂದ ಈ ನಿಟ್ಟಿನಲ್ಲಿ ವಲಯಾಧಿಕಾರಿ ಪ್ರತಿಮಾ ಉತ್ಸುಕರಾಗಿದ್ದಾರೆ. ಪೊಲೀಸರೂ ಕೂಡ ಅಗತ್ಯವಿರುವೆಡೆ ವೈಜ್ಞಾನಿಕವಾಗಿ ರಸ್ತೆ ಡುಬ್ಬಗಳನ್ನು ಹಾಕುವ ನಿಟ್ಟಿನಲ್ಲಿ ಈಗಾಗಲೇ ಸಿದ್ಧತೆ ನಡೆಸಿದ್ದಾರೆ.

ಜೀರೋ ಟಾಲರನ್ಸ್: ರಾತ್ರಿ ವೇಳೆ ಸ್ಪಷ್ಟವಾಗಿ ರಸ್ತೆ ಕಾಣುವಂತೆ ರಿಫ್ಲೆಕ್ಟಿಂಗ್ ಕ್ಯಾಟ್ ಐಸ್(ಪ್ರತಿಫಲಕಗಳು), ಅಲ್ಲಲ್ಲಿ ಪಾರ್ಕಿಂಗ್, ನೋ ಪಾರ್ಕಿಂಗ್ ಫಲಕ ಅಳವಡಿಸುವ ಮೂಲಕ ಅಶೋಕ ರಸ್ತೆಯಲ್ಲಿ ವಾಹನಗಳ ಸಂಚಾರ, ಪಾರ್ಕಿಂಗ್ ಮತ್ತು ಪಾದಚಾರಿಗಳ ಓಡಾಟಕ್ಕೆ ಯಾವುದೇ ಅಡ್ಡಿಯಾಗದಂತೆ ರಸ್ತೆ ಸುರಕ್ಷತೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವುದು 'ಜೀರೋ ಟಾಲರನ್ಸ್ ರಸ್ತೆ'ಯ ಉದ್ದೇಶವಾಗಿದೆ. ಅಲ್ಲದೆ ಜೀರೋ ಟಾಲರನ್ಸ್ ವಲಯದಲ್ಲಿ ನಿಯಮ ಉಲ್ಲಂಘನೆ ಮಾಡಿದವರಿಗೆ ದಂಡದ ಜೊತೆಗೆ ಕಠಿಣ ಕಾನೂನು ಕ್ರಮ ಜರುಗಿಸಲು ಅವಕಾಶವಿರುತ್ತದೆ.

ಮೈಸೂರಿನ ಮಾದರಿ ರಸ್ತೆಯನ್ನಾಗಿ ಅಶೋಕ ರಸ್ತೆಯನ್ನು ಅಭಿವೃದ್ಧಿಪಡಿಸಿದ ಬಳಿಕ ಅದರ ಸಾಧಕ–ಬಾಧಕಗಳನ್ನು ನೋಡಿಕೊಂಡು ನಗರದ ಇತರ ರಸ್ತೆಗಳಿಗೂ ಜೀರೋ ಟಾಲರನ್ಸ್ ಯೋಜನೆಯನ್ನು ವಿಸ್ತರಿಸಲು ಸಂಚಾರ ಪೊಲೀಸರು ಚಿಂತಿಸಿದ್ದಾರೆ.

250 ಕೋಟಿ ಉಳಿತಾಯ

ಇದಕ್ಕಾಗಿ '112 ಎನ್‌ಜಿ–ಇಆರ್‌ಎಸ್‌ಎಸ್' ತಂತ್ರಾಂಶ ಬಳಸಿಕೊಳ್ಳಲಾಗುತ್ತದೆ. ಪ್ರತಿ ಜಿಲ್ಲೆಯಲ್ಲಿಯೂ 108 ಕಂಟ್ರೋಲ್ ಸೆಂಟರ್‌ಗಳು ಕಾರ್ಯನಿರ್ವಹಿಸಲಿದ್ದು, ಜಿಲ್ಲಾ ಆರೋಗ್ಯ ಅಧಿಕಾರಿಗಳಿಗೆ ನಿರ್ವಹಣೆಯ ಜವಾಬ್ದಾರಿ ವಹಿಸಲಾಗಿದೆ ಎಂದು ಮಾಹಿತಿ ನೀಡಿದ್ದಾರೆ. ಆಂಬುಲೆನ್ಸ್‌ಗಳಿಗೆ ಚಾಲಕರು ಹಾಗೂ ಸಿಬ್ಬಂದಿಯನ್ನು ಜಿಲ್ಲಾ ಮಟ್ಟದಲ್ಲಿಯೇ ಹೊರಗುತ್ತಿಗೆ ಆಧಾರದಲ್ಲಿ ನೇಮಕಾತಿ ಮಾಡಿಕೊಳ್ಳಲಾಗುವುದು. ಪ್ರಾಯೋಗಿಕವಾಗಿ ಚಾಮರಾಜನಗರ ಜಿಲ್ಲೆಯಲ್ಲಿ ಪ್ರಾರಂಭಿಸಲಾಗುತ್ತಿದೆ. ಬಳಿಕ ರಾಜ್ಯದ ಎಲ್ಲ ಜಿಲ್ಲೆಗಳಲ್ಲಿ ನಿರ್ವಹಣೆ ಮಾಡಲಾಗುತ್ತದೆ. ಆರೋಗ್ಯ ಕವಚದಡಿ ಕಾರ್ಯಾಚರಣೆ ಮಾಡುತ್ತಿರುವ ಆಂಬುಲೆನ್ಸ್‌ಗಳ ಜತೆಗೆ ರಾಜ್ಯದಲ್ಲಿರುವ ಸಾವಿರಕ್ಕೂ ಅಧಿಕ ಆಂಬುಲೆನ್ಸ್‌ಗಳನ್ನು ಕೂಡಾ 108 ಕಮಾಂಡ್ ಸೆಂಟರ್ ಅಧೀನಕ್ಕೆ ತರಲು ಯೋಜನೆ ರೂಪಿಸಲಾಗಿದೆ ಎಂದು ತಿಳಿಸಿದ್ದಾರೆ.

ಸಂಬಂಧಿಕರಿಗೆ ಹಸ್ತಾಂತರ

ಪ್ರಕ್ರಿಯೆಯನ್ನು ನಾವು ಆರಂಭಿಸಿದ್ದೇವೆ. 215 ಮೃತ ವ್ಯಕ್ತಿಗಳ ಸಂಬಂಧಿಕರು ತಮ್ಮ ಮಾದರಿಗಳನ್ನು ನೀಡಲು ನಮ್ಮನ್ನು ಸಂಪರ್ಕಿಸಿದ್ದಾರೆ ಎಂದು ಮರಣೋತ್ತರ ಪರೀಕ್ಷೆ ಕೊಠಡಿಯ ಮೇಲ್ವಿಚಾರಣೆ ನಡೆಸುತ್ತಿರುವ ಗೋಸಾಯಿ ಹೇಳಿದ್ದಾರೆ.

ಮರಣೋತ್ತರ ಪರೀಕ್ಷೆ ಕೊಠಡಿಗೆ ಆಗಮಿಸುವ ಸಂಬಂಧಿಕರಿಂದ ವಿವರಗಳನ್ನು ಸಂಗ್ರಹಿಸಲಾಗುತ್ತಿದೆ ಮತ್ತು ಅವರನ್ನು ಅವರ ಡಿಎನ್‌ಎ ಮಾದರಿಗಳನ್ನು ಒದಗಿಸಲು ಬಿಜೆ ವೈದ್ಯಕೀಯ ಕಾಲೇಜಿಗೆ ಕಳುಹಿಸಲಾಗುತ್ತದೆ.

ಡಿಎನ್‌ಎ ಮಾದರಿಗಳನ್ನು ಹೊಂದಿಸುವ ಪ್ರಕ್ರಿಯೆ ಪೂರ್ಣಗೊಳಿಸಲು ಸುಮಾರು 72 ಗಂಟೆ ಬೇಕಾಗುತ್ತದೆ. ಹೊಂದಾಣಿಕೆಯಾದ ನಂತರ, ಶವಗಳನ್ನು ಮರಣೋತ್ತರ ಪರೀಕ್ಷೆ ಕೊಠಡಿಯಿಂದ ಸಂಬಂಧಿಕರಿಗೆ ಹಸ್ತಾಂತರಿಸಲಾಗುತ್ತದೆ ಎಂದು ಇನ್ಸ್‌ಪೆಕ್ಟರ್ ಹೇಳಿದ್ದಾರೆ.

ಬೆಳ್ಳಿ ಬೆಲೆಯೂ ಏರಿಕೆ

ಚಿನ್ನದ ದರವು (ಶೇ.99.5 ಪರಿಶುದ್ಧತೆ) 1,900 ಹೆಚ್ಚಳ ವಾಗಿ, 1,00,700 ಆಗಿದೆ ಎಂದು ಅಖಿಲ ಭಾರತ ಸರಫ್ ಅಸೋಸಿಯೇಷನ್ ತಿಳಿಸಿದೆ. ಏ.22 ರಂದು ಚಿನ್ನದ ದರ 1,800 ಏರಿಕೆಯಾಗಿ 10 ಗ್ರಾಂಗೆ 1,01,600ರಷ್ಟರಂತೆ ಮಾರಾಟವಾಗಿತ್ತು. ಬಳಿಕ ಬೆಲೆ ಇಳಿಕೆಯಾದರೂ 90 ಸಾವಿರದಿಂದ 1 ಲಕ್ಷದ ಆಸುಪಾಸಿ ನಲ್ಲಿಯೇ ಇತ್ತು. ಇದೇ ವೇಳೆ ಬೆಳ್ಳಿಯ ಬೆಲೆಯೂ 1,100 ಏರಿಕೆಯಾಗಿದ್ದು ಎಲ್ಲಾ ತೆರಿಗೆ ಸೇರಿ 1 ಕೆ.ಜಿಗೆ 1,08,100ಗೆ ತಲುಪಿದೆ. ಕಚ್ಚಾ ತೈಲದ ಮೇಲೆ ಹೂಡಿಕೆ ಮಾಡುತ್ತಿದ್ದವರು ಮಧ್ಯಪ್ರಾಚ್ಯ ಬಿಕ್ಕಟ್ಟಿನ ಪರಿಣಾಮ ಚಿನ್ನ ಹಾಗೂ ಬೆಳ್ಳಿಯತ್ತ ಮುಖ ಮಾಡಿದ್ದಾರೆ. ಇದರ ಪರಿಣಾಮ ದುಬಾರಿ ಲೋಹಗಳ ಬೆಲೆ ಜಾಗತಿಕ ಮಟ್ಟದಲ್ಲಿ ಏರಿಕೆಯಾಗಿದೆ. ಅದು ಭಾರತದ ಮಾರುಕಟ್ಟೆ ಮೇಲೂ ಪರಿಣಾಮ ಬೀರಿದೆ.

ಮುದ್ದಾದ ಮೂವರು ಮಕ್ಕಳೊಂದಿಗೆ ವೈದ್ಯ ದಂಪತಿ ಸಾವು

ಅಹಮದಾಬಾದ್, ಜೂ.13– ಇದರಲ್ಲಿ ಲಂಡನ್‌ನಲ್ಲಿ ನೆಲೆಸಲು ಹೊರಟಿದ್ದ ವೈದ್ಯ ಕುಟುಂಬದ ಐವರೂ ವಿಮಾನ ದುರಂತದಲ್ಲಿ ಸಾವನ್ನಪ್ಪಿದ್ದು, ಇವರ ಕೊನೇ ಸೆಲ್ಫೀ ಎಲ್ಲರಲ್ಲೂ ಮರುಕಹುಟ್ಟಿಸಿದೆ.



ಡಾ ಪ್ರತೀಕ್ ಜೋಶಿ ಲಂಡನ್‌ನಲ್ಲಿ 6 ವರ್ಷದಿಂದ ನೆಲೆಸಿದ್ದರು. ಅವರಿಗಿದ್ದ ದೊಡ್ಡ ಕನಸು, ಭಾರತದಲ್ಲಿದ್ದ ಹೆಂಡತಿ ಹಾಗೂ ತನ್ನ ಮೂವರು ಮುದ್ದಾದ ಮಕ್ಕಳ ಜೊತೆಗೂಡಿ ಲಂಡನ್‌ನಲ್ಲಿ ಒಟ್ಟಿಗೇ ಬದುಕಬೇಕೆಂಬುದು. ಇದಕ್ಕಾಗಿ ಕಷ್ಟಪಟ್ಟು ದುಡಿದ ಅವರು ಈ ಕನಸಿನ ಸಾಕಾರಗೊಳ್ಳುವ ದಿನಕ್ಕಾಗಿ ಕಾಯುತ್ತಿದ್ದರು.

ಪತ್ನಿ ಕೋಮಿ ವ್ಯಾಸ್ ಕೂಡಾ ವೈದ್ಯೆಯಾಗಿದ್ದರು. ಪತಿ ಜೊತೆಗೆ ವಾಸಮಾಡುವ ಖುಷಿಯಿಂದ ಇಲ್ಲಿನ ಕೆಲಸಕ್ಕೆ ರಿಸೈನ್ ಮಾಡಿ, ತನ್ನ ಮೂವರು ಮಕ್ಕಳ ಜೊತೆಗೂಡಿ ಬ್ಯಾಗ್ ಪ್ಯಾಕ್ ಮಾಡಿ ವಿದೇಶಕ್ಕೆ ಹೊರಟಿದ್ದರು. ಮೂಟೆ ಕನಸುಗಳ ಜೊತೆ, ಖುಷಿ ಹಾಗೂ ಆಶಾಭಾವನೆಗಳ ಜೊತೆ ವಿಮಾನ ಹತ್ತಿ ಕುಳಿತ ಅವರು, ಐದೂ ಮಂದಿ ನಗುಮುಖದೊಂದಿಗೆ ಕ್ಲಿಕ್ಕಿಸಿಕೊಂಡ ಸೆಲ್ಫಿ ಇಂದು ಇಂಟರ್‌ನೆಟ್ ತುಂಬಾ ಹರಿದಾಡುತ್ತಿದೆ. ಇವರ ಜೀವನ ನೆನೆದವರ ಕಣ್ಣು ನೆನೆದು ಒದ್ದೆಯಾಗುತ್ತಿದೆ.. ಯಾಕಂದ್ರೆ ಮೂವರು ಮುದ್ದು ಕಂದಮ್ಮಗಳ ಸಹಿತ ವೈದ್ಯ ದಂಪತಿಯೂ ಸೇರಿ ಐವರೂ ಘೋರ ವಿಮಾನ ದುರಂತದಲ್ಲಿ ಮೃತಪಟ್ಟಿದ್ದಾರೆ.

ರೂಪಾನಿ ಮನೆಗೆ ಪ್ರಧಾನಿ ಮೋದಿ ಭೇಟಿ

ಮಗಳ ಮನೆಗೆ ಹೋಗುತ್ತಿದ್ದರು. ಬಿಜೆಪಿಯ ಸಕ್ರಿಯ ಸದಸ್ಯೆಯೂ ಆಗಿರುವ ವಿಜಯ್ ರೂಪಾನಿ ಅವರ ಪತ್ನಿ ಅಂಜಲಿಬೆನ್ ಸಹ ಲಂಡನ್‌ನಲ್ಲಿದ್ದರು. ವಿಮಾನ ಅಪಘಾತದಲ್ಲಿ ಪತಿಯ ಸಾವಿನ ಸುದ್ದಿ ತಿಳಿದು ಅಂಜಲಿಬೆನ್ ಅವರು ಇಂದು ಬೆಳಗ್ಗೆ ಅಹಮದಾಬಾದ್‌ಗೆ ಆಗಮಿಸಿದ್ದಾರೆ. ವಿಜಯ್ ರೂಪಾನಿ ಅವರ ಕುಟುಂಬವನ್ನು ಭೇಟಿಯಾದೆ. ವಿಜಯ್ ಭಾಯ್ ನಮ್ಮ ಜೊತೆ ಇಲ್ಲ ಎಂಬುದು ಊಹಿಸಲು ಸಾಧ್ಯವಿಲ್ಲ. ನಾನು ಅವರನ್ನು ದಶಕಗಳಿಂದ ಬಲ್ಲೆ. ನಾವು ಅತ್ಯಂತ ಸವಾಲಿನ ಸಮಯಗಳಲ್ಲೂ ಹೆಗಲಿಗೆ ಹೆಗಲು ಕೊಟ್ಟು ಒಟ್ಟಿಗೆ ಕೆಲಸ ಮಾಡಿದ್ದೇವೆ. ಪಕ್ಷದ ಸಿದ್ಧಾಂತಕ್ಕೆ ದೃಢವಾಗಿ ಬದ್ಧರಾಗಿದ್ದರು ಎಂದು ಪ್ರಧಾನಿ ಮೋದಿ ಎಕ್ಸ್ ನಲ್ಲಿ ಪೋಸ್ಟ್ ಮಾಡಿದ್ದಾರೆ.

ಬ್ಲ್ಯಾಕ್ ಬಾಕ್ಸ್ ಪತ್ತೆ

ಪಟೇಲ್ ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಬಳಿಯ ಜನದಟ್ಟಣೆಯ ಮೇಘನಿನಗರ ಪ್ರದೇಶದಲ್ಲಿ ಒಂದು ಬ್ಲ್ಯಾಕ್ ಬಾಕ್ಸ್ ವಶಪಡಿಸಿಕೊಂಡಿದೆ. ಇಲ್ಲಿಯೇ ಬೋಯಿಂಗ್ 787 ಡ್ರೀಮ್‌ಲೈನರ್ ವಿಮಾನ ಪತನಗೊಂಡಿತ್ತು. ಆದರೆ, ಬ್ಲ್ಯಾಕ್ ಬಾಕ್ಸ್ ವಶಪಡಿಸಿಕೊಂಡಿರುವ ಬಗ್ಗೆ ವಿಮಾನಯಾನ ಸಂಸ್ಥೆ ಇನ್ನೂ ದೃಢಪಡಿಸಿಲ್ಲ. ಬ್ಲ್ಯಾಕ್ ಬಾಕ್ಸ್ ವಿಮಾನ ಹಾರಾಟದ ಸಮಯದಲ್ಲಿ ವಿಮಾನದ ಬಗ್ಗೆ ಮಾಹಿತಿಯನ್ನು ದಾಖಲಿಸುವ ಒಂದು ಸಾಧನವಾಗಿದೆ. ಇದು ವಿಮಾನ ಅಪಘಾತಗಳ ತನಿಖೆಗೆ ಸಹಾಯ ಮಾಡುತ್ತದೆ. ಅಪಘಾತಕ್ಕೆ ತಾಂತ್ರಿಕ ವೈಫಲ್ಯ, ಎಂಜಿನ್ ತೊಂದರೆ ಅಥವಾ ಮಾನವ ದೋಷ ಕಾರಣವಾಗಿದೆಯೇ ಎಂದು ನಿರ್ಧರಿಸಲು ತನಿಖಾಧಿಕಾರಿಗಳು ವಿಮಾನ ಮತ್ತು ಕಾಕ್‌ಪಿಟ್ ಡೇಟಾವನ್ನು ಡಿಕೋಡ್ ಮಾಡಲು ಪ್ರಯತ್ನಿಸುತ್ತಿದ್ದಾರೆ.

ತಾಂತ್ರಿಕ ತಪಾಸಣೆಗೆ ಡಿಜಿಸಿಎ ಆದೇಶ

ಸುರಕ್ಷತೆಯನ್ನು ಪರಿಚಯಿಸಬೇಕು ಮತ್ತು ಎರಡು ವಾರಗಳಲ್ಲಿ ವಿದ್ಯುತ್ ಖಾತ್ರಿ ಪರಿಶೀಲನೆ ನಡೆಸಬೇಕು. ಬೋಯಿಂಗ್ 787–8/9 ವಿಮಾನದಲ್ಲಿ ಕಳೆದ 15 ದಿನಗಳಲ್ಲಿ ಪುನರಾವರ್ತಿತ ಸಮಸ್ಯೆಗಳ ಪರಿಶೀಲನೆಯ ಆಧಾರದ ಮೇಲೆ ನಿರ್ವಹಣಾ ಕ್ರಮವನ್ನು ಬೇಗನೆ ಕೈಗೊಳ್ಳುವಂತೆ ಡಿಜಿಸಿಎ ಪತ್ರದಲ್ಲಿ ತಿಳಿಸಿದೆ. ಟಾಟಾ ಗ್ರೂಪ್ ಒಡೆತನದ ಏರ್ ಇಂಡಿಯಾ ವೈಮಾನಿಕ ಸಂಸ್ಥೆಯಲ್ಲಿ 26 ಬೋಯಿಂಗ್ 787–8 ವಿಮಾನಗಳಿವೆ. ಇವುಗಳನ್ನು ಯುಕೆ, ಉತ್ತರ ಅಮೆರಿಕ ಮತ್ತು ಮಧ್ಯಪ್ರಾಚ್ಯ ರಾಷ್ಟ್ರಗಳು ಸೇರಿದಂತೆ ಹೆಚ್ಚಿನ ದೂರದ ಅಂತಾರಾಷ್ಟ್ರೀಯ ಮಾರ್ಗಗಳಿಗೆ ಬಳಸಲಾಗುತ್ತದೆ.

ಮೈಸೂರು ಮಿತ್ರ

ಕೋಮು ಹಿಂಸಾಚಾರ ನಿಗ್ರಹಿಸುವ ವಿಶೇಷ ಕಾರ್ಯಪಡೆ ಕಚೇರಿ ಆರಂಭ

ಗೃಹ ಸಚಿವ ಜಿ.ಪರಮೇಶ್ವರ್ ವಿಧ್ಯುಕ್ತ ಉದ್ಘಾಟನೆ



ಮಂಗಳೂರು, ಜೂ.13– ರಾಜ್ಯದ ಕರಾವಳಿ ಪ್ರದೇಶದಲ್ಲಿ ಕೋಮು ಹಿಂಸಾಚಾರವನ್ನು ನಿಗ್ರಹಿಸುವ ಮತ್ತು ಸಾರ್ವಜನಿಕ ಸುವ್ಯವಸ್ಥೆಯನ್ನು ಕಾಪಾಡುವ ಉದ್ದೇಶ ಹೊಂದಿರುವ ವಿಶೇಷ ಕಾರ್ಯಪಡೆ (ಎಸ್‌ಎಎಫ್) ಕಚೇರಿಯನ್ನು ಗೃಹ ಸಚಿವ ಜಿ ಪರಮೇಶ್ವರ ಶುಕ್ರವಾರ ಉದ್ಘಾಟಿಸಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಪರಮೇಶ್ವರ, ದಕ್ಷಿಣ ಕನ್ನಡ ಜಿಲ್ಲೆಯಾದ್ಯಂತ ಉದ್ವಿಗ್ನತೆಗೆ ಕಾರಣವಾದ ಇತ್ತೀಚಿನ ಕೊಲೆ ಸೇರಿದಂತೆ ಜಿಲ್ಲೆಯಲ್ಲಿ ಪದೇ ಪದೆ ನಡೆಯುತ್ತಿರುವ ಹಿಂಸಾಚಾರದ ಘಟನೆ ಗಳಿಂದಾಗಿ ಎಸ್‌ಎಎಫ್ ಅನ್ನು ಸ್ಥಾಪಿಸುವ ನಿರ್ಧಾರ ತೆಗೆದುಕೊಳ್ಳಲಾಗಿದೆ ಎಂದು ಹೇಳಿದರು.

ಈ ಪ್ರದೇಶವು ಸಾಂಸ್ಕೃತಿಕವಾಗಿ ಶ್ರೀಮಂತವಾಗಿದ್ದು, ಸಾಕ್ಷರರು ಮತ್ತು ಶಾಂತಿಯುತ ಜನಸಂಖ್ಯೆಗೆ ನೆಲೆಯಾಗಿದ್ದರೂ, ಇತ್ತೀಚಿನ ದಿನಗಳಲ್ಲಿ ಇದು 'ದ್ವೇಷ ಮತ್ತು ಕೋಮು ಧ್ರುವೀಕರಣದ ವಾತಾವರಣ'ದಿಂದ ಬಳಲುತ್ತಿದೆ ಎಂದರು.

'ದೇಶದಲ್ಲೇ ಮೊದಲ ಬಾರಿಗೆ ಕರ್ನಾಟಕದಲ್ಲಿ ಸರ್ಕಾರದ SAF ಅನ್ನು ರಚನೆ ಮಾಡಿದೆ. ಇದು ಕೋಮು ಭಾಷಣ, ಕೋಮು ಸಂಘರ್ಷ ಸೃಷ್ಟಿಸುವವರನ್ನು ಹತ್ತಿಕ್ಕುವ ದಿಸೆಯಲ್ಲಿ ಈ ಕಾರ್ಯಪಡೆ ಕೆಲಸ ಮಾಡಲಿದೆ. ಸ್ಥಳೀಯ ಪೊಲೀಸ್ ಅಧಿಕಾರಿಗಳು ಮತ್ತು ಮಾಜಿ ಆಯುಕ್ತ ಕುಲದೀಪ್ ಕುಮಾರ್ ಜೈನ್ ಅವರ ಸಲಹೆಗಳನ್ನು ಅನುಸರಿಸಿ, ಪ್ರಸ್ತಾವನೆಯ ಒಂದು ವಾರದೊಳಗೆ ಪಡೆ ರಚಿಸಲಾಗಿದೆ' ಎಂದು ಹೇಳಿದರು.

ಇಲ್ಲಿನ ನಿವಾಸಿಗಳು ಶಾಂತಿ ಕಾಪಾಡಿಕೊಳ್ಳುವಂತೆ ಸಚಿವರು ಒತ್ತಾಯಿಸಿದರು. ಜನರು ಶಾಂತವಾಗಿದ್ದರೆ, ಈ ಪಡೆ ನಿಷ್ಕ್ರಿಯವಾಗಿರುತ್ತದೆ. ಆದರೆ, ಅವರು ಹಾಗೆ ಮಾಡದಿದ್ದರೆ, ಅದು ಕಾರ್ಯನಿರ್ವಹಿಸಬೇಕಾಗುತ್ತದೆ' ಎಂದು ಅವರು ಹೇಳಿದರು.

ನಕ್ಸಲ್ ವಿರೋಧಿ ಘಟಕಗಳಿಂದ ಸಿಬ್ಬಂದಿಯನ್ನು ಎಸ್‌ಎಎಫ್ ರಚಿಸಲು ಮರು ನಿಯೋಜಿಸಲಾಗಿದ್ದು, ಅಗತ್ಯವಿದ್ದರೆ ಉಡುಪಿ ಮತ್ತು ಶಿವಮೊಗ್ಗದಂತಹ ಇತರ ಸೂಕ್ಷ್ಮ ಜಿಲ್ಲೆಗಳಿಗೆ ವಿಸ್ತರಿಸಲಾಗುವುದು ಎಂದು ಪರಮೇಶ್ವರ ಸ್ಪಷ್ಟಪಡಿಸಿದರು.

ದಕ್ಷಿಣ ಕನ್ನಡ ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ಮಾತನಾಡಿ, ಎಸ್‌ಎಎಫ್ ರಚನೆಯು ದ್ವೇಷ ಮತ್ತು ಹಿಂಸಾಚಾರದ ಮೂಲ ಕಾರಣಗಳನ್ನು ಪರಿಹರಿಸಲು ರಾಜ್ಯ ಸರ್ಕಾರ ತೆಗೆದುಕೊಂಡ ನಿರ್ಣಾಯಕ ಹೆಜ್ಜೆಯಾಗಿದೆ. ಪ್ರಗತಿಪರವಾಗಿರುವ ದಕ್ಷಿಣ ಕನ್ನಡ ಮತ್ತು ಉಡುಪಿಯಲ್ಲಿ ಏಕೈಕ ಕರಾಳ ವಿಚಾರವೆಂದರೆ ಕೋಮು ಉದ್ವಿಗ್ನತೆ. ಈ ಸಮಯದಲ್ಲಿ ಇದನ್ನು ತೊಡೆದಾಕುವ ಅಗತ್ಯವಿದೆ ಎಂದು ಹೇಳಿದರು.

SAF ರಾಜಕೀಯ ಪ್ರೇರಿತವಾಗಿಲ್ಲ ಮತ್ತು ಸಾಮರಸ್ಯವನ್ನು ಕಾಪಾಡುವ ಗುರಿಯನ್ನು ಹೊಂದಿದೆ. ಮುಂದಿನ ದಿನಗಳಲ್ಲಿ ಎಲ್ಲ ಸಮುದಾಯಗಳ ಪ್ರತಿನಿಧಿಗಳೊಂದಿಗೆ ಶಾಂತಿ ಸಭೆಗಳನ್ನು ನಡೆಸುವ ಯೋಜನೆಗಳು ನಡೆಯುತ್ತಿವೆ ಎಂದು ರಾವ್ ಹೇಳಿದರು.

ಒಂದು ಸಮುದಾಯ ಓಲೈಸುವ ಹಿಂದುಳಿದ ವರ್ಗಗಳ ಆಯೋಗದ ವರದಿ ಜಾರಿ ಅನಗತ್ಯ; ಮರು ಗಣತಿ ಮಾಡಿ

● ಮುಖ್ಯಮಂತ್ರಿ ಸಿದ್ದರಾಮಯ್ಯರಿಗೆ ಹೈಕಮಾಂಡ್ ತಾಕೀತು ● ವರದಿ ಜಾರಿಗೆ ಗಟ್ಟಿ ಮನಸ್ಸು ಮಾಡಿದ ಸಿಎಂಗೆ ಬಿಗ್ ಶಾಕ್ ● ಹೈಕಮಾಂಡ್ ತನ್ನ 'ಆಪ್ತ' ಸಚಿವರ ಮಾತಿಗೆ ಮನ್ನಣೆ



ಬೆಂಗಳೂರು, ಜೂ. 13(ಕೆಎಂಶಿ)– ಒಂದು ಸಮುದಾಯ ಓಲೈಸಲು ಉಳಿದ ಸಮುದಾಯಗಳನ್ನು ಎದುರು ಹಾಕಿಕೊಳ್ಳುವಂತಹ ಹಿಂದುಳಿದ ವರ್ಗಗಳ ಆಯೋಗದ ವರದಿ ನಮಗೆ ಬೇಕಿಲ್ಲ ಎಂದು ಕಾಂಗ್ರೆಸ್ ಅಧಿನಾಯಕ ರಾಹುಲ್ ಗಾಂಧಿ ನೇರವಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ಆದೇಶ ಮಾಡಿದ ನಂತರವೇ ಸರ್ಕಾರ ಜಾತಿಗಣತಿ ಮರು ಸಮೀಕ್ಷೆಗೆ ಮುಂದಾಗಿದೆ.

ಸಾಮಾಜಿಕ, ಶೈಕ್ಷಣಿಕ, ಆರ್ಥಿಕ ಸ್ಥಿತಿಗತಿ ಕುರಿತು ಕಾಂತರಾಜ್ ಆಯೋಗದ ವರದಿ ಅನುಷ್ಠಾನಕ್ಕೆ ಮುಖ್ಯಮಂತ್ರಿ ಗಟ್ಟಿ ನಿಲುವು ತಳೆದಿದ್ದರು. ಒಕ್ಕಲಿಗ, ವೀರಶೈವ/ಲಿಂಗಾಯತ ಸಮುದಾಯ ಹಾಗೂ ಕೆಲವು ಹಿಂದುಳಿದ ವರ್ಗಗಳಲ್ಲದೆ, ಪಕ್ಷದ ಮುಖಂಡರು, ಶಾಸಕರು, ಸಚಿವರು ವರದಿಗೆ ಆಕ್ಷೇಪ ವ್ಯಕ್ತಪಡಿಸಿದ್ದರೂ, ಇದ್ಯಾವುದನ್ನೂ ಸಿದ್ದರಾಮಯ್ಯ ಗಂಭೀರವಾಗಿ ಪರಿಗಣಿಸಿರಲಿಲ್ಲ.

ಈ ಸಮುದಾಯಗಳಿಗೆ ಸೇರಿದ ಸಚಿವರುಗಳು ವರಿಷ್ಠರೊಂದಿಗಿನ ಆತ್ಮೀಯತೆ ಬಳಸಿಕೊಂಡು, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ರಾಹುಲ್ ಗಾಂಧಿ, ಎಐಸಿಸಿ ಪ್ರಧಾನ ಕಾರ್ಯದರ್ಶಿಗಳಾದ ಕೆ.ಸಿ.ವೇಣುಗೋಪಾಲ್ ಹಾಗೂ ರಣದೀಪ್ ಸಿಂಗ್ ಸುರ್ಜೇವಾಲ ಗಮನಕ್ಕೆ ತಂದರು.

ಸರ್ಕಾರ ಎರಡು ವರ್ಷ ಆಡಳಿತ ಪೂರೈಸಿದ ಸಂದರ್ಭ ಬಳ್ಳಾರಿಯಲ್ಲಿ ನಡೆದ ಸಾಧನಾ ಸಮಾವೇಶದಲ್ಲಿ ಪಾಲ್ಗೊಂಡ ರಾಹುಲ್ ಗಾಂಧಿ ಅವರಿಗೆ ಶಿವಕುಮಾರ್ ಜಾತಿಗಣತಿಯಲ್ಲಿನ ಗೊಂದಲಗಳ ಬಗ್ಗೆ ಮನವರಿಕೆ ಮಾಡಿದ್ದರು.

ವೇದಿಕೆಯಲ್ಲೇ ಮುಖ್ಯಮಂತ್ರಿ ಅವರಿಗೆ, ನಾವು ತೀರ್ಮಾನ ಕೈಗೊಳ್ಳುವವರೆಗೂ ವರದಿ ಜಾರಿ ಮಾಡಬೇಡಿ ಎಂದು ರಾಹುಲ್ ಕಿವಿಮಾತು ಹೇಳಿದ್ದರು. ಆದರೂ, ಸಿದ್ದರಾಮಯ್ಯ ಇದಾದ 10 ದಿನಗಳ ನಂತರ ನಡೆದ ಸಂಪುಟ ಸಭೆಯಲ್ಲಿ ಆಯ್ದ ಕೆಲವೇ ಸಚಿವರ ಉಪಸ್ಥಿತಿ ವೇಳೆ, ಏನೇ ಆಗಲಿ, ಕಾಂತರಾಜ್ ವರದಿಯನ್ನು ಜಾರಿಗೆ ತಂದು ಬಿಡೋಣ ಎಂದಿದ್ದರು.

ಮುಖ್ಯಮಂತ್ರಿ ಆಪ್ತ ಬಣದಲ್ಲಿದ್ದ ಮುಂದುವರೆದ ಸಮುದಾಯದ ಸಚಿವರೊಬ್ಬರು, ಜಾತಿಗಣತಿ ವರದಿ ಅನುಷ್ಠಾನಕ್ಕೆ ಸಿದ್ದರಾಮಯ್ಯ ಕೈಗೊಂಡಿರುವ ತೀರ್ಮಾನವನ್ನು ರಹಸ್ಯವಾಗಿ ಇತರ ಸಚಿವರುಗಳಿಗೆ ರವಾನಿಸಿದರು.

ಈ ಬೆಳವಣಿಗೆ ನಂತರ ಶಿವಕುಮಾರ್, ಎಂ.ಬಿ.ಪಾಟೀಲ್, ಈಶ್ವರ್ ಖಂಡ್ರೆ, ಶಿವಾನಂದ ಪಾಟೀಲ್, ಕೃಷ್ಣಬೈರೇಗೌಡ ಸೇರಿದಂತೆ ಕೆಲವು ಸಚಿವರು ಪ್ರತ್ಯೇಕವಾಗಿ ವರಿಷ್ಠರ ಗಮನಕ್ಕೆ ತಂದರು.

ತಾವು ಸೂಚನೆ ನೀಡಿದ ನಂತರವೂ ಸಿದ್ದರಾಮಯ್ಯ ವರದಿ ಅನುಷ್ಠಾನಕ್ಕೆ ಮುಂದಾಗಿದ್ದು ರಾಹುಲ್ ಸಿಟ್ಟಿಗೆ ಕಾರಣವಾಯಿತು. ತಕ್ಷಣವೇ ಪಕ್ಷದ ಅಧ್ಯಕ್ಷರನ್ನು ಸಂಪರ್ಕಿಸಿ, ಸಿದ್ದರಾಮಯ್ಯ ಮತ್ತು ಶಿವಕುಮಾರ್ ಅವರನ್ನು ದೆಹಲಿಗೆ ಕರೆದು ತುರ್ತು ಸಭೆ ನಡೆಸುವಂತೆ ಸಲಹೆ ನೀಡಿದರು.

ವಿಶೇಷ ಸಂಪುಟ ಸಭೆಗೂ ಮುನ್ನ ಅಂದರೆ, ಜೂನ್ 10 ರಂದು ನಡೆದ ವರಿಷ್ಠರ ಸಭೆಗೆ ತೆರಳುವವರೆಗೂ ಸಿದ್ದರಾಮಯ್ಯ ಅವರಿಗೆ ಹೈಕಮಾಂಡ್ ನಿರ್ಧಾರದ ಅರಿವಿರಲಿಲ್ಲ.

ಕಾಲ್ತುಳಿತ ಪ್ರಕರಣದ ಮಾಹಿತಿ ಪಡೆಯಲು ಕರೆಸಲಾಗಿದೆ ಎಂಬುದಾಗಿ ಭಾವಿಸಿ, ಅದಕ್ಕೆ ಅಗತ್ಯವಿರುವ ಸಿದ್ಧತೆ ಮಾಡಿಕೊಂಡು ಮುಖ್ಯಮಂತ್ರಿ ದೆಹಲಿಗೆ ತೆರಳಿದ್ದರು. ಉಪಮುಖ್ಯಮಂತ್ರಿ ಅವರಿಗೆ ವರಿಷ್ಠರು ಕೈಗೊಳ್ಳಲಿರುವ ತೀರ್ಮಾನಗಳ ಅರಿವಿದ್ದರೂ ತಮಗೆ ಏನೂ ತಿಳಿಯದವರಂತೆ ಇದ್ದರು.

ಇಂದಿರಾ ಭವನದಲ್ಲಿ ಸಭೆ ಆರಂಭವಾಗುತ್ತಿದ್ದಂತೆ ರಾಹುಲ್ ನೇರವಾಗಿ ಜಾತಿಗಣತಿ ವಿಷಯ ಪ್ರಸ್ತಾಪಿಸಿ, ನಾವು ಹೇಳುವವರೆಗೂ ವಿಷಯ ಮುಂದುವರೆಸಬೇಡಿ. ಅಷ್ಟಕ್ಕೂ ವಿಶೇಷ ಸಂಪುಟ ಸಭೆ ಕರೆದಿದ್ದ ಔಚಿತ್ಯ ಏನು ಎಂದು ಪ್ರಶ್ನಿಸಿದರು.

ಎಲ್ಲಾ ದೂರ ಸರಿಯುತ್ತಿದ್ದಾರೆ: ಒಂದು ಸಮುದಾಯವನ್ನು ಓಲೈಸಿಕೊಳ್ಳಲು ಉಳಿದ ಸಮುದಾಯ ಎದುರು ಹಾಕಿಕೊಳ್ಳಲು ಸಾಧ್ಯವಿಲ್ಲ. ಅಲ್ಪಸಂಖ್ಯಾತರನ್ನು ಹೊರತುಪಡಿಸಿ ಈಗಾಗಲೇ ಬಹುತೇಕ ಎಲ್ಲಾ ಸಮುದಾಯಗಳ ಶೇಕಡ 20ರಿಂದ 30ರಷ್ಟು ಮಂದಿ ನಮ್ಮಿಂದ ದೂರ ಸರಿದಿದ್ದಾರೆ.

ಇನ್ನು ಹಿಂದುಳಿದ ವರ್ಗಗಳಲ್ಲಿ ಶೇಕಡ 70ರಿಂದ 80ರಷ್ಟು ನಮ್ಮ ಜೊತೆಗಿದ್ದಾರೆ, ನೀವು ಕಾಂತರಾಜ್ ವರದಿ ಜಾರಿಗೆ ತಂದರೆ, ಇವರಲ್ಲಿ ಬಹುಪಾಲು ಮಂದಿ ಪಕ್ಷದಿಂದ ಹಿಂದೆ ಸರಿಯುವ ಸಾಧ್ಯತೆ ಇದೆ ಎಂಬ ಲೆಕ್ಕಾಚಾರ ಮಾಹಿತಿ ಮುಂದಿಟ್ಟರು.

ಈ ಸಂದರ್ಭದಲ್ಲಿ ಸಿದ್ದರಾಮಯ್ಯ, ಈಗಾಗಲೇ ಒಕ್ಕಲಿಗ ಮತ್ತು ವೀರಶೈವ ಸಮುದಾಯದ ಬಹುತೇಕ ಮಂದಿ ದೂರ ಸರಿದಿದ್ದು, ಉಳಿದವರನ್ನು ನಾವು ಹಿಡಿದಿಟ್ಟುಕೊಳ್ಳಬೇಕಿದೆ ಎಂಬ ವಾದ ಮುಂದಿಟ್ಟರು.

ಇದಕ್ಕೆ ರಾಹುಲ್ ಗಾಂಧಿ, ಕರ್ನಾಟಕದ ಮಟ್ಟಿಗೆ ಈ ಎರಡು ಪ್ರಮುಖ ಸಮುದಾಯಗಳನ್ನು ದೂರವಿಟ್ಟು ನಾವು ಪಕ್ಷ ಸಂಘಟನೆಯಾಗಲಿ, ಪಕ್ಷವನ್ನು ಮತ್ತೆ ಅಧಿಕಾರಕ್ಕೆ ತರುವುದಾಗಲಿ ಸಾಧ್ಯವಿಲ್ಲ.

ಕಾಂಗ್ರೆಸ್‌ಗೂ ಈ ಸಮುದಾಯಗಳ ಬೆಂಬಲ ವಿದೆ, ಕಾಂತರಾಜ್ ವರದಿ ಜಾರಿಗೆ ತಂದರೆ, ಹಿಂದುಳಿದ ವರ್ಗದ ಇತರೆ ಜಾತಿಗಳಿಗೆ ದಕ್ಕಬೇಕಾದ ಅವಕಾಶಗಳು ಒಂದೇ ಒಂದು ಸಮುದಾಯದ ಪಾಲಾಗುತ್ತವೆ ಎಂಬ ವಾದವಿದೆ ಎಂದರು.

ಸಭೆಯ ಎಲ್ಲ ವಿದ್ಯಮಾನಗಳನ್ನು ಗಮನಿಸುತ್ತಿದ್ದ ಮಲ್ಲಿಕಾರ್ಜುನ ಖರ್ಗೆ, ವರದಿ ಜಾರಿಯಿಂದ ದಲಿತ ಸಮುದಾಯಗಳಿಗೂ ಅನ್ಯಾಯವಾಗಲಿದೆ ಎಂದು ತಮ್ಮಲ್ಲಿನ ಅಂಕಿ–ಅಂಶಗಳನ್ನೂ ಮುಂದಿಟ್ಟರು.

ತಕ್ಷಣವೇ ವೇಣುಗೋಪಾಲ್ ಹಾಗೂ ಸುರ್ಜೇವಾಲ ವರದಿ ಅನುಷ್ಠಾನ ವಿರೋಧಿಸಿದ್ದಲ್ಲದೆ, ಜಾರಿಯಿಂದ ಪಕ್ಷಕ್ಕೆ ಯಾವ ರೀತಿ ಹಿನ್ನಡೆ ಆಗಲಿದೆ ಎಂಬುದನ್ನು ಸಭೆ ಮುಂದೆ ಬಿಡಿಸಿಟ್ಟರು.

ಹತ್ತು ವರ್ಷಗಳ ಹಿಂದಿನ ವರದಿ ಜಾರಿ ಸಾಧ್ಯವಿಲ್ಲ, ಇದನ್ನು ಕೈಬಿಟ್ಟು ಹೊಸದಾಗಿ ಸಮೀಕ್ಷೆ ನಡೆಸಿ ಎಂದು ಖರ್ಗೆ ಖಡಕ್ಕಾಗಿ ಮುಖ್ಯಮಂತ್ರಿ ಹಾಗೂ ಉಪಮುಖ್ಯಮಂತ್ರಿ ಅವರುಗಳಿಗೆ ಆದೇಶ ಮಾಡಿದರು. ಖರ್ಗೆ ಆದೇಶಕ್ಕೆ ರಾಹುಲ್ ಧ್ವನಿಗೂಡಿಸುತ್ತಿದ್ದಂತೆ ಮುಖ್ಯಮಂತ್ರಿ ಅವರು, ಕಾಂತರಾಜ್ ವರದಿಗೆ ಅಂತಿಮ ಗಂಟುಮೂಟೆ ಕಟ್ಟುವ ತೀರ್ಮಾನಕ್ಕೆ ಬಂದರು.

ಯೋಗೇಶ್ ಗೌಡ ಕೊಲೆ ಪ್ರಕರಣ: ಶರಣಾದ ಶಾಸಕ ವಿನಯ್ ಕುಲಕರ್ಣಿ ಮತ್ತೆ ಸಿಬಿಐ ವಶಕ್ಕೆ

ಬೆಂಗಳೂರು, ಜೂ.13– 2016ರಲ್ಲಿ ನಡೆದ ಬಿಜೆಪಿ ನಾಯಕ ಯೋಗೇಶ್ ಗೌಡ ಅವರ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಕಾಂಗ್ರೆಸ್ ಶಾಸಕ ಮತ್ತು ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ (ಕೆಯುಡಬ್ಲ್ಯುಎಸ್‌ಬಿ) ಅಧ್ಯಕ್ಷ ವಿನಯ್ ಕುಲಕರ್ಣಿ ಶುಕ್ರವಾರ ಬೆಂಗಳೂರಿನ ಜನಪ್ರತಿನಿಧಿಗಳ ಕೋರ್ಟ್ ಮುಂದೆ ಶರಣಾಗಿದ್ದಾರೆ.



ಪ್ರಕರಣಕ್ಕೆ ಸಂಬಂಧಿಸಿದಂತೆ ಸುಪ್ರೀಂ ಕೋರ್ಟ್ ಇತ್ತೀಚೆಗಷ್ಟೇ ವಿನಯ್ ಕುಲಕರ್ಣಿ ಅವರ ಜಾಮೀನನ್ನು ರದ್ದು ಗೊಳಿಸಿತ್ತು ಇಂದು ನ್ಯಾಯಾಲಯಕ್ಕೆ ಹಾಜರಾದ ಬೆನ್ನಲ್ಲೇ ವಿಶೇಷ ನ್ಯಾಯಾಲಯವು ವಿನಯ್ ಕುಲಕರ್ಣಿ ಅವರನ್ನು ಕೇಂದ್ರ ತನಿಖಾ ದಳದ (CBI) ವಶಕ್ಕೆ ನೀಡಿದೆ

ಧಾರವಾಡ ಜಿಲ್ಲಾ ಪಂಚಾಯತ್ ಸದಸ್ಯ ಯೋಗೇಶ್ ಗೌಡ ಅವರನ್ನು 2016ರ ಜೂನ್ 15ರಂದು ಅವರ ಮಾಲೀಕತ್ವದ ಜಿಮ್‌ನಲ್ಲಿ ಭೀಕರವಾಗಿ ಹತ್ಯೆ ಮಾಡಲಾಗಿತ್ತು. ಆ ಸಮಯದಲ್ಲಿ ಕುಲಕರ್ಣಿ ಅವರು ರಾಜ್ಯದಲ್ಲಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರದಲ್ಲಿ ಸಚಿವರಾಗಿದ್ದರು. ಈ ಪ್ರಕರಣದಲ್ಲಿ ವಿನಯ್ ಕುಲಕರ್ಣಿ ಅವರ ಕೈವಾಡದ ಬಗ್ಗೆ ಆರೋಪಿಸಿ 2020ರ ನವೆಂಬರ್ 5ರಂದು ಸಿಬಿಐ ಅಧಿಕಾರಿಗಳು ಅವರನ್ನು ಬಂಧಿಸಿದ್ದರು.

ಒಂಬತ್ತು ತಿಂಗಳ ಕಾಲ ಜೈಲಿನಲ್ಲಿದ್ದ ನಂತರ, ಕುಲಕರ್ಣಿ ಅವರನ್ನು 2021ರ ಆಗಸ್ಟ್ 13ರಂದು ಬಿಡುಗಡೆ ಮಾಡಲಾಯಿತು. ಸುಪ್ರೀಂಕೋರ್ಟ್ ಅವರು ಧಾರವಾಡ ಜಿಲ್ಲೆಗೆ ಪ್ರವೇಶಿಸಬಾರದು ಎಂಬ ಷರತ್ತು ವಿಧಿಸಿತ್ತು. ಆದಾಗ್ಯೂ, ತಮ್ಮ ಕ್ಷೇತ್ರವನ್ನು ಪ್ರವೇಶಿಸದೆ, ವಿನಯ್ ಕುಲಕರ್ಣಿ ಅವರು 2023ರ ವಿಧಾನಸಭಾ ಚುನಾವಣೆಯಲ್ಲಿ ಧಾರವಾಡ ಕ್ಷೇತ್ರದಿಂದ ಸ್ಪರ್ಧಿಸಿ ಗೆದ್ದರು. ಅವರ ಪತ್ನಿ ಮತ್ತು ಮಗಳು ಅವರ ಪರವಾಗಿ ಪ್ರಚಾರ ಮಾಡಿದ್ದರು.

ಪ್ರಕರಣದ ತನಿಖೆಯನ್ನು ಚುರುಕುಗೊಳಿಸಲು ಮತ್ತು ಸಾಕ್ಷಿಗಳ ವಿಚಾರಣೆಯನ್ನು ಪೂರ್ಣಗೊಳಿಸಲು ಸುಪ್ರೀಂ ಕೋರ್ಟ್ ಆದೇಶಿಸಿತ್ತು. ಸಾಕ್ಷಿಗಳನ್ನು ಸೂಕ್ಷ್ಮವಾಗಿ ಗಮನಿಸುತ್ತಿದ್ದ ಸಿಬಿಐ, ಅವರಿಗೆ ಹಣದ ಆಮಿಷ ಒಡ್ಡಲಾಗುತ್ತಿದೆ ಎಂದು ಆರೋಪಿಸಿ, ಈ ಸಂಬಂಧ ಸಾಕ್ಷ್ಯಗಳೊಂದಿಗೆ ಸುಪ್ರೀಂಕೋರ್ಟ್ ಮೆಟ್ಟಿಲೇರಿತ್ತು.

ಸಾಕ್ಷಿಗಳ ಮೇಲೆ ಪ್ರಭಾವ ಬೀರಲು ಮತ್ತು ಹಣದ ಆಮಿಷ ಒಡ್ಡಲು ಪ್ರಯತ್ನಿಸುತ್ತಿದ್ದಾರೆ ಎಂದು ಆರೋಪಿಸಿ ಸಿಬಿಐ ಸಲ್ಲಿಸಿದ ಅರ್ಜಿಯ ನಂತರ ಸುಪ್ರೀಂಕೋರ್ಟ್ ವಿನಯ್ ಕುಲಕರ್ಣಿ ಅವರ ಜಾಮೀನನ್ನು ರದ್ದುಗೊಳಿಸಿತ್ತು. ಅಲ್ಲದೆ, ಒಂದು ವಾರದೊಳಗೆ ಶರಣಾಗುವಂತೆ ಸೂಚಿಸಿತ್ತು.

ಈ ಕುರಿತು ಪ್ರತಿಕ್ರಿಯಿಸಿದ ವಿನಯ್ ಕುಲಕರ್ಣಿ, 'ಇದರಲ್ಲಿ ಅನೇಕ ಜನರ ಪಾತ್ರವಿದೆ ಅದು ಸಮಸ್ಯೆ ಎಂದು ನಾನು ಹೇಳಲಾರೆ. ನ್ಯಾಯಾಲಯವು ಸಾಕ್ಷ್ಯಗಳೊಂದಿಗೆ ಮುಂದುವರಿಯುತ್ತದೆ ಮತ್ತು ಅದು ಸಾಕ್ಷ್ಯದ ಆಧಾರದ ಮೇಲೆ ತೀರ್ಪನ್ನು ನೀಡುತ್ತದೆ. ದೇವರು ಇದ್ದಾನೆ ಎಲ್ಲರಿಗೂ ತಿಳಿದಿದೆ.. ಜನರು ನನ್ನನ್ನು ಜೈಲಿನಲ್ಲಿ ಕೂರಿಸಬೇಕೆಂದು ಬಯಸುತ್ತಾರೆ' ಎಂದರು.

ಅಕ್ಷರಾಭ್ಯಾಸವೆಂಬ ಪವಿತ್ರ ಕಾರ್ಯಕ್ರಮ



ಮೈಸೂರು, ಜೂ. 13– ಶಿಶುವಿಹಾರ ವಿದ್ಯಾರ್ಥಿಗಳು ಶೈಕ್ಷಣಿಕ ಬದುಕಿಗೆ ಪ್ರವೇಶಿಸುವ, ಶಿಕ್ಷಣ ಜಗತ್ತಿಗೆ ಅಡಿಯಿಡುವ ವಿಶೇಷ ಮತ್ತು ಪವಿತ್ರ ಕಾರ್ಯಕ್ರಮ ಅಕ್ಷರಾಭ್ಯಾಸವನ್ನು ನಗರದ ಬೋಗಾದಿಯಲ್ಲಿರುವ ಹರಿ ವಿದ್ಯಾಲಯ ಶಾಲೆಯಲ್ಲಿ ಹಮ್ಮಿಕೊಳ್ಳಲಾಗಿತ್ತು. ಇದೊಂದು ಮಕ್ಕಳ ವಿದ್ಯಾಭ್ಯಾಸ ಪಯಣದ ಮೊದಲ ಹೆಜ್ಜೆಯಿಡುವ ಪವಿತ್ರ ಕಾರ್ಯಕ್ರಮ.

ವಿದ್ಯಾದೇವತೆ ಸರಸ್ವತಿ ಮತ್ತು ಗಣೇಶನ ವಿಶೇಷ ಪೂಜೆಗಳೊಂದಿಗೆ ಪ್ರಾರಂಭವಾದ ಕಾರ್ಯಕ್ರಮ ಮಕ್ಕಳು, ಪೋಷಕರ ಮಾರ್ಗದರ್ಶನದಲ್ಲಿ ಅಕ್ಕಿಯಲ್ಲಿ 'ಓಂ' ಅಕ್ಷರ ಬರೆಯುವುದರೊಂದಿಗೆ ಮಕ್ಕಳ ಶೈಕ್ಷಣಿಕ ಬದುಕಿಗೆ ಮಂತ್ರ ಘೋಷಗಳ ಮೂಲಕ ಹೆಜ್ಜೆಯಿಟ್ಟರು. ಈ ಕಾರ್ಯಕ್ರಮವು ಸಂಪ್ರದಾಯಿಕ ಆಚರಣೆ ಮತ್ತು ಪರಂಪರೆ ಗೌರವಿಸುವುದರ ಜೊತೆಗೆ ಆಧುನಿಕ ಶಿಕ್ಷಣದ ಅರಿವನ್ನು ಮೂಡಿಸುವ ವಿಶಿಷ್ಟ ಕಾರ್ಯಕ್ರಮವಾಗಿತ್ತು.

ಈ ಕಾರ್ಯಕ್ರಮದಲ್ಲಿ ಶಾಲೆಯ ಕಾರ್ಯದರ್ಶಿ ಮತ್ತು ಪ್ರಾಂಶುಪಾಲರಾದ ಶ್ರೀ ಭಗವಾನ್ ರವರು ಪಾಲ್ಗೊಂಡಿದ್ದರು. ಶಿಶುವಿಹಾರದ ಎಲ್ಲ ಮಕ್ಕಳು, ಪೋಷಕರು ಪಾಲ್ಗೊಂಡಿದ್ದರು.

ಪ್ರಧಾನಿ ಮೋದಿ 11 ವರ್ಷಗಳ ಆಡಳಿತ: ಸುವರ್ಣಾಕ್ಷರಗಳಲ್ಲಿ ಬರೆಯುವಷ್ಟು ಸಾಧನೆ

ವಿಪಕ್ಷ ನಾಯಕ ಆರ್. ಅಶೋಕ್ ಅಭಿಮತ



ವಿಕಸಿತ ಭಾರತ ಜಿಲ್ಲಾ ಮಟ್ಟದ ಕಾರ್ಯಾಗಾರಕ್ಕೆ ಚಾಲನೆ ನೀಡಲಾಯಿತು.

ಮೈಸೂರು, ಜೂ. 13– ಎಲ್ಲರ ವಿಕಾಸಕ್ಕಾಗಿ ನಿಸ್ವಾರ್ಥದಿಂದ 11 ವರ್ಷ ಕೆಲಸ ಮಾಡಿರುವ ಕೀರ್ತಿ ಪ್ರಧಾನ ಮಂತ್ರಿ ನರೇಂದ್ರ ಮೋದಿ, ಕೇಂದ್ರ ಸರ್ಕಾರಕ್ಕೆ ಸಲ್ಲುತ್ತದೆ. 11 ವರ್ಷಗಳ ಸಾಧನೆಯನ್ನು ಸುವರ್ಣಾಕ್ಷರದಲ್ಲಿ ಬರೆದಿಡಬೇಕು ಎಂದು ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಹೇಳಿದರು.

ಮೈಸೂರಿನ ಬಿಜೆಪಿ ಕಚೇರಿಯಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿಯವರ 11 ವರ್ಷಗಳ ಅಭಿವೃದ್ಧಿ ಕುರಿತು ವಿಕಸಿತ ಭಾರತ ಜಿಲ್ಲಾ ಮಟ್ಟದ ಕಾರ್ಯಾಗಾರಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಕೆಳ ಹಂತದ ಜನರಿಗೆ ಯೋಜನೆಗಳನ್ನು ತಲುಪಿಸುವ ಕಾರ್ಯಗಳು ಅಚ್ಚುಕಟ್ಟಾಗಿ ನಡೆದಿವೆ. ಕಟ್ಟಕಡೆಯ ವ್ಯಕ್ತಿಗೆ ಕೇಂದ್ರ ಸರ್ಕಾರದ ಯೋಜನೆಗಳನ್ನು ತಲುಪಿಸುವ ಜವಾಬ್ದಾರಿ ನಮ್ಮ ಮೇಲಿದೆ.

ಭ್ರಷ್ಟಾಚಾರ ರಹಿತ ಆಡಳಿತ ನೀಡಿರುವ ನರೇಂದ್ರ ಮೋದಿಯವರು ದೇಶದ 140 ಕೋಟಿ ಜನರನ್ನು ಒಗ್ಗೂಡಿಸುವ ಪ್ರಯತ್ನ ಮಾಡುತ್ತಿದ್ದಾರೆ, ಆಹಾರ, ಆರೋಗ್ಯ, ಮಹಿಳೆಯರ ಸಬಲೀಕರಣ ಶಿಕ್ಷಣ ಹಿಂದುಳಿದ ವರ್ಗಗಳ ಸರ್ವತೋಮುಖ ಅಭಿವೃದ್ಧಿಗೆ ಶ್ರಮಿಸುತ್ತಿದ್ದಾರೆ. ವಿಶ್ವದಲ್ಲಿ ಭಾರತೀಯರು ಇಂದು ಹೆಮ್ಮೆಯಿಂದ ನಾವು ಭಾರತೀಯರು ಎಂದು ಹೇಳಿಕೊಳ್ಳುವ ವಾತಾವರಣ ನಿರ್ಮಾಣವಾಗಿದೆ. ಇದು ಮೋದಿ ಅವರ ಭಾರತವನ್ನು ವಿಶ್ವಗುರು ಮಾಡುವಲ್ಲಿ ನಿರಂತರ ಶ್ರಮಿಸುತ್ತಿರುವುದೇ ಕಾರಣವಾಗಿದೆ. ಜಾಗತಿಕವಾಗಿ ನಾಲ್ಕನೇ ಆರ್ಥಿಕ ಶಕ್ತಿಯಾಗಿ ಭಾರತ ಇಂದು ಹೊರಹೊಮ್ಮಿದೆ ಎಂದು ಹೇಳಿದರು

ಕಾರ್ಯಯೋಜನೆಗಳನ್ನು ತಿಳಿಸಲು ಜಿಲ್ಲಾ ಸಂಚಾಲಕರಾಗಿ ವಿಧಾನ ಪರಿಷತ್ ಸದಸ್ಯರಾದ ಕೇಶವ ಪ್ರಸಾದ್ ಹಾಗೂ ಮುಖ್ಯ ಮಾರ್ಗದರ್ಶನ ನೀಡಿದ ವಿರೋಧ ಪಕ್ಷದ ನಾಯಕರಾದ ಅಶೋಕ್, ಮೈಸೂರು ಮತ್ತು ಕೊಡಗು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ನಗರ ಅಧ್ಯಕ್ಷ ಎಲ್.ನಾಗೇಂದ್ರ, ಕೃಷ್ಣರಾಜ ಕ್ಷೇತ್ರದ ಶಾಸಕ ಶ್ರೀವತ್ಸ, ಮಾಜಿ ಸಂಸದ ಪ್ರತಾಪ್ ಸಿಂಹ, ಮೈಸೂರು ನಗರ ಸಂಚಾಲಕರಾದ ಡಾ. ಹೇಮಾ ನಂದೀಶ್, ಪ್ರಧಾನ ಕಾರ್ಯದರ್ಶಿಗಳಾದ ಗಿರಿಧರ್, ಬಿ.ಎಂ. ರಘು, ಕೇಬಲ್ ಮಹೇಶ್, ಅನಿಲ್ ಥಾಮಸ್, ಗೋಕುಲ್ ಗೋವರ್ಧನ್, ಸು.ಮುರುಳಿ, ನಾಗೇಂದ್ರ ಕುಮಾರ್ ಹಾಗೂ ಎಲ್ಲಾ ಜಿಲ್ಲಾ ಹಾಗೂ ಮಂಡಲ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಮರು ಜಾತಿ ಗಣತಿಗೆ ರಾಜ್ಯ ಒಕ್ಕಲಿಗರ ಸಂಘ ಸ್ವಾಗತ

ಆದಿಚುಂಚನಗಿರಿ ಶ್ರೀಗಳಾದ ಡಾ. ನಿರ್ಮಲಾನಂದನಾಥ ಸ್ವಾಮೀಜಿ ಆದೇಶದಂತೆ ಪ್ರತ್ಯೇಕವಾಗಿ ಡಿಜಿಟಲ್ ಸರ್ವೆ ನಿರ್ಧಾರ

ಬೆಂಗಳೂರು, ಜೂ. 13(ಕೆಎಂಶಿ)– ಸಾಮಾಜಿಕ, ಆರ್ಥಿಕ, ಶೈಕ್ಷಣಿಕ (ಜಾತಿಗಣತಿ) ಮರುಸಮೀಕ್ಷೆ ನಡೆಸುವ ಸರ್ಕಾರದ ನಿರ್ಧಾರವನ್ನು ರಾಜ್ಯ ಒಕ್ಕಲಿಗರ ಸಂಘ ಇಂದಿಲ್ಲಿ ಸ್ವಾಗತಿಸಿದೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ರಾಜ್ಯ ಒಕ್ಕಲಿಗರ ಸಂಘದ ಅಧ್ಯಕ್ಷ ಬಿ.ಕೆಂಚಪ್ಪಗೌಡ, ಆದಿಚುಂಚನಗಿರಿ ಮಠದ ಪೀಠಾಧ್ಯಕ್ಷ ಡಾ.ನಿರ್ಮಲಾನಂದನಾಥ ಸ್ವಾಮೀಜಿ ಆದೇಶದಂತೆ ಒಕ್ಕಲಿಗರ ಸಂಘ ಪ್ರತ್ಯೇಕವಾಗಿ ಸಮುದಾಯದ ಡಿಜಿಟಲ್ ಸರ್ವೆ ಮಾಡಿಸಲಿದೆ.

ಇದು ಯಾವುದೇ ಪಕ್ಷ ಹಾಗೂ ಸರ್ಕಾರಕ್ಕೆ ಸಂಬಂಧವಿಲ್ಲ, ಜನಾಂಗದ ಹಿತದೃಷ್ಟಿಯಿಂದ ಸಮೀಕ್ಷೆ ಮಾಡಿಸುತ್ತೇವೆ ಎಂದರು. ಸರ್ಕಾರ ಮಾಡುವ ಜಾತಿಗಣತಿಯಲ್ಲಿ ಮತ್ತೆ ತಪ್ಪುಗಳಾದರೆ ಹೋರಾಟ ಮಾಡುತ್ತೇವೆ. ಆಯಾ ಜನಾಂಗಕ್ಕೆ ಸಿಗಬೇಕಾದ ಸೌಲಭ್ಯಗಳು ಸಿಗಲು ವೈಜ್ಞಾನಿಕ ರೀತಿಯಲ್ಲಿ ಗಣತಿ ಆಗಬೇಕು. ವೈಜ್ಞಾನಿಕ ಸಮೀಕ್ಷಾ ವರದಿ ಬಂದರೆ, ನಮ್ಮ ಜನಸಂಖ್ಯೆ ಸ್ವಲ್ಪ ಹೆಚ್ಚು ಕಡಿಮೆಯಾಗಿದ್ದರೂ ಒಪ್ಪುತ್ತೇವೆ ಎಂದರು.



ರಾಜ್ಯ ಒಕ್ಕಲಿಗರ ಸಂಘದ ಪ್ರಮುಖರಿಂದ ಸುದ್ದಿಗೋಷ್ಠಿ ನಡೆಸಲಾಯಿತು

ಕಾಂತರಾಜು ಅಧ್ಯಕ್ಷರಾಗಿದ್ದ ಅವಧಿಯಲ್ಲಿ ಶಾಶ್ವತ ಹಿಂದುಳಿದ ವರ್ಗಗಳ ಆಯೋಗ ನಡೆಸಿದ ಸಾಮಾಜಿಕ, ಶೈಕ್ಷಣಿಕ ಸಮೀಕ್ಷಾ ವರದಿ ವೈಜ್ಞಾನಿಕವಾಗಿಲ್ಲ. 10 ವರ್ಷದಷ್ಟು ಹಳೆಯದು, ಹೊಸ ಸಮೀಕ್ಷೆ ಮಾಡಬೇಕೆಂಬ ಒತ್ತಾಯಪೂರ್ವಕ ಮನವಿ ಮಾಡಿದ್ದೆವು, ಇದಕ್ಕೆ ಸರ್ಕಾರ ಸ್ಪಂದಿಸಿದೆ.

ಡಿಜಿಟಲ್, ಆನ್‌ಲೈನ್ ತಂತ್ರಜ್ಞಾನ ಬಳಸಿ ಹಳ್ಳಿ, ಪಟ್ಟಣಗಳಲ್ಲಿ ಸಮೀಕ್ಷೆ ನಡೆಸಲಾಗುವುದು, ಸಂಘವೇ ಇದಕ್ಕಾಗಿ ಸ್ವಯಂ ಸೇವಕರ ನೇಮಕ ಮಾಡಲಿದೆ.

ಅವಧಿ ಹೆಚ್ಚಿಸಿದರೆ ಅನುಕೂಲ: ಕೇಂದ್ರ ಸರ್ಕಾರ ಜನಗಣತಿ ಜೊತೆಯಲ್ಲೇ ಜಾತಿಗಣತಿ ಮಾಡುವುದಾಗಿ ಘೋಷಿಸಿದೆ, ಆದರೂ, ರಾಜ್ಯ ಸರ್ಕಾರ ಹೊಸದಾಗಿ ಸಮೀಕ್ಷೆ ಮಾಡುವುದಾಗಿ ಪ್ರಕಟಿಸಿದೆ, ನಿವೃತ್ತ ನ್ಯಾಯಾಧೀಶರ ನೇತೃತ್ವದಲ್ಲಿ ಜಾತಿಗಣತಿ ಮಾಡಿಸಿದರೆ ನ್ಯಾಯಸಮ್ಮತವಾಗಿರಲಿದೆ. ಮರು ಸಮೀಕ್ಷೆಗೆ ಮೂರು ತಿಂಗಳ ಸಮಯಾವಕಾಶ ಸಾಲುವುದಿಲ್ಲ, ಇನ್ನೂ ಎರಡು ತಿಂಗಳು ಹೆಚ್ಚು ನೀಡಿದರೆ ಅನುಕೂಲವಾಗಲಿದೆ. ವೀರಶೈವ, ಒಕ್ಕಲಿಗ, ಬ್ರಾಹ್ಮಣರು ಈಗಿರುವ ವರದಿಗೆ ವಿರೋಧ ವ್ಯಕ್ತಪಡಿಸಿ ಅನುಷ್ಠಾನ ಮಾಡಬಾರದು ಎಂದು ಆಗ್ರಹಿಸಿದ್ದವು. ಸಮೀಕ್ಷೆ ಆಧಾರ್ ಲಿಂಕ್‌ನೊಂದಿಗೆ ಮಾಡಬೇಕು. ಜಿಯೋ ಟ್ಯಾಗ್ ಮಾಡಿದರೆ ಕುಟುಂಬದ ಆರ್ಥಿಕತೆ ಮಾಹಿತಿಯನ್ನೂ ಪಡೆಯಬಹುದು. ಗ್ರಾಮ ಲೆಕ್ಕಿಗರು, ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಪಾಲ್ಗೊಳ್ಳುವಂತೆ ಮಾಡಬೇಕು. ಕರಾರುವಾಕ್ ಜಾತಿಗಣತಿ ಮಾಡಿದರೆ ಯಾರಿಗೂ ಅನ್ಯಾಯವಾಗುವುದಿಲ್ಲ.

ಮರುಸಮೀಕ್ಷೆ ವರದಿಗೆ ಆಕ್ಷೇಪಣೆ ಸಲ್ಲಿಕೆಗೂ ಅವಕಾಶ ಇರಬೇಕು. ಎಲ್ಲಾ ಸಮುದಾಯಗಳಿಗೂ ನ್ಯಾಯ ದೊರಕುವ ರೀತಿ ಇರಬೇಕು. ಜಾತಿಗಣತಿ ಸಂದರ್ಭದಲ್ಲಿ ವೀರಶೈವ, ಲಿಂಗಾಯತ, ಒಕ್ಕಲಿಗ ಸಮುದಾಯವನ್ನು ಉಪಜಾತಿಗಳ ಹೆಸರಿನಲ್ಲಿ ನಮೂದಿಸದೆ ಒಟ್ಟಾರೆಯಾಗಿ ವೀರಶೈವ, ಲಿಂಗಾಯತ, ಒಕ್ಕಲಿಗ ಎಂಬುದಾಗಿ ಮಾತ್ರ ನಮೂದಿಸಬೇಕು ಎಂದು ಒತ್ತಾಯಿಸಿದರು.

ದೇಶ - ವಿದೇಶ

ಬಾಂಬ್ ಭೀತಿ: ಥಾಯ್ಲೆಂಡ್‌ನಲ್ಲಿ ಏರ್ ಇಂಡಿಯಾ ವಿಮಾನ ತುರ್ತು ಲ್ಯಾಂಡಿಂಗ್

ಥಾಯ್ಲೆಂಡ್: ಅಹ್ಮದಾಬಾದ್‌ನಲ್ಲಿ ಏರ್ ಇಂಡಿಯಾ ವಿಮಾನ ಪತನಕ್ಕೀಡಾದ ಪ್ರಕರಣ ಇನ್ನೂ ಹಸಿರಾಗಿರುವಂತೆಯೇ ಮತ್ತೊಂದು ಏರ್ ಇಂಡಿಯಾ ವಿಮಾನಕ್ಕೆ ಬಾಂಬ್ ಬೆದರಿಕೆ ಬಂದಿದೆ.




ಥಾಯ್ಲೆಂಡ್‌ನ ಫುಕೆಟ್ ದ್ವೀಪದಿಂದ ದೆಹಲಿಗೆ ತೆರಳುತ್ತಿದ್ದ ಏರ್ ಇಂಡಿಯಾ ವಿಮಾನಕ್ಕೆ ಬಾಂಬ್ ಬೆದರಿಕೆ ಹಾಕಲಾಗಿದ್ದು, ಥೈಲ್ಯಾಂಡ್‌ನಲ್ಲಿ ತುರ್ತು ಭೂಸ್ಪರ್ಶಕ್ಕೆ ಮನವಿ ಮಾಡಲಾಗಿತ್ತು ಎಂದು ಫುಕೆಟ್ ವಿಮಾನ ನಿಲ್ದಾಣದ ಅಧಿಕಾರಿಗಳನ್ನು ಹೇಳಿದ್ದಾರೆ. ಬಾಂಬ್ ಬೆದರಿಕೆ ಭೀತಿ ಹಿನ್ನಲೆಯಲ್ಲಿ ವಿಮಾನ ಎಐ 379 ಲ್ಯಾಂಡ್ ಆಗಿದ್ದು, ಹಾರಾಟ ಮಾಡುತ್ತಿದ್ದ ವೇಳೆ ಈ ಬೆದರಿಕೆ ಬಂದಿದೆ. ಈ ಕಾರಣದಿಂದ ತಕ್ಷಣ ಭೂಸ್ಪರ್ಶಕ್ಕೆ ಮನವಿ ಮಾಡಲಾಗಿದೆ.

ನಂತರ ಏರ್ ಇಂಡಿಯಾ ವಿಮಾನ ಸಿಬ್ಬಂದಿಗಳು ವಿಮಾನ ಎಐ 379ನಿಂದ ಪ್ರಯಾಣಿಕರನ್ನು ವಿಮಾನದಿಂದ ಕೆಳಗಿಳಿಸಿದ ಬಳಿಕ ವಿಮಾನವನ್ನು ಶೋಧಕ್ಕೊಳಪಡಿಸಿದ ಅಧಿಕಾರಿಗಳು ಬಳಿಕ ವಿಮಾನದಲ್ಲಿ ಯಾವುದೇ ಬಾಂಬ್ ಇಲ್ಲ ಎಂಬುದನ್ನು ಪತ್ತೆ ಮಾಡಿದ್ದಾರೆ. ಇಲ್ಲದೆ ಇದೊಂದು ಹುಸಿ ಬಾಂಬ್ ಕರೆ ಎಂದು ಪರಿಗಣಿಸಿ ಪೊಲೀಸರಿಗೆ ಅಧಿಕೃತವಾಗಿ ದೂರು ನೀಡಿದ್ದಾರೆ.

ಇರಾನ್ ಸಶಸ್ತ್ರ ಪಡೆಗಳ ಮುಖ್ಯಸ್ಥ ಮೊಹಮ್ಮದ್ ಬಘೇರಿ ಹತ್ಯೆ

ಜೆರುಸಲೇಂ: ಮಧ್ಯ ಪ್ರಾಚ್ಯದಲ್ಲಿ ಭಾರಿ ಸಂಘರ್ಷ ಸಂಭವಿಸುವ ಸಾಧ್ಯತೆ ಇದೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಎಚ್ಚರಿಕೆ ನೀಡಿದ ಬೆನ್ನಲ್ಲೇ ಇರಾನ್ ವಿರುದ್ಧ ಇಸ್ರೇಲ್ ದಾಳಿ ನಡೆಸಿದೆ.



ಇರಾನ್‌ನ ಪರಮಾಣು ಸ್ಥಾವರಗಳು ಮತ್ತು ಮಿಲಿಟರಿ ನೆಲೆಗಳ ಮೇಲೆ ಶುಕ್ರವಾರ (ಜೂ.13) ದಾಳಿ ನಡೆಸಲಾಗಿದೆ. . ಇಸ್ರೇಲ್ ದಾಳಿಯನ್ನು ಇರಾನ್ ಖಚಿತಪಡಿಸಿದ್ದು, ಉದ್ವಿಗ್ನ ಸ್ಥಿತಿ ನಿರ್ಮಾಣವಾಗಿದೆ. ಇರಾನ್‌ನ ವಾಯು ರಕ್ಷಣಾ ಪಡೆಗಳು ಶೇಕಡಾ 100 ರಷ್ಟು ಕಾರ್ಯಾಚರಣೆಯ ಸಾಮರ್ಥ್ಯದಲ್ಲಿವೆ ಎಂದು ಹೇಳಿದೆ

ಇಸ್ರೇಲ್ ನಡೆಸಿರುವ ವೈಮಾನಿಕ ದಾಳಿಯಲ್ಲಿ ಇರಾನ್‌ನ ಸೇನಾಪಡೆಗಳ ಮುಖ್ಯಸ್ಥನ ಹತ್ಯೆಗೈಯಲಾಗಿದೆ ಎಂದು ವರದಿಯಾಗಿದೆ. ಈ ಕುರಿತು ಇಸ್ರೇಲ್ ಸೇನೆ ತಿಳಿಸಿದ್ದು, ವೈಮಾನಿಕ ದಾಳಿಯಲ್ಲಿ ಇರಾನ್‌ನ ಸೇನಾಪಡೆಗಳ ಮುಖ್ಯಸ್ಥ ಮೊಹಮ್ಮದ್ ಬಘೇರಿ ಹತ್ಯೆಗೀಡಾಗಿದ್ದಾನೆ ಎಂದು ಹೇಳಿದೆ. ಇರಾನ್ ಪರಮಾಣು ಯೋಜನೆಯ ಇಬ್ಬರು ವಿಜ್ಞಾನಿಗಳು ಹತರಾಗಿರುವ ಸಾಧ್ಯತೆಯಿದೆ ಎಂದೂ ಸಹ ಇಸ್ರೇಲ್ ಸೇನೆ ಹೇಳಿದೆ. ಇರಾನ್ ಅಣ್ವಸ್ತ್ರ ಹಾಗೂ ಪರಮಾಣು ಕೇಂದ್ರಗಳನ್ನು ಗುರಿಯಾಗಿಸಿ ಇಸ್ರೇಲ್ ವೈಮಾನಿಕ ದಾಳಿ ನಡೆಸಿತ್ತು. ಟೆಹ್ರಾನ್ ಮೇಲಿನ ದಾಳಿಯನ್ನು ಇರಾನ್ ಖಚಿತಪಡಿಸಿದೆ.

ಹಿರಿಯ ನಾಗರಿಕರಿಗೆ ವಂಚನೆ: ಭಾರತ ಮೂಲದ ವ್ಯಕ್ತಿಗೆ ಅಮೆರಿಕದಲ್ಲಿ ಜೈಲು

ಸ್ಯಾನ್‌ಫ್ರಾನ್ಸಿಸ್ಕೋ: ಹಿರಿಯ ನಾಗರಿಕರಿಗೆ ದಶಲಕ್ಷ ಡಾಲರ್‌ಗಳಿಗೂ ಹೆಚ್ಚು ವಂಚನೆ ಮಾಡಿದ್ದ ಪ್ರಕರಣದಲ್ಲಿ ಭಾಗಿಯಾಗಿರುವ ಆರೋಪದ ಮೇಲೆ ಭಾರತ ಮೂಲದ ವ್ಯಕ್ತಿಗೆ ಇಲ್ಲಿನ ನ್ಯಾಯಾಲಯ ಆರು ವರ್ಷಗಳ ಜೈಲು ಶಿಕ್ಷೆ ವಿಧಿಸಿದೆ ಎಂದು ನ್ಯಾಯಾಂಗ ಇಲಾಖೆ ತಿಳಿಸಿದೆ.

ಅಮೆರಿಕದ ನ್ಯೂಜೆರ್ಸಿಯಲ್ಲಿ ನೆಲಸಿದ್ದ 33 ವರ್ಷದ ಪ್ರಣವ್ ಪಟೇಲ್ ಶಿಕ್ಷೆಗೆ ಗುರಿಯಾದವರು. 2023ರ ಅಕ್ಟೋಬರ್‌ನಿಂದ ಡಿಸೆಂಬರ್‌ವರೆಗೆ 'ಮನಿ ಮುಲ್' (ಹಣ ಅಕ್ರಮ ವರ್ಗಾವಣೆಗೆ ಅಪರಾಧಿಗಳಿಂದ ನೇಮಕಗೊಂಡ ವ್ಯಕ್ತಿ) ಆಗಿ ಕಾರ್ಯನಿರ್ವಹಿಸುತ್ತಿದ್ದ ಈತ ಸುಮಾರು 1.7 ದಶಲಕ್ಷ ಅಮೆರಿಕನ್ ಡಾಲರ್ (14 ಕೋಟಿ) ವಂಚಿಸಿದ್ದ ಆರೋಪ ಹೊತ್ತಿದ್ದರು. ಕಳೆದ ವರ್ಷ ಡಿಸೆಂಬರ್‌ನಲ್ಲಿ ಪ್ರಣವ್‌ರನ್ನು ದೋಷಿ ಎಂದು ಪರಿಗಣಿಸಿದ್ದ ಜಿಲ್ಲಾ ನ್ಯಾಯಾಧೀಶ ವಿಲಿಯಂ ಜಂಗ್ ಅವರು ಬುಧವಾರ ಆರು ವರ್ಷಗಳ ಜೈಲು ಶಿಕ್ಷೆ ಪ್ರಕಟಿಸಿದ್ದಾರೆ. ಅಲ್ಲದೇ ವಂಚನೆಯ 14 ಕೋಟಿ ಹಣದ ಜಪ್ತಿಗೂ ಸೂಚಿಸಿದ್ದಾರೆ ಎಂದು ನ್ಯಾಯಾಂಗ ಇಲಾಖೆ ತಿಳಿಸಿದೆ. ಈತ ಫ್ಲಾರಿಡಾದಲ್ಲಿ ಹಿರಿಯ ನಾಗರಿಕರಿಂದ ಹಣ ಮತ್ತು ಆಭರಣ ಪಡೆದು ಪ್ರಣವ್ ನ್ಯೂಜೆರ್ಸಿಗೆ ಬಂದು ನೆಲಸಿದ್ದ. 2023ರಲ್ಲಿ ಚಿನ್ನದ ಪೆಟ್ಟಿಗೆಯ ಸಮೇತ ಪ್ರಣವ್‌ರನ್ನು ಕಾನೂನು ಜಾರಿ ವಿಭಾಗದ ಅಧಿಕಾರಿಗಳು ಬಂಧಿಸಿದ್ದರು.

ಮೃತಪಟ್ಟವರ ಬಗ್ಗೆ ಅವಹೇಳನಕಾರಿ ಪೋಸ್ಟ್: ಕೇರಳ ಅಧಿಕಾರಿ ಅಮಾನತು

ತಿರುವನಂತಪುರಂ: ಅಹಮದಾಬಾದ್ ವಿಮಾನ ಅಪಘಾತದಲ್ಲಿ ಮೃತಪಟ್ಟ ಕೇರಳದ ನರ್ಸ್ ಬಗ್ಗೆ ಫೇಸ್‌ಬುಕ್‌ನಲ್ಲಿ ಆಕ್ಷೇಪಾರ್ಹ ಪೋಸ್ಟ್ ಹಾಕಿದ ಕೇರಳ ಸರ್ಕಾರಿ ಅಧಿಕಾರಿಯನ್ನು ಸೇವೆಯಿಂದ ಅಮಾನತುಗೊಳಿಸಲಾಗಿದೆ.



ಕಾಸರಗೋಡು ಜಿಲ್ಲೆಯ ವೆಳ್ಳರಿಕುಂಡ್ ತಾಲೂಕು ಕಚೇರಿಯಲ್ಲಿ ಜೂನಿಯರ್ ಸೂಪರಿಂಟೆಂಡೆಂಟ್ ಆಗಿದ್ದ ಪವಿತ್ರನ್ ಅವರನ್ನು ಶುಕ್ರವಾರ ಅಮಾನತುಗೊಳಿಸಲಾಗಿದೆ. ಪವಿತ್ರನ್ ಅಪಘಾತದಲ್ಲಿ ಮೃತಪಟ್ಟ ಪಟ್ಟಣಂತಿಟ್ಟದ ನರ್ಸ್ ರಂಜಿತಾ ಅವರನ್ನು ಅಪಹಾಸ್ಯ ಮಾಡಿ ಪೋಸ್ಟ್ ಹಾಕಿದ್ದರು ಎನ್ನಲಾಗಿದೆ.

ಫೇಸ್‌ಬುಕ್ ಪೋಸ್ಟ್‌ನಲ್ಲಿ ರಾಜ್ಯ ಕಂದಾಯ ಸಚಿವ ಕೆ. ರಾಜನ್, ಪವಿತ್ರನ್ ಅವರ ಹೇಳಿಕೆ ಅವಮಾನಕರ ಎಂದು ಟೀಕಿಸಿದ್ದರು ಮತ್ತು ಪೋಸ್ಟ್ ಅವರ ಗಮನಕ್ಕೆ ಬಂದ ತಕ್ಷಣ ಅಮಾನತು ಆದೇಶ ಹೊರಡಿಸಲಾಗಿದೆ ಎಂದು ಹೇಳಿದ್ದಾರೆ. ಎರಡು ಮಕ್ಕಳ ತಾಯಿಯಾಗಿರುವ ರಂಜಿತಾ ಅವರು ಯುಕೆಯಲ್ಲಿ ನರ್ಸ್ ಆಗಿ ಕೆಲಸ ಮಾಡುತ್ತಿದ್ದರು. ವಿದೇಶದಲ್ಲಿ ಕೆಲಸ ಮಾಡಿದ ನಂತರ ಈಗ ಕೇರಳ ಆರೋಗ್ಯ ಇಲಾಖೆಯಲ್ಲಿ ಅವರಿಗೆ ಕೆಲಸ ಸಿಕ್ಕಿತ್ತು. ಸರ್ಕಾರಿ ಸೇವೆಗೆ ಸೇರಲು ತಮ್ಮ ಕೆಲಸಕ್ಕೆ ಸಂಬಂಧಿಸಿದ ಔಪಚಾರಿಕತೆಗಳನ್ನು ಪೂರ್ಣಗೊಳಿಸಲು ಕೇರಳಕ್ಕೆ ಬಂದಿದ್ದರು ಎನ್ನಲಾಗಿದೆ.

ನಟಿ ಕರೀಷ್ಮಾ ಮಾಜಿ ಪತಿ ಸಂಜಯ್ ಕಪೂರ್ ಸಾವಿಗೆ ಜೇನುನೊಣ ಕಾರಣ

ನವದೆಹಲಿ: ಬಾಲಿವುಡ್ ನಟಿ ಕರಿಷ್ಮಾ ಕಪೂರ್ ಅವರ ಮಾಜಿ ಪತಿ ಮತ್ತು ಪ್ರಮುಖ ಕೈಗಾರಿಕೋದ್ಯಮಿ ಸಂಜಯ್ ಕಪೂರ್ (53) ಗುರುವಾರ (ಜೂನ್ 12) ಹಠಾತ್ತನೆ ನಿಧನರಾದರು. ಇಂಗ್ಲೆಂಡ್‌ನಲ್ಲಿ ಪೋಲೋ ಪಂದ್ಯ ಆಡುತ್ತಿದ್ದಾಗ ಹೃದಯಾಘಾತದಿಂದ ಹಠಾತ್ತನೆ ಕುಸಿದು ಬಿದ್ದು ಪ್ರಾಣ ಬಿಟ್ಟಿದ್ದಾರೆ ಎನ್ನಲಾಗುತ್ತಿದೆ.



ಆದರೆ ಈ ಹಿಂದಿನ ಕಾರಣವೇ ಬೇರೆ ಇದೆ ಎನ್ನಲಾಗಿದೆ. ಸಂಜಯ್ ಕಪೂರ್ ಪೋಲೋ ಆಡುತ್ತಿದ್ದಾಗ ಆಕಸ್ಮಿಕವಾಗಿ ಜೇನುನೊಣವೊಂದು ಅವರ ಬಾಯಿಗೆ ಪ್ರವೇಶಿಸಿತು. ತಿಳಿಯದೆ ಅದನ್ನು ಅವರು ನುಂಗಿದರು. ಇದರಿಂದ ಹೃದಯಾಘಾತಕ್ಕೆ ಕಾರಣವಾಯಿತು. ವೈದ್ಯರು ತಕ್ಷಣ ಚಿಕಿತ್ಸೆ ನೀಡಲು ಪ್ರಯತ್ನಿಸಿದರೂ, ಜೀವ ಉಳಿಸಲು ಸಾಧ್ಯವಾಗಲಿಲ್ಲ.

ಸಂಜಯ್ ಕಪೂರ್ ಅವರು ಹಲವು ಉದ್ಯಮದಲ್ಲಿ ತೊಡಗಿಕೊಂಡಿದ್ದಾರೆ. ಸೋನಾ ಕಾಮ್‌ಸ್ಟಾರ್ ಕಂಪನಿಗೆ ಅವರು ಅಧ್ಯಕ್ಷರಾಗಿದ್ದಾರೆ. ಸಂಜಯ್‌ಗೆ ಕರೀಷ್ಮಾ ಜೊತೆ ಇಬ್ಬರು ಮಕ್ಕಳು ಹಾಗೂ ಎರಡನೇ ಪತ್ನಿ ಪ್ರಿಯಾ ಜೊತೆ ಒಂದು ಮಗು ಹೊಂದಿದ್ದಾರೆ. ಸಂಜಯ್ ಕಪೂರ್ ಅವರ ನಿಧನಕ್ಕೆ ಉದ್ಯಮ ಮತ್ತು ಚಲನಚಿತ್ರ ಕ್ಷೇತ್ರಗಳ ಹಲವಾರು ಪ್ರಸಿದ್ಧ ವ್ಯಕ್ತಿಗಳು ಸಾಮಾಜಿಕ ಮಾಧ್ಯಮ ವೇದಿಕೆಗಳಲ್ಲಿ ಸಂತಾಪ ಸೂಚಿಸುತ್ತಿದ್ದಾರೆ.

ಕಾರು, ಬೈಕ್ ಮೇಲೆ ಕಾಡಾನೆ ದಾಳಿ



ಕಾಡಾನೆ ದಾಳಿಯಿಂದ ಕಾರಿನ ಮೇಲೆ ಬಿದ್ದ ತೆಂಗಿನ ಮರವನ್ನು ತೆರವುಗೊಳಿಸುತ್ತಿರುವುದು.

ಮಡಿಕೇರಿ, ಜೂ.13–ಕಾರು ಹಾಗೂ ಬೈಕ್ ಮೇಲೆ ಇಂದು ಕಾಡಾನೆ ದಾಳಿ ಮಾಡಿ ಸಂಪೂರ್ಣ ಜಖಂಗೊಳಿಸಿರುವ ಘಟನೆ ಸಿದ್ದಾಪುರ ಮಾಲ್ದಾರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮಾಲ್ದಾರೆ ಹಾಗೂ ಮಠ ಗ್ರಾಮದಲ್ಲಿ ನಡೆದಿದೆ.

ಮಠ ಗ್ರಾಮದ ಹೇಮಂತ್ ಎಂಬುವರ ಮನೆಯ ಸಮೀಪ ನಿಲ್ಲಿಸಿದ್ದ ಕಾರಿನ ಮೇಲೆ ಕಾಡಾನೆ ಪಕ್ಕದಲ್ಲಿಯೇ ಇದ್ದ ತೆಂಗಿನ ಮರವನ್ನು ನೂಕಿ ಹಾಕಿದ್ದು, ಕಾರು ಸಂಪೂರ್ಣ ಜಖಂಗೊಂಡಿದೆ. ಈ ಹಿಂದೆ ಕೂಡ ಇವರ ಬೈಕನ್ನು ಕಾಡಾನೆ ಜಖಂಗೊಳಿಸಿತ್ತು. ಸ್ಥಳಕ್ಕೆ ತಿತುಮತಿ ಅರಣ್ಯ ಇಲಾಖೆಯ ಉಪವಲಯ ಅರಣ್ಯ ಅಧಿಕಾರಿ ಶಶಿ ಹಾಗೂ ಆರ್.ಆರ್.ಟಿ. ಸಿಬ್ಬಂದಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ಮಾಲ್ದಾರೆ ಗ್ರಾಮದ ಆಸ್ತಾನ ಹಾಡಿಯ ರಮೇಶ್ ಎಂಬುವರ ಬೈಕ್‌ನ್ನು ಮಾಲ್ದಾರೆ ಮುತ್ತಪ್ಪ ಹಾಗೂ ಗಣಪತಿ ದೇವಸ್ಥಾನ ಪಕ್ಕ ಇರುವ ನಾಯಡ ವಿಜುನವರ ತೋಟದ ಪಕ್ಕ ನಿಲ್ಲಿಸಲಾಗಿತ್ತು. ಬೆಳಿಗ್ಗೆ ಕಾಡಾನೆ ಬೈಕ್‌ನ ಮೇಲೆ ದಾಳಿ ನಡೆಸಿ ಸಂಪೂರ್ಣ ಜಖಂಗೊಳಿಸಿದೆ. ತೋಟದ ಕೆಲಸಕ್ಕೆ ತೆರಳುತ್ತಿದ್ದ ಕಾರ್ಮಿಕರ ಮೇಲೂ ಕಾಡಾನೆ ದಾಳಿಗೆ ಯತ್ನಿಸಿದೆ. ಆದರೆ ಕಾರ್ಮಿಕರು ಓಡಿ ದಾಳಿಯಿಂದ ಪಾರಾಗಿದ್ದಾರೆ. ತೋಟದಲ್ಲಿ ಬೀಡು ಬಿಟ್ಟಿರುವ ಕಾಡಾನೆಯನ್ನು ಅರಣ್ಯಕ್ಕೆ ಅಟ್ಟುವ ಕಾರ್ಯಾಚರಣೆ ನಡೆಸಬೇಕೆಂದು ಸ್ಥಳೀಯರು ಒತ್ತಾಯಿಸಿದ್ದಾರೆ.

ದುಬಾರೆ, ಬರಪೊಳೆಯಲ್ಲಿ ರಿವರ್ ರ್‍ಯಾಫ್ಟಿಂಗ್‌ಗೆ ತೀರ್ಮಾನ



ಶಾಸಕ ಡಾ.ಮಂತರ್ ಗೌಡ ಉಪಸ್ಥಿತಿಯಲ್ಲಿ ರಿವರ್ ರ್‍ಯಾಫ್ಟಿಂಗ್ ನಿರ್ವಹಣೆ ಮತ್ತು ಮೇಲುಸ್ತುವಾರಿ ಸಮಿತಿ ಸಭೆ ನಡೆಯಿತು

ಮಡಿಕೇರಿ, ಜೂ.13–ಜಿಲ್ಲೆಯ ದುಬಾರೆ ಹಾಗೂ ಬರಪೊಳೆಯಲ್ಲಿ ರಿವರ್ ರ್‍ಯಾಫ್ಟಿಂಗ್ (ಜಲಕ್ರೀಡೆ) ನಡೆಸುವ ರ್‍ಯಾಫ್ಟ್ ಮಾಲೀಕರು ಕಡ್ಡಾಯವಾಗಿ ಪರವಾನಗಿ ನವೀಕರಣ ಹಾಗೂ ಫಿಟ್‌ನೆಸ್ ಪ್ರಮಾಣಪತ್ರ ಪಡೆದು ಜಲಕ್ರೀಡೆ ನಡೆಸಲು ತೀರ್ಮಾನಿಸಿದೆ.

ಹಾರಂಗಿ ಜಲಾಶಯದ ಬಳಿಯ ಪ್ರವಾಸಿ ಮಂದಿರದಲ್ಲಿ ಶಾಸಕ ಡಾ. ಮಂತರ್ ಗೌಡ ಉಪಸ್ಥಿತಿ ಜಿಲ್ಲಾಧಿಕಾರಿ ವೆಂಕಟ್ ರಾಜಾ ಅಧ್ಯಕ್ಷತೆಯಲ್ಲಿ ನಡೆದ ರಿವರ್ ರ್‍ಯಾಫ್ಟಿಂಗ್ ನಿರ್ವಹಣೆ ಮತ್ತು ಮೇಲುಸ್ತುವಾರಿ ಸಮಿತಿ ಸಭೆಯಲ್ಲಿ ರಿವರ್ ರ್‍ಯಾಫ್ಟಿಂಗ್ ಸ್ಥಳದ ಟಿಕೆಟ್ ಕೌಂಟರ್ ಪ್ರದೇಶದಲ್ಲಿ ಸೆಲ್ಟರ್ ಅಳವಡಿಕೆ, ಪ್ರವಾಸಿಗರ ಸುರಕ್ಷತೆಗೆ ಸೋಪಾನ್ ಕಟ್ಟೆ ರೈಲಿಂಗ್ಸ್ ಅಳವಡಿಕೆ, ಗೈಡ್‌ಗಳ ಬಟ್ಟೆ ಬದಲಿಸುವ ಕೊಠಡಿ, ಬೆಂಚ್‌ಗಳ ಅಳವಡಿಕೆ, ಕುಡಿಯುವ ನೀರು, ಮಾಹಿತಿ ಫಲಕ, ಶೌಚಾಲಯ ನಿರ್ಮಾಣ ಜೊತೆಗೆ ಸಿಸಿಟಿವಿ ಅಳವಡಿಕೆಗೆ ಅನುಮೋದಿಸಲಾಯಿತು.

ಶಾಸಕ ಡಾ.ಮಂತರ್ ಗೌಡ ಮಾತನಾಡಿ ರಿವರ್ ರ್‍ಯಾಫ್ಟಿಂಗ್ ಸಂದರ್ಭದಲ್ಲಿ ಪ್ರತಿಯೊಬ್ಬರ ಸುರಕ್ಷತೆ ಮತ್ತು ಜೀವರಕ್ಷಣೆ ಅತೀ ಮುಖ್ಯವಾಗಿದ್ದು, ಆ ನಿಟ್ಟಿನಲ್ಲಿ ರಿವರ್ ರ್‍ಯಾಫ್ಟ್‌ಗಳಿಗೆ ಕಡ್ಡಾಯವಾಗಿ 'ಜನರಲ್ ತಿಮ್ಮಯ್ಯ ರಾಷ್ಟ್ರೀಯ ಸಾಹಸ ಅಕಾಡೆಮಿ'(ಜೇತ್ನ)ಯಿಂದ ಫಿಟ್‌ನೆಸ್ ಪ್ರಮಾಣ ಪತ್ರ ಕಡ್ಡಾಯವಾಗಿ ಪಡೆಯಬೇಕು. ಪೊಲೀಸ್ ಇಲಾಖೆಯಿಂದಲೂ ಸಹ ಪರಿಶೀಲನೆ ನಡೆಸಬೇಕು ಜೊತೆಗೆ ಪ್ರತೀ ವರ್ಷ ನವೀಕರಣ ಮಾಡಿಸಿದ ನಂತರ ರಿವರ್ ರ್‍ಯಾಫ್ಟಿಂಗ್ ನಡೆಸಬೇಕು ಎಂದು ನಿರ್ದೇಶನ ನೀಡಿದರು.


ಜಲಸಾಹಸ ಕ್ರೀಡೆ ನಡೆಸುವ ಗೈಡ್‌ಗಳು ಸೂಕ್ತ ತರಬೇತಿ ಪಡೆದಿರಬೇಕು. ಹಾಗೆಯೇ ವೃತ್ತಿ ಕೌಶಲ್ಯ ಹೊಂದಿರಬೇಕು. ಜೊತೆಗೆ ಜೇತ್ನ ಸಂಸ್ಥೆ ದೃಢೀಕರಿಸಬೇಕು. ಈಗಾಗಲೇ ಸೋಮವಾರಪೇಟೆ ತಾಲೂಕಿನ ಕುಮಾರಳ್ಳಿ (ಬೀದಳ್ಳಿ) ರಿವರ್‌ರ್‍ಯಾಫ್ಟಿಂಗ್ ನಡೆಸುವ ಸಂಬಂಧ ಅನುಮತಿ ನೀಡಲಾಗಿದೆ. ಆದರೆ ಇನ್ನೂ ಕಾರ್ಯರೂಪಕ್ಕೆ ಬರದಿರುವ ಹಿನ್ನೆಲೆ ಸ್ಥಳ ಪರಿಶೀಲಿಸಿ ಮುಂದಿನ ಕ್ರಮವಹಿಸಲಾಗುವುದು ಎಂದು ತಿಳಿಸಿದರು.

ದುಬಾರೆಯಲ್ಲಿ ಒಟ್ಟು 75 ರ್‍ಯಾಫ್ಟಿಂಗ್ ಕಾರ್ಯನಿರ್ವಹಿಸುತ್ತಿದ್ದು, ಬರ ಪೊಳೆಯಲ್ಲಿ 24 ರ್‍ಯಾಫ್ಟ್‌ಗಳು ಕಾರ್ಯನಿರ್ವಹಿಸುತ್ತಿವೆ. ಜಲ ಸಾಹಸ ಕ್ರೀಡೆಯಲ್ಲಿ ಒಂದಾದ 'ಕಾಯಕಿಂಗ್' ನಡೆಸಲು ಅವಕಾಶವಿದೆ. ಜಿಲ್ಲೆಯಲ್ಲಿ 11 ಅರ್ಜಿಗಳು ಸಲ್ಲಿಕೆಯಾಗಿವೆ ಎಂದು ಪ್ರವಾಸೋದ್ಯಮ ಇಲಾಖೆ ಉಪ ನಿರ್ದೇಶಕಿ ಅನಿತಾ ಭಾಸ್ಕರ್ ಹೇಳಿದರು

ಉಪ ವಿಭಾಗಾಧಿಕಾರಿ ವಿನಾಯಕ ನರ್ವಾಡೆ, ಉಪ ಅರಣ್ಯ ಸಂರಕ್ಷಣಾಧಿಕಾರಿ ಅಭಿಷೇಕ್, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಬಾರಿಕೆ ದಿನೇಶ್ ಕುಮಾರ್, ಅರಣ್ಯ ಇಲಾಖೆಯ ರತನ್, ಅಗ್ನಿಶಾಮಕ ಅಧಿಕಾರಿ ರಾಜೇಶ್, ಜೇತ್ನಾ ಸಂಸ್ಥೆಯ ಕೀರ್ತಿ ಪಯಾಸ್, ದುಬಾರೆ ರಿವರ್ ರ್‍ಯಾಫ್ಟಿಂಗ್‌ನ ವಿಜು ಚಂಗಪ್ಪ, ವಸಂತ್ ಪಿ.ಸಿ., ಬರಪೊಳೆಯ ರತನ್ ಸಿ.ಎಸ್., ನಿತಿನ್, ಕುಮಾರಳ್ಳಿಯ ಪ್ರದೀಪ್, ಹಾರಂಗಿ ಜಲಾಶಯದ ಕಾರ್ಯಪಾಲಕ ಅಭಿಯಂತರ ಪುಟ್ಟಸ್ವಾಮಿ, ಲೋಕೋಪಯೋಗಿ ಇಲಾಖೆಯ ಎಇಇ ಸತೀಶ್, ತಹಶೀಲ್ದಾರ್ ಕಿರಣ್ ಗೌರಯ್ಯ, ಐಟಿಡಿಪಿ ಅಧಿಕಾರಿ ಎಸ್.ಹೊನ್ನೇಗೌಡ, ಪ್ರವಾಸೋದ್ಯಮ ಇಲಾಖೆಯ ಸಮಾಲೋಚಕ ಜತಿನ್, ನಂಜರಾಯಪಟ್ಟಣ ಪಿಡಿಒ ರಾಜಶೇಖರ್ ಇತರರು ಇದ್ದರು

ಕಾಡಾನೆಯ ರಾಜಾರೋಷ ಸಂಚಾರ: ಗ್ರಾಮಸ್ಥರಲ್ಲಿ ಆತಂಕ

ವಿರಾಜಪೇಟೆ, ಜೂ.13– ಕಾಡಾನೆಯ ರಾಜಾರೋಷ ಸಂಚಾರದಿಂದ ಜನರಲ್ಲಿ ಭಯದ ವಾತಾವರಣ ಮೂಡಿರುವ ಘಟನೆ ತಾಲೂಕಿನ ಬಿಟ್ಟಂಗಾಲ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ನಡೆದಿದೆ.



ಇಲ್ಲಿನ ಒಂದನೇ ರುದ್ರಗುಪ್ಪೆ ಗ್ರಾಮದ ಆಟ್ರಂಗಡರ ಮನೆಗೆ ತೆರಳುವ ಸಂಪರ್ಕ ರಸ್ತೆಯಲ್ಲಿ ಬೆಳಿಗ್ಗೆ ಹಾಡಹಗಲೇ ರಸ್ತೆಯಲ್ಲಿ ಕಾಣಿಸಿಕೊಂಡ ಕಾಡಾನೆ ಹಿಂಡಿನಿಂದ ಬೇರ್ಪಟ್ಟ ಆನೆಯೊಂದು ರಸ್ತೆಯಲ್ಲಿ ಸಂಚರಿಸಿ ಗ್ರಾಮಸ್ಥರಲ್ಲಿ ಆತಂಕ ಮೂಡಿಸಿತು. ಕಳೆದ ಮೂರು ದಿನಗಳಿಂದ ಗ್ರಾಮದ ಕೊಂಗಂಡ ಬೋಪಣ್ಣ, ಅಟ್ರಂಗಡ ಅಜೀತ್ ಅರುಣ ಅವರುಗಳ ತೋಟ ಸೇರಿದಂತೆ ವಿವಿಧ ಕಾಫಿ ತೋಟಗಳಲ್ಲಿ ಬೀಡು ಬಿಟ್ಟಿರುವ ಕಾಡಾನೆಗಳ ಹಿಂಡು ತೋಟದಲ್ಲಿ ಕಾಫಿಗಿಡ ಫಸಲಿಗೆ ಬಂದ ಬಾಳೆ ಮತ್ತು ತೆಂಗು ಗಿಡಗಳನ್ನು ಮುರಿದಿದ್ದರಿಂದ ಅಪಾರ ಪ್ರಮಾಣದ ನಷ್ಟ ಸಂಭವಿಸಿದೆ.

ಬೆಳಿಗ್ಗೆ ಮನೆಯ ಮುಂಭಾಗ ಒಂಟಿಸಲಗ ಬಂದಾಗ ನಾಯಿಗಳ ಕೂಗಾಟಕ್ಕೆ ಬೆದರಿದ ಕಾಡಾನೆ ಓಡಲಾರಂಬಿಸಿತು. ಸ್ಥಳಿಯ ನಿವಾಸಿ ಮಲ್ಲಿಕ್ ಎಂಬವರು ದ್ವಿಚಕ್ರ ವಾಹನದಲ್ಲಿ ವಿರಾಜಪೇಟೆಗೆ ತೆರಳುತಿದ್ದಾಗ ಆನೆಯನ್ನು ಕಂಡು ವಾಹನವನ್ನು ಬಿಟ್ಟು ಓಡಿಹೋಗಿದ್ದಾರೆ. ಅರಣ್ಯ ಇಲಾಖೆಯವರು ಕಾರ್ಯಾಚರಣೆ ನಡೆಸಿ ಕಾಡಿಗೆ ಅಟ್ಟುವ ಮೂಲಕ ವನ್ಯ ಜೀವಿಗಳ ಉಪಟಳವನ್ನು ತಡೆಗಟ್ಟುವಂತೆ ಗ್ರಾಮಸ್ಥರು ಒತ್ತಾಯಿಸಿದ್ದಾರೆ

ಚಿನ್ನದ ಪದಕ ವಿಜೇತೆ ಧನ್ಯಶ್ರೀ



ಸೋಮವಾರಪೇಟೆ ತಾಲೂಕಿನ ಈರಳೆವಳ ಮುಡಿಯ ಸೂದನ ಧನ್ಯಶ್ರೀ ಎಸ್.ಜಿ 4 ಚಿನ್ನದ ಪದಕ ಪಡೆದು ಅಮೋಘ ಸಾಧನೆ ಮಾಡಿದ್ದಾರೆ. ಈಕೆ ಬಾಗಲಕೋಟೆ ತೋಟಗಾರಿಕೆ ವಿಜ್ಞಾನಗಳ ವಿವಿಯ 14ನೇ ಘಟಿಕೋತ್ಸವದಲ್ಲಿ ರಾಜ್ಯಪಾಲ ಥಾವರ್‌ಚಂದ್ ಗೆಲ್ಹೋಟ್‌ರಿಂದ ಪದಕ ಸ್ವೀಕರಿಸಿದರು.

ನಾಡು ಶ್ರೀ ಭಗವತಿ ದೇವಾಲಯದ ನವೀಕರಣ

ನಾಪೋಕ್ಲು, ಜೂ.13(ದುಗ್ಗಳ ಸದಾನಂದ)– ಇಲ್ಲಿನ ನಾಡು ಶ್ರೀ ಭಗವತಿ ದೇವಾಲಯದ ನವೀಕರಣಕ್ಕೆ ಆಡಳಿತ ಮಂಡಳಿ ಮುಂದಾಗಿದೆ. ಪೌಳಿಯ ಸುತ್ತ ಶಿಥಿಲಗೊಂಡಿದ್ದು, ಮಹಾ ಗಣಪತಿ ಗುಡಿಯನ್ನು ನವೀಕರಿಸ ಬೇಕೆಂದು ಸೂಚಿಸಲಾಗಿತ್ತು. ಈಗಿರುವ ಪೌಳಿಯನ್ನು ತೆಗೆದು ಶಿಲಾ ಕಲ್ಲಿನಲ್ಲಿ ನಿರ್ಮಿಸಿ ಮೇಲ್ಛಾವಣಿಗೆ ತಾಮ್ರದ ಹೊದಿಕೆ ಹಾಸಿ ಹೊಸದಾಗಿ ನಿರ್ಮಿಸುವಂತೆ ಎರಡು ವರ್ಷಗಳ ಹಿಂದೆ ತಾಂಬೂಲ ಪ್ರಶ್ನೆಯಿಂದ ಕೇಳಿಬಂದಿತ್ತು.

ರಾಜವಂಶಸ್ಥರು ಹಾಗೂ ಊರಿನ ಪೂರ್ವಿಕರು ಅಷ್ಟ ಬಂದ ಬ್ರಹ್ಮ ಕಳಸ ಮಾಡಿ ಭಕ್ತರ ನೆರವಿನೊಂದಿಗೆ ದೇವಾಲಯ ಅಭಿವೃದ್ಧಿ ಪಥದಲ್ಲಿ ಸಾಗಿತ್ತು ದೇವಾಲಯದ ಅಂಗಳಕ್ಕೆ ಚಪ್ಪಡಿ ಹಾಸಿದ್ದು ಹೊರಾಂಗಣಕ್ಕೆ ಕಾಂಕ್ರೀಟ್ ಅಂಗಳ ಮತ್ತು ತಡೆಗೋಡೆ ನಿರ್ಮಾಣ ದೇವಾಲಯದ ಬಲ ಭಾಗದಲ್ಲಿ ಸಮುದಾಯ ಭವನ, ಎಡ ಭಾಗದಲ್ಲಿ ಊಟದ ಭವನವನ್ನು ಕಾಂಕ್ರೀಟ್ ಮೇಲ್ಛಾವಣಿಯೊಂದಿಗೆ ಕಟ್ಟಲಾಗಿದೆ. ಸುಸಜ್ಜಿತ ಅಡುಗೆ ಕೋಣೆ, ಅರ್ಚಕರ ವಸತಿ ನಿಲಯ ನಿರ್ಮಿಸಲಾಗಿದೆ.

ಸರ್ಕಾರದ ಅನುದಾನದಿಂದ ದೇವಾಲಯದ ಕೆರೆ ಹಾಗೂ ರಸ್ತೆಗಳಿಗೆ ಕಾಂಕ್ರೀಟ್, ಇಂಟರ್ಲಾಕ್ ನೊಂದಿಗೆ ಹೊರಾಂಗಣವನ್ನು ಸಹ ಅಭಿವೃದ್ಧಿಪಡಿಸಲಾಗಿದೆ. 2015ರಲ್ಲಿ ಶಿಲೆಯನ್ನು ಬಳಸಿ ಗರ್ಭಗುಡಿ, ತೀರ್ಥ ಮಂಟಪಕ್ಕೆ ತಾಮ್ರದ ಹೊದಿಕೆ ಹಾಸಿ, ಕಾಳೆಘಟ್ಟನ ತಂತ್ರಿಯವರ ನೇತೃತ್ವದಲ್ಲಿ ಪುನರ್ ಪ್ರತಿಷ್ಠಾಪಿಸಲಾಯಿತು.



ನಿರ್ಮಾಣ ಹಂತದಲ್ಲಿರುವ ನಾಪೋಕ್ಲು ನಾಡು ಶ್ರೀ ಭಗವತಿ ದೇವಾಲಯದ ಪೌಳಿ ಶಿಲಾಕಲ್ಲಿನ ನವೀಕರಣ.

ಶಾಲಾ ಮಕ್ಕಳಿಂದ ವಿಶ್ವ ಪರಿಸರ ದಿನಾಚರಣೆ



ಪೊನ್ನಂಪೇಟೆ ಸಾಯಿ ಶಂಕರ ವಿದ್ಯಾಸಂಸ್ಥೆ ಪ್ರಶಾಂತಿ ನಿಲಯದಲ್ಲಿ ಮುಖ್ಯ ಶಿಕ್ಷಕಿ ರೀನಾ ಗಿರೀಶ್ ನೇತೃತ್ವದಲ್ಲಿ ವಿದ್ಯಾರ್ಥಿಗಳು ಹಾಗೂ ಶಿಕ್ಷಕರು ವಿವಿಧ ಪ್ರಭೇದದ ಸಸಿ ನೆಡುವುದರ ಮೂಲಕ ವಿಶ್ವ ಪರಿಸರ ದಿನವನ್ನು ಆಚರಿಸಿದರು.

ನಾಳೆ ಬಲಿಜ ಸಮಾಜದಿಂದ ವಿದ್ಯಾರ್ಥಿ ವೇತನ ವಿತರಣೆ

ಗೋಣಿಕೊಪ್ಪಲು, ಜೂ.13– ಕೊಡಗು ಬಲಿಜ ಸಮಾಜದ ವತಿಯಿಂದ ಪ್ರಥಮ ವರ್ಷದ ಬಲಿಜ ವಿದ್ಯಾರ್ಥಿ ವೇತನವನ್ನು ಇದೇ 15 ರಂದು ಪೊನ್ನಂಪೇಟೆಯಲ್ಲಿ ವಿತರಿಸಲಾಗುವುದು ಎಂದು ಸಮಾಜದ ಅಧ್ಯಕ್ಷ ಟಿ.ಎಲ್.ಶ್ರೀನಿವಾಸ್ ತಿಳಿಸಿದ್ದಾರೆ.

ಪಟ್ಟಣದ ಸಾಯಿ ಶಂಕರ ವಿದ್ಯಾಸಂಸ್ಥೆ ಸಮೀಪ ಕೇವ್‌ಇನ್ ಸಭಾಂಗಣದಲ್ಲಿ ಬೆಳಿಗ್ಗೆ 10.30ಕ್ಕೆ ಜರುಗುವ ಸಭೆಯ ಅಧ್ಯಕ್ಷತೆಯನ್ನು ಸಮಾಜದ ಉಪಾಧ್ಯಕ್ಷೆ ಹಾಗೂ ಶನಿವಾರಸಂತೆ ಗ್ರಾ.ಪಂ ಅಧ್ಯಕ್ಷೆ ಗೀತಾ ಹರೀಶ್ ವಹಿಸಲಿದ್ದು, ಶಾಸಕ ಎ.ಎಸ್. ಪೊನ್ನಣ್ಣ ಉದ್ಘಾಟಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ವೀರಾಜಪೇಟೆ ಉಪ ವಿಭಾಗದ ಪೊಲೀಸ್ ಉಪ ಅಧೀಕ್ಷಕ ಎಸ್.ಮಹೇಶ್ ಕುಮಾರ್, ಧರ್ಮದರ್ಶಿ ಡಾ. ಬಿ.ಎಂ. ರವಿನಾಯ್ಡು, ರಾಜ್ಯ ಸಮಗ್ರ ಬಲಿಜ ವೇದಿಕೆಯ ಅಧ್ಯಕ್ಷ ಎನ್.ಪಿ.ಮುನಿಕೃಷ್ಣಪ್ಪ, ರಾಜ್ಯ ರೈತ ಸಂಘದ ಜಿಲ್ಲಾಧ್ಯಕ್ಷ ಕಾಡ್ಯಮಾಡ ಮನು ಸೋಮಯ್ಯ, ಸರ್ಕಾರದ ನಿವೃತ್ತ ವಿಶೇಷ ಕಾರ್ಯದರ್ಶಿ ಡಾ.ಜಿ.ಕೆ.ವಸಂತ್ ಕುಮಾರ್, ಪಾಲ್ಗೊಳ್ಳಲಿದ್ದಾರೆ. ಪಿಯುಸಿ ಮತ್ತು ಎಸ್‌ಎಸ್‌ಎಲ್‌ಸಿಯಲ್ಲಿ ಹೆಚ್ಚು ಅಂಕಗಳಿಸಿರುವ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ನೀಡಲಾಗುವುದು.

ಸರ್ಕಾರಿ ಕರ್ತವ್ಯಕ್ಕೆ ಅಡ್ಡಿ: ದಂಪತಿಗೆ ಸೆರೆವಾಸ

ಚಾಮರಾಜನಗರ, ಜೂ.13–ಸರ್ಕಾರಿ ಕರ್ತವ್ಯಕ್ಕೆ ಅಡ್ಡಿ ಪಡಿಸಿದ ಪತಿ, ಪತ್ನಿಗೆ ಸೆರೆವಾಸ ವಿಧಿಸಿ ನಗರದ ಜೆ.ಎಂ.ಎಫ್.ಸಿ. ನ್ಯಾಯಾಲಯ ತೀರ್ಪು ನೀಡಿದೆ.

ಮೈಸೂರಿನ ರಾಮಕೃಷ್ಣ ನಗರದ ಎಚ್–ಬ್ಲಾಕ್‌ನ 6ನೇ ಮುಖ್ಯರಸ್ತೆಯ 2ನೇ ತಿರುವಿನ ನಿವಾಸಿ ಶ್ರೀನಿವಾಸ್ ಮತ್ತು ಅವರ ಪತ್ನಿ ಮಮತರವರೇ ಶಿಕ್ಷೆಗೆ ಒಳಗಾದವರಾಗಿದ್ದಾರೆ.

2022ರ ಅ.14 ರಂದು ಶಾಸಕರ ಅಧ್ಯಕ್ಷತೆಯಲ್ಲಿ ಬಗರ್ ಹುಕುಂ ಸಾಗುವಳಿ ಸಕ್ರಮೀಕರಣ ಸಮಿತಿ ಸಭೆ ನಡೆಯುತ್ತಿತ್ತು. ತಹಸೀಲ್ದಾರ್, ರಾಜಸ್ವ ನಿರೀಕ್ಷಕರು, ಸಮಿತಿ ಸದಸ್ಯರು ಪಾಲ್ಗೊಂಡಿದ್ದರು. ಸಂಜೆ 7.15ರ ಸಮಯದಲ್ಲಿ ಶ್ರೀನಿವಾಸ್ ಮತ್ತು ಮಮತಾ ದಂಪತಿ ಸಭೆಗೆ ನುಗ್ಗಿ ಏರು ಧ್ವನಿಯಲ್ಲಿ ಕಿರುಚಾಡಿದರು. ಅಸಭ್ಯವಾಗಿ ವರ್ತಿಸಿ ಸಭೆಗೆ ಅಡ್ಡಿಪಡಿಸಿದ್ದರು.

ಪಟ್ಟಣ ಠಾಣೆಯ ಪೊಲೀಸರು ಪ್ರಕರಣ ದಾಖಲಿಸಿ ವಿಚಾರಣೆ ನಡೆಸಿ ನಗರದ ಜೆ.ಎಂ.ಎಫ್.ಸಿ. ನ್ಯಾಯಾಲಯಕ್ಕೆ ಆರೋಪಪಟ್ಟಿ ಸಲ್ಲಿಸಿದ್ದರು. ವಿಚಾರಣೆ ನಡೆಸಿದ ನ್ಯಾಯಾಧೀಶ ಆರ್. ಸುನೀಲ್ ತೀರ್ಪು ನೀಡಿ ದಂಪತಿಗಳು ತಪ್ಪು ಎಸಗಿರುವುದು ಸಾಕ್ಷ್ಯಾಧಾರಗಳಿಂದ ದೃಢಪಟ್ಟಿರುವುದರಿಂದ ತಲಾ 1 ವರ್ಷ ಸಾದಾ ಜೈಲು ಶಿಕ್ಷೆ ಹಾಗೂ 2 ಸಾವಿರ ರೂ. ದಂಡ ವಿಧಿಸಿದ್ದಾರೆ. ದಂಡ ನೀಡಲು ತಪ್ಪಿದರೆ ಮತ್ತೆ 15 ದಿನ ಜೈಲುವಾಸ ಅನುಭವಿಸುವಂತೆ ತಮ್ಮ ತೀರ್ಪಿನಲ್ಲಿ ನ್ಯಾಯಾಧೀಶರು ತಿಳಿಸಿದ್ದಾರೆ.

ಸರ್ಕಾರದ ಪರವಾಗಿ ಸಹಾಯಕ ಸರ್ಕಾರಿ ಅಭಿಯೋಜಕ ಮಹಮ್ಮದ್ ವಸೀಂವುಲ್ಲಾ ವಾದಿಸಿದ್ದರು.



ಇಂದು ಚಾಮರಾಜನಗರದ ವಿವಿಧೆಡೆ ವಿದ್ಯುತ್ ವ್ಯತ್ಯಯ

ಚಾಮರಾಜನಗರ, ಜೂ.13– ಚಾಮರಾಜನಗರ ಸುತ್ತಮುತ್ತ ಜೂನ್ 14ರ ಬೆಳಿಗ್ಗೆ 11 ರಿಂದ ಸಂಜೆ 5 ಗಂಟೆಯವರೆಗೆ ಸೋಮವಾರಪೇಟೆ, ಸತ್ತಿ ರಸ್ತೆ, ರಹಮತ್ ನಗರ ಮತ್ತು ಸುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಎಂದು ನಿಗಮದ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ವಕೀಲರ ಒಕ್ಕೂಟದಿಂದ ಸಿಎಂಗೆ ಮನವಿ



ವಿವಿಧ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಅಖಿಲ ಭಾರತ ವಕೀಲರ ಒಕ್ಕೂಟ ಜಿಲ್ಲಾ ಘಟಕ ಹೆಚ್ಚುವರಿ ಜಿಲ್ಲಾಧಿಕಾರಿ ಜವರೇಗೌಡರ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಯಿತು.

ಚಾಮರಾಜನಗರ, ಜೂನ್ 13–ವಿವಿಧ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಅಖಿಲ ಭಾರತ ವಕೀಲರ ಒಕ್ಕೂಟ ಜಿಲ್ಲಾ ಘಟಕದ ವತಿಯಿಂದ ಹೆಚ್ಚುವರಿ ಜಿಲ್ಲಾಧಿಕಾರಿ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಯಿತು.

ಪೊಲೀಸರ ಏಕಪಕ್ಷೀಯ ವರ್ತನೆಗಳಿಂದ ವಕೀಲರಿಗೆ ರಕ್ಷಣೆ ನೀಡಬೇಕು ಮತ್ತು ವಕೀಲರ ಸಂರಕ್ಷಣೆ ಕಾಯ್ದೆ–2024ಕ್ಕೆ ಸೂಕ್ತ ತಿದ್ದುಪಡಿಯಾಗಬೇಕು. ಸರ್ವೋಚ್ಚ ನ್ಯಾಯಾಲಯ ಮತ್ತು ಉಚ್ಚ ನ್ಯಾಯಾಲಯದ ಮಾರ್ಗಸೂಚಿಯನ್ನು ಪಾಲಿಸಬೇಕು, ಅವೈಜ್ಞಾನಿಕ ಅಖಿಲ ಭಾರತ ಬಾರ್ ಪರೀಕ್ಷೆ ರದ್ದು ಪಡಿಸಬೇಕು, ಕಿರಿಯ ವಕೀಲರಿಗೆ 2 ವರ್ಷಗಳ ಕಾಲ ಮಾಸಿಕ ರೂ.10,000/– ಸ್ಟೈಫಂಡ್ ನೀಡಬೇಕು, ರಾಜ್ಯದ ಎಲ್ಲಾ ತಾಲೂಕು ವಕೀಲರ ಸಂಘಗಳಿಗೆ ವರ್ಷಕ್ಕೆ ರೂ. 5 ಲಕ್ಷ ಹಾಗೂ ಜಿಲ್ಲಾ ವಕೀಲರ ಸಂಘಗಳಿಗೆ 10 ಲಕ್ಷ ರೂ.ಗಳ ಅನುದಾನ ಮಂಜೂರು ಮಾಡಬೇಕು.

ರಾಜ್ಯ ಸರ್ಕಾರವು ವಕೀಲರಿಗೆ ಕಡ್ಡಾಯವಾಗಿ ವೈದ್ಯಕೀಯ ಮತ್ತು ಜೀವ ವಿಮಾ ಸೌಲಭ್ಯವನ್ನು ಒದಗಿಸಬೇಕು, ಜಿಲ್ಲಾ ನ್ಯಾಯಾಲಯಗಳ ಸಂಕೀರ್ಣಗಳಲ್ಲಿ ವಕೀಲರ ಅಕಾಡೆಮಿಗಳನ್ನು ಸ್ಥಾಪಿಸಬೇಕು. ರಾಜ್ಯದಲ್ಲಿ ಹೆಚ್ಚುವರಿ ನ್ಯಾಯಾಲಯಗಳನ್ನು ಸ್ಥಾಪಿಸಲು ಮುಂದಾಗುವುದಲ್ಲದೆ ಈಗಿರುವ ನ್ಯಾಯಾಲಯಗಳಲ್ಲಿ ಮೂಲಭೂತ ಸೌಲಭ್ಯಗಳನ್ನು ಒದಗಿಸಬೇಕು, ರಾಜ್ಯದಲ್ಲಿನ ಎಲ್ಲ ನ್ಯಾಯಾಲಯದ ಆವರಣದಲ್ಲಿ ವಕೀಲರಿಗೆ ಚೇಂಬರ್‌ಗಳನ್ನು ಸ್ಥಾಪಿಸಬೇಕೆಂದು ಮನವಿಯಲ್ಲಿ ಒತ್ತಾಯಿಸಿದ್ದಾರೆ.

ಈ ಎಲ್ಲ ಬೇಡಿಕೆಗಳನ್ನು ತಿಂಗಳೊಳಗಾಗಿ ಈಡೇರಿಸದಿದ್ದಲ್ಲಿ ವಕೀಲರಗಳು ತಮ್ಮ ಹೋರಾಟವನ್ನು ತೀವ್ರಗೊಳಿಸಿ ವಿಧಾನಸೌಧ, ವಕೀಲರ ಪರಿಷತ್‌ಗಳ ಕಡೆ ನಡೆಸಬೇಕಾಗುತ್ತದೆ ಎಂದು ಮುಖ್ಯಮಂತ್ರಿಗಳಿಗೆ ಸಲ್ಲಿಸಿರುವ ಮನವಿಯಲ್ಲಿ ಅಖಿಲ ಭಾರತ ವಕೀಲರ ಒಕ್ಕೂಟದ ಜಿಲ್ಲಾಧ್ಯಕ್ಷ ಪುಟ್ಟಸ್ವಾಮಿ ರಾಮಸಮುದ್ರ ಎಚ್ಚರಿಸಿದ್ದಾರೆ.

ಈ ಸಂದರ್ಭದಲ್ಲಿ ವಕೀಲರಾದ ಪ್ರಸನ್ನ ಕುಮಾರ್ ಬಿ. ದೇವರಾಜು, ಶಶಿಕಲಾ, ಕಾವ್ಯ, ಎಂ.ಆರ್.ಸವಿತಾ, ಅಭಿಷೇಕ್, ಶಶಿಕುಮಾರ್, ಹಿರಿಯ ವಕೀಲ ಸಿ.ಎನ್.ರವಿಕುಮಾರ್, ಗುಲ್ಜಾರ್, ಮಲ್ಲು, ಆರ್. ಅಭಿಷೇಕ್ ಇತರರು ಹಾಜರಿದ್ದರು.

ಮಧ್ದೂರು ಗ್ರಾಪಂ ಅಧ್ಯಕ್ಷರಾಗಿ ರೂಪ ನಾಗಣ್ಣ ಅವಿರೋಧ ಆಯ್ಕೆ



ತಾಲೂಕಿನ ಮದ್ದೂರು ಗ್ರಾ.ಪಂ. ಅಧ್ಯಕ್ಷರಾಗಿ ಆಯ್ಕೆಯಾದ ರೂಪ ನಾಗಣ್ಣ ಅವರನ್ನು ಮಾಜಿ ಶಾಸಕ ಎಸ್. ಬಾಲರಾಜು ಸದಸ್ಯರು ಅಭಿನಂದಿಸಿದರು.

ಯಳಂದೂರು, ಜೂ.13 (ವಿ.ನಾಗರಾಜು)– ತಾಲೂಕಿನ ಮದ್ದೂರು ಗ್ರಾಮ ಪಂಚಾಯಿತಿ ಅಧ್ಯಕ್ಷ ಸ್ಥಾನಕ್ಕೆ ನಡೆದ ಚುನಾವಣೆಯಲ್ಲಿ ನೂತನ ಅಧ್ಯಕ್ಷರಾಗಿ ರೂಪನಾಗಣ್ಣ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಈ ಹಿಂದೆ ಅಧ್ಯಕ್ಷರಾಗಿದ್ದ ಸುಶೀಲಮ್ಮ ತಮ್ಮ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಿದ್ದ ಹಿನ್ನೆಲೆಯಲ್ಲಿ ಅಧ್ಯಕ್ಷ ಸ್ಥಾನ ಖಾಲಿಯಾಗಿತ್ತು. ಒಟ್ಟು 16 ಮಂದಿ ಸದಸ್ಯರಲ್ಲಿ 12 ಮಂದಿ ಹಾಜರಿದ್ದರು. ಚುನಾವಣಾಧಿಕಾರಿಯಾಗಿದ್ದ ಪಶು ಇಲಾಖೆಯ ಡಾ.ಶಿವರಾಜು ಅಧ್ಯಕ್ಷ ಸ್ಥಾನಕ್ಕೆ ರೂಪನಾಗಣ್ಣ ಮಾತ್ರ ನಾಮಪತ್ರ ಸಲ್ಲಿಸಿದ್ದ ಹಿನ್ನೆಲೆಯಲ್ಲಿ ಅವರ ಅವಿರೋಧ ಆಯ್ಕೆಯನ್ನು ಘೋಷಿಸಿದರು.

ನೂತನ ಅಧ್ಯಕ್ಷರಿಗೆ ಅಭಿನಂದನೆ ಸಲ್ಲಿಸಿ ಮಾತನಾಡಿದ ಮಾಜಿ ಶಾಸಕ ಎಸ್. ಬಾಲರಾಜು, ಗ್ರಾಮ ಪಂಚಾಯಿತಿ ಪರಿಮಿತಿ ಚಿಕ್ಕದಿರುತ್ತದೆ. ಪ್ರತಿ ಯೊಬ್ಬರೂ ಪ್ರತಿನಿತ್ಯ ತಮ್ಮ ಗ್ರಾಮ, ವಾರ್ಡ್‌ಗಳಲ್ಲಿ ಸುತ್ತಿದಾಗ ಮಾತ್ರ ಸಮಸ್ಯೆಗಳ ಅರಿವಾಗುತ್ತದೆ ಎಂದರು. ಕಚೇರಿಗೆ ಬರುವ ಜನರೊಂದಿಗೆ ಪ್ರೀತಿಯಿಂದ ಮಾತನಾಡಿದರೆ ಜನರ ಮನಸ್ಸಿನಲ್ಲಿ ಉಳಿಯಬಹುದು ಎಂದರು. ಈ ಪಂಚಾಯಿತಿಯಲ್ಲಿ 4ನೇ ಬಾರಿಗೆ ಅಧ್ಯಕ್ಷರಾಗಿರುವ ರೂಪ ನಾಗಣ್ಣರ ಅವಧಿ ಕಡಿಮೆ ಇದ್ದರೂ ಸಾರ್ವಜನಿಕ ಕೆಲಸ ಮಾಡುವಂತೆ ಕಿವಿ ಮಾತು ಹೇಳಿದರು.

ಉಪಾಧ್ಯಕ್ಷ ಆರ್. ವೆಂಕಟರಮಣ ಸ್ವಾಮಿ, ಸದಸ್ಯರಾದ ಪಿ. ಪ್ರಕಾಶ್, ನಂದಿನಿ, ಮಂಜುಳಾ, ಎಂ. ಮಲ್ಲಿಕಾರ್ಜುನ, ಪರಮೇಶ್, ಎಂ.ಎನ್. ಶಶಿ ಕುಮಾರ್, ಚಂದ್ರಮ್ಮ, ಭಾಗ್ಯ, ಸುಧಾಮಣಿ, ಚಂದ್ರಕಲಾ ಪಿಡಿಒ ನಟರಾಜು, ನಂಜಪ್ಪ ಮುಖಂಡರಾದ ಸೋಮಶೇಖರ್, ಪ್ರಕಾಶ್, ನಾಗಣ್ಣ ಸೇರಿದಂತೆ ಅನೇಕರು ಇದ್ದರು.

ಮರು ಪರೀಕ್ಷೆ ಬರೆದು ಆಸೆ ಈಡೇರಿಸಿಕೊಂಡ ಗಾನವಿ

ಕೊಳ್ಳೇಗಾಲ, ಜೂ.13–ಸರ್ಕಾರಿ ಆದರ್ಶ ಶಾಲೆಯ ಆರ್ ಗಾನವಿ ಎಸ್‌ಎಸ್‌ಎಲ್‌ಸಿ ಮರು ಪರೀಕ್ಷೆ ಬರೆದು 617ರಷ್ಟಿದ್ದ ಅಂಕಗಳನ್ನು ಏರಿಕೆ ಮಾಡಿಕೊಂಡು 621 ಅಂಕ ಗಳಿಸುವ ಮೂಲಕ ಜಿಲ್ಲಾ ಟಾಪರ್ ಆಗಿ ಹೊರ ಹೊಮ್ಮುವ ಮೂಲಕ ಉತ್ತಮ ಸಾಧನೆಗೈದಿದ್ದಾರೆ



ಇತ್ತೀಚೆಗೆ ನಡೆದ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಗಾನವಿಗೆ 617 ಅಂಕ ದೊರೆತಿತ್ತು, ಇದಕ್ಕೆ ತೃಪ್ತರಾಗದ ಗಾನವಿ, ಪರೀಕ್ಷೆಯಲ್ಲಿ ನನಗೆ ಇನ್ನು ಹೆಚ್ಚಿನ ಅಂಕ ಬರಬೇಕಿತ್ತು ಎಂದು ನಿರ್ಧರಿಸಿ ಕಳೆದ ತಿಂಗಳು ಜರುಗಿದ ಮರು ಪರೀಕ್ಷೆಯಲ್ಲಿ ಕನ್ನಡ, ಇಂಗ್ಲಿಷ್ ಮತ್ತು ವಿಜ್ಞಾನ ಮೂರು ವಿಷಯಗಳನ್ನು ಆಯ್ಕೆ ಮಾಡಿಕೊಂಡು ಪರೀಕ್ಷೆ ಬರೆದಿದ್ದರು. ಅದರ ಫಲಿತಾಂಶ ಇಂದು ಪ್ರಕಟಗೊಂಡಿದ್ದು ಗಾನವಿಗೆ ನಾಲ್ಕು ಹೆಚ್ಚುವರಿ ಅಂಕ ಲಭಿಸಿದೆ. ಕನ್ನಡದಲ್ಲಿ ಒಂದು ಹಾಗೂ ವಿಜ್ಞಾನದಲ್ಲಿ ಮೂರು ಅಂಕಗಳು ಲಭಿಸಿದ್ದು ಒಟ್ಟಾರೆ 621 ಅಂಕ ಗಳಿಸಿದಂತಾಗಿದೆ. ಹಿಂದಿನ ಫಲಿತಾಂಶದಲ್ಲಿ ಕನ್ನಡದಲ್ಲಿ 99, ವಿಜ್ಞಾನ ವಿಷಯದಲ್ಲಿ 97, ಇಂಗ್ಲೀಷ್‌ನಲ್ಲಿ 121 ಅಂಕ ಲಭಿಸಿತ್ತು ಈಗಿನ ಪರೀಕ್ಷೆಯಲ್ಲಿ ಕನ್ನಡದಲ್ಲಿ ಮತ್ತು ವಿಜ್ಞಾನ ವಿಷಯದಲ್ಲಿ ನೂರಕ್ಕೆ ನೂರು ಅಂಕ ಗಳಿಸುವ ಮೂಲಕ 621 ಅಂಕ ಗಳಿಸಿ ಜಿಲ್ಲೆಗೆ ಟಾಪರ್ ಆಗಿ ಹೊರಹೊಮ್ಮಿದ್ದಾರೆ.

ಈ ಸಾಧಕ ವಿದ್ಯಾರ್ಥಿ ಆದರ್ಶ ಶಾಲೆಯಲ್ಲಿ ಇತ್ತೀಚೆಗೆ ನಡೆದ ಅಭಿನಂದನಾ ಸಮಾರಂಭದಲ್ಲಿ ನನ್ನ ಶ್ರಮಕ್ಕೆ ಕಡಿಮೆ ಅಂಕ ದೊರೆತಿದೆ, ಹಾಗಾಗಿ ನಾನು ಶಿಕ್ಷಕರಲ್ಲಿ ಕ್ಷಮೆ ಕೇಳುವೆ ಎಂದು ಬಹಿರಂಗವಾಗಿ ಬೇಸರದಿಂದಲೇ ಹೇಳಿಕೊಂಡಿದ್ದನ್ನ ಇಲ್ಲಿ ಸ್ಮರಿಸಬಹುದು. ನನ್ನ ಶ್ರಮಕ್ಕೆ ಪ್ರತಿಫಲ ದೊರೆತಿದೆ 4 ಅಂಕ ಲಭಿಸಿರುವುದು ಸಂತಸ ತಂದಿದೆ ಎಂದು ಗಾನವಿ ಮೈಸೂರು ಮಿತ್ರನೊಂದಿಗೆ ಹರ್ಷ ವ್ಯಕ್ತಪಡಿಸಿಕೊಂಡರು


ಕ್ಷೇತ್ರ ಶಿಕ್ಷಣಾಧಿಕಾರಿ ಮಂಜುಳಾ ಅವರು ಪ್ರತಿಕ್ರಿಯಿಸಿ ಸರ್ಕಾರಿ ಆದರ್ಶ ಶಾಲೆಗೆ ಮರು ಪರೀಕ್ಷೆಯಲ್ಲಿ ಇನ್ನೂ ನಾಲ್ಕು ಅಂಕ ದೊರೆತಿದ್ದು, ಆಕೆಯ ಸಾಧನೆ ಸಂತಸ ತಂದಿದೆ ಎಂದರು.

ಜೂ.17, ಗುಂಡ್ಲುಪೇಟೆ ವ್ಯಾಪ್ತಿಯಲ್ಲಿ ವಿದ್ಯುತ್ ಜನಸಂಪರ್ಕ ಸಭೆ

ಚಾಮರಾಜನಗರ: ಗುಂಡ್ಲುಪೇಟೆ ಮತ್ತು ಬೇಗೂರು ಉಪವಿಭಾಗಗಳ ವ್ಯಾಪ್ತಿಯಲ್ಲಿ ಜೂನ್ 17ರಂದು ಜನಸಂಪರ್ಕ ಸಭೆಯನ್ನು ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ಆಯೋಜಿಸಿದೆ.

ಜೂನ್ 17ರ ಬೆಳಿಗ್ಗೆ 11 ರಿಂದ ಮಧ್ಯಾಹ್ನ 12 ಗಂಟೆಯವರೆಗೆ ಬೇಗೂರು ಉಪವಿಭಾಗ ಹಾಗೂ ಮಧ್ಯಾಹ್ನ 1 ರಿಂದ 2 ಗಂಟೆಯವರೆಗೆ ಗುಂಡ್ಲುಪೇಟೆ ಉಪವಿಭಾಗ ವ್ಯಾಪ್ತಿಯಲ್ಲಿ ಜನಸಂಪರ್ಕ ಸಭೆ ನಡೆಯಲಿದೆ. ಎಂದು ನಿಗಮದ ಕಾರ್ಯನಿರ್ವಾಹಕ ಇಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕೂಡ್ಲೂರು ಗ್ರಾಪಂ ಅಧ್ಯಕ್ಷೆ ಗಗನ ಬಿಜೆಪಿಗೆ



ಜಿಲ್ಲಾ ಬಿಜೆಪಿ ಜಿಲ್ಲಾಧ್ಯಕ್ಷ ಸಿ.ಎಸ್.ನಿರಂಜನ್‌ಕುಮಾರ್, ಕೇಂದ್ರ ಪರಿಹಾರ ಸಮಿತಿ ಮಾಜಿ ಅಧ್ಯಕ್ಷ ಎಂ.ರಾಮಚಂದ್ರ ಸಮ್ಮುಖದಲ್ಲಿ ಕೂಡ್ಲೂರು ಗ್ರಾ.ಪಂ.ಅಧ್ಯಕ್ಷೆ ಹೆಚ್.ಹೆಚ್.ಗಗನ ಬಿಜೆಪಿಗೆ ಸೇರ್ಪಡೆಯಾದರು.

ಚಾಮರಾಜನಗರ, ಜೂನ್13– ತಾಲೂಕಿನ ಕೂಡ್ಲೂರು ಗ್ರಾಮ ಪಂಚಾಯಿತಿ ಅಧ್ಯಕ್ಷೆ ಹೆಚ್.ಹೆಚ್. ಗಗನ ಕಾಂಗ್ರೆಸ್ ತೊರೆದು ಇಂದು ಅಧಿಕೃತ ವಾಗಿ ಬಿಜೆಪಿಗೆ ಸೇರ್ಪಡೆಯಾದರು.

ನಗರದ ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ಜಿಲ್ಲಾಧ್ಯಕ್ಷ ಸಿ.ಎಸ್. ನಿರಂಜನ್‌ಕುಮಾರ್, ಕೇಂದ್ರ ಪರಿಹಾರ ಸಮಿತಿ ಮಾಜಿ ಅಧ್ಯಕ್ಷ ಎಂ.ರಾಮಚಂದ್ರ ಸಮ್ಮುಖದಲ್ಲಿ ಹೆಚ್.ಹೆಚ್. ಗಗನ ಬಿಜೆಪಿ ಸೇರ್ಪಡೆಯಾದರು.

ಬಿಜೆಪಿಗೆ ಸೇರ್ಪಡೆಯಾದ ಗ್ರಾ.ಪಂ. ಅಧ್ಯಕ್ಷರಿಗೆ ಪಕ್ಷದ ಶಲ್ಯ ಹಾಕಿ ಸ್ವಾಗತಿಸಿ ಬರಮಾಡಿಕೊಂಡ ಪಕ್ಷದ ಜಿಲ್ಲಾಧ್ಯಕ್ಷ ಸಿ.ಎನ್. ನಿರಂಜನ್ ಕುಮಾರ್ ಮಾತನಾಡಿ, ತಾಲೂಕಿನ ಕೂಡ್ಲೂರು ಕಾಂಗ್ರೆಸ್ ಸದಸ್ಯರು ಅವಿಶ್ವಾಸ ತಂದು ಅಧ್ಯಕ್ಷರನ್ನು ಪದಚ್ಯುತಿಗೊಳಿಸಿದ್ದರು. ನಮ್ಮ ಪಕ್ಷದ ಸದಸ್ಯರ ಬೆಂಬಲದಿಂದ 2 ಬಾರಿಗೆ ಗಗನ ಅಧ್ಯಕ್ಷರಾಗಿ ಆಯ್ಕೆಯಾಗಿದ್ದಾರೆ. ಇನ್ನೂ ಮುಂದೆ ಕೂಡ್ಲೂರು ಗ್ರಾಮ ಪಂಚಾಯಿತಿ ಬಿಜೆಪಿ ಪಂಚಾಯತಿ ಆಗಲಿದೆ. ಅಧ್ಯಕ್ಷರು ಹೆಚ್ಚಿನ ಜನಸೇವೆ ಮಾಡಿ ಪಂಚಾಯಿತಿ ವ್ಯಾಪ್ತಿಯ ಹಳ್ಳಿಗಳ ಅಭಿವೃದ್ಧಿಪಡಿಸಲಿ ಎಂದರು.

ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪಿ.ವೃಷಭೇಂದ್ರಪ್ಪ ಮೂಡ್ನಾಕೂಡು ಪ್ರಕಾಶ್, ಚಾಮುಲ್ ಮಾಜಿ ಅಧ್ಯಕ್ಷ ನಾಗೇಂದ್ರ, ಮುಖಂಡ ಅರಕಲವಾಡಿ ನಾಗೇಂದ್ರ, ಯುವ ಮೋರ್ಚಾದ ಅಧ್ಯಕ್ಷ ಸೂರ್ಯಕುಮಾರ್, ನಗರ ಮಂಡಲ ಪ್ರಧಾನ ಕಾರ್ಯದರ್ಶಿಗಳಾದ ಕೂಸಣ್ಣ, ಮಹೇಶ್, ಗ್ರಾ.ಪಂ.ಸದಸ್ಯ ನಾಗೇಂದ್ರ, ಜಿಲ್ಲಾ ಜ್ಯೋತಿಪಣ ಗಾಣಿಗ ಸಂಘದ ಮುಖಂಡ ರಂಗಸ್ವಾಮಿ, ಬಸವಣ್ಣ ಹಾಜರಿದ್ದರು.

ವರ್ಗೀಕೃತ ಜಾಹೀರಾತು

ಪ್ರತಿ ಸೋಮವಾರ, ಗುರುವಾರ ಮತ್ತು ಶನಿವಾರ ರೂ. 600 + 30 ಮಾತ್ರ

ಜಾಹೀರಾತಿಗೆ ಸಂಪರ್ಕಿಸಿ 0821–2496522/23

ಮನೆ ಲೀಸ್‌ಗೆ ಇದೆ
ಮೈಸೂರಿನ ಯೂನಿವರ್ಸಿಟಿ ಲೇಔಟ್ ಪಕ್ಕದಲ್ಲಿ ಮೂರು ಬೆಡ್‌ರೂಂಗಳ ಡ್ಯುಪ್ಲೆಕ್ಸ್ ಮನೆ (30x50) ಲೀಸ್‌ಗೆ ಇದೆ. (25 ಲಕ್ಷ). ಸಂಪರ್ಕಿಸಿ:
8762119280
9739987478

SITES FOR SALE
Srirampura Ring Road (Opposite to University Layout) 30x40, 30x50 MUDA Approved
Mob: 8296832513

ನಿವೇಶನ ಮಾರಾಟಕ್ಕಿದೆ
* 30x40, MUDA ಗಾಣಿಗರ ಹುಂಡಿ, ಬೋಗಾದಿ–ಗದ್ದಿಗೆ ಮುಖ್ಯ ರಸ್ತೆ.
* 22x40 ತುಮಖಾನೆ ನಗರ, ಬನ್ನೂರು ಮುಖ್ಯರಸ್ತೆ. ಸಂಪರ್ಕಿಸಿ:
Mob: 8660726140

HOUSE / SITE FOR SALE
30x40 house / site in Vivekananda Circle. 30x40 / 20x30 house for rent / lease in Vivekananda Circle / Srirampura.
Mob: 9840728571
Brokers excuse

ಡ್ರೈವರ್‌ಗಳು ಬೇಕಾಗಿದ್ದಾರೆ
ಗೂಡ್ಸ್ ವಾಹನಕ್ಕೆ ಡ್ರೈವರ್ ಬೇಕಾಗಿದ್ದಾರೆ. ಸಂಬಳ: 15000/– ದಿಂದ 20,000. ಭತ್ಯೆ ಪ್ರತ್ಯೇಕ, ವಸತಿ ಉಚಿತ. ಸಂಪರ್ಕಿಸಿ:
Ph: 0821-2491755

HOUSES / SITES FOR SALE
40x72 (old house) E/F, Gokulam 1st Stage.
30x40 S/F, house single floor, Vijaynagar 1st Stage.
* 3850 sq.ft. S/W corner site, Vijayanagar 2nd Stage.
* 40x60 E/N Corner site, Vijayanagar 2nd Stage. Contact: Mytri Vision & Ventures (P) Ltd.
Mob: 9832407342

HOUSE FOR LEASE
30x40, 2 BHK house with solar for lease North facing, Bogadi 2nd Stage, North, Mysuru. Contact:
Mob: 8867779326

30x50 DTCP 11'A' ರೇರಾ ಅಪ್ರೂವ್ಡ್ ಸೈಟು ಮಾರಾಟಕ್ಕಿದೆ.
25 ಲಕ್ಷಗಳು. ಶ್ರೀಧರ ಬಡಾವಣೆ (ಬಸ್ ರಸ್ತೆಗೆ ಹತ್ತಿರದಲ್ಲಿದೆ). ತಳೂರು TVS ಫ್ಯಾಕ್ಟರಿ ಹತ್ತಿರ, ಮೈಸೂರು.
Mob: 9742198093

ಶುಂಠಿ ಕೃಷಿಕರೆ
ಉತ್ತಮ ದರ್ಜೆಯ ಬೇವಿನ ಹಿಂಡಿ ಹಾಗೂ ಬೇವಿನ ಹುಡಿ ನಿಮ್ಮ ಸಮಕ್ಷಮ ಮಾಡಿಕೊಡಲಾಗುತ್ತದೆ.
ಶ್ರೀ ಕಾಮಾಕ್ಷಿ ಬಯೋ–ನೀಮ್
#203, ಬನ್ನಿಮಂಟಪ, ಮೈಸೂರು–570 015
Mob: 80888-87802

TEACHERS REQUIREMENT
Hindi B.Ed. Teacher - 1
Rotary Mysore North Higher Primary School
Vajamangala, Mysore
Call : 8123839688

ಸಂಪು ಮತ್ತು ಟ್ಯಾಂಕ್ ಕ್ಲೀನಿಂಗ್ ಸೋಲಾರ್ ಸರ್ವೀಸ್
8197383645, 9008711654

ಪ್ರಮಾಣ ಪತ್ರ
ಪಳನಿಸ್ವಾಮಿ @ ಪಳನಿ ಬಿನ್ ರಾಮಯ್ಯ ಆದ ನಾನು ನಂಬರ್ 385/1 ಕೇರ್ಗಳ್ಳಿ ರಸ್ತೆ ,ಬೋಗಾದಿ ಗ್ರಾಮ, ಮೈಸೂರು ತಾಲೂಕು ಇಲ್ಲಿ ವಾಸವಿದ್ದು, ನನ್ನ ಎಲ್ಲಾ ಸರ್ಕಾರಿ ದಾಖಲಾತಿಗಳಾದ ಆಧಾರ್ ಕಾರ್ಡ್, ಜನನ ಪ್ರಮಾಣ ಪತ್ರ ಬ್ಯಾಂಕ್ ಪುಸ್ತಕ, ಮತ್ತು ಇತರ ದಾಖಲಾತಿಗಳಲ್ಲಿ ನನ್ನ ಹೆಸರು ಪಳನಿ ಸ್ವಾಮಿ ಎಂದು ದಾಖಲಾಗಿದ್ದು, ಆದರೆ ನಾನು ಪೌರಕಾರ್ಮಿಕನಾಗಿದ್ದು ಖಾಯಂ ವಿಲೀನಾತಿ ಆದೇಶಪ್ರತಿಯಲ್ಲಿ ನನ್ನ ಹೆಸರು ಪಳನಿ ಎಂದು ನಮೂದಾಗಿರುತ್ತದೆ ಆದ್ದರಿಂದ ಮೇಲ್ಕಂಡ ಎರಡು ಹೆಸರುಗಳು ನನ್ನ ಹೆಸರುಗಳಾಗಿದ್ದು ನನಗೆ ಸೇರಿದ ಹೆಸರುಗಳೆಂದು ನೋಟರೀ ಆರ್.ಗೋದಾವರಿರವರ ಸಮ್ಮುಖದಲ್ಲಿ ಪ್ರಮಾಣಿಸುತ್ತ ಹಾಗೂ ಈ ಇವರಿಂದ ಆಗುವ ಹಾಗು ಹೋಗುಗಳಿಗೆ ನಾವೆ ಹೊಣೆಗಾರರಾಗಿರುತ್ತೇನೆ ಎಂದು ದೇವರ ಹೆಸರಲ್ಲಿ ಪ್ರಮಾಣ ಮಾಡಿರುತ್ತೇನೆ. ಸಹಿ/– ಪಳನಿಸ್ವಾಮಿ

ಬೇಕಾಗಿದ್ದಾರೆ
ಆಶ್ರಮದಲ್ಲಿ ಉಳಿದುಕೊಂಡು ಕೆಲಸ ಮಾಡುವಂಥವರು , ಮಹಿಳೆಯರು ಬೇಕಾಗಿದ್ದಾರೆ. ಎಸ್‌ಎಸ್‌ಎಲ್‌ಸಿ, ಪಿಯುಸಿ, ಫೇಲ್ /ಪಾಸ್ ಊಟ ವಸತಿ ದೊರೆಯುತ್ತದೆ
9110455297

ಸೈಟು ಮಾರಾಟಕ್ಕಿದೆ
30x50 N/F
KBL SILICON CITY PHASE-2
BEML ಹತ್ತಿರ, KRS Road
9243536373

ROOM FOR RENT
Room for rent, House No. 2836/7, Pampapathi Road, Jayanagar, 2nd Floor, providing hall cum kitchen, bathroom cum toilet, wardrobe, cot electricity & water facilities available.
Mob: 9731134320

SITES / FLAT FOR SALE
Flat 950 sq.ft. 2 BHK, Sankalp, Vijayanagar IV Stage Rs. 85 Lakhs. Site: 40x60, N/E corner KRS Road Rs. 75 Lakhs. Contact for commercial sites.
M/s. Mytri Vision & Ventures (P) Ltd.
Mob: 9832407342

HOUSE FOR SALE
Newly built 3 BHK independent house
East face @ Lalithadri Nagar (South), near Ring Road, behind Indian Oil Petrol Bunk
9206666888, 9663452259

ಹೆಲ್ತ್‌ಕೇರ್ ತರಬೇತಿ
SSLC/PUC ಆದವರಿಗೆ ಡಿಪ್ಲೊಮ ಇನ್ ಹೆಲ್ತ್‌ಕೇರ್ ತರಬೇತಿ ಕೊಡಲಾಗುತ್ತದೆ. ತರಬೇತಿ ಪಡೆದವರು ಉತ್ತಮ ಆಸ್ಪತ್ರೆಗಳಲ್ಲಿ ಕೆಲಸ ಮಾಡುತ್ತಿದ್ದಾರೆ.
ಸೆಂಟ್ ಮೇರೀಸ್ ಆಸ್ಪತ್ರೆ, ಸಿಲ್ಕ್ ಫ್ಯಾಕ್ಟರಿ ಸರ್ಕಲ್, NIE ಕಾಲೇಜ್ ಪಕ್ಕ, ಮೈಸೂರು
Mob: 9916908454

ಟೀಚರ್ಸ್ ಟ್ರೇನಿಂಗ್ ನೀವೂ ಒಬ್ಬ ಟೀಚರ್ ಆಗ ಬೇಕು ?
SSLC, P U C, Diploma, Degree, NURSERY TEACHERS TRAINING, PRIMARY TEACHERS TRAINING
ಟ್ರೈನಿಂಗ್ ನಂತರ ತಕ್ಷಣ ಕೆಲಸ.
ಬನ್ನಿ, ಸೇರಿ, ಪಾಸಾಗಿ, ಸಂಪಾದಿಸಿ
I PUC ಓದುತ್ತಿರುವವರು ಸಹ ಸೇರಬಹುದು
JNANA GANGOTHRI CONVENT
Watsapp / Call 9113980741

BLUE SKY HOLIDAYS
Thailand Package 4N 5D 45,000+ Include Flight, Stay, Food, Sight Seeing.
8722620344
8722848005

SITES FOR SALES
"ನ್ಯಾಯಾಂಗ ಬಡಾವಣೆ" ಕೇರ್ಗಳ್ಳಿ ಕ್ರೈಸ್ಟ್ ಪಬ್ಲಿಕ್ ಸ್ಕೂಲ್ ಹಿಂಭಾಗ North facing — 30'x 40'
ವಾಜಮಂಗಳ "ಆರಾಧ್ಯ ಗಾರ್ಡನಿಯಾ" West facing — 40'x 60'
77950 55551
Direct Owner / Slightly Negotiable

ವಾಣಿಜ್ಯ ಭೂಮಿ ಬಾಡಿಗೆಗೆ ಇದೆ
N.H. 150 A ನಂಜನಗೂಡು, ಚಾಮರಾಜ ನಗರ ರೋಡು. 40 ಗುಂಟೆ ಜಮೀನು.
ಆಪೆ ಆಟೋ ಸೇಲ್ ಮತ್ತು ಬಾಡಿಗೆಗೆ ಇದೆ. ಸಂಪರ್ಕಿಸಿ:
Mob: 9164314560

ಮಾರಾಟಕ್ಕೆ ಇದೆ
ನಂಜನಗೂಡಿನಲ್ಲಿ ಪ್ರಮುಖ ರಸ್ತೆಯಲ್ಲಿ ಚಾಲ್ತಿಯಲ್ಲಿರುವ ಸೂಪರ್ ಮಾರ್ಕೆಟ್ ಮಾರಾಟಕ್ಕೆ ಇದೆ. ಸಂಪರ್ಕಿಸಿ.
9481606995, 9986029260

ಸಂಪು ಮತ್ತು ಟ್ಯಾಂಕ್ ಕ್ಲೀನಿಂಗ್‌ಗಾಗಿ ಸಂಪರ್ಕಿಸಿ
Mob: 7204494854

ಬೋಳು ತಲೆಯ ಸಮಸ್ಯೆಯೇ?

ಕಿಮೊತೆರಪಿ ಚಿಕಿತ್ಸೆಗೆ ಒಳಪಡುತ್ತಿರುವ ರೋಗಿಗಳಿಗೆ ಸ್ಪರ್ಧಾತ್ಮಕ ಬೆಲೆಯಲ್ಲಿ ಹೇರ್ ವಿಗ್‌ಗಳು ದೊರೆಯುತ್ತವೆ.
SMART HAIR FIXING
574, 9th Cross, Anikethana Road, kuvempunagar, Mysuru
MYSURU 9611028523 MANGALORE 9343142258

ಸಂಪು ಮತ್ತು ಟ್ಯಾಂಕ್ ಕ್ಲೀನಿಂಗ್‌ಗಾಗಿ ಸಂಪರ್ಕಿಸಿ
Mob: 6360485921

IMKTA - PRE-SCHOOL TEACHER TRAINING
Diploma Courses for SSLC, PU or any Degree Candidates.
Regular / Saturday / Correspondence Courses with practical training. www: imkta.in
ALPHA INTERNATIONAL SCHOOL @ Srirampura
Call: 7829937469
ONLINE TRAINING AVAILABLE

SITE FOR SALE
* East Facing Corner Site
* Near Mysore Airport
* 30x40, E-Khata
* MUDA Khata
* Clear Documents
* Direct Owner
9342123373

SITE FOR SALE
RIE layout in vijaynagar 4th stage North face 20*30 premium muda site Price: 38 Lakhs
7975269652, 8884616461

ಸೈಟ್ ಮಾರಾಟಕ್ಕಿದೆ
30/40
ವಿಜಯನಗರ 4ನೇ ಹಂತ ಹೊಂದಿಕೊಂಡಿರುವ ರೇಷಬ್ ಲೇಔಟ್ ಮೂಡ ಅಪ್ರೂವ್ಡ್ E/F ಸೈಟ್ 40 feet ರೋಡ್‌ಗೆ ಇದೆ.
ಬೆಲೆ 5900 per sqft. Contact
9844193177, 7411356023

R.V. CONSTRUCTIONS
Rate starts from Rs. 1690 per sq.ft.
No advance
Billing on stage by stage completion.
Office: 7975110915
D. Subbaiah Road, Mysore
Assist Major Bank Loans

ಸಂಪು ಮತ್ತು ಟ್ಯಾಂಕ್ ಕ್ಲೀನಿಂಗ್‌ಗಾಗಿ ಸಂಪರ್ಕಿಸಿ
Mob: 8618373596

ಮೊಬೈಲ್‌ನಲ್ಲಿ ಕೆಲಸ ವಾರದ ಸಂಬಳ
NO TARGET, TYPING WORK
ತಿಂಗಳಿಗೆ ರೂ.10,000 ರಿಂದ ರೂ.25,000 ಗಳಿಸಬಹುದು.
8884439666

ನಿರ್ಮಲ ಸರ್ವೀಸ್
ಸಂಪು ಕ್ಲೀನಿಂಗ್‌ಗಾಗಿ ಸಂಪರ್ಕಿಸಿ:
6364079244

ನಿರುದ್ಯೋಗಿಗಳಿಗೊಂದು ಸುವರ್ಣಾವಕಾಶ
ಮನೆಯಲ್ಲೇ ಕುಳಿತು ಟಾರ್ಗೆಟ್ ಇಲ್ಲದೆ ಬರವಣಿಗೆ ಮೂಲಕ 9 ರಿಂದ 30 ಸಾವಿರದವರೆಗೆ ಹಣಗಳಿಸುವ ಸುವರ್ಣಾವಕಾಶ. ಆಸಕ್ತರು ಸಂಪರ್ಕಿಸಿ:
6361056646, 7676844160

ಬೇಕಾಗಿದ್ದಾರೆ
ಕನ್ನಡ ಮತ್ತು ಇಂಗ್ಲೀಷ್ ದಾಖಲಾತಿ ಟೈಪ್ ಮಾಡಲು ಟೈಪಿಸ್ಟ್ (vender) ಬೇಕಾಗಿದ್ದಾರೆ. ಸ್ಥಳ ಬೋಗಾದಿ
7975269652 / 8073300783

ಅಡುಗೆ ಮತ್ತು ಮನೆ ಕೆಲಸ ಮಾಡಲು ಬೇಕಾಗಿದ್ದಾರೆ
(ಮಹಿಳೆಯರಿಗೆ ಮಾತ್ರ)
ವಿಜಯನಗರ 4ನೇ ಹಂತ.
7411356023
7975269652

ಸಂಪು ಮತ್ತು ಟ್ಯಾಂಕ್ ಕ್ಲೀನಿಂಗ್‌ಗಾಗಿ ಸಂಪರ್ಕಿಸಿ
Mob: 8660486818

SITE FOR SALE
Bannur Road
40x60 - N/F
Teacher's Layout
30x40- E/F
9448447035

2 BHK ON 20 x 40 EAST
Architect Design -100% Vaastu
SRINIDHI ENCLAVE
Lingadevara Koppal
Hunsuru Road, Mysore
READY TO OCCUPY
(AVAIL LOAN)
Cell : 9886697052

ಸದ್ಗುರು ಮ್ಯಾರೇಜಸ್
ಎಲ್ಲಾ ಜಾತಿಯ ವಧುವರರು, ವಿಧುರರು, ವಿಧವೆಯರು, ವಿಚ್ಛೇದಿತರು ನೇರ ಸಂದರ್ಶಿಸಿ ಶೀಘ್ರ ವಿವಾಹಕ್ಕಾಗಿ.
ಡಾ. ಗುರೂಜಿ
9448229184, 7899625268

WE ARE HEARING ACCOUNTENT (M/F)
Well known Tally Prime and Billing Salary - 18000 above
2) Bolero Driver. Contact: centuary mattress distributor, Hebbal industrial area, Mysore
8217411158, 6364697759

ಬಾಡಿಗೆಗೆ ಲಭ್ಯವಿದೆ
ಇಂಡಿಪೆಂಡೆಂಟ್ 2 ಬೆಡ್‌ರೂಂ ಉಳ್ಳ ಆರ್‌ಸಿಸಿ ಮನೆ ಮೈಸೂರಿನ ಗಾಯತ್ರಿಪುರಂನಲ್ಲಿ ಬಾಡಿಗೆಗೆ ಲಭ್ಯವಿದೆ.
Mob: 9449339265
ಮಧ್ಯವರ್ತಿಗಳಿಗೆ ಅವಕಾಶವಿಲ್ಲ

SITE FOR SALE
MUDA Approved 30x40 In Bhairava enclave, just 200 mtr from Gaddige road. Attached to Vijayanagara 4th stage. Just 2 km from proposed cricket stadium. Price 4300 per sqft.
8884616461, 7975269652

Juice ಅಂಗಡಿಗೆ ಬೇಕಾಗಿದ್ದಾರೆ
Part time, Full time ಹುಡುಗರು ಬೇಕಾಗಿದ್ದಾರೆ.
ಸಂಬಳ: 12,000 ರಿಂದ 14,000.
9886574589, 9341897252

ಮನೆ ಮಾರಾಟಕ್ಕಿದೆ
8 x 50, ಸೋನಾರ್ ಬೀದಿ, ಚಾಮರಾಜ ಮೊಹಲ್ಲಾ, ಮೈಸೂರು.
Mob: 6362147482

HOUSE FOR RENT
2 BHK, N/F, Solar, #36/B, 4th Main, 26th Cross, Behind Sewage Farm, Vidyaranyapuram. Rent: Rs. 16,000.
Mob: 9739039595

ಉಚಿತ ಬ್ಯೂಟೀಷಿಯನ್ ತರಬೇತಿ
ಸಮೃದ್ಧಿ ಸೇವಾ ಸಮಿತಿ ಟ್ರಸ್ಟ್ ವತಿಯಿಂದ ಉಚಿತವಾಗಿ 25 ತರಹದ ವಿವಿಧ ತರಬೇತಿಯನ್ನು ಕೊಡಲಾಗುತ್ತದೆ. ತರಬೇತಿಯನ್ನು ಪಡೆಯಲು ಇಚ್ಛಿಸುವವರು ಸಂಪರ್ಕಿಸಿ. ಶಾರದಾದೇವಿನಗರ
Mob: 9964874954

SITE FOR SALE
82x33 ನಮೂದಿನಿ 3 ಉಳ್ಳ ಸೈಟು ಮಾರಾಟಕ್ಕಿದೆ. BEML ಸರ್ಕಲ್‌ನಿಂದ 1 ಕಿ.ಮೀ. ಕೂರ್ಗಳ್ಳಿ, ಮೈಸೂರು.
Mob: 9902634441

ವಧು–ವರಾನ್ವೇಷಣೆ
ಒಕ್ಕಲಿಗ / ಕುರುಬ / ಲಿಂಗಾಯತ / ನಾಯಕ / SC & ಎಲ್ಲಾ ಜಾತಿಯ ವಧು–ವರರಿಗಾಗಿ ಕೂಡಲೇ ಸಂಪರ್ಕಿಸಿ:
(2nd Marriages also)
Mob: 9343175000

ಆಫೀಸ್ ಅಥವಾ ರೂಂ ಬಾಡಿಗೆಗೆ ಇದೆ
2ನೇ ಮಹಡಿ 12 x 25
#LL2, 5ನೇ ಕ್ರಾಸ್, ವಿವೇಕಾನಂದ ಸರ್ಕಲ್, ಮುರುಗನ್ ಮೆಡಿಕಲ್ ಸ್ಟೋರ್ ಹಿಂಭಾಗ, ವಿವೇಕಾನಂದ ನಗರ, ಮೈಸೂರು
Mob: 9035885429

ಮನೆ ಬಾಡಿಗೆಗೆ ಇದೆ
25x30 ಕಾರ್ನರ್, ಪೂರ್ವ ದಿಕ್ಕು 1 BHK, 4ನೇ ಕ್ರಾಸ್, ರಾಮಕೃಷ್ಣ ನಗರ, ಇ ಮತ್ತು ಎಫ್ ಬ್ಲಾಕ್, ಮೈಸೂರು. ಮೂರನೇ ಮಹಡಿ ಮನೆ ಬಾಡಿಗೆಗೆ ಪೂರ್ವ ದಿಕ್ಕು, 1 ಹಾಲ್, ಅಡುಗೆ ಮನೆ, ಅಟಾಚ್ ಬಾತ್ ರೂಂ, ಗ್ಯಾಸ್ ಗೀಜರ್, ವಿದ್ಯಾರಣ್ಯಪುರಂ, ಮೈಸೂರು.
Mob: 8904481012

ಶ್ರೀ ರಾಮ ಎಲೆಕ್ಟ್ರಿಕಲ್ಸ್
ಮೈಸೂರಿನಾದ್ಯಂತ ಎಲ್ಲಾ ರೀತಿಯ ಎಲೆಕ್ಟ್ರಿಕಲ್ಸ್ ಸರ್ವೀಸ್‌ಗಳನ್ನು ಮಾಡಿಕೊಡಲಾಗುತ್ತದೆ.
* ಎಲೆಕ್ಟ್ರಿಕಲ್ ರಿಪೇರಿ * ವೈರಿಂಗ್ ಮತ್ತು ರೀ–ವೈರಿಂಗ್
* ಎಲೆಕ್ಟ್ರಿಕಲ್ ಪರಿಶೀಲನೆ * ಸ್ವಿಚ್‌ಬೋರ್ಡ್ ನವೀಕರಣೆ
* ದೋಷ ಪತ್ತೆ * ನೆಟ್‌ವರ್ಕ್ & ವೈರಿಂಗ್
* ಸಾಮಾನ್ಯ ನಿರ್ವಹಣೆ. ಸಂಪರ್ಕಿಸಿ:
Mob: 6366398539

ಬೇಕಾಗಿದ್ದಾರೆ
ಗುಂಡ್ಲುಪೇಟೆಯಲ್ಲಿ ಕೆಲಸ ಮಾಡಲು ಸೆಕ್ಯೂರಿಟಿ ಸೂಪರ್‌ವೈಸರ್‌ಗಳು ಹಾಗೂ ಸೆಕ್ಯೂರಿಟಿ ಗಾರ್ಡ್‌ಗಳು ತಕ್ಷಣ ಬೇಕಾಗಿದ್ದಾರೆ. ಉತ್ತಮ ಸಂಬಳದೊಂದಿಗೆ ಇಎಸ್‌ಐ ಮತ್ತು ಪಿಎಫ್ ಕೂಡ ಇರುತ್ತದೆ. ಸಂಪರ್ಕಿಸಿ:
Mob: 9341169166

ಕೂಡಲೇ ಬೇಕಾಗಿದ್ದಾರೆ
ವಾಟರ್ ಟ್ಯಾಂಕ್ ವಿಜಯನಗರ ಕೆ.ಡಿ. ಸರ್ಕಲ್ ಹತ್ತಿರ ಇರುವ ವಿಸ್ತಾರ ಆಸ್ಪತ್ರೆಗೆ ಕೂಡಲೇ ಸೆಕ್ಯೂರಿಟಿ ಗಾರ್ಡ್‌ಗಳು ಮತ್ತು ಹೌಸ್‌ಕೀಪಿಂಗ್ ಮಹಿಳೆಯರು ಕೂಡಲೇ ಬೇಕಾಗಿದ್ದಾರೆ. ಸಂಪರ್ಕಿಸಿ:
Mob: 9353646312
ಹೌಸ್‌ಕೀಪಿಂಗ್ ಮಹಿಳೆಯರಿಗೆ ಇಎಸ್‌ಐ ಮತ್ತು ವಾರದ ರಜೆ ಇರುತ್ತದೆ.

WANTED – ಬೇಕಾಗಿದ್ದಾರೆ
ಮೈಸೂರು ಮೇಟಗಳ್ಳಿ ಇಂಡಸ್ಟ್ರಿಯಲ್ ಏರಿಯಾದಲ್ಲಿರುವ ಕಂಪನಿಗೆ ಕೆಲಸ ಮಾಡಲು ಹುಡುಗರು ಬೇಕಾಗಿದ್ದಾರೆ. ವಿದ್ಯಾಭ್ಯಾಸ: SSLC, PUC and ITI. ವಯಸ್ಸು : 18 ರಿಂದ 30.
ಸಂಬಳ: SSLC and PUC 13700+Allowance ITI: 16500 + Allowance. ಸಂಪರ್ಕಿಸಿ:
ಸುಷ್ಮಾ 7892725603
ಪ್ರಕಾಶ್ 8971460235

30X40 MUDA ALLOT SITE FOR SALE (OWNER)
Vijayanagar 4th Stage, 3rd Phase, Mysore. East facing
Mob: 9916317225
Contact only Direct buyers

ಹೊಸ ಮನೆ ಮಾರಾಟಕ್ಕಿದೆ
30x35, 4 BHK ಡ್ಯೂಪ್ಲೆಕ್ಸ್, ದಟ್ಟಗಳ್ಳಿ, ಆದಿತ್ಯ ಸರ್ಕಲ್ ಹತ್ತಿರ, ಮೈಸೂರು.
7204401199
7795269272

ಬೇಕಾಗಿದ್ದಾರೆ
ಪೆಟ್ರೋಲ್ ಬಂಕ್‌ನಲ್ಲಿ ಹೆಲ್ಪರ್ ಮತ್ತು ಕ್ಯಾಷಿಯರ್ ಕೆಲಸ ಮಾಡಲು ಹುಡುಗರು ಮತ್ತು ಹುಡುಗಿಯರು ಬೇಕಾಗಿದ್ದಾರೆ.
ಸ್ಥಳ: ವಿಜಯನಗರ ವಾಟರ್ ಟ್ಯಾಂಕ್ ಹತ್ತಿರ, ಮೈಸೂರು ನಗರ.
Mob: 6364748485

ಭೋಗ್ಯಕ್ಕೆ ಅಂಗಡಿ ಮಳಿಗೆ
LIC ಲೇಔಟ್ಸ್ ಶ್ರೀರಾಂಪುರ 2ನೇ ಸ್ಟೇಜ್
13x13 North Face
ಸತೀಶ: 9113612442
Swamy: 9845570573

WANTED TEACHING STAFF
For a Reputed Institution only Mathematics
Transport facilities available.
Drop your resume through WhatsApp. Contact no:
8971577685 / 9980631121

ಕಾವೇರಿ ಎಜುಕೇಷನ್ ಟ್ರಸ್ಟ್ (ರಿ)
ನಗುವನಹಳ್ಳಿ, ಶ್ರೀರಂಗಪಟ್ಟಣ ತಾ. ಮಂಡ್ಯ ಜಿಲ್ಲೆ
ಮೇಲ್ಕಂಡ ನಮ್ಮ ವಿದ್ಯಾಸಂಸ್ಥೆಗೆ ಪೂರ್ವ ಪ್ರಾಥಮಿಕ (LKG & UKG) ತರಗತಿಗಳಿಗೆ ಬೋಧಿಸಲು NST ವಿದ್ಯಾರ್ಹತೆಯುಳ್ಳ ಶಿಕ್ಷಕಿಯರು ಬೇಕಾಗಿದ್ದಾರೆ. ಆಸಕ್ತರು ತಮ್ಮ ಮೂಲ ದಾಖಲಾತಿಗಳೊಂದಿಗೆ ದಿ: 16.6.2025ರ ಸೋಮವಾರ ಬೆಳಗ್ಗೆ 11.30ಕ್ಕೆ ನೇರ ಸಂದರ್ಶನದಲ್ಲಿ ಪಾಲ್ಗೊಳ್ಳಲು ತಿಳಿಸಿದೆ.
ಸಂಪರ್ಕ ಸಂಖ್ಯೆ 9980366956
ಮೈಸೂರು ಸಿಟಿ ಬಸ್ ನಿಲ್ದಾಣದಿಂದ ಬಸ್ ಮಾರ್ಗ ಸಂಖ್ಯೆ 315 B, 178A
ಸಹಿ/– ಕಾರ್ಯದರ್ಶಿಗಳು

WANTED TEACHERS
JNANAJYOTHI VIDYALAYA. Beerihundi High school.(English medium)
Mathematics-1,
Social science-1,
Kannada -1, Hindi-1
Teachers wanted Immediately
Contact:
9845390377 / 8197057626

ತಕ್ಷಣ ಕೆಲಸ
ಮೈಸೂರು ಹೆಬ್ಬಾಳಿನ ಕಂಪನಿಯಲ್ಲಿ ಕೆಲಸ ಮಾಡಲು ಸೆಕ್ಯೂರಿಟಿ ಗಾರ್ಡುಗಳು ಹಾಗೂ ಹೆಲ್ಪರ್ ಕೆಲಸಕ್ಕೆ ಹುಡುಗರು, ಹುಡುಗಿಯರು ಮತ್ತು ಡ್ರೈವರ್ ಕಂ ಮಾರ್ಕೆಟಿಂಗ್‌ಗೆ ಗಂಡಸರು ತಕ್ಷಣ ಬೇಕಾಗಿದ್ದಾರೆ.
8105249880, 7795285485

WANTED
Sales Girls & Boys for a family gifts shop at Devegowda Circle, Mysore. Flora Fancy Gifts. Contact:
7619270650, 6362711403

SITE FOR SALE
30x40 40x60 Srirampura Ring Road, Mysuru.
Mob: 9945321020

HOUSE FOR RENT
2 BHK House for rent near Bhramarambha Kalyana Mantap, Srirampura 2nd Stage, Mysore. Contact:
7411348841

ಮನೆ ಮಾರಾಟಕ್ಕಿದೆ
ಮೈಸೂರು ಇರ್ವಿನ್ ರಸ್ತೆಯಲ್ಲಿರುವ ಡುಪ್ಲೆಕ್ಸ್ ಮನೆ, 3 ಬೆಡ್‌ರೂಂ, 2 ಬಾತ್‌ರೂಂ ಉಳ್ಳ 3 ಮಹಡಿಯ ಮನೆ ಮಾರಾಟಕ್ಕಿದೆ.
8861673397, 8970856325

FOR SALE
1. 20x30 G+1, M Block, Kuvempunagar
2. 20x30 Rajarajeshwari Ngr
3. 27x60 & 30x45 Commercial present Old House @ Jayanagar
4. 20x30 G+1 @ Giridharshini Lyt
5. 80x78 Krishnamurthy Puram
6. 30x40 Sites Near RT Nagar @ Just 20 Lakhs
PRAKRUTHI PROPERTIES
95386 90359, 90359 90359

ಮನೆ ಬಾಡಿಗೆಗೆ ಇದೆ
ಪೂರ್ವ ದಿಕ್ಕು (Ground floor), 2 BHK, dining hall, ಕಾವೇರಿ ನೀರು, Solar & Geyser, vehicle parking, Vidyaranyapuram.
Mob: 9611263045

ಕೆಲಸಕ್ಕೆ ಬೇಕಾಗಿದ್ದಾರೆ
ಆದಿತ್ರಿ ಮ್ಯಾನ್ ಪವರ್ ಸರ್ವೀಸ್
* ಸ್ವಾಗತಗಾರರು (Ladies Receptionist) Degree
ಕ್ಷೇತ್ರ ಅಧಿಕಾರಿ (Field Officer) any Degree.
* ಭದ್ರತಾ ಸಿಬ್ಬಂದಿ (Security Guard) SSLC. ಸಂಪರ್ಕಿಸಿ:
8088706663, 9353046663

ತಕ್ಷಣ ಬೇಕಾಗಿದ್ದಾರೆ
1) ಸೆಕ್ಯೂರಿಟಿ ಗಾರ್ಡ್ಸ್ (ಕೂರ್ಗಳ್ಳಿ, ಬೆಳವಾಡಿ, ಒಂಟಿಕೊಪ್ಪಲ್)
2) ಸೆಕ್ಯೂರಿಟಿ ಗಾರ್ಡ್ಸ್– ರಾತ್ರಿ ಪಾಳಯಕ್ಕೆ (ಕೂರ್ಗಳ್ಳಿ, ಬೆಳವಾಡಿ, ಒಂಟಿಕೊಪ್ಪಲ್)
3) ಹೌಸ್‌ಕೀಪಿಂಗ್ – ಹುಡುಗರು (ರಾತ್ರಿ ಪಾಳಯಕ್ಕೆ) ESI, PF ಸೌಲಭ್ಯವಿರುತ್ತದೆ.
9731663856, 9739166772

ಬೇಕಾಗಿದ್ದಾರೆ
ಮೈಸೂರಿನ ಪೆಟ್ರೋಲ್ ಬಂಕಿನಲ್ಲಿ ನೈಟ್ ಶಿಫ್ಟ್ ಕೆಲಸಕ್ಕಾಗಿ ಪುರುಷರು / ಹುಡುಗರು ಬೇಕಾಗಿದ್ದಾರೆ. ಸಂಬಳ: 15,000.
Mob: 7899754149

5 ಲಕ್ಷ ಪಾವತಿ, ಉಳಿಕೆ ಲೋನ್ ತಕ್ಷಣ ಮನೆ ಕಟ್ಟಲು ಸೈಟ್ಸ್
20x30, 30x40, 30x50
ಕಾರ್ನರ್ / ಮಿಡಲ್ ಸೈಟು, ನಮ್ಮ ಬಡಾವಣೆಗಳಲ್ಲಿ ಮಾರಾಟಕ್ಕಿದೆ.
• ಶ್ರೀನಗರ ರಾಷ್ಟ್ರೋತ್ಥಾನ ಸ್ಕೂಲ್ ನಂತರ ಸಿಟಿ ಬಸ್ ರಸ್ತೆಯಲ್ಲಿ 32 ಲಕ್ಷ. • ಬೋಗಾದಿ ರಸ್ತೆ 37 – 52 ಲಕ್ಷ. • ಟಿ.ಎನ್. ಪುರ ರಸ್ತೆ & ಇಲವಾಲದಲ್ಲೂ ಲಭ್ಯ.
Broker excuse. No commission.
Mob: 8123075038

ಸೈಟು ಮಾರಾಟಕ್ಕಿದೆ
ವಿನಾಯಕ ಗಾರ್ಡನ್ ಸಿಟಿ, ಹುಣಸೂರು ಮೇನ್ ರೋಡ್, 1100 ಚದರ ಅಡಿಗಳು, ಸೌತ್ ಫೇಸ್. ಸಂಪರ್ಕಿಸಿ:
Mob: 8861606319

ಮೈಸೂರು ಮಿತ್ರ ಓದುಗರ ಗಮನಕ್ಕೆ
ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
-ಜಾಹೀರಾತು ವ್ಯವಸ್ಥಾಪಕರು

ಮತ್ತಷ್ಟು ವರ್ಗೀಕೃತ ಜಾಹೀರಾತು ಪುಟ 10 ರಲ್ಲಿ

ಹಲ್ಲರೆಯಲ್ಲಿ ಅಂಬೇಡ್ಕರ್ ಭಾವಚಿತ್ರಕ್ಕೆ ಅಪಮಾನ ಪ್ರಕರಣ

ಗ್ರಾಪಂ ದ್ವಿತೀಯ ದರ್ಜೆ ಸಹಾಯಕ ಬಂಧನ

ನಂಜನಗೂಡು, ಜೂ.13– ತಾಲೂಕಿನ ಹಲ್ಲರೆ ಗ್ರಾಮದಲ್ಲಿ ನಡೆದಿದ್ದ ಡಾ.ಬಿ.ಆರ್. ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಅಪಮಾನ ಮಾಡಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಕಳೆದ 28 ದಿನಗಳಿಂದ ತಲೆಮರೆಸಿಕೊಂಡಿದ್ದ ಆರೋಪಿಯನ್ನು ನಂಜನಗೂಡು ಗ್ರಾಮಾಂತರ ಠಾಣೆ ಪೊಲೀಸರು ಬಂಧಿಸಿದ್ದಾರೆ.

ಹಲ್ಲರೆ ಗ್ರಾಪಂ ದ್ವಿತೀಯ ದರ್ಜೆ ಸಹಾಯಕ ಮೂರ್ತಿ ಬಂಧಿತ ಆರೋಪಿ. ಹಲ್ಲರೆಯಲ್ಲಿ ಮೇ 15 ರಂದು ಡಾ. ಅಂಬೇಡ್ಕರ್ ಅವರ ನಾಮಫಲಕಕ್ಕೆ ಕಿಡಿಗೇಡಿಗಳು ಮಣ್ಣು ಬಳಿದು ಅಪಮಾನ ಮಾಡಿದ್ದರು. ಈ ಘಟನೆ ಸಂಬಂಧ ಪ್ರಕರಣ ದಾಖಲಾಗಿತ್ತು. ತನಿಖೆ ವೇಳೆ ಮೂರ್ತಿಯನ್ನು ವಿಚಾರಣೆಗೆ ಹಾಜರಾಗಲು ಸೂಚಿಸಲಾಗಿತ್ತು. ಆದರೆ ಪೊಲೀಸರ ವಿಚಾರಣೆಗೆ ಹಾಜರಾಗದೆ ತಲೆಮರೆಸಿಕೊಂಡಿದ್ದ ಎನ್ನಲಾಗಿದೆ.

ಘಟನೆ ಬಗ್ಗೆ ಮಾಹಿತಿ ಇರುವ ಹಾಗೂ ಈತ ಖುದ್ದು ಭಾಗಿಯಾಗಿರುವ ಬಗ್ಗೆ ನಿಖರ ಮಾಹಿತಿ ತನಿಖೆ ವೇಳೆ ಪೊಲೀಸರಿಗೆ ದೊರೆತಿತ್ತು. ಇದರಿಂದಾಗಿ ಈತ ಅಂದಿನಿಂದಲೂ ತಲೆಮರೆಸಿಕೊಂಡಿದ್ದ. ಗ್ರಾಮದಲ್ಲಿ ಈತನ ಈ ವರ್ತನೆಯಿಂದ ಘರ್ಷಣೆ ಉಂಟಾಗುವ ಸಾಧ್ಯತೆ ಇತ್ತು. ಹೀಗಾಗಿ ಈತನ ಚಟುವಟಿಕೆಗಳನ್ನು ನಿರ್ಬಂಧಿಸುವ ಹಾಗೂ ಗ್ರಾಮದಲ್ಲಿ ಶಾಂತಿ ಕಾಪಾಡುವ ನಿಟ್ಟಿನಲ್ಲಿ ಈತನ ವಿರುದ್ಧ ಪಿಎಆರ್ ದಾಖಲಿಸಿಕೊಳ್ಳಲಾಗಿತ್ತು. ಈ ಬಗ್ಗೆ ನಂಜನಗೂಡು ತಹಸೀಲ್ದಾರ್ ನೋಟಿಸ್ ಹೊರಡಿಸಿದ್ದರೂ ಈತ ಆದೇಶ ಧಿಕ್ಕರಿಸಿ, ತಹಸೀಲ್ದಾರ್ ನ್ಯಾಯಾಲಯ ಕ್ಕೂ ಗೈರಾಗಿದ್ದ. ಪೊಲೀಸ್ ವಿಚಾರಣೆ ಹಾಗೂ ತಾಲೂಕು ತಹಸೀಲ್ದಾರ್ ನ್ಯಾಯಾಲಯಕ್ಕೆ ಗೈರಾಗಿದ್ದ ಈತನನ್ನು ಗುರುವಾರ ವಶಕ್ಕೆ ಪಡೆದುಕೊಳ್ಳಲಾಗಿದೆ. ವಿಚಾರಣೆ ನಡೆಸಿ ನಂತರ ತಾಲೂಕು ತಹಸೀಲ್ದಾರ್ ಮುಂದೆ ಹಾಜರು ಪಡಿಸಲಾಯಿತು. ಅಲ್ಲದೇ ಆರೋಪಿಯನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎನ್.ವಿಷ್ಣುವರ್ಧನ್ ತಿಳಿಸಿದ್ದಾರೆ.

ಇಂದು ರಾಷ್ಟ್ರೀಯ ಹೆದ್ದಾರಿ ತಡೆದು ಬೃಹತ್ ಪ್ರತಿಭಟನೆ



ಸುದ್ದಿಗೋಷ್ಠಿಯಲ್ಲಿ ಪುಟ್ಟಬುದ್ಧಿ ಮಾತನಾಡಿದರು.

ನಂಜನಗೂಡು, ಜೂ.13– ತಾಲೂಕಿನ ಹಲ್ಲರೆ ಗ್ರಾಮದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ನಾಮಫಲಕಕ್ಕೆ ಅಪಮಾನ ಮಾಡಿರುವ ಆರೋಪಿಗಳನ್ನು ಕಠಿಣ ಶಿಕ್ಷೆಗೆ ಒಳಪಡಿಸುವಂತೆ ಒತ್ತಾಯಿಸಿ ಜೂ.14ರಂದು ಬೆಳಗ್ಗೆ 10 ಗಂಟೆಗೆ ನಗರದ ಸಂಗೊಳ್ಳಿ ರಾಯಣ್ಣ ವೃತ್ತದ (ಕಪಿಲಾ ನದಿಯ ದೇವರಾಜ ಅರಸು ಸೇತುವೆ) ಬಳಿ ಮೈಸೂರು–ಊಟಿ ರಾಷ್ಟ್ರೀಯ ಹೆದ್ದಾರಿ ತಡೆದು ಬೃಹತ್ ಪ್ರತಿಭಟನೆ ನಡೆಸಲಾಗುವುದು ಎಂದು ಡಾ.ಬಿ.ಆರ್.ಅಂಬೇಡ್ಕರ್ ಯುವಕರ ಸಂಘದ ಅಧ್ಯಕ್ಷ ಪುಟ್ಟಬುದ್ದಿ ತಿಳಿಸಿದರು.

ನಗರದ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ತಾಲೂಕಿನ ಹಲ್ಲರೆ ಗ್ರಾಮದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಅವರ ನಾಮಫಲಕ್ಕೆ ಅಪಮಾನ ಮಾಡಿದ ವೇಳೆ ಶಾಸಕ ದರ್ಶನ್ ಸಹ ಭೇಟಿ ನೀಡಿ ತಪ್ಪಿತಸ್ಥರಿಗೆ ಶಿಕ್ಷೆ ವಿಧಿಸುವ ಭರವಸೆ ನೀಡಿದ್ದರು. ಆದರೆ ಪೊಲೀಸರ ಮತ್ತು ತಾಲೂಕು ಆಡಳಿತದ ವೈಫಲ್ಯ ಹಾಗೂ ಬೇಜವಾಬ್ದಾರಿತನದಿಂದ ಕಿಡಿಗೇಡಿಗಳಿಗೆ ಶಿಕ್ಷೆ ವಿಧಿಸಿಲ್ಲ. ತಪ್ಪಿತಸ್ಥರಿಗೆ ಶಿಕ್ಷೆ ವಿಧಿಸುವಂತೆ ಒತ್ತಾಯಿಸಿ ಅಂಬೇಡ್ಕರ್ ಸಂಘಗಳ ಜೊತೆಗೂಡಿ ರಾಷ್ಟ್ರೀಯ ಹೆದ್ದಾರಿ ತಡೆದು ಬೃಹತ್ ಪ್ರತಿಭಟನೆ ನಡೆಸಲಾಗುವುದು. ಈ ಪ್ರತಿಭಟನೆಯಲ್ಲಿ ದಲಿತ ಸಂಘರ್ಷ ಸಮಿತಿ ಪದಾಧಿಕಾರಿಗಳು, ನಂಜನಗೂಡಿನ ಪ್ರಜ್ಞಾವಂತ ನಾಗರಿಕರು, ಪ್ರಗತಿಪರ ಹೋರಾಟಗಾರರು ಭಾಗವಹಿಸಿ ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಸಂಘದ ಉಪಾಧ್ಯಕ್ಷ ಮಹದೇವಸ್ವಾಮಿ, ಸಹ ಕಾರ್ಯದರ್ಶಿ ಮಹೇಶ್, ಗ್ರಾಮಸ್ಥರಾದ ನಾಗೂರು, ಜವರಯ್ಯ, ರಮೇಶ್, ಚಿಕ್ಕಮಲ್ಲಯ್ಯ, ಮಹೇಂದ್ರ ಸುರೇಶ ಉಪಸ್ಥಿತರಿದ್ದರು.

ವಿಜೃಂಭಣೆಯ ಸಂತ ಅಂಥೋಣಿಯವರ ಬಸಿಲಿಕಾದ ವಾರ್ಷಿಕ ಜಾತ್ರಾ ಮಹೋತ್ಸವ



ಡೋರ್ನಹಳ್ಳಿ ಸಂತ ಅಂಥೋಣಿಯವರ ಬಸಿಲಿಕಾದ ವಾರ್ಷಿಕ ಜಾತ್ರಾ ಮಹೋತ್ಸವ ವಿಜೃಂಭಣೆಯಿಂದ ನಡೆಯಿತು.

ಕೆ.ಆರ್.ನಗರ, ಜೂ.13– ತಾಲೂಕಿನ ಇತಿಹಾಸ ಪ್ರಸಿದ್ಧ ಡೋರ್ನಹಳ್ಳಿಯ ಸಂತ ಅಂಥೋಣಿಯವರ ಬಸಿಲಿಕಾದ ವಾರ್ಷಿಕ ಜಾತ್ರಾ ಮಹೋತ್ಸವ ಮತ್ತು ರಥೋತ್ಸವ ಸಾವಿರಾರು ಮಂದಿ ಸಮ್ಮುಖದಲ್ಲಿ ಶುಕ್ರವಾರ ವಿಜೃಂಭಣೆಯಿಂದ ನಡೆಯಿತು.

ಮೈಸೂರು ಧರ್ಮಕ್ಷೇತ್ರದ ಆಡಳಿತಾಧಿಕಾರಿ ಡಾ.ಬರ್ನಾಡ್ ಮೊರಾಸ್ ಅವರು ಬೆಳಗ್ಗೆ 10 ಗಂಟೆಗೆ ಹಬ್ಬದ ಆಡಂಬರ ಗಾಯನ ಪೂಜೆಗೆ ಚಾಲನೆ ನೀಡಿದರು.

ಬಸಿಲಿಕಾದ ಧರ್ಮಗುರು ಡೇವಿಡ್ ಸಗಾಯರಾಜ್, ಕೋಲ್ಕತ್ತಾ ಧರ್ಮಗುರು ರಾಬರ್ಟ್ ಗ್ರೆಗೊರಿ ಮೊಂತೇರೊ, ಮೈಸೂರು ಧರ್ಮ ಕ್ಷೇತ್ರದ ಕೋಶಾಧಿಕಾರಿ ಸೆಬಾಸ್ಟಿಯನ್ ಅಲೆಕ್ಸಾಂಡರ್, ಯಾದವಗಿರಿ ಧರ್ಮಗುರು ರೋಹನ್, ಬೋಗಾದಿ ಧರ್ಮಗುರು ವಾಲೆಂಟೆನ್ ರಾಜೇಂದ್ರ ಕುಮಾರ್, ಮೈಸೂರು ರೆಕ್ಟರ್ ಗುರು ಓಸ್ವಾಲ್ಡ್ ಕ್ರಾಸ್ತ, ಮಂಡ್ಯ ಧರ್ಮಗುರು ಮರಿರಾಜ್, ಶ್ರೀರಾಂಪುರ ಧರ್ಮಗುರು ಆರ್. ಆರೋಗ್ಯಸ್ವಾಮಿ, ಮೈಸೂರು ಧರ್ಮ ಕ್ಷೇತ್ರದ ಸಹಾಯಕ ಕೋಶಾಧಿಕಾರಿ ಯೇಸು ಪ್ರಸಾದ್ ಅವರು ಹಬ್ಬದ ಆಡಂಬರ ಗಾಯನ ಬಲಿಪೂಜೆ ನಡೆಸಿಕೊಟ್ಟರು.

ಬಳಿಕ ಸಂಜೆ 7 ಗಂಟೆಗೆ ಬಸಿಲಿಕಾ ಮುಂಭಾಗ ಸಾವಿರಾರು ಜನರ ಸಮ್ಮುಖದಲ್ಲಿ ಸಂತ ಅಂಥೋಣಿಯವರ ವೈಭವದ ತೇರಿನ ಮೆರವಣಿಗೆ ನಡೆಯಿತು. ಬಸಿಲಿಕಾ ಚರ್ಚ್ ಆಡಳಿತಾಧಿಕಾರಿ ಪ್ರವೀಣ್ ಪೆದ್ರು ಹಾಗೂ ಧರ್ಮಗುರು ಡೇವಿಡ್ ಸಗಾಯರಾಜ್ ಅವರು ಜಾತ್ರಾ ಮಹೋತ್ಸವದ ನೇತೃತ್ವ ವಹಿಸಿದ್ದರು. ಐತಿಹಾಸಿಕ, ಅತ್ಯಂತ ಹೆಸರುವಾಸಿ ಡೋರ್ನಹಳ್ಳಿ ಸಂತ ಅಂತೋಣಿಯವರ ವಾರ್ಷಿಕ ಜಾತ್ರೆಗೆ ರಾಜ್ಯದ ವಿವಿಧ ಮೂಲೆಗಳಿಂದ ಆಗಮಿಸಿದ ಜನರು ಪಾಲ್ಗೊಂಡು ಗಾಯನಪೂಜೆ ವೀಕ್ಷಿಸಿದರು.

ಬಿಳಿಕೆರೆ ಗ್ರಾಪಂಗೆ ಶಿಲ್ಪ ಉಪಾಧ್ಯಕ್ಷೆ



ಹುಣಸೂರು ತಾಲೂಕು ಬಿಳಿಕೆರೆ ಗ್ರಾಪಂ ಉಪಾಧ್ಯಕ್ಷೆಯಾಗಿ ಶಿಲ್ಪ ಮಂಜನಾಥ್ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಚುನಾವಣಾಧಿಕಾರಿಯಾಗಿ ತಾಲೂಕು ಪರಿಶಿಷ್ಟ ಪಂಗಡ ಕಲ್ಯಾಣಾಧಿಕಾರಿ ಎಲ್.ಗಂಗಾಧರ್ ಕಾರ್ಯ ನಿರ್ವಹಿಸಿದರು. ಈ ವೇಳೆ ಅಧ್ಯಕ್ಷೆ ಮರತಾಯಮ್ಮ, ಸದಸ್ಯರಾದ ಬಿ.ಪಿ.ಶಿವಶಂಕರ್, ಶಬರೀಶ, ಪಿ.ಓ.ಶ್ವೇತಾ, ಯೋಗೇಶ್, ಜ್ಯೋತಿ, ಮಂಗಳಮ್ಮ, ಪಾರ್ವತಿ, ಮಹೇಶ್, ಪಿಡಿಓ ಹೆಚ್.ಎಂ.ಮಹದೇವಸ್ವಾಮಿ, ಕಾರ್ಯದರ್ಶಿ ಶಶಾಂಕ್, ದ್ವಿತೀಯ ದರ್ಜೆ ಸಹಾಯಕ ವಸಂತ್ ಕುಮಾರ್ ಸಿಬ್ಬಂದಿ ವರ್ಗ ಹಾಜರಿದ್ದರು.

ಬಾಲ ಕಾರ್ಮಿಕ ಪದ್ಧತಿ ನಿರ್ಮೂಲನೆಗೆ ಕೈಜೋಡಿಸಿ

8ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಟಿ.ಗೋವಿಂದಯ್ಯ ಮನವಿ

ಹುಣಸೂರು, ಜೂ.13– ಬಾಲ ಕಾರ್ಮಿಕ ಪದ್ಧತಿಯಿಂದ ದೇಶದ ಅಭಿವೃದ್ಧಿ ಕುಂಠಿತವಾಗಲಿದೆ. ಹೀಗಾಗಿ ಬಾಲ ಕಾರ್ಮಿಕ ಪದ್ಧತಿ ಕೊನೆಗಾಣಿಸಲು ಎಲ್ಲರೂ ಕೈ ಜೋಡಿಸಬೇಕೆಂದು 8ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಟಿ.ಗೋವಿಂದಯ್ಯ ಮನವಿ ಮಾಡಿದರು.

ತಾಲೂಕು ಕಾನೂನು ಸೇವಾ ಸಮಿತಿ, ವಕೀಲರ ಸಂಘ, ಕಾರ್ಮಿಕ ಹಾಗೂ ಶಿಕ್ಷಣ ಇಲಾಖೆಗಳು, ನಗರದ ಬಾಲಕರ ಸರ್ಕಾರಿ ಪ್ರೌಢಶಾಲೆ ಸಂಯುಕ್ತಾಶ್ರಯದಲ್ಲಿ ವಿಶ್ವ ಬಾಲ ಕಾರ್ಮಿಕ ದಿನಾಚರಣೆ ಅಂಗವಾಗಿ ಆಯೋಜಿಸಿದ್ದ ಶಾಲಾ ಮಕ್ಕಳ ಜಾಥಾಗೆ ಚಾಲನೆ ನೀಡಿ ಮಾತನಾಡಿದ ಅವರು, ಸರ್ಕಾರ 14 ವರ್ಷದವರೆಗೆ ಕಡ್ಡಾಯ ಶಿಕ್ಷಣ ಕಾನೂನು ಜಾರಿಗೊಳಿಸಿದೆ. ಹೀಗಾಗಿ ಪೋಷಕರು ಮಕ್ಕಳಿಗೆ ಶಿಕ್ಷಣ ಕೊಡಿಸಲು ಮುಂದಾಗಬೇಕು. ಮಕ್ಕಳು ಹೋಟೆಲ್, ಗುಜರಿ, ಮೆಕಾನಿಕ್ ಶಾಪ್, ಜಮೀನು ಮತ್ತಿತರ ಕಡೆಗಳಲ್ಲಿ ಕೂಲಿ ಕೆಲಸ ಮಾಡುವುದು ಅಪರಾಧವಾಗಿದೆ. ಇಂತಹ ಕೆಲಸ ಮಾಡುವ ಮಕ್ಕಳು ಕಂಡಲ್ಲಿ ನ್ಯಾಯಾಲಯಕ್ಕೆ ತಿಳಿಸಿದಲ್ಲಿ ಕಾನೂನು ಸೇವಾ ಸಮಿತಿ ವತಿಯಿಂದ ಶಿಕ್ಷಣ ಕೊಡಿಸಿ ಮುಖ್ಯವಾಹಿನಿಗೆ ತರಲಾಗುವುದು ಎಂದರು.



ಜಾಥಾಕ್ಕೆ 8ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಟಿ.ಗೋವಿಂದಯ್ಯ ಚಾಲನೆ ನೀಡಿದರು.

ಜಾಗೃತಿ ಜಾಥಾ: ನಗರದ ಪ್ರಮುಖ ಬೀದಿಗಳಲ್ಲಿ ನಡೆದ ಜಾಥಾದಲ್ಲಿ ಬಾಲಕ ಹಾಗೂ ಬಾಲಕಿಯರ ಪ್ರೌಢಶಾಲೆ ವಿದ್ಯಾರ್ಥಿಗಳು ತೊಲಗಲಿ ತೊಲಗಲಿ ಬಾಲ ಕಾರ್ಮಿಕ ಪದ್ಧತಿ ತೊಲಗಲಿ, ದುಡಿಮೆ ಬೇಡ ಶಿಕ್ಷಣ ಬೇಕು, ಅಪ್ಪ, ಅಮ್ಮ ದುಡಿಮೆಗೆ ನಾವು ಹೋಗೋದು ಶಾಲೆಗೆ, ಕುಡಿತ ಬಿಡಿ ಶಿಕ್ಷಣ ಕೊಡಿಸಿ ಎಂಬಿತ್ಯಾದಿ ಘೋಷಣೆ ಕೂಗಿದರು.

ಇದೇ ವೇಳೆ ಬಾಲ ಕಾರ್ಮಿಕ ಪದ್ಧತಿ ವಿರೋಧಿಸುವ ಕುರಿತು ಮಕ್ಕಳಿಗೆ ಪ್ರತಿಜ್ಞಾ ವಿಧಿ ಬೋಧಿಸಲಾಯಿತು. ಕಾರ್ಯಕ್ರಮದಲ್ಲಿ ತಾಲೂಕು ಕಾನೂನು ಸೇವಾ ಸಮಿತಿ ಅಧ್ಯಕ್ಷೆ ಅನಿತ, ಕಾರ್ಯದರ್ಶಿ ಆಯಿಷಾಬಿ ಪಿ.ಮಜಿದ್, ನ್ಯಾಯಾಧೀಶರಾದ ನಮ್ರತಾ ಎಸ್. ಹೊಸಮಠ್, ಎಪಿಪಿ ಹೆಚ್.ಡಿ. ಪಾರ್ವತಿ, ವಕೀಲರ ಸಂಘದ ಅಧ್ಯಕ್ಷ ಎಸ್.ಶಿವಣ್ಣೇಗೌಡ, ತಾಲೂಕು ಕಾರ್ಮಿಕ ಅಧಿಕಾರಿ ಲಕ್ಷ್ಮೀಶ, ಭಾಸ್ಕರ್, ಬಿಆರ್‌ಸಿ ಹೇಮಲತಾ, ತಾಲೂಕು ದೈಹಿಕ ಶಿಕ್ಷಣ ಪರಿವೀಕ್ಷಕ ರಮೇಶ್, ಇಸಿಓಗಳಾದ ಕುಮಾರಸ್ವಾಮಿ, ಕೇಶವಮೂರ್ತಿ, ರುದ್ರಪ್ಪ, ಉಪಪ್ರಾಚಾರ್ಯರಾದ ಗೀತಾ, ಭವಾನಿ ಸೇರಿದಂತೆ ಶಿಕ್ಷಕರು, ವಿದ್ಯಾರ್ಥಿಗಳು ಭಾಗವಹಿಸಿದ್ದರು.

ವಲಸೆ ಹೋಗದೇ ನರೇಗಾದಡಿ ಉದ್ಯೋಗ ಪಡೆಯಿರಿ

ತಾಲೂಕು ಐಇಸಿ ಸಂಯೋಜಕಿ ಪುಷ್ಪವತಿ

ಹುಣಸೂರು, ಜೂ.13– ಹಾಡಿ ಜನರು ಬೇರೆಡೆಗೆ ವಲಸೆ ಹೋಗದೆ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಮ–ನರೇಗಾ ಯೋಜನೆಯಡಿ ಅನುಷ್ಠಾನಗೊಳ್ಳುವ ಕಾಮಗಾರಿಗಳಲ್ಲಿ ಪಾಲ್ಗೊಳ್ಳುವ ಮೂಲಕ ಮೂಲ ನಿವಾಸದಲ್ಲಿಯೇ ಉದ್ಯೋಗ ಪಡೆದುಕೊಳ್ಳುವಂತೆ ತಾಲೂಕು ಐಇಸಿ ಸಂಯೋಜಕಿ ಪುಷ್ಪವತಿ ತಿಳಿಸಿದರು.

ಕಡೇಮನುಗನಹಳ್ಳಿ ಗ್ರಾಪಂ ವ್ಯಾಪ್ತಿಯ ಹೆಬ್ಬಾಳ ಹಾಡಿ ಸಮುದಾಯ ಭವನದಲ್ಲಿ ಆಯೋಜಿಸಲಾಗಿದ್ದ ದುಡಿಯೋಣ ಬಾ, ಸ್ತ್ರೀ ಚೇತನ ಅಭಿಯಾನ ಹಾಗೂ ರೋಜಗಾರ್ ದಿವಸ್ ಆಚರಣೆ ಸಂದರ್ಭ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ದೊರೆಯುವ ಸೌಲಭ್ಯಗಳ ಬಗ್ಗೆ ಮಾಹಿತಿ ನೀಡಿದರು.



ಹೆಬ್ಬಾಳ ಹಾಡಿಯಲ್ಲಿ ತಾಲೂಕು ಐಇಸಿ ಸಂಯೋಜಕಿ ಪುಷ್ಪವತಿ ಮಾತನಾಡಿದರು.

ಗ್ರಾಮದ ಅಭಿವೃದ್ಧಿಗಾಗಿ ಸಾಕಷ್ಟು ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದ್ದು, ಫಲಾನುಭವಿಗಳು ಇದರಲ್ಲಿ ಪಾಲ್ಗೊಳ್ಳುವ ಮೂಲಕ ಆರ್ಥಿಕವಾಗಿ ಸ್ವಾವಲಂಬಿಗಳಾಗಬೇಕು. ವೈಯಕ್ತಿಕ ಕಾಮಗಾರಿಗಳಲ್ಲಿ ಅನುಷ್ಠಾನಗೊಳ್ಳುವ ಬಚ್ಚಲುಗುಂಡಿ ನಿರ್ಮಾಣ, ಪೌಷ್ಠಿಕ ಕೈತೋಟ, ಜಮೀನುಗಳಲ್ಲಿ ಬದು ನಿರ್ಮಾಣ ಮಾಡಿಕೊಳ್ಳುವ ಮೂಲಕ ಮನೆ ಸುತ್ತಮುತ್ತಲಿನ ಪರಿಸರ ಸ್ವಚ್ಛವಾಗಿಟ್ಟುಕೊಳ್ಳಬೇಕು ಎಂದು ಅರಿವು ಮೂಡಿಸಲಾಯಿತು.

ಪಿಡಿಓ ಷಡಕ್ಷರಿ ಮಾತನಾಡಿ, ಪಿಎಂ ಜನಮನ್ ಯೋಜನೆಯಡಿ ಪಂಚಾಯಿತಿ ವ್ಯಾಪ್ತಿಯಲ್ಲಿರುವ ಹಾಡಿ ಜನರಿಗೆ ಸುಮಾರು 145 ಮನೆಗಳು ಅನುಮೋದನೆಗೊಂಡಿದೆ. ಆದರೆ ಇದುವರೆಗೂ ಮನೆ ನಿರ್ಮಾಣಕ್ಕೆ ಮುಂದಾಗಿಲ್ಲ. ಹಾಗಾಗಿ ಪ್ರಾರಂಭವಾಗದಿರುವ ಮನೆಗಳನ್ನು ಪ್ರಾರಂಭಿಸುವಂತೆ ಹಾಗೂ ಪ್ರಾರಂಭಗೊಂಡಿರುವ ಮನೆಗಳನ್ನು ಬೇಗ ಮುಕ್ತಾಯಗೊಳಿಸುವಂತೆ ತಿಳಿಸಿದರು.

ಈ ವೇಳೆ ಹೆಬ್ಬಾಳ ಗ್ರಾಮದ ಸದಸ್ಯರಾದ ಗೌರಮ್ಮ, ರಾಧಾ ಟಿ.ಎಸ್, ಹಾಡಿ ಅಧ್ಯಕ್ಷ ಚಂದ್ರು, ಮುಖಂಡರಾದ ನಾಗೇಶ್, ಅಯ್ಯನಕೆರೆ ಹಾಡಿಯ ಶಿವಣ್ಣ ಮತ್ತು ಕಾಂತರಾಜು, ಕರ ವಸೂಲಿಗಾರರಾದ ಉಮೇಶ್ ಸೇರಿದಂತೆ ಹಾಡಿ ಗ್ರಾಮಸ್ಥರು ಪಾಲ್ಗೊಂಡಿದ್ದರು.

ವಿವಿಧ ಯೋಜನೆಯಡಿ ಸೌಲಭ್ಯ ಪಡೆಯಲು ಫಲಾನುಭವಿಗಳಿಂದ ಅರ್ಜಿ ಆಹ್ವಾನ

ಮೈಸೂರು, ಜೂ.13– ತಿ.ನರಸೀಪುರ ಪುರಸಭಾ ವ್ಯಾಪ್ತಿಯಲ್ಲಿ ವಾಸಿಸುತ್ತಿರುವ ಸಾರ್ವಜನಿಕರಿಗೆ 2025–26ನೇ ಸಾಲಿನ ಶೇ.24.10, ಶೇ 7.5 ಮತ್ತು ಶೇ.5 ಎಸ್.ಎಫ್.ಸಿ ಹಾಗೂ ಪುರಸಭಾ ಸಾಮಾನ್ಯ ನಿಧಿ ಅನುದಾನದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ, ಇತರೆ ಹಿಂದುಳಿದ ವರ್ಗಗಳ, ಮತ್ತು ವಿಕಲಚೇತನರ ಕಲ್ಯಾಣ ಕಾರ್ಯಕ್ರಮಗಳಡಿ ವೈಯಕ್ತಿಕ ಕಾರ್ಯಕ್ರಮಕ್ಕಾಗಿ ಅರ್ಹ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದ್ದು, ತಿ.ನರಸೀಪುರ ಪುರಸಭಾ ಕಾರ್ಯಾಲಯದ ಕಚೇರಿಯಲ್ಲಿ ಅರ್ಜಿ ನಮೂನೆಯನ್ನು ಪಡೆದು ಜೂನ್ 15 ರಂದು ಸಂಜೆ 4 ಗಂಟೆಯ ಒಳಗೆ ತಿ.ನರಸೀಪುರ ಪುರಸಭಾ ಕಾರ್ಯಾಲಯದ ಕಚೇರಿಗೆ ಸಲ್ಲಿಸಬೇಕು.

ಜಾತಿ ಮತ್ತು ಆದಾಯ ದೃಢೀಕರಣ ಪ್ರಮಾಣ ಪತ್ರ, ವ್ಯಾಸಂಗ ಪ್ರೋತ್ಸಾಹ ಧನ ಪಡೆಯಲು SC & ST ರೂ.2.50 ಲಕ್ಷ, ಲ್ಯಾಪ್ ಟಾಪ್ ಸಹಾಯಧನ ಪಡೆಯಲು ಒಬಿಸಿ ಮತ್ತು ವಿಕಲಚೇತನರಿಗೆ ರೂ.3.00 ಲಕ್ಷ ಮಿತಿಯಲ್ಲಿರಬೇಕು, ಪಡಿತರಚೀಟಿ, ಆಧಾರ್ ಕಾರ್ಡ್, ಚುನಾವಣೆ ಗುರುತಿನ ಚೀಟಿ, ಇತ್ತೀಚಿನ ಪಾಸ್ ಪೋರ್ಟ್ ಅಳತೆಯ ಭಾವಚಿತ್ರ–2, ಅಸೆಸ್‌ಮೆಂಟ್ ಪ್ರತಿ, ಬ್ಯಾಂಕ್ ಪಾಸ್ ಪುಸ್ತಕ ಅಂಗವಿಕಲರ ಗುರುತಿನ ಚೀಟಿ, ಯುಡಿಐಡಿ ಕಾರ್ಡ್ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಕಚೇರಿ ಶಾಖೆಗೆ ಭೇಟಿ ನೀಡಿ ತಿಳಿದುಕೊಳ್ಳಬೇಕು ಎಂದು ತಿ.ನರಸೀಪುರ ಪುರಸಭೆಯ ಮುಖ್ಯಾಧಿಕಾರಿ ಬಿ.ಕೆ. ವಸಂತಕುಮಾರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಎನ್. ಜಯಲಕ್ಷ್ಮಿಗೆ ಪಿಎಚ್.ಡಿ



ಮೈಸೂರು, ಜೂ. 11– ಡಾ. ಎಂ. ಇಂದಿರಾ ಅವರ ಮಾರ್ಗದರ್ಶನದಲ್ಲಿ ಎನ್. ಜಯಲಕ್ಷ್ಮಿ ಅವರು ಅರ್ಥ ಶಾಸ್ತ್ರ ವಿಷಯದಲ್ಲಿ ಸಂಶೋಧನೆ ನಡೆಸಿ ಸಾದರಪಡಿಸಿದ ಮಹಾಪ್ರಬಂಧವನ್ನು ಮೈಸೂರು ವಿಶ್ವವಿದ್ಯಾನಿಲಯ ಪಿಎಚ್.ಡಿ ಪದವಿಗೆ ಅಂಗೀಕರಿಸಿದೆ.

ಹಸಿರು ನಮ್ಮ ಉಸಿರು

ಬಿ.ಕೆ.ಹರಿಪ್ರಸಾದ್‌ಗೆ ಸಚಿವ ಸ್ಥಾನ ಸಿಗಲೆಂದು ಪೂಜೆ

ಸರಗೂರು, ಜೂ.13– ವಿಧಾನ ಪರಿಷತ್ ಸದಸ್ಯ ಬಿ.ಕೆ.ಹರಿಪ್ರಸಾದ್ ಅವರಿಗೆ ಸಚಿವ ಸ್ಥಾನ ಸಿಗಲೆಂದು ಆರ್ಯ ಈಡಿಗರ ಸಮಾಜದಿಂದ ಪಟ್ಟಣದ ಶ್ರೀಕೋದಂಡರಾಮ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸಲಾಯಿತು.

ಆರ್ಯ ಈಡಿಗರ ಸಮಾಜದ ತಾಲೂಕು ಅಧ್ಯಕ್ಷ ಎಸ್.ಎನ್.ನಾಗರಾಜು ಮಾತನಾಡಿ, ವಿಧಾನ ಪರಿಷತ್ ಸದಸ್ಯ ಬಿ.ಕೆ.ಹರಿಪ್ರಸಾದ್ ಅವರು ಹಿರಿಯ ರಾಜಕಾರಣಿಯಾಗಿದ್ದು, ಅಪಾರ ರಾಜಕೀಯ ಅನುಭವ ಹೊಂದಿದ್ದಾರೆ. ಹೀಗಾಗಿ ನಮ್ಮ ಸಮುದಾಯದ ಹಿರಿಯ ಪ್ರಭಾವಿ ನಾಯಕರಾಗಿರುವ ಬಿ.ಕೆ.ಹರಿಪ್ರಸಾದ್ ಅವರಿಗೆ ಸಚಿವ ಸ್ಥಾನ ಸಿಗಲೆಂದು ಪ್ರಾರ್ಥಿಸಿ ವಿಶೇಷ ಪೂಜೆ ಸಲ್ಲಿಸಲಾಗಿದ್ದು, ಕಾಂಗ್ರೆಸ್ ಹೈಕಮಾಂಡ್ ಅವರಿಗೆ ಸೂಕ್ತ ಸ್ಥಾನಮಾನ ನೀಡಲು ಮುಂದಾಗಬೇಕು ಎಂದು ಒತ್ತಾಯಿಸಿದರು.



ಬಿ.ಕೆ.ಹರಿಪ್ರಸಾದ್ ಅವರಿಗೆ ಸಚಿವ ಸ್ಥಾನ ಸಿಗಲೆಂದು ಆರ್ಯ ಈಡಿಗರ ಸಮಾಜದಿಂದ ಪೂಜೆ ಸಲ್ಲಿಸಲಾಯಿತು.

ಈ ವೇಳೆ ಆರ್ಯ ಈಡಿಗರ ಸಮಾಜದ ಮುಖಂಡರಾದ ಬುಲೆಟ್ ಮಂಜು, ರಾಜಣ್ಣ, ಸೈನಪ್ಪ, ಗೋವಿಂದ, ಚಿಕ್ಕಯಜಮಾನರಾದ ವೆಂಕಟೇಶ್, ದಾಸರಾಜು, ಗಣಪತಿ, ತುಕರಾಂ, ನರಸಿಂಹ, ರಾಜಣ್ಣ, ಟೈಲರ್ ಶ್ರೀನಿವಾಸ್, ಭದ್ರ, ಮಲ್ಲೇಶ್, ಗುರುಸ್ವಾಮಿ ಇತರರಿದ್ದರು.

ಮಕ್ಕಳ ದುಡಿಮೆ ಪದ್ಧತಿ ನಿರ್ಮೂಲನೆಗೆ ಜಾಗೃತಿ ಮೂಡಿಸಿ

ಜೆಎಂಎಫ್‌ಸಿ ನ್ಯಾಯಾಲಯದ ಸಿವಿಲ್ ನ್ಯಾಯಾಧೀಶ ಹೆಚ್.ಆರ್.ಸಚಿನ್ ಕರೆ

ತಿ.ನರಸೀಪುರ, ಜೂ.13– ಬಾಲ್ಯದಲ್ಲಿ ದುಡಿಯುವ ಬಾಲ ಕಾರ್ಮಿಕತೆ ಅನಿಷ್ಟ ಪದ್ಧತಿಯಾಗಿದ್ದು, ಮಕ್ಕಳ ದುಡಿಮೆಯ ಪದ್ಧತಿ ನಿರ್ಮೂಲನೆಗೆ ಅಧಿಕಾರಿಗಳು ಜಾಗೃತಿ ಮೂಡಿಸಬೇಕು. ಕೃಷಿ, ಕೈಗಾರಿಕೆ, ವಾಣಿಜ್ಯ ಸಂಸ್ಥೆಗಳು ಹಾಗೂ ಅಂಗಡಿ ಮುಂಗಟ್ಟುಗಳಲ್ಲಿ ದುಡಿಯುತ್ತಿರುವ ಮಕ್ಕಳನ್ನು ರಕ್ಷಣೆ ಮಾಡಬೇಕು ಎಂದು ಪಟ್ಟಣದ ಜೆಎಂಎಫ್‌ಸಿ ನ್ಯಾಯಾಲಯದ ಸಿವಿಲ್ ನ್ಯಾಯಾಧೀಶ ಹೆಚ್.ಆರ್.ಸಚಿನ್ ಕರೆ ನೀಡಿದರು.



ವಿಶ್ವ ಬಾಲಕಾರ್ಮಿಕ ವಿರೋಧಿ ದಿನಾಚರಣೆ ಜಾಥಾಕ್ಕೆ ನ್ಯಾಯಾಧೀಶ ಹೆಚ್.ಆರ್.ಸಚಿನ್ ಚಾಲನೆ ನೀಡಿದರು.

ಪಟ್ಟಣದ ಗುರುಭವನದ ಆವರಣದಲ್ಲಿ ತಾಲೂಕು ಕಾನೂನು ಸೇವಾ ಸಮಿತಿ, ವಕೀಲರ ಸಂಘ, ಕಾರ್ಮಿಕ ಇಲಾಖೆ ಹಾಗೂ ಶಿಕ್ಷಣ ಇಲಾಖೆ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ವಿಶ್ವ ಬಾಲ ಕಾರ್ಮಿಕ ವಿರೋಧಿ ದಿನಾಚರಣೆ ಜಾಥಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಐಎಲ್ಒನ ಮಾಹಿತಿ ಪ್ರಕಾರ ವಿಶ್ವದಾದ್ಯಂತ ಲಕ್ಷಾಂತರ ಮಕ್ಕಳು ಶಿಕ್ಷಣದ ಹಕ್ಕನ್ನು ಪಡೆಯಲಾಗದೇ ಆರೋಗ್ಯ ಮತ್ತು ಮೂಲಭೂತ ಸ್ವಾತಂತ್ರ್ಯವನ್ನು ಅನುಭವಿಸಲಾಗದೆ ದುಡಿಮೆಯಲ್ಲಿ ತೊಡಗಿಕೊಂಡಿದ್ದಾರೆ ಎಂದು ಆತಂಕ ವ್ಯಕ್ತಪಡಿಸಿದರು.

ಬಾಲ್ಯದಲ್ಲಿ ಆಟವಾಡುತ್ತಾ ತನ್ನ ಜೊತೆಗಾರರೊಂದಿಗೆ ಶಾಲೆಗೆ ಹೋಗಿ ಕಲಿಯಬೇಕಾದ ಮಕ್ಕಳು ಹಲವಾರು ಕಾರಣಗಳಿಂದ ಹಾಗೂ ಕೌಟುಂಬಿಕ ಸಮಸ್ಯೆಗಳಿಂದ ಬಾಲ ಕಾರ್ಮಿಕರಾಗಿ ದುಡಿಯುತ್ತಿದ್ದಾರೆ. ಇದು ಒಂದು ಸಾಮಾಜಿಕ ಪಿಡುಗು. ಕಟ್ಟಡ ಕೆಲಸ, ಅಂಗಡಿ ಮಳಿಗೆ, ಗಾರ್ಮೆಂಟ್ಸ್, ಬೇಕರಿ, ಗ್ಯಾರೇಜ್, ಹೋಟೇಲ್, ಕಾರ್ಖಾನೆ ಹಾಗೂ ದೊಡ್ಡ ಮನೆಗಳಲ್ಲಿ ಕೆಲಸದಾಳು ಗಳಾಗಿ ತಮ್ಮ ದೈಹಿಕ ಹಾಗೂ ಮಾನಸಿಕ ಸಾಮರ್ಥ್ಯಕ್ಕೆ ಕಷ್ಟವಾ ಗುವಂಥ ಕೆಲಸ ಗಳನ್ನು ಮಾಡುತ್ತಿದ್ದಾರೆ. ಇದರಿಂದ ಅವರು ಶಿಕ್ಷಣ ವಂಚಿತ ರಾಗುತ್ತಿದ್ದಾರೆ. ಪೌಷ್ಠಿಕ ಆಹಾರ ಕೊರತೆಯಿಂದಾಗಿ ಅನೇಕ ರೋಗಗಳಿಗೆ ತುತ್ತಾಗುತ್ತಿದ್ದಾರೆ. ಅವರೆಲ್ಲರನ್ನು ಶೈಕ್ಷಣಿಕ ವಾಹಿನಿಗೆ ಕರೆತರುವ ಜವಾಬ್ದಾರಿ ಪ್ರತಿಯೊಬ್ಬ ಪ್ರಜ್ಞಾವಂತ ನಾಗರಿಕರ ಜವಾಬ್ದಾರಿಯಾಗಿದೆ ಎಂದರು.

ಕ್ಷೇತ್ರ ಶಿಕ್ಷಣಾಧಿಕಾರಿ ಎಸ್.ಸಿ.ಶಿವಮೂರ್ತಿ ಮಾತನಾಡಿ, ಬಾಲ ಕಾರ್ಮಿಕರ ರಕ್ಷಣೆಗಾಗಿ ಜಗತ್ತಿನ ಗಮನ ಸೆಳೆಯಲು ವಿಶ್ವ ಕಾರ್ಮಿಕ ಸಂಘಟನೆಯು 2002 ರಲ್ಲಿ ಜೂ.12 ಅನ್ನು ವಿಶ್ವ ಬಾಲಕಾರ್ಮಿಕ ವಿರೋಧಿ ದಿನ ಎಂದು ಘೋಷಿಸಿತು. ಬಾಲ ಕಾರ್ಮಿಕರಾಗಿ ದುಡಿಯುತ್ತಿರುವ ಮಕ್ಕಳು ಈ ಕೆಟ್ಟ ವ್ಯವಸ್ಥೆಯಿಂದ ಹೊರ ಬಂದು ತಮ್ಮ ಹಕ್ಕುಗಳ ಕುರಿತು ಜಾಗೃತಿ ಹೊಂದಬೇಕು. ಅಲ್ಲದೇ ದೇಶದ ಉತ್ತಮ ನಾಗರಿಕರಾಗಬೇಕು ಎಂಬುದು ಈ ದಿನದ ಉದ್ದೇಶವಾಗಿದೆ ಎಂದರು.

ಶಿಶು ಅಭಿವೃದ್ಧಿ ಯೋಜನಾಧಿಕಾರಿ ಗೋವಿಂದರಾಜು ಮಾತನಾಡಿದರು. ಕಾರ್ಮಿಕ ನಿರೀಕ್ಷಕ ಎನ್.ಸದಾನಂದ, ವಕೀಲರ ಸಂಘದ ಅಧ್ಯಕ್ಷ ತೊಟ್ಟವಾಡಿ ಮಹದೇವಸ್ವಾಮಿ, ದೈಹಿಕ ಶಿಕ್ಷಣ ಪರೀಕ್ಷಕ ಮರಿಸ್ವಾಮಿ, ಕಾರ್ಮಿಕ ಇಲಾಖೆಯ ಸದಾನಂದ, ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ಪುಟ್ಟಸ್ವಾಮಿ, ಬಿಆರ್‌ಸಿ ನಾಗೇಶ್, ಎಎಸ್ಐ ಚಂದ್ರಪ್ಪ, ಸರ್ಕಾರಿ ನೌಕರರ ಸಂಘದ ನಿರ್ದೇಶಕ ಪುಟ್ಟರಾಜು, ಮುಖ್ಯ ಶಿಕ್ಷಕಿ ಸಾವಿತ್ರಿ, ಸಹ ಶಿಕ್ಷಕರರಾದ ಮಹದೇವಸ್ವಾಮಿ, ಜೆಸ್ಸಿನ್, ಮಾದಪ್ಪ ಹಾಗೂ ಶಾಲಾ ಮಕ್ಕಳಿದ್ದರು.

ಮೈಸೂರು ಮಿತ್ರ

ಮೈಸೂರಿನ ಲಲಿತಾದ್ರಿಪುರದಲ್ಲಿ 202 ಕೋಟಿ ವೆಚ್ಚದಲ್ಲಿ ಗುಂಪು ಮನೆ ನಿರ್ಮಾಣ

ಫಲಾನುಭವಿಗಳಿಗೆ ಸಾಲ ಸೌಲಭ್ಯ ಕಲ್ಪಿಸುವ ಸಾಲ ಮೇಳ

• ಮೈಸೂರಿನಲ್ಲಿ ನಡೆದ ರಾಜ್ಯದ ಮೊದಲ ಯೋಜನೆ • ಕೇಂದ್ರ, ರಾಜ್ಯ ಸರ್ಕಾರದಿಂದ ಬಂಪರ್ ಸಬ್ಸಿಡಿ



ಮೈಸೂರಿನ ಪುರಭವನದಲ್ಲಿ ಶುಕ್ರವಾರ ಗುಂಪು ಮನೆ ಯೋಜನೆಯ ಫಲಾನುಭವಿಗಳಿಗೆ ಆಯೋಜಿಸಿದ್ದ ಸಾಲ ಮೇಳವನ್ನು ಶಾಸಕ ಟಿ.ಎಸ್.ಶ್ರೀವತ್ಸ ಉದ್ಘಾಟಿಸಿದರು.

ಮೈಸೂರು, ಜೂ.13(ಬಿಎಲ್‌ಯು)– ಮೈಸೂರಿನ ಲಲಿತಾದ್ರಿಪುರದಲ್ಲಿ 202 ಕೋಟಿ ವೆಚ್ಚದಲ್ಲಿ ನಿರ್ಮಾಣ ಮಾಡುತ್ತಿರುವ ಗುಂಪು ಮನೆ ಯೋಜನೆಯ ಫಲಾನುಭವಿಗಳಿಗೆ ಸಾಲ ಸೌಲಭ್ಯ ಕಲ್ಪಿಸುವ ಸಾಲ ಮೇಳ ಇಂದು ನಡೆಯಿತು. ಗುಂಪು ಮನೆ ಯೋಜನೆಯ ಸಾಲದ ಮೊಬಲಗನ್ನು ಫಲಾನುಭವಿಗಳು ಕಂತಿನಲ್ಲಿ ಪಾವತಿ ಮಾಡುವ ಈ ಸಾಲ ಮೇಳ ಕರ್ನಾಟಕದಲ್ಲಿ ಮೊದಲ ಯೋಜನೆಯಾಗಿದೆ.

ನಗರದ ಪುರಭವನದಲ್ಲಿ ಇಂದು ನಗರಪಾಲಿಕೆ ಆಯೋಜಿಸಿದ್ದ ಸಾಲ ಮೇಳವನ್ನು ಶಾಸಕ ಟಿ.ಎಸ್.ಶ್ರೀವತ್ಸ ಅವರು ಉದ್ಘಾಟಿಸಿದರು. ಈ ವೇಳೆ ನಗರಪಾಲಿಕೆ ಆಯುಕ್ತ ಶೇಕ್ ತನ್ವೀರ್ ಆಸೀಫ್, ಲೀಡ್ ಬ್ಯಾಂಕ್ ವ್ಯವಸ್ಥಾಪಕ ಕೃಷ್ಣಮೂರ್ತಿ ಸೇರಿದಂತೆ ಹಲವರು ಹಾಜರಿದ್ದರು.

ಪ್ರಧಾನಮಂತ್ರಿ ಆವಾಸ್ ಯೋಜನೆಯಲ್ಲಿ 1,400 ಮನೆಗಳನ್ನು 202.82 ಕೋಟಿ ವೆಚ್ಚದಲ್ಲಿ ನಿರ್ಮಾಣ ಮಾಡಲಾಗುತ್ತಿದೆ. ನಗರದ ಕೃಷ್ಣರಾಜ ಕ್ಷೇತ್ರದಿಂದ 940 ಹಾಗೂ ವರುಣ ಕ್ಷೇತ್ರದಿಂದ 500 ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿದ್ದು, ಮುಂದಿನ ವರ್ಷ ವೇಳೆಗೆ ಫಲಾನುಭವಿಗಳಿಗೆ ಮನೆ ಹಸ್ತಾಂತರ ಮಾಡುವ ಗುರಿ ಹೊಂದಲಾಗಿದೆ.

ಒಂದು ಮನೆಯ ಮೊತ್ತ 13.44 ಲಕ್ಷವಾಗಿದ್ದು, ಕೇಂದ್ರ ಸರ್ಕಾರದಿಂದ 1.40 ಲಕ್ಷ ಸಹಾಯ ಧನ ಹಾಗೂ ರಾಜ್ಯ ಸಹಾಯ ಧನವಾಗಿ 1.20 ರಿಂದ 2 ಲಕ್ಷದವರೆಗೆ ಸಹಾಯ ಧನ ನೀಡಲಾಗುತ್ತಿದೆ. ಫಲಾನುಭವಿಗಳು ಸಾಲಕ್ಕೂ ಮೊದಲು ತಮ್ಮ ವಂತಿಕೆ ಹಣ ಪಾವತಿ ಮಾಡಬೇಕಿದೆ. ಸಾಮಾನ್ಯ ಜನರಿಗೆ 2.70 ಲಕ್ಷ ರೂಪಾಯಿ ಹಾಗೂ ಪರಿಶಿಷ್ಟ ಮತ್ತು ಪರಿಶಿಷ್ಟ ವರ್ಗದ ಫಲಾನುಭವಿಗಳು 2.5 ಲಕ್ಷ ವಂತಿಕೆಯಾಗಿ ಪಾವತಿಸಬೇಕಿದೆ.

ಇಂದು ನಡೆದ ಸಾಲ ಮೇಳದಲ್ಲಿ ಭಾರತೀಯ ಸ್ಟೇಟ್ ಬ್ಯಾಂಕ್, ಕೆನರಾ ಬ್ಯಾಂಕ್ ಸೇರಿದಂತೆ ಹಲವು ಬ್ಯಾಂಕ್‌ಗಳು ಭಾಗವಹಿಸಿದ್ದವು. ಸಿಬಿಲ್ ಅಂಕ ಉತ್ತಮವಾಗಿರುವ ಅರ್ಹ ಫಲಾನುಭವಿಗಳಿಗೆ ಸ್ಥಳದಲ್ಲೆ ಸಾಲ ಮಂಜೂರಾತಿ ಪತ್ರ ನೀಡಲಾಯಿತು.

ಮೊದಲು ವಂತಿಕೆ ಪಾವತಿಸಿ, ಶೀಘ್ರ ಮನೆ ಪಡೆಯಿರಿ

ಗೃಹಸಾಲದ ತಮ್ಮ ವಂತಿಕೆಯನ್ನು ಕೂಡಲೇ ನೀಡಿದರೆ ಆದಷ್ಟು ಬೇಗ ಮನೆ ನಿರ್ಮಿಸಿ ಫಲಾನುಭವಿಗಳ ಸುಪರ್ದಿಗೆ ನೀಡಲಾಗುವುದು ಎಂದು ನಗರಪಾಲಿಕೆ ಆಯುಕ್ತ ಶೇಕ್ ತನ್ವೀರ್ ಆಸೀಫ್ ಸ್ಪಷ್ಟಪಡಿಸಿದರು.

ರಾಜ್ಯ ಹಾಗೂ ಕೇಂದ್ರ ಸರ್ಕಾರ ಸಹಾಯ ಧನ ನೀಡುತ್ತಿದೆ. ಫಲಾನುಭವಿಗಳು ಶೇಕಡ 25 ರಷ್ಟು ವಂತಿಗೆ ಹಣ ನೀಡಿದರೆ, ಆ ಹಣವನ್ನು ಮನೆ ನಿರ್ಮಿಸುತ್ತಿರುವ ಗುತ್ತಿಗೆದಾರನಿಗೆ ನೀಡಿ ಆದಷ್ಟು ಬೇಗ ಮನೆ ನಿರ್ಮಾಣವಾಗುತ್ತದೆ ಎಂದರು.

ನಂತರ ಮಾತನಾಡಿದ ಶಾಸಕ ಟಿ.ಎಸ್.ಶ್ರೀವತ್ಸ, ಪ್ರಧಾನಮಂತ್ರಿ ಆವಾಸ್ ಯೋಜನೆಯಲ್ಲಿ ಮನೆ ನಿರ್ಮಾಣ ಮಾಡಿಕೊಡುವ ಬಗ್ಗೆ ಕೇಂದ್ರ ಸರ್ಕಾರ ಸುತ್ತೋಲೆ ಹೊರಡಿಸಿತು. ಈ ಸೌಲಭ್ಯವನ್ನು ಸದ್ಬಳಕೆ ಮಾಡಿಕೊಳ್ಳಲು ಕರ್ನಾಟಕದಲ್ಲಿ ಮೊದಲ ಬಾರಿಗೆ ಮೈಸೂರಿನಲ್ಲಿ ಸಾಲ ಮೇಳ ಆಯೋಜಿಸಲಾಗಿದೆ ಎಂದರು.

ಸಾಲ ಮಂಜೂರಾತಿ ಸಂಬಂಧ ಬ್ಯಾಂಕ್‌ಗಳಿಂದ ಏನಾದರೂ ತೊಂದರೆ ಉಂಟಾದರೆ ನೇರವಾಗಿ ನನಗೆ ದೂರು ನೀಡಿದರೆ ಸಮಸ್ಯೆ ಪರಿಹಾರ ಮಾಡುತ್ತೇನೆ ಎಂದು ಲೀಡ್ ಬ್ಯಾಂಕ್ ಮ್ಯಾನೇಜರ್ ಕೃಷ್ಣಮೂರ್ತಿ ಭರವಸೆ ನೀಡಿದರು.

ಆಶ್ರಯ ಸಮಿತಿ ಕಚೇರಿಯ ವ್ಯವಸ್ಥಾಪಕ ಮದನ್, ಸಹಾಯಕ ಉಮೇಶ್, ಆಶ್ರಯ ಸಮಿತಿ ಸದಸ್ಯರಾದ ಗುಣಶೇಖರ್, ಫಾರೂಕ್, ಲೀಲಾ, ಸೋಮಣ್ಣ ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ	(ದೂ: 2521923)
ಪುದುಪೆಟ್ಟೈ (ತ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್	(ದೂ: 2422871)
ಮಾದೇವ (ಕ)	4 ಪ್ರದರ್ಶನಗಳು
ಬಾಲಾಜಿ	(ದೂ: 2497199)
ಹೌಸ್‌ಫುಲ್–5 (ಹಿಂ)	4 ಪ್ರದರ್ಶನಗಳು
ಮಹದೇಶ್ವರ	(ಮೊ:9900820093)
ಮಾದೇವ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಮಾದೇವ (ಕ)	4 ಪ್ರದರ್ಶನಗಳು
ರಾಜಕಮಲ್	
ಹೊಲೊಕಾಸ್ಟ್ (ತ)	4 ಪ್ರದರ್ಶನಗಳು
ಸಂಗಂ	
ಎಡಗೈಯೇ ಅಪಘಾತಕ್ಕೆ ಕಾರಣ (ಕ)	4 ಪ್ರದರ್ಶನಗಳು
ಲಿಡೋ	
ಮೆರ್ಸಲ್ (ತ)	4 ಪ್ರದರ್ಶನಗಳು
ತಿಬ್ಬಾದೇವಿ	
–	–
ಪ್ರಭಾ	
ಭಗೀರಥ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್

ದೂ : 4240422/4241800

ಸ್ಕ್ರೀನ್ 1	ರೆಟ್ರೋ (ತ): ಬೆ.9.40ಕ್ಕೆ, ಮ.1ಕ್ಕೆ, ರಾ.7ಕ್ಕೆ, ಥಂಡರ್‌ಬೋಲ್ಟ್ಸ್ (3ಡಿ)(ಇಂ): ಸಂ.4.20ಕ್ಕೆ, ರಾ.10.20ಕ್ಕೆ.
ಸ್ಕ್ರೀನ್ 2	ಥಂಡರ್‌ಬೋಲ್ಟ್ಸ್ (3ಡಿ)(ಇಂ): ಬೆ.10.25ಕ್ಕೆ, ಯುದ್ಧಕಾಂಡ 2 (ಕ): ಮ.1.05ಕ್ಕೆ, ಸಂ.4.05ಕ್ಕೆ, ತುಡಾರಂ (ಮ): ರಾ.7ಕ್ಕೆ, ರಾ.10.20ಕ್ಕೆ.
ಸ್ಕ್ರೀನ್ 3	ಹಿಟ್ ದಿ ಥರ್ಡ್ ಕೇಸ್ (ತೆ): ಬೆ.10ಕ್ಕೆ, ಮ.3.55ಕ್ಕೆ, ರಾ.7.05ಕ್ಕೆ, ರಾ.10.15ಕ್ಕೆ, ಟೂರಿಸ್ಟ್ ಫ್ಯಾಮಿಲಿ (ತ): ಮ.1.10ಕ್ಕೆ.
ಸ್ಕ್ರೀನ್ 4	ಪಪ್ಪಿ (ಕ): ಬೆ.10.30ಕ್ಕೆ, ರೈಡ್ 2 (ಹಿಂ): ಮ.1ಕ್ಕೆ, ರಾ.7.25ಕ್ಕೆ, ರಾ.10.25ಕ್ಕೆ, ರೆಟ್ರೋ (ತ): ಸಂ.4.05ಕ್ಕೆ.

ಐನಾಕ್ಸ್ ಮೂವೀಸ್

INOX LIVE THE MOVIE

ದೂ : 2533444 / 2433456

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ

ದೂ : 0821–2973519

ಸ್ಕ್ರೀನ್ 1	ಪ್ರೀತಿಯ ಹುಚ್ಚ (ಕ): ಬೆ.11ಕ್ಕೆ, ರಿಕ್ಷಾ ಚಾಲಕ (ಕ): ಮ.1.35ಕ್ಕೆ, ಕೋರ (ಕ): ಸಂ.6.35ಕ್ಕೆ, ಖದೀಮ (ಕ): ಸಂ.6.35ಕ್ಕೆ, ಟೆನ್ ಅವರ್ಸ್ (ತ): ರಾ.9.15ಕ್ಕೆ.
ಸ್ಕ್ರೀನ್ 2	ಯುದ್ಧಕಾಂಡ 2 (ಕ): ಮ.1ಕ್ಕೆ, ಸಂ.6.35ಕ್ಕೆ, ಒಡೆಲ್ಲಾ (ತೆ): ಮ.3.45ಕ್ಕೆ, ರಾ.9.20ಕ್ಕೆ.
ಸ್ಕ್ರೀನ್ 3	ವೀರ ಚಂದ್ರಹಾಸ (ಕ): ಮ.1ಕ್ಕೆ, ಮ.3.55ಕ್ಕೆ, ಗುಡ್ ಬ್ಯಾಡ್ ಅಗ್ಲಿ (ತ): ಸಂ.6.50ಕ್ಕೆ, ರಾ.9.30ಕ್ಕೆ.
ಸ್ಕ್ರೀನ್ 4	ಯುದ್ಧಕಾಂಡ 2 (ಕ): ಬೆ.10.50ಕ್ಕೆ, ವಾಮನ (ಕ): ಮ.1.35ಕ್ಕೆ, ಸಂ.4.10ಕ್ಕೆ, ಅರ್ಜುನ್ s/o ವೈಜಯಂತಿ (ತೆ): ಸಂ.6.45ಕ್ಕೆ, ರಾ.9.30ಕ್ಕೆ.

ಪಿವಿಆರ್ ಸಿನಿಮಾಸ್

PVR CINEMAS

ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ನಾಳೆ ಮೈಸೂರಲ್ಲಿ ಕುಸ್ತಿ ಪಂದ್ಯಾವಳಿ



ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಪ್ರಕೃತಿ ಫೌಂಡೇಶನ್ ವತಿಯಿಂದ ಕುಸ್ತಿ ಪಂದ್ಯಾವಳಿಯ ಪೋಸ್ಟರ್ ಬಿಡುಗಡೆಗೊಳಿಸಲಾಯಿತು.

ಮೈಸೂರು, ಜೂ.13(ಜಿಎ)–ಮೈಸೂರಿನ ಪ್ರಕೃತಿ ಫೌಂಡೇಶನ್ ವತಿಯಿಂದ ದೊಡ್ಡಕೇರೆ ಮೈದಾನದಲ್ಲಿರುವ ಡಿ.ದೇವರಾಜ ಅರಸ್ ವಿವಿಧೋದ್ದೇಶ ಕ್ರೀಡಾಂಗಣದಲ್ಲಿ ಜೂ.15ರಂದು ಮಧ್ಯಾಹ್ನ 3ಗಂಟೆಗೆ ಕುಸ್ತಿ ಪಂದ್ಯಾವಳಿಯನ್ನು ಆಯೋಜಿಸಲಾಗಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಫೌಂಡೇಶನ್‌ನ ಅಧ್ಯಕ್ಷ ಕಿರಣ್‌ಕುಮಾರ್ ಈ ವಿಷಯ ತಿಳಿಸಿ, ಮೈಸೂರಿನ ಕುಸ್ತಿ ನಮ್ಮ ಪಾರಂಪರಿಕ ಕ್ರೀಡೆಯಾಗಿರುವ ಕುಸ್ತಿಯನ್ನು ಉಳಿಸಿ, ಬೆಳೆಸಬೇಕು ಎಂಬ ಉದ್ದೇಶದಿಂದ ಈ ಪಂದ್ಯಾವಳಿಯನ್ನು ಆಯೋಜಿಸಲಾಗುತ್ತಿದೆ ಎಂದರು.

ಪಂದ್ಯಾವಳಿಯಲ್ಲಿ ಪುರುಷರು ಮತ್ತು ಮಹಿಳೆಯರು ಸೇರಿ 40ಕ್ಕೂ ಹೆಚ್ಚು ಜೋಡಿಗಳು ರಾಜ್ಯ ಹಾಗೂ ಹೊರ ರಾಜ್ಯಗಳಿಂದ ಭಾಗವಹಿಸಲಿದ್ದಾರೆ. ವಿಜೇತ ಜೋಡಿಗೆ ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅವರು 'ಒಡೆಯರ್ ಕಪ್' ವಿತರಿಸಲಿದ್ದಾರೆ. ಕುಸ್ತಿ ವೀಕ್ಷಣೆಗೆ ಪ್ರತಿಯೊಬ್ಬರಿಗೂ ಉಚಿತ ಪ್ರವೇಶವಿದೆ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಪೈ.ಅಮೃತ್ ಪುರೋಹಿತ್, ಪೈರವಿ ಬನ್ನೂರು, ಪೈ.ಸಿದ್ದರಾಜು, ಪ್ರಕೃತಿ ಫೌಂಡೇಶನ್‌ನ ರವಿಶಂಕರ್, ಡಾ.ಬೆಟ್ಟ ತಿಮ್ಮೇಗೌಡ ಉಪಸ್ಥಿತರಿದ್ದರು.

ವಿವಿಧ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನ

ಮೈಸೂರು,ಜೂ.13– ಕೃಷ್ಣರಾಜನಗರ, ಪುರಸಭೆಯ 2025–26ನೇ ಸಾಲಿನ ಎಸ್.ಎಫ್.ಸಿ ಮುಕ್ತನಿಧಿ ಹಾಗೂ ಪುರಸಭಾ ಅನುದಾನದಲ್ಲಿ ಶೇ.24.10, ಶೇ 7.25, ಮತ್ತು ಶೇ.5ರ ಯೋಜನೆಯ ಅನುದಾನದಲ್ಲಿ ವಿವಿಧ ಸೌಲಭ್ಯಕ್ಕಾಗಿ ಅರ್ಹ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಶೇ.24.10 ಯೋಜನೆಯಲ್ಲಿ ಪರಿಶಿಷ್ಟ ಜಾತಿಯ ವೈಯಕ್ತಿಕ ಕಾರ್ಯಕ್ರಮ ಡಾ.ಬಿ.ಆರ್ ಅಂಬೇಡ್ಕರ್ ನಗರ ವಸತಿ/ ಪ್ರಧಾನ ಮಂತ್ರಿ ಆವಾಸ್ ಯೋಜನೆಯಡಿ ನಿರ್ಮಾಣ ಮಾಡುತ್ತಿರುವ ಫಲಾನುಭವಿಗಳಿಗೆ ಸುತ್ತೋಲೆ ರೀತ್ಯಾ ವಂತಿಗೆ ನೀಡುವುದು. ಶೇ. 24.10 ಪರಿಶಿಷ್ಟ ಪಂಗಡ ವೈಯಕ್ತಿಕ ಕಾರ್ಯಕ್ರಮ ಡಾ.ಬಿ.ಆರ್ ಅಂಬೇಡ್ಕರ್ ನಗರ ವಸತಿ ಪ್ರಧಾನ ಮಂತ್ರಿ ಆವಾಸ್ ಯೋಜನೆಯಡಿ ನಿರ್ಮಾಣ ಮಾಡುತ್ತಿರುವ ಫಲಾನುಭವಿಗಳಿಗೆ ವಂತಿಗೆ ನೀಡಲಾಗುವುದು. ಶೇ. 7.25 ರ ಇತರೆ ಬಡಜನರ ವೈಯಕ್ತಿಕ ಕಾರ್ಯಕ್ರಮ ವಾಜಪೇಯಿ ನಗರ ವಸತಿ/ ಪ್ರಧಾನ ಮಂತ್ರಿ ಆವಾಸ್ ಯೋಜನೆಯಡಿ ಮನೆ ನಿರ್ಮಾಣ ಮಾಡಿಕೊಳ್ಳುತ್ತಿರುವ ಫಲಾನುಭವಿಗಳಿಗೆ ವಂತಿಗೆ ಹಣ ನೀಡುವುದು. ಶೇ.5 ರ ವಿಕಲಚೇತನರ ವೈಯಕ್ತಿಕ ಕಾರ್ಯಕ್ರಮ ವಿಕಲಚೇತನ ಕೃತಕ ಅಂಗ ಜೋಡಣೆಗೆ ಸಹಾಯಧನ, ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ (24.10 ಪರಿಶಿಷ್ಟ ಜಾತಿಯ ವೈಯಕ್ತಿಕ ಕಾರ್ಯಕ್ರಮ ಉನ್ನತ ಶ್ರೇಣಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ ನೀಡಲು. ಪೌರಕಾರ್ಮಿಕರ ಕಲ್ಯಾಣ ಕಾರ್ಯಕ್ರಮ. ವಿವಿಧ ಹಂತದಲ್ಲಿ ವ್ಯಾಸಂಗ ಮಾಡುತ್ತಿರುವ ಪೌರಕಾರ್ಮಿಕರ ಮಕ್ಕಳಿಗೆ ಪ್ರೋತ್ಸಾಹಧನ ನೀಡುವುದು.

ಭರ್ತಿ ಮಾಡಿದ ಅರ್ಜಿಗಳನ್ನು ಪ್ರಕಟಣೆಗೊಂಡ ದಿನಾಂಕದಿಂದ 15 ದಿನದೊಳಗೆ ಅರ್ಜಿ ಸಲ್ಲಿಸಲು ಕೋರಿದೆ.

ಹೆಚ್ಚಿನ ಮಾಹಿತಿಗಾಗಿ ಕಚೇರಿ ವೇಳೆಯಲ್ಲಿ ಪುರಸಭೆಯ ಮುಖ್ಯಾಧಿಕಾರಿಗಳನ್ನು ಸಂಪರ್ಕಿಸಿ ಮಾಹಿತಿಯನ್ನು ಸ್ವೀಕರಿಸಬಹುದು ಎಂದು ಕೃಷ್ಣರಾಜನಗರದ ಪುರಸಭೆಯ ಮುಖ್ಯಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ರಸ್ತೆ ದುರಸ್ತಿಗೆ ದುಡ್ಡಿಲ್ಲ, ಕಾವೇರಿ ಆರತಿಗೆ 92 ಕೋಟಿ ಖರ್ಚು ಮಾಡುವ ಅವಶ್ಯಕತೆ ಇಲ್ಲ

ಶಾಸಕ ಟಿ.ಎಸ್.ಶ್ರೀವತ್ಸ ರಾಜ್ಯ ಸರ್ಕಾರದ ವಿರುದ್ಧ ವಾಗ್ದಾಳಿ

ಮೈಸೂರು, ಜೂ.13(ಜಿಎ)–ರಸ್ತೆ ಸರಿಪಡಿಸಲು ಹಣವಿಲ್ಲ. ಒಬ್ಬೊಬ್ಬ ಶಾಸಕರು ಕೇವಲ 1 ಕೋಟಿ ಅನುದಾನಕ್ಕೆ ಬೇಡಿಕೊಳ್ಳುತ್ತಿದ್ದೇವೆ. ಹೀಗಿರುವಾಗ 92 ಕೋಟಿ ರೂ ಖರ್ಚು ಮಾಡಿ ಕಾವೇರಿ ಆರತಿ ನಡೆಸುವ ಅವಶ್ಯಕತೆ ಇಲ್ಲ ಎಂದು ಶಾಸಕ ಟಿ.ಎಸ್.ಶ್ರೀವತ್ಸ ತಿಳಿಸಿದ್ದಾರೆ.

ಮೈಸೂರಿನಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಕೆಆರ್‌ಎಸ್‌ನಲ್ಲಿ 92 ಕೋಟಿ ರೂ. ಖರ್ಚು ಮಾಡಿ ಕಾವೇರಿ ಆರತಿ ನಡೆಸುವ ಅವಶ್ಯಕತೆ ಇಲ್ಲ. ಈ ಮೂಲಕ ಸರ್ಕಾರ ನಾವು ಹಿಂದೂಗಳ ಪರವಾಗಿದ್ದೇವೆ ಎಂದು ತೋರಿಸಿಕೊಳ್ಳುತ್ತಿದೆ. ಸಂಘ ಸಂಸ್ಥೆಗಳನ್ನು ಸೇರಿಸಿಕೊಂಡು ಕಾವೇರಿ ಆರತಿ ಮಾಡಬಹುದಿತ್ತು. ಅದನ್ನು ಬಿಟ್ಟು 92 ಕೋಟಿ ಖರ್ಚು ಮಾಡೋಕೆ ಯಾಕೆ ಹೊರಟಿದ್ದಾರೆ ಗೊತ್ತಿಲ್ಲ. ಆದರೆ ವಾಸ್ತವವಾಗಿ ಕ್ಷೇತ್ರಗಳಲ್ಲಿ ರಸ್ತೆ ಸರಿಪಡಿಸಲು ಹಣವಿಲ್ಲ. ಕಾವೇರಿ ನದಿಯ ಪಕ್ಕದಲ್ಲಿ ಸ್ವಚ್ಛತೆ ವ್ಯವಸ್ಥೆ ಮಾಡಿದರೆ ಅದೇ ಕಾವೇರಿ ಆರತಿ ಮಾಡಿದ ಹಾಗೇ, ಕಾವೇರಿ ಆರತಿ ಮಾಡೋದಕ್ಕೆ ನಮ್ಮ ವಿರೋಧವಿದೆ ಎಂದರು.

> 
>
> ನಿನ್ನೆ ನಡೆದ ವಿಮಾನ ದುರಂತ ಘಟನೆ ಮನಸ್ಸಿಗೆ ಬಹಳ ನೋವು ನೀಡಿದೆ. ಪ್ರಕರಣ ಕುರಿತು ತನಿಖೆ ನಡೆಸಬೇಕು. ದೇಶದಲ್ಲಿ ಇದೊಂದು ದೊಡ್ಡ ದುರಂತವಾಗಿದೆ. ಅವರ ಕುಟುಂಬದವರು ಹೇಗೆ ನೋವು ತಡೆದುಕೊಳ್ಳುತ್ತಾರೋ ಗೊತ್ತಿಲ್ಲ. ಆ ಎಲ್ಲಾ ಕುಟುಂಬಗಳಿಗೂ ತಾಯಿ ಚಾಮುಂಡೇಶ್ವರಿ ನೋವನ್ನು ತಡೆದುಕೊಳ್ಳುವ ಶಕ್ತಿ ನೀಡಲಿ.
>
> -ಟಿ.ಎಸ್.ಶ್ರೀವತ್ಸ, ಶಾಸಕ

ಕಬಿನಿ ಹಿನ್ನೀರಿನಲ್ಲಿ ಕ್ರೀಡಾ ಚಟುವಟಿಕೆ ಆರಂಭಿಸಲು ಮುಂದಾಗಿರುವ ವಿಚಾರವಾಗಿ ಪ್ರತಿಕ್ರಿಯಿಸಿ, ಈಗಾಗಲೇ ಕಬಿನಿಯಲ್ಲಿ ಅಕ್ರಮವಾಗಿ ಕಟ್ಟಡಗಳು ತಲೆ ಎತ್ತಿವೆ ಅದನ್ನು ನಿಯಂತ್ರಣ ಮಾಡಿಲ್ಲ. ಈಗ ಸ್ಪೋರ್ಟ್ಸ್ ಆಕ್ಟೀವಿಟಿ ಮಾಡಲು ಯಾಕೆ ಮುಂದಾಗಿದ್ದಾರೆ. ಯಾರು ಇದನ್ನೆಲ್ಲ ಸಚಿವರಿಗೆ ಗೈಡ್ ಮಾಡ್ತಿದ್ದಾರೆ. ಮೊದಲು ಅರಣ್ಯ ತಜ್ಞರ ಸಭೆ ಮಾಡಬೇಕು. ಪರಿಸರ ಪ್ರೇಮಿಗಳ ಜೊತೆ ಸಭೆ ಮಾಡಬೇಕು. ಒಂದು ಚರ್ಚೆ ಮಾಡಿ ಸರಿ ತಪ್ಪುಗಳನ್ನು ನೋಡಿಕೊಂಡು ನಿರ್ಧಾರ ಕೈಗೊಳ್ಳಬೇಕು. ಇಲ್ಲದಿದ್ದರೆ ಇದು ಹಳ್ಳ ಹಿಡಿಯತ್ತೆ ಎಂದು ತಿಳಿಸಿದರು.

ರಾಜ್ಯ ಸರ್ಕಾರದಿಂದ ತುಮಕೂರು ಹೆಸರು ಬದಲಾವಣೆ ಕುರಿತು ಮಾತನಾಡಿ, ಉತ್ತರಪ್ರದೇಶದ ಮಾದರಿ ಹೆಸರು ಬದಲಾವಣೆ ಮಾಡಲು ರಾಜ್ಯ ಸರ್ಕಾರ ಹೊರಟಿದೆ. ಆದರೆ, ನಮ್ಮ ಊರುಗಳ ಇತಿಹಾಸ ತಿಳಿದುಕೊಳ್ಳದೆ ಹೆಸರು ಬದಲಿಸೋದು ಒಳ್ಳೆಯದಲ್ಲ. ರಾಮನಗರ ಜಿಲ್ಲೆಯ ಹೆಸರು ಬದಲಾವಣೆ ಮಾಡಿದ ಕಾರಣ ಇನ್ನೂ ತಿಳಿದಿಲ್ಲ. ಈ ಹಿಂದೆ ಅಲ್ಲಿ ಚರ್ಚ್ ನಿರ್ಮಿಸಬೇಕೆಂದು ಡಿಕೆಶಿ ಹೊರಟಿದ್ದರು. ತೀವ್ರ ವಿರೋಧ ವ್ಯಕ್ತವಾಗಿತ್ತು. ತುಮಕೂರು ಸಿದ್ದಗಂಗಾ ಶ್ರೀಗಳು ನಡೆಯುವ ದೇವರು ಎನ್ನುತ್ತಾರೆ. ಅಂತಹ ಪುಣ್ಯಸ್ಥಳ ಇರುವ ಜಿಲ್ಲೆಯ ಹೆಸರು ಬದಲಿಸೋದು ಒಳ್ಳೆಯದಲ್ಲ. ಸರ್ಕಾರ ತುಘಲಕ್ ಮಾದರಿಯಲ್ಲಿ ಅಧಿಕಾರ ನಡೆಸಲು ಹೊರಟಿದೆ. ನಾಳೆ ಮಂಡ್ಯ, ಮೈಸೂರಿನ ಹೆಸರನ್ನು ಬದಲಾವಣೆ ಮಾಡಬಹುದು. ಹೆಸರು ಬದಲಿಸುವ ವಿಚಾರದಲ್ಲಿ ತುಮಕೂರು ಜನತೆ ಹೋರಾಟ ಮಾಡಬೇಕು. ಸಾರ್ವಜನಿಕರು ಸಹ ಅವರ ಪರವಾಗಿ ನಿಲ್ಲಬೇಕು ಎಂದರು.

ನಾಳೆ ಮೈಸೂರಲ್ಲಿ ವೃಕ್ಷ ಟ್ರಸ್ಟ್ ಉದ್ಘಾಟನೆ

ಮೈಸೂರು, ಜೂ.13(ಜಿಎ)–ಮೈಸೂರಿನ ರಾಮಕೃಷ್ಣನಗರದ ರಮಾ ಗೋವಿಂದ ರಂಗಮಂದಿರದಲ್ಲಿ ಜೂ.15ರಂದು ಸಂಜೆ 4ಗಂಟೆಗೆ ವೃಕ್ಷ ಟ್ರಸ್ಟ್ ಉದ್ಘಾಟನಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಟ್ರಸ್ಟ್ ಸಂಸ್ಥಾಪಕ ಕಾರ್ಯದರ್ಶಿ ಪಿ.ಶಾಂತಕುಮಾರ್ ಈ ವಿಷಯ ತಿಳಿಸಿ, ಕಾರ್ಯಕ್ರಮಕ್ಕೆ ರಂಗ ನಿರ್ದೇಶಕ ಹೆಚ್.ಎಸ್.ಉಮೇಶ್, ಮೈಸೂರು ವಿವಿ ಸಿಂಡಿಕೇಟ್ ಮಾಜಿ ಸದಸ್ಯ ಈ.ಸಿ.ನಿಂಗರಾಜ್ ಗೌಡ, ರಂಗ ಕಲಾವಿದೆ ಇಂದಿರಾ ನಾಯರ್, ಉದ್ಯಮಿ ಧರ್ಮಪ್ರಸಾದ್ ಪಾಲ್ಗೊಳ್ಳಲಿದ್ದಾರೆ. ಅಂದೇ ಸಂಜೆ 6 ಗಂಟೆಗೆ ವೃಕ್ಷ ಸಂಸ್ಥೆಯ ಅಂಗ ಸಂಸ್ಥೆಯಾದ ಪಿನಾಕ ರಂಗ ತಂಡದಿಂದ ವಿನೋದರಂಗ ಅವರ ನಿರ್ದೇಶನದಲ್ಲಿ ರಾಜಸ್ಥಾನಿ ಜನಪದ ಕಥೆ ಆಧಾರಿತ 'ಸೂತ್ರದ ಗೊಂಬೆ' ನಾಟಕವನ್ನು ತಂಡದ ಸದಸ್ಯರು ಪ್ರದರ್ಶಿಸುವರು. ಈ ನಾಟಕವನ್ನು ನಾ.ರತ್ನ ಅವರಿಗೆ ಸಮರ್ಪಿಸಲಾಗುತ್ತಿದೆ ಎಂದು ತಿಳಿಸಿದರು.

ಜೂ.23ರಂದು ಸಂಜೆ 6 ಗಂಟೆಗೆ ಕಲಾಮಂದಿರದ ಆವರಣದಲ್ಲಿರುವ ಕಿರುರಂಗ ಮಂದಿರದಲ್ಲಿ ಸೂತ್ರದ ಗೊಂಬೆ ನಾಟಕ ಪ್ರದರ್ಶನವನ್ನು ಏರ್ಪಡಿಸಲಾಗಿದೆ. ವೃಕ್ಷ ಟ್ರಸ್ಟ್‌ನ ಅಧ್ಯಕ್ಷರಾಗಿ ಕೃತಿಕಾ, ಖಜಾಂಚಿಯಾಗಿ ಮಲ್ಲಪ್ಪ, ಸದಸ್ಯರಾಗಿ ಆನಂದ್ ಕಾರ್ಯ ನಿರ್ವಹಿಸುವರು ಎಂದರು. ಸುದ್ದಿಗೋಷ್ಠಿಯಲ್ಲಿ ಪಿನಾಕ ಸಂಸ್ಥೆಯ ಹೇಮಂತ್, ಶ್ರುತಿ, ಸ್ಫೂರ್ತಿ, ದಿಯಾ ಎಸ್.ಅರಸ್ ಉಪಸ್ಥಿತರಿದ್ದರು.

ಜಯನಗರ ಸರ್ಕಾರಿ ಶಾಲೆಯಲ್ಲಿ ಸಾಂಸ್ಕೃತಿಕ ವೇದಿಕೆ ಉದ್ಘಾಟನೆ

ರೋಟರಿ ಕ್ಲಬ್ ಆಫ್ ಮೈಸೂರು ಸೌತ್ ಈಸ್ಟ್ ವತಿಯಿಂದ ನಿರ್ಮಾಣ



ಮೈಸೂರಿನ ಜಯನಗರದ ಸರ್ಕಾರಿ ಪ್ರಾಥಮಿಕ ಶಾಲೆಯಲ್ಲಿ ರೋಟರಿ ಕ್ಲಬ್ ಆಫ್ ಮೈಸೂರು ಸೌತ್ ಈಸ್ಟ್ ವತಿಯಿಂದ ನಿರ್ಮಿಸಿರುವ ನೂತನ ಸಾಂಸ್ಕೃತಿಕ ವೇದಿಕೆಯನ್ನು ಡಿಸ್ಟ್ರಿಕ್ಟ್ ಗವರ್ನರ್ ರೊಟೇರಿಯನ್ ವಿಕ್ರಂದತ್ತ ಶುಕ್ರವಾರ ಉದ್ಘಾಟಿಸಿದರು.

ಮೈಸೂರು, ಜೂ.13(ಜಿಎ)– ಮೈಸೂರಿನ ಜಯನಗರದ ಸರ್ಕಾರಿ ಪ್ರಾಥಮಿಕ ಶಾಲೆಯಲ್ಲಿ ರೋಟರಿ ಕ್ಲಬ್ ಆಫ್ ಮೈಸೂರು ಸೌತ್ ಈಸ್ಟ್ ವತಿಯಿಂದ 3 ಲಕ್ಷ ರೂ ವೆಚ್ಚದಲ್ಲಿ ನಿರ್ಮಿಸಿರುವ ನೂತನ ಸಾಂಸ್ಕೃತಿಕ ವೇದಿಕೆಯನ್ನು ಡಿಸ್ಟ್ರಿಕ್ಟ್ ಗವರ್ನರ್ ರೊಟೇರಿಯನ್ ವಿಕ್ರಂದತ್ತ ಶುಕ್ರವಾರ ಉದ್ಘಾಟಿಸಿದರು.

ನಂತರ ಮಾತನಾಡಿದ ಅವರು, ರೋಟರಿ ಕ್ಲಬ್ ಆಫ್ ಮೈಸೂರು ಸೌತ್ ಈಸ್ಟ್‌ನಲ್ಲಿ ಇದುವರೆಗೂ ಅಧ್ಯಕ್ಷರಾಗಿದ್ದ ಎಲ್ಲರೂ ಉತ್ತಮ ಸಮಾಜಮುಖಿ ಕೆಲಸಗಳನ್ನು ಮಾಡಿ ಗಮನ ಸೆಳೆದಿದ್ದಾರೆ. ಅದೇ ರೀತಿ ರೊಟೇರಿಯನ್ ಕೆ.ಎ.ಗೋವರ್ಧನ್ ಯಾದವ್ ಅವರು ಸಹ ಜಯನಗರ ಸರ್ಕಾರಿ ಶಾಲೆಗೆ ಅಗತ್ಯವಾಗಿ ಬೇಕಾದ ವೇದಿಕೆಯನ್ನು 3 ಲಕ್ಷ ರೂ ವೆಚ್ಚದಲ್ಲಿ ನಿರ್ಮಿಸಿಕೊಟ್ಟಿರುವುದು ಶ್ಲಾಘನೀಯ. ಈ ವೇದಿಕೆಯಲ್ಲಿ ಮಕ್ಕಳು ಯಾವುದೇ ಸಭೆ ಸಮಾರಂಭ, ಸಾಂಸ್ಕೃತಿಕ ಚಟುವಟಿಕೆಗಳನ್ನು ನಡೆಸಬಹುದು ಎಂದರು.

ಪಠ್ಯ, ಕ್ರೀಡೆ ಮತ್ತು ಸಾಂಸ್ಕೃತಿಕ ಚಟುವಟಿಕೆಗಳ ಮೂಲಕ ಮಕ್ಕಳ ಪ್ರತಿಭೆ ಅನಾವರಣವಾಗುತ್ತದೆ. ಮಕ್ಕಳ ಪ್ರತಿಭೆ ಅನಾವರಣಕ್ಕೆ ಈ ವೇದಿಕೆ ಸಹಾಯ ಮಾಡುತ್ತದೆ. ಇಂತಹ ಶಾಶ್ವತ ಉಪಯೋಗಿ ಕಾರ್ಯಕ್ರಮಗಳನ್ನು ನಮ್ಮ ಸಂಸ್ಥೆ ಮಾಡುತ್ತಿದೆ ಈ ಚಟುವಟಿಕೆ ಕಾರ್ಯದಲ್ಲಿ ಕೈ ಜೋಡಿಸಿದ ಎಲ್ಲರೂ ಅಭಿನಂದನಾರ್ಹರು. ಮಕ್ಕಳು ತಾವು ಸರ್ಕಾರಿ ಶಾಲೆಯಲ್ಲಿ ಕಲಿಯುತ್ತಿದ್ದೇವೆ ಎಂಬ ಕೀಳರಿಮೆ ಬಿಟ್ಟು ಉತ್ತಮವಾಗಿ ಕಲಿತು ನಿಮ್ಮ ಶಾಲೆಗೆ, ನಾಡಿಗೆ, ಪೋಷಕರಿಗೆ ಗೌರವ ತರುವ ಕೆಲಸ ಮಾಡಬೇಕು ಎಂದರು.

ಕ್ಷೇತ್ರ ಶಿಕ್ಷಣಾಧಿಕಾರಿ ಸಿ.ಎನ್.ರಾಜು ಅವರು ಮಾತನಾಡಿ, ಸರ್ಕಾರಿ ಶಾಲೆಗಳಲ್ಲಿ ಮಕ್ಕಳ ದಾಖಲಾತಿ ಹೆಚ್ಚಿಸಲು ರಾಜ್ಯ ಸರ್ಕಾರ ಅನೇಕ ಕಾರ್ಯಕ್ರಮಗಳನ್ನು ರೂಪಿಸಿದೆ. ಮಕ್ಕಳಿಗೆ ಬಿಸಿಯೂಟ, ಬಾಳೆಹಣ್ಣು, ಮೊಟ್ಟೆ, ಉಚಿತ ಸಮವಸ್ತ್ರ, ಉಚಿತ ಪುಸ್ತಕಗಳನ್ನು ನೀಡುವುದರ ಜತೆಗೆ ವಿದ್ಯಾರ್ಥಿ ವೇತನವನ್ನು ನೀಡುತ್ತದೆ. ಈ ರೀತಿ ಹಲವಾರು ಕಾರ್ಯಕ್ರಮಗಳು ಸರ್ಕಾರ ಒದಗಿಸುತ್ತಿದೆ. ಇದರ ಜೊತೆಗೆ ಸಂಘ ಸಂಸ್ಥೆಗಳು ಸಹ ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ಸಹಕರಿಸುತ್ತಿರುವುದು ಶ್ಲಾಘನೀಯ ಎಂದರು.

ಕಾರ್ಯಕ್ರಮದಲ್ಲಿ ರೋಟರಿ ಸಂಸ್ಥೆಯ ಪದಾಧಿಕಾರಿಗಳನ್ನು ಶಾಲೆ ವತಿಯಿಂದ ಸನ್ಮಾನಿಸಲಾಯಿತು. ನಂತರ ಮಕ್ಕಳು ಸಾಂಸ್ಕೃತಿಕ ಕಾರ್ಯಕ್ರಮ ನಡೆಸಿಕೊಟ್ಟರು. ಈ ಸಂದರ್ಭದಲ್ಲಿ ರೊಟೇರಿಯನ್‌ಗಳಾದ ಎಂ.ರಾಜೀವ್, ಎಂ.ಮೋಹನ್, ಕೆ.ಎ.ಗೋವರ್ಧನ್ ಯಾದವ್, ಆರ್.ರಮೇಶ್‌ರಾವ್, ಮೈಸೂರು ವಿಶ್ವವಿದ್ಯಾನಿಲಯದ ಸಿಂಡಿಕೇಟ್ ಮಾಜಿ ಸದಸ್ಯ ಡಾ.ಈ.ಸಿ.ನಿಂಗರಾಜ್ ಗೌಡ, ವೆಂಕಟೇಶ್, ನಾಗರಾಜ್, ರಾಕೇಶ್ ಭಟ್, ಮುರಳಿ, ರವೀಂದ್ರ ಸೇರಿದಂತೆ ಶಾಲಾ ಶಿಕ್ಷಕರು ಉಪಸ್ಥಿತರಿದ್ದರು.

ನಾಲ್ವಡಿ ಕೃಷ್ಣರಾಜ ಒಡೆಯರ್ ಬಸವಣ್ಣನವರ ನಿಜವಾದ ಪ್ರತಿರೂಪ

ನಾಲ್ವಡಿ ಜನ್ಮ ದಿನೋತ್ಸವ, ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಶಿವರಾಜಪ್ಪ ಬಣ್ಣನೆ



ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಬಸವೇಶ್ವರ ಸಾಂಸ್ಕೃತಿಕ ಪ್ರತಿಷ್ಠಾನದಿಂದ ಆಯೋಜಿಸಿದ್ದ ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರ್ ಜನ್ಮ ದಿನೋತ್ಸವ ಕಾರ್ಯಕ್ರಮದಲ್ಲಿ ಜಿಲ್ಲಾ ಬ್ರಾಹ್ಮಣ ಮಹಾಸಭಾದ ಬಿ.ಆರ್.ನಟರಾಜ್ ಜೋಯ್ಸ್ ಅವರಿಗೆ ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರ್ ಪ್ರಶಸ್ತಿ ನೀಡಿ ಸನ್ಮಾನಿಸಲಾಯಿತು.

ಮೈಸೂರು, ಜೂ.13(ಜಿಎ)–ನಾಲ್ವಡಿ ಕೃಷ್ಣರಾಜ ಒಡೆಯರ್ ಬಸವಣ್ಣನ ನಿಜವಾದ ಪ್ರತಿರೂಪವಾಗಿ ಅನೇಕ ಯೋಜನೆಗಳ ಕೊಡುಗೆ ನೀಡಿದ್ದಾರೆ ಎಂದು ನಟರಾಜ ಪ್ರತಿಷ್ಠಾನದ ವಿಶೇಷಾಧಿಕಾರಿ ಎಸ್.ಶಿವರಾಜಪ್ಪ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಬಸವೇಶ್ವರ ಸಾಂಸ್ಕೃತಿಕ ಪ್ರತಿಷ್ಠಾನದಿಂದ ಆಯೋಜಿಸಿದ್ದ ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರ್ ಜನ್ಮ ದಿನೋತ್ಸವ ಮತ್ತು ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಮಾತನಾಡಿದ ಅವರು, ದೇಶದಲ್ಲಿ ಅನೇಕ ಮಹಾರಾಜರಿದ್ದಾರೆ. ಅವರು ನೀಡಿದ ಕೊಡುಗೆ ಎಲ್ಲರಿಗೂ ಗೊತ್ತು. ಅದರೆ ಸಮಾಜಮುಖಿ, ದೂರದೃಷ್ಟಿ ಕೆಲಸ ಮಾಡಿದವರು ಜನಮಾನಸದಲ್ಲಿ ಚಿರಸ್ಥಾಯಿಯಾಗಿ ಉಳಿದಿದ್ದಾರೆ. ಅವರುಗಳ ಸಾಲಿನಲ್ಲಿ ಮೊದಲಿಗರಾಗಿ ನಾಲ್ವಡಿ ಕೃಷ್ಣರಾಜ ಒಡೆಯರ್ ನಿಲ್ಲುವರು. ಅವರನ್ನು ನೆನಪು ಮಾಡಿಕೊಳ್ಳುವುದು ಒಂದು ಸುಯೋಗ ಎಂದರು.

ರಾಜನಾಗಿ ಸಾಮಾನ್ಯ ಜನರ ಪ್ರತಿನಿಧಿಯಾಗಿ ಕಾಯಕ ಶಿಲ್ಪಿಯಾಗಿದ್ದರು. ಅಭಿವೃದ್ಧಿಯ ಹರಿಕಾರ. ಸಂಸ್ಕೃತಿ ಉಳಿವಿಗೆ ಶ್ರಮಿಸಿ, ವೈಚಾರಿಕ ನಿಟ್ಟಿನಲ್ಲಿ ಬದುಕಿನುದ್ದಕ್ಕೂ ನಡೆದರು. ಶೋಷಿತರ, ದಮನಿತರ ಪರವಾಗಿದ್ದು, ಕಾಯಕಕ್ಕೆ ಮಹತ್ವ ನೀಡಿದ್ದರು. ಆದರ್ಶ ಅನುಕರಣೀಯ ವ್ಯಕ್ತಿಯಾದರು. ನೂರಕ್ಕೂ ಹೆಚ್ಚಿನ ಯೋಜನೆ ಜಾರಿಗೆ ತಂದಿದ್ದರು ಎಂದು ಸ್ಮರಿಸಿದರು.

ಇಂದು ರಾಜಕಾರಣಿಗಳು, ಅಧಿಕಾರಿಗಳು ಸಾರ್ವಜನಿಕರ ಸೇವೆ ಮಾಡುವ ಬದಲು ಕೋಟಿಗಟ್ಟಲೇ ಹಣ ಮಾಡಿಕೊಳ್ಳುತ್ತಿರುವುದನ್ನು ನಾವು ನೋಡುತ್ತಿದ್ದೇವೆ. ಆದರೆ ನಾಲ್ವಡಿ ಅವರು ತಮ್ಮ ಸ್ವಂತ ಒಡವೆಗಳನ್ನು ಮಾರಾಟ ಮಾಡಿ ರೈತರಿಗೆ ಹಾಗೂ ಜನರಿಗೆ ಕುಡಿಯಲು ನೀರಿನ ವ್ಯವಸ್ಥೆ ಮಾಡಲು ಅಣೆಕಟ್ಟೆ ನಿರ್ಮಾಣ ಮಾಡಿದ್ದಾರೆ. ಇಂತಹ ಆದರ್ಶವನ್ನು ಇಟ್ಟುಕೊಂಡಿರುವವರು ನಮಗೆ ಬೇಕಿದೆ ಎಂದರು.

ಶಾಸಕ ಟಿ.ಎಸ್.ಶ್ರೀವತ್ಸ ಮಾತನಾಡಿ, ಧಾರ್ಮಿಕ ಕ್ಷೇತ್ರದಲ್ಲಿ ಶ್ರದ್ಧೆಯಿಂದ ಕೆಲಸ ಮಾಡುತ್ತಿರುವವರನ್ನು ಗುರುತಿಸಿ ಪ್ರಶಸ್ತಿ ನೀಡಿರುವುದು ಸಂತಸ. ಸಮಾಜದ ಹಿರಿಯರನ್ನು ಸತ್ಕರಿಸುವ ಕಾರ್ಯ ಒಳ್ಳೆಯದು. ಈ ನಿಟ್ಟಿನಲ್ಲಿ ಬಸವೇಶ್ವರ ಪ್ರತಿಷ್ಠಾನ ತೊಡಗಿರುವುದು ಹೆಮ್ಮೆಯ ಸಂಗತಿ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಬ್ರಾಹ್ಮಣ ಮಹಾಸಭಾದ ಬಿ.ಆರ್.ನಟರಾಜ್ ಜೋಯ್ಸ್ ಅವರಿಗೆ ಪ್ರಶಸ್ತಿ ನೀಡಿ ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಸಮಾಜ ಸೇವಕ ಕೆರ್ಘರಾಂ ವಾಜಪೇಯಿ, ಅರಸು ಜಾಗೃತಿ ಅಕಾಡೆಮಿ ಚಾರಿಟಬಲ್ ಟ್ರಸ್ಟ್‌ನ ಗೌರವ ಕಾರ್ಯದರ್ಶಿ ಎಂ.ಜಿ.ಆರ್.ಅರಸ್, ಬಸವೇಶ್ವರ ಸಾಂಸ್ಕೃತಿಕ ಪ್ರತಿಷ್ಠಾನ ಸಂಸ್ಥಾಪಕ ಅಧ್ಯಕ್ಷ ಬಸವ ರಾಜೇಂದ್ರ ಸ್ವಾಮಿ ಉಪಸ್ಥಿತರಿದ್ದರು.



46
ಮೈಸೂರು ಮಿತ್ರ
ಓದುಗರ ಗಮನಕ್ಕೆ
ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತುಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
–ಜಾಹೀರಾತು ವ್ಯವಸ್ಥಾಪಕರು



ಸ್ಥಾಪನೆ: 1906 ಮುಖ್ಯ ಕಛೇರಿ:0821-2521631 | ಶಾಖಾ ಕಛೇರಿ:0821-2563851

ದಿ ಮೈಸೂರು ಕೋ–ಆಪರೇಟಿವ್ ಬ್ಯಾಂಕ್ ನಿ, ಗಾಂಧಿಚೌಕ, ಮೈಸೂರು–01

ಉಳಿತಾಯ ಖಾತೆ (SB Account) /
ಚಾಲ್ತಿ ಖಾತೆ (Current Account) ತೆರೆಯುವ ಅಭಿಯಾನ"
–:ಪ್ರಕಟಣೆ:–

ಸಹಕಾರ ಸಂಘಗಳ ಕಾಯ್ದೆ 1959 ಮತ್ತು ನಿಯಮಗಳು 1960ರ ರೀತ್ಯಾ ಪ್ರತಿಯೊಬ್ಬ ಸದಸ್ಯನು ಉಳಿತಾಯ ಖಾತೆ ಹೊಂದುವುದು ಕಡ್ಡಾಯವಾಗಿರುತ್ತದೆ.

ಬ್ಯಾಂಕಿನ ಸದಸ್ಯರು/ಗ್ರಾಹಕರುಗಳಿಗೆ ಅನುಕೂಲಕರವಾಗಲೆಂದು ಉಳಿತಾಯ ಖಾತೆ/ಚಾಲ್ತಿ ಖಾತೆ ತೆರೆಯುವ ಅಭಿಯಾನವನ್ನು ನಿಮ್ಮ ಮನೆಗಳಿಗೆ ಹತ್ತಿರವಾಗುವಂತೆ ನಿಮ್ಮ ನಿಮ್ಮ ಮೊಹಲ್ಲಾಗಳಲ್ಲಿ ಹಮ್ಮಿಕೊಳ್ಳಲಾಗಿದ್ದು, ಸದಸ್ಯರು/ಗ್ರಾಹಕರು ಈ ಅವಕಾಶವನ್ನು ಸದುಪಯೋಗಪಡಿಸಿಕೊಂಡು ಉಳಿತಾಯ ಖಾತೆ ತೆರೆಯದ ಸದಸ್ಯರುಗಳು ಕಡ್ಡಾಯವಾಗಿ ಉಳಿತಾಯ ಖಾತೆ/ಚಾಲ್ತಿ ಖಾತೆಯನ್ನು ತೆರೆಯಲು ಮನವಿ ಮಾಡುತ್ತೇವೆ.

*ಕ್ಯಾತಮಾರನಹಳ್ಳಿ, ಗಾಯತ್ರಿಪುರಂ ಹಾಗೂ ಸುತ್ತಮುತ್ತಲಿನ ಪ್ರದೇಶಗಳ ಸದಸ್ಯರುಗಳು ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳಲು ಮನವಿ.

ಅಭಿಯಾನ ನಡೆಯುವ ಸ್ಥಳಗಳು :

- ದಿನಾಂಕ:14.06.2025ರ ಶನಿವಾರದಂದು ಕ್ಯಾತಮಾರನಹಳ್ಳಿ, ಹುಲಿಯಮ್ಮ ದೇವಸ್ಥಾನದ ಹತ್ತಿರ .
- ಸಮಯ:– ಬೆಳಗ್ಗೆ 10.30 ರಿಂದ ಸಂಜೆ: 04.00 ರವರೆಗೆ.

ವಿಶೇಷ ಸೂಚನೆ:

ಉಳಿತಾಯ ಖಾತೆ/ಚಾಲ್ತಿ ಖಾತೆ ತೆರೆಯಲು ಈ ಕೆಳಕಂಡ ದಾಖಲೆಗಳು ಕಡ್ಡಾಯವಾಗಿರುತ್ತದೆ.


01. ಪ್ರಾಥಮಿಕ ಠೇವಣಿ ರೂ.500/–ಗಳು
02. ಆಧಾರ್ ಜೆರಾಕ್ಸ್ ಪ್ರತಿ.
03. ಪಾನ್ ಕಾರ್ಡ್ ಜೆರಾಕ್ಸ್ ಪ್ರತಿ.
04. ಇತ್ತೀಚಿನ 4 ಪಾಸ್‌ಪೋರ್ಟ್ ಅಳತೆಯ ಭಾವಚಿತ್ರ (ಫೋಟೋ)
05. ಷೇರ್ ಪಾಸು ಪುಸ್ತಕ.
06. ಚಾಲ್ತಿ ಖಾತೆ ತೆರೆಯಲು ಇತರೇ ದಾಖಲಾತಿಗಳು.

ಆಡಳಿತ ಮಂಡಳ ಅಪ್ಪಣೆ ಮೇರೆಗೆ
ಸಹಿ/–ಮುಖ್ಯ ಕಾರ್ಯನಿರ್ವಹಣಾಧಿಕಾರಿ

19ನೇ ವರ್ಷದ ಸವಿನೆನಪು



ಶ್ರೀಮತಿ ಲಕ್ಷಮ್ಮ
ದೊರೆಸ್ವಾಮೇಗೌಡರ ಧರ್ಮಪತ್ನಿ
ನಿಂಗಯ್ಯನಕೆರೆ ರಸ್ತೆ, ಕುಂಬಾರಕೊಪ್ಪಲು
ನಿಧನ: 13.06.2006
ದುಃಖತಪ್ತರು: ಗಂಡು ಮಕ್ಕಳು ಮತ್ತು ಸೊಸೆಯಂದಿರು, ಹೆಣ್ಣುಮಕ್ಕಳು ಮತ್ತು ಅಳಿಯಂದಿರು, ಮೊಮ್ಮಕ್ಕಳು ಹಾಗೂ ಮುಮ್ಮೊಕ್ಕಳು



ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ

(ಕರ್ನಾಟಕ ಸರ್ಕಾರದ ಅಧೀನ ಸಂಸ್ಥೆ)
ನಂ.49, ಖನಿಜ ಭವನ, ಪೂರ್ವ ವಿಭಾಗ, 4ನೇ ಮತ್ತು 5ನೇ ಮಹಡಿ,
ರೇಸ್ ಕೋರ್ಸ್ ರಸ್ತೆ , ಬೆಂಗಳೂರು - 560 001.
ದೂರವಾಣಿ: 080–22265383 ವೆಬ್‌ಸೈಟ್: www.kiadb.in

ಸಂ: ಕೆಐಎಡಿಬಿ/ಕೇಂಕ/ಹಂವಿ/ಕಾ–1/1679/4369/25–26 ದಿನಾಂಕ: 06.06.2025

ಪತ್ರಿಕಾ ಪ್ರಕಟಣೆ

ವಿಷಯ: ಮೈಸೂರು ಜಿಲ್ಲೆ, ಕೂರ್ಗಳ್ಳಿ ಕೈಗಾರಿಕಾ ಪ್ರದೇಶದ ಉಪ–ಬಡಾವಣೆ, ನಿವೇಶನ ಸಂಖ್ಯೆ: 14–ಪಿ5–5 & 14–ಪಿ5–6ರ ವಿಸ್ತೀರ್ಣ 11487.77 ಚ.ಮೀ ಮತ್ತು 14/11, 12 & 13ರ ವಿಸ್ತೀರ್ಣ 4721.75 ಚ.ಮೀ ಜಮೀನಿನ ಬಾಕಿ ಹಣ ಪಾವತಿಸುವ ಬಗ್ಗೆ.

M/s. Raman Computers Private Limited., ರವರಿಗೆ ಮೈಸೂರು ಜಿಲ್ಲೆ, ಕೂರ್ಗಳ್ಳಿ ಕೈಗಾರಿಕಾ ಪ್ರದೇಶದ ಉಪ–ಬಡಾವಣೆ, ನಿವೇಶನ ಸಂಖ್ಯೆ: 14–ಪಿ5–5 & 14–ಪಿ5–6ರ ವಿಸ್ತೀರ್ಣ 11487.77 ಚ.ಮೀ ಮತ್ತು 14/11, 12 & 13ರ ವಿಸ್ತೀರ್ಣ 4721.75 ಚ.ಮೀ ಜಮೀನನ್ನು "IT Finishing School" ಗಾಗಿ ಹಂಚಿಕೆ ಮಾಡಿದ್ದು, ಹಂಚಿಕೆ ಮಾಡಲಾದ ಜಮೀನಿನ ಬಾಕಿ ಹಣ ರೂ. 5,93,33,842/– ಗಳು ಮಂಡಳಿಗೆ ಪಾವತಿಸಲು ಬಾಕಿ ಇರುತ್ತದೆ.

ಮಂಡಳಿಯಿಂದ ದಿನಾಂಕ: 18.12.2023 ಮತ್ತು 18.02.2025 ರಂದು ಸದರಿ ಬಾಕಿ ಹಣ ಪಾವತಿಸಲು ತಿಳುವಳಿಕೆ ಪತ್ರಗಳನ್ನು RPAD ಮುಖಾಂತರ ತಮ್ಮ ವಿಳಾಸಕ್ಕೆ ಕಳುಹಿಸಿದ್ದು, ಸದರಿ ಪತ್ರಗಳು ಮಂಡಳಿಗೆ ಮರಳಿ ಬಂದಿರುತ್ತದೆ. ಈ ಪತ್ರಿಕಾ ಪ್ರಕಟಣೆ ಹೊರಡಿಸಿದ ದಿನಾಂಕದಿಂದ **15 ದಿವಸಗಳೊಳಗಾಗಿ** ಕೇಂದ್ರ ಕಛೇರಿಗೆ ಖುದ್ದಾಗಿ ಭೇಟಿ ನೀಡಿ, ಲಿಖಿತ ರೂಪದಲ್ಲಿ ಹೇಳಿಕೆ ನೀಡುವಂತೆ ತಿಳಿಸಿದೆ. ತಪ್ಪಿದಲ್ಲಿ ಯಾವುದೇ ನೋಟಿಸ್ ನೀಡದೇ ಹಂಚಿಕೆಯನ್ನು ರದ್ದುಪಡಿಸಲು ಕ್ರಮವಹಿಸಲಾಗುವುದು.

ಸಹಿ/–ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಹಾಗೂ
ಕಾರ್ಯನಿರ್ವಾಹಕ ಸದಸ್ಯರು.

IN THE COURT OF HON'BLE IV ADDITIONAL SENIOR CIVIL JUDGE AND JMFC AT MYSURU

P &S.C.No: /21/2025

BETWEEN: GAYATHRI VENKAT RAO, C/O Late Sudhendar Hanumantha Rao, Aged about 59 Years, (AADHAAR No-2674 1578 9726), ... **PETITIONER No-1**

RISHYASRINGA S NAGARAGADDE : Represented by his Guardian Mother, S/O Late Sudhendar Hanumantha Rao, Aged about 12 Years, (AADHAAR No-3349 9522 3198) **PETITIONER No-2**

BOTH HAVE: R/at Flat No-B3, Pramur Begonia, 5 th Main, 8th Cross, V V Mohalla, Mysuru – 570002. And
NIL .... **RESPONDENT**

DRAFT OF PAPER PUBLICATION

WHEREAS, the above-named Petitioners have filed the petition under section 372 of the Indian succession Act, 1925 for the grant of succession certificate in respect of the estate of late Sudhendar Hanumantha Rao. The said Petition is pending before this Hon'ble Court. Any person having objection to the issuance of succession certificate in favour of the petitioners have hereby notified to file their objection, if any before this Hon'ble court on the next date of hearing after Paper Publication. The Next date of hearing is 26-07-2025.

DETAILS OF THE SHARES

Bank: Charles Schwab, Account: Schwab One Account Of Sudhendar Hanumantha Rao Dessignated Bene Plan/tod, Account Number: 4099-1625, Ending Account Value: $335,170.21 As Of January 31, 2025., Balance Amount At Bank Account Number Ending In 5165 At Jpmorgan Chase Bank.

In the absence of any objection, the petition shall be decided in accor dance with law. Issued under my hand and seal of this Hon'ble Court.

Sd/- By order of the Court
The CMO Senior Civil Judge and CJM at Mysuru
Date: 28/04/2025 |Place: Mysuru

Advocate for Petitioners
Sd/- SLD Law Firm, Office at,
No-1416,N.S. Road, Mysuru-570001.